ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಅಕ್ಟೋಬರ್ 26 ಭಾನುವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

46

ಸಂಪುಟ: 46 | ಸಂಚಿಕೆ: 188 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*

₹4

ನಾನು ಸಚಿವ ಸ್ಥಾನ ತ್ಯಾಗಕ್ಕೆ ಸಿದ್ಧ

● ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಚ್ಚರಿ ಬಾಂಬ್ ● 30 ತಿಂಗಳ ಬಳಿಕ ಹೊಸಬರಿಗೆ ಅವಕಾಶ ಸಂದೇಶ ● ನಾಯಕತ್ವ ಬದಲಾವಣೆ ವರಿಷ್ಠರ ತೀರ್ಮಾನ



ಬೆಂಗಳೂರು, ಅ.25(ಕೆಎಂಶಿ)–ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಎರಡೂವರೆ ವರ್ಷಗಳು ಪೂರ್ಣಗೊಳ್ಳುತ್ತಿದ್ದಂತೆ ಮಂತ್ರಿಗಿರಿ ತೊರೆಯಬೇಕಾಗುತ್ತದೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಇಂದಿಲ್ಲಿ ಅಚ್ಚರಿ ಹೇಳಿಕೆ ಮೂಲಕ ಬಾಂಬ್ ಸಿಡಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಹಾಗೂ ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಪರ್ಯಾಯ ನಾಯಕತ್ವದ ಬಗ್ಗೆ ಮಾತನಾಡಿದ ಬೆನ್ನಲೇ ಮುಖ್ಯಮಂತ್ರಿ ಆಪ್ತಕೂಟದ ಸಚಿವರೇ ಇಂತಹ ಹೇಳಿಕೆ ನೀಡಿದ್ದಾರೆ. ಇತ್ತೀಚೆಗೆ ಸಿಎಂ ಸಿದ್ದ ರಾಮಯ್ಯ ಸಚಿವ ಸಂಪುಟದ ಸಹೋದ್ಯೋಗಿಗಳಿಗೆ ಡಿನ್ನರ್ ಮೀಟಿಂಗ್ ಏರ್ಪಡಿಸಿದ್ದರು. ಈ ಸಭೆ ಭಾರೀ ಕುತೂಹಲ ಮೂಡಿಸಿತ್ತು. ಏಕಾಏಕಿ ಸಂಪುಟ ಸದಸ್ಯರಿಗೆ ಮುಖ್ಯಮಂತ್ರಿಯವರು ಔತಣಕೂಟ ಏರ್ಪಡಿಸಿರುವ ಬಗ್ಗೆ ನಾನಾ ಊಹಾಪೋಹಗಳು ಕೇಳಿಬಂದಿದ್ದವು. ಸಚಿವರ ಸಾಮೂಹಿಕ ರಾಜೀನಾಮೆ ಪಡೆಯುವ ಸಂಬಂಧ ಮುಖ್ಯಮಂತ್ರಿಗಳು ವಿಷಯ ಪ್ರಸ್ತಾಪಿಸಬಹುದು ಎಂದು ಹೇಳಲಾಗಿತ್ತು. ಆದರೆ, ಕೃಷ್ಣ ಬೈರೇಗೌಡ ಅವರು ಸಚಿವ ಸ್ಥಾನ ತೊರೆಯುವ ಹೇಳಿಕೆ ನೀಡುವುದರೊಂದಿಗೆ ಅಂದಿನ ಸಭೆಯಲ್ಲಿ ಏನೆಲ್ಲಾ ಚರ್ಚೆಗಳಾಗಿರಬಹುದು ಎಂಬುದಕ್ಕೆ ನಿರ್ದಿಷ್ಟ ರೂಪ ಈಗ ಬಂದಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಳ್ಳುವ ಸಂದರ್ಭದಲ್ಲಿ ನಮ್ಮಗಳಿಗೆ 30 ತಿಂಗಳ ಆಡಳಿತಕ್ಕೆ ಅಷ್ಟೇ ಸೀಮಿತ ಎಂಬ ಸಂದೇಶ ನೀಡಿದ್ದರು. ಮೊದಲ ಅವಧಿ ಮುಗಿಯುತ್ತಿದ್ದಂತೆ ಸಂಪುಟದಿಂದ ಹೊರಗಿರುವವರಿಗೆ ಅವಕಾಶ ಕೊಡಬೇಕು ಎಂಬ ನಿರ್ಧಾರವನ್ನು ಎಐಸಿಸಿ ತೆಗೆದುಕೊಂಡಿದ್ದು, ಆ ವಿಚಾರವನ್ನು ಸಚಿವರಾಗಿ ಅಧಿಕಾರ ವಹಿಸಿಕೊಳ್ಳುವ ಮುನ್ನವೇ ನಮಗೂ ತಿಳಿಸಿದ್ದರು. ಆದರೆ, ನಾಯಕತ್ವ ಬದಲಾವಣೆ ಬಗ್ಗೆ ವರಿಷ್ಠರು ತೀರ್ಮಾನ ಕೈಗೊಳ್ಳುತ್ತಾರೆ. ಸಚಿವ ಸಂಪುಟ ಪುನಾರಚನೆಗೂ, ನಾಯಕತ್ವ ಬದಲಾವಣೆಗೂ ಯಾವುದೇ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದರು. ವರಿಷ್ಠರ ನಿರ್ಧಾರವನ್ನು ನಾನು ಸ್ವಾಗತಿಸುತ್ತೇನೆ. ಅವರು ಎಂದು ಆದೇಶ ನೀಡುವರೋ ಅಂದು ಮಂತ್ರಿಗಿರಿ ತೊರೆದು ಪಕ್ಷದ ಸೇವೆಯಲ್ಲಿ ತೊಡಗಿಸಿಕೊಳ್ಳುತ್ತೇನೆ. ನಿರೀಕ್ಷೆಗೂ ಮೀರಿ ಸ್ಥಾನಮಾನಗಳನ್ನು ನನಗೆ ಪಕ್ಷ ನೀಡಿದೆ. 3–4 ಬಾರಿ ಮಂತ್ರಿಯಾಗಿದ್ದೇನೆ. ಅಷ್ಟೇ ಅಲ್ಲ, ಕ್ಷೇತ್ರ ಪುನರ್ ವಿಂಗಡಣೆ ಸಂದರ್ಭದಲ್ಲಿ ನನಗೆ ಬೇಕಾದ ಕ್ಷೇತ್ರವನ್ನು ಪಕ್ಷ ಬಿಟ್ಟುಕೊಟ್ಟಿದ್ದಲ್ಲದೆ, ಅಲ್ಲಿಂದ ಸತತವಾಗಿ ವಿಧಾನಸಭೆ ಪ್ರವೇಶಿಸಿ ಅಧಿಕಾರದ ಗದ್ದುಗೆ ಏರಲು ಸಹಕಾರ ಕೊಟ್ಟಿದೆ. ನಮಗೆ ಮಾತ್ರ ಎಲ್ಲಾ ಅಧಿಕಾರವಿರಬೇಕು ಎಂಬ ಆಸೆ ನನ್ನದಲ್ಲ. ಹೊರಗುಳಿದವರಿಗೂ ಮಂತ್ರಿ ಸ್ಥಾನ ಸಿಗಬೇಕು. ವರಿಷ್ಠರ ಸೂತ್ರಕ್ಕೆ ನಾನು ಕಟಿಬದ್ಧನಾಗಿದ್ದೇನೆ ಎಂದಿದ್ದಾರೆ.

ಬಿಹಾರ ಫಲಿತಾಂಶ ಬಂದ ಮರುದಿನವೇ ಸಿಎಂ ಸಿದ್ದರಾಮಯ್ಯ ದೆಹಲಿ ಪ್ರವಾಸ


5 ದಿನಗಳ ಪ್ರವಾಸ ಕಾರ್ಯಕ್ರಮ ನಿಗದಿ



ಬೆಂಗಳೂರು, ಅ.25(ಕೆಎಂಶಿ)–ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ನವೆಂಬರ್‌ನಲ್ಲಿ ಕ್ರಾಂತಿ ಆಗುತ್ತದೆ ಎಂಬ ಚರ್ಚೆ ನಡುವೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಹಾರ ವಿಧಾನಸಭಾ ಚುನಾವಣಾ ಫಲಿತಾಂಶ ಪ್ರಕಟಗೊಂಡ ಮರುದಿನವೇ ದೆಹಲಿ ಪ್ರವಾಸ ಕೈಗೊಳ್ಳುತ್ತಿದ್ದಾರೆ. ನವೆಂಬರ್ 15ರಂದು ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಲು ದೆಹಲಿಗೆ ತೆರಳುತ್ತಿರುವ ಮುಖ್ಯಮಂತ್ರಿ, ಐದು ದಿನ ರಾಜಧಾನಿಯಲ್ಲೇ ಬಿಡಾರ ಹೂಡಲಿದ್ದಾರೆ. ಮುಖ್ಯಮಂತ್ರಿ ಕಾರ್ಯಾಲಯ ನವೆಂಬರ್ 15ರ ನಂತರದ ಮೂರು ವಾರಗಳ ಕಾರ್ಯಕ್ರಮ ಪಟ್ಟಿ ಈಗಾಗಲೇ ಸಿದ್ಧಪಡಿಸಿದೆ. ದೆಹಲಿ ಭೇಟಿಯ ಐದು ದಿನಗಳೂ ಖಾಸಗಿ ಕಾರ್ಯಕ್ರಮಗಳನ್ನು ಪಟ್ಟಿ ಮಾಡಲಾಗಿದೆ. ಸಿದ್ದರಾಮಯ್ಯ ಅಧಿಕಾರ ವಹಿಸಿಕೊಂಡು ನವೆಂಬರ್‌ಗೆ ಎರಡೂವರೆ ವರ್ಷ ಅವಧಿ ಪೂರ್ಣಗೊಳ್ಳಲಿದೆ. ಕಾಂಗ್ರೆಸ್ ವಲಯದ ಮೂಲಗಳ ಪ್ರಕಾರ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡುವೆ ತಲಾ 30 ತಿಂಗಳ ಅಧಿಕಾರ ಹಂಚಿಕೆ ಒಪ್ಪಂದವಾಗಿದೆ. ಇದರಂತೆ ಸಿದ್ದರಾಮಯ್ಯ ನವೆಂಬರ್ 3ನೇ ವಾರದಲ್ಲಿ ಅಧಿಕಾರ ಬಿಟ್ಟುಕೊಡಬೇಕಿದೆ. ಇದರ ಬೆನ್ನಲ್ಲೇ ಮುಖ್ಯಮಂತ್ರಿ ನವೆಂಬರ್ 2ನೇ ವಾರದಲ್ಲಿ ದೆಹಲಿಗೆ ತೆರಳಿ ಬಿಡಾರ ಹೂಡಿ ಅಧಿಕಾರ ಹಂಚಿಕೆ ಕುರಿತ ಗೊಂದಲ ನಿವಾರಿಸಲು ವರಿಷ್ಠರನ್ನು ಭೇಟಿ ಮಾಡಲಿದ್ದಾರೆ ಎನ್ನಲಾಗಿದೆ. ಬಿಹಾರ ವಿಧಾನಸಭಾ ಚುನಾವಣೆ ಫಲಿತಾಂಶ ಪ್ರಕಟಗೊಂಡ ನಂತರ ಪಕ್ಷದ ಎಲ್ಲಾ ವರಿಷ್ಠರು ರಾಜಧಾನಿ ದೆಹಲಿಯಲ್ಲೇ ಇರುತ್ತಾರೆ. ಈ ವೇಳೆಯೇ ಪಕ್ಷದ ಅಧಿನಾಯಕ ರಾಹುಲ್ ಗಾಂಧಿ, ಎಐಸಿಸಿ ರಾಜಕೀಯ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರನ್ನು ಭೇಟಿ ಮಾಡಲಿರುವ ಸಿದ್ದರಾಮಯ್ಯ, ಅಧಿಕಾರದಲ್ಲಿ ಮುಂದುವರೆಯುವ ತಂತ್ರಗಾರಿಕೆ ನಡೆಸಲಿದ್ದಾರೆ. ವರಿಷ್ಠರ ಮನದಾಳ ಅರಿಯುವ ಉದ್ದೇಶದಿಂದ ತಮ್ಮ ಮಂತ್ರಿಮಂಡಲವನ್ನು ಪೂರ್ಣ ಪ್ರಮಾಣದಲ್ಲಿ ಪುನರ್ ರಚಿಸಲು ಅವಕಾಶ ನೀಡುವಂತೆ ಕೋರಲಿದ್ದಾರೆ.

ಸಿದ್ದರಾಮಯ್ಯ ಸರ್ಕಾರದಲ್ಲಿ ಲಂಚ ನೀಡದೆ ಕೆಲಸ ಆಗಲ್ಲ!

- ಖ್ಯಾತ ಉದ್ಯಮಿ ಮೋಹನ್‌ದಾಸ್ ಪೈ ಗಂಭೀರ ಆರೋಪ
- ಕೈಗಾರಿಕೆ ಸ್ಥಾಪನೆಗೆ ಆಂಧ್ರ ಮಾದರಿ ಅನುಸರಿಸಲು ಸಲಹೆ



ಬೆಂಗಳೂರು,ಅ.25(ಕೆಎಂಶಿ)–ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದಲ್ಲಿ ಕೆಲಸ ಆಗಬೇಕಾದರೆ ನಿಗದಿ ಪಡಿಸಿದ ಲಂಚ ನೀಡಲೇಬೇಕಿದೆ ಎಂದು ವಾಣಿಜ್ಯೋದ್ಯಮಿ ಮೋಹನ್‌ದಾಸ್ ಪೈ ಇಂದಿಲ್ಲಿ ಬಾಂಬ್ ಸಿಡಿಸಿದ್ದಾರೆ. ಇದುವರೆವಿಗೂ ಮೂಲ ಸೌಕರ್ಯಗಳ ಕೊರತೆ ಬಗ್ಗೆ ಪದೇ ಪದೆ ಸರ್ಕಾರದ ಕಣ್ತೆರೆಸುತ್ತಿದ್ದ ಮೋಹನ್‌ದಾಸ್ ಪೈ ತಮ್ಮ ಎಕ್ಸ್ ಖಾತೆಯಲ್ಲಿ ಸರ್ಕಾರದ ಭ್ರಷ್ಟಾಚಾರವನ್ನು ಎಳೆ ಎಳೆಯಾಗಿ ಬಿಡಿಸಿಟ್ಟಿದ್ದಾರೆ. ಮುಖ್ಯಮಂತ್ರಿಯವರ ಕಚೇರಿಯೂ ಸೇರಿದಂತೆ ಎಲ್ಲಾ ಇಲಾಖೆಗಳಲ್ಲಿ ರೇಟ್ ಕಾರ್ಡ್ (ದರ ಪಟ್ಟಿ) ನಿಗದಿಪಡಿಸಲಾಗಿದೆ. ಯಾರೂ ಅದನ್ನು ತುಂಬುತ್ತಾರೋ ಅಂಥವರ ಕೆಲಸ ಸುಲಭವಾಗಿ ಆಗುತ್ತದೆ ಎಂದು ಹೇಳಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇನೋ ಕೈಗಾರಿಕೆಗಳ ಅಭಿವೃದ್ಧಿಗೋಸ್ಕರ ಯೋಜನೆಗಳನ್ನು ಪ್ರಕಟಿಸುತ್ತಾರೆ. ಉದ್ಯಮಿದಾರರು ಯೋಜನೆಯ ಪ್ರಯೋಜನ ಪಡೆಯಲು ಹೋದರೆ ಅಧಿಕಾರಿಗಳ ರೇಟ್ ಕಾರ್ಡ್ ನೋಡಿ ಅವರ ನಿರ್ಧಾರದಿಂದ ಹಿಂದೆ ಸರಿಯುತ್ತಿದ್ದಾರೆ. ಕೈಗಾರಿಕೆ ಅನುಮೋದನೆಗೆ ಕಾಲಮಿತಿ, ಹೂಡಿಕೆ ಸಮಸ್ಯೆ ತಪ್ಪಿಸಲು ಏಕಗವಾಕ್ಷಿ ಯೋಜನೆ ಅಡಿ ಅನುಮೋದನೆಗೆ ರಾಜ್ಯ ಸರ್ಕಾರ ಕಾರ್ಯಕ್ರಮ ರೂಪಿಸಿದೆ. ರಾಜ್ಯ ಸರ್ಕಾರದ ನಿರ್ಧಾರವನ್ನು ನಾನು ಸ್ವಾಗತಿಸುತ್ತೇನೆ. ಆದರೆ ಅಧಿಕಾರಿಗಳು ಅನುಮೋದನೆ ನೀಡುವಾಗ ಆಗುವ ಕಿರುಕುಳ ಅಷ್ಟಿಷ್ಟಲ್ಲ ಎಂದಿದ್ದಾರೆ. ಎಲ್ಲಾ ಇಲಾಖೆಗಳಲ್ಲಿ ಭ್ರಷ್ಟಾಚಾರ ಎಲ್ಲೆ ಮೀರಿದೆ. ಒಂದೊಂದು ಬೆಲೆ ನಿಗದಿ ಮಾಡಿದ್ದಾರೆ. ಇದು ನಿಮ್ಮ ಗಮನಕ್ಕೆ ಬಂದಿಲ್ಲವೇ ಎಂದು ಪ್ರಶ್ನಿಸಿದ್ದಾರೆ. ಆಂಧ್ರಪ್ರದೇಶದಲ್ಲಿ ಸ್ವಯಂ ಪ್ರಮಾಣೀಕರಣಗಳ ಮೇಲೆ ಅನುಮೋದನೆಯನ್ನು ಸ್ವಯಂಚಾಲಿತವಾಗಿ ಮಾಡಿದ್ದಾರೆ. ಕೈಗಾರಿಕೆಗಳ ಸ್ಥಾಪನೆಗೆ ಇದೇ ಮಾದರಿಯನ್ನು ರೂಪಿಸಿ ಎಂದು ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ವರ್ಷದೊಳಗೆ ಗುತ್ತಿಗೆದಾರರ ಸಂಘ ಕಮಿಷನ್ ಆರೋಪ ಮಾಡಿ ಸರ್ಕಾರಕ್ಕೆ ಇರಿಸು–ಮುರಿಸು ಉಂಟು ಮಾಡಿತ್ತು. ನಂತರ ಬಿಲ್ ಬಾಕಿ ಭಾರೀ ಪ್ರಮಾಣದಲ್ಲಿ ನೆನೆಗುದಿಗೆ ಬೀಳುತ್ತಿದ್ದಂತೆ ಕಮಿಷನ್ ಏರಿಕೆ ವಿಷಯವನ್ನು ಕೈಗೆತ್ತಿಕೊಂಡು ಸರ್ಕಾರಕ್ಕೆ ಮತ್ತಷ್ಟು ಮುಖಭಂಗ ಮಾಡಿತ್ತು.

ಮೈಸೂರು ಮಿತ್ರ

ಭಾನುವಾರ 26 ಅಕ್ಟೋಬರ್ 2025

ಜೆಎಸ್‌ಎಸ್ ಸಂಗೀತ ಸಭಾದ ಸಂಗೀತ ಸೇವಾನಿಧಿ ಪ್ರಶಸ್ತಿಗೆ ರಾಮಪ್ರಸಾದ್ ಆಯ್ಕೆ



ಮೈಸೂರು, ಅ.25– ಮೈಸೂರಿನ ಜೆಎಸ್‌ಎಸ್ ಸಂಗೀತ ಸಭಾ 2025ರ ಡಿಸೆಂಬರ್‌ನಲ್ಲಿ ನಡೆಸಲಿರುವ ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಸಂಸ್ಮರಣಾ ಸಂಗೀತ ಸಮ್ಮೇಳನದ ಸಂದರ್ಭದಲ್ಲಿ ಸಂಗೀತ ಪೋಷಕರಿಗೆ ಕೊಡ ಮಾಡುವ ಸಂಗೀತ ಸೇವಾ ನಿಧಿ ಪ್ರಶಸ್ತಿಗೆ ಮೈಸೂರಿನ ಎಸ್. ರಾಮಪ್ರಸಾದ್ ಆಯ್ಕೆಯಾಗಿದ್ದಾರೆಂದು ಸಭೆಯ ಕಾರ್ಯದರ್ಶಿ ಟಿ.ಪಿ. ಪ್ರಭುಸ್ವಾಮಿ ಹಾಗೂ ಟ್ರಸ್ಟಿ ಪ್ರೊ. ಕೆ. ರಾಮಮೂರ್ತಿ ರಾವ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಾನಭಾರತೀ, ನಾದಬ್ರಹ್ಮ ಸಂಗೀತ ಸಭಾ, ಜೆಎಸ್‌ಎಸ್ ಸಂಗೀತ ಸಭಾ, ಎನ್.ಆರ್. ಮೊಹಲ್ಲಾ ಸಂಗೀತ ಸಭೆ, ಸುರಭಿ ಗಾನ ಕಲಾ ಮಂದಿರ, ವಸುಂಧರಾ ಪ್ರದರ್ಶಕ ಕಲೆಗಳ ಕೇಂದ್ರ, ಶ್ರೀ ಕೃಷ್ಣ ಗಾನಸಭಾ, ಬಿಡಾರಂ ಕೃಷ್ಣಪ್ಪ ರಾಮಮಂದಿರ, ಭಾರತೀಯ ವಿದ್ಯಾಭವನ ಮುಂತಾದ ಸಾಂಸ್ಕೃತಿಕ ಸಂಸ್ಥೆಗಳ ಒಡನಾಟದೊಂದಿಗೆ ಹಲವು ಸಂಸ್ಥೆಗಳಲ್ಲಿ ಸದಸ್ಯರೂ ಆಗಿ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಅವರು ಸಕ್ರಿಯವಾಗಿ ನಿಸ್ವಾರ್ಥ ಸೇವೆ ಸಲ್ಲಿಸುತ್ತಿದ್ದಾರೆ.

ಅಷ್ಟೇ ಅಲ್ಲದೆ ಬರಹಗಾರರಾಗಿ 50ಕ್ಕೂ ಹೆಚ್ಚು ಕೃತಿಗಳನ್ನು ಹೊರತಂದಿದ್ದಾರೆ. ಅಲ್ಲದೆ ಮುಕ್ತಕ ಸಾಹಿತ್ಯ ಅಕಾಡೆಮಿಯ ಸ್ಥಾಪಕ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದಾರೆ. ಹವ್ಯಾಸಿ ವನ್ಯಜೀವಿ ಛಾಯಾಗ್ರಾಹಕರಾಗಿ ಹಲವಾರು ಪ್ರಶಸ್ತಿಗಳನ್ನು ಪಡೆದಿದ್ದಾರೆ.

ಇವರ ಸಂಘಟನಾ ಕೌಶಲ, ಸಾಹಿತ್ಯಾಭಿಮಾನ, ಸಂಗೀತ ಪ್ರೇಮ ಮುಂತಾದವುಗಳನ್ನು ಗುರುತಿಸಿದ ಹಲವು ಸಂಘ ಸಂಸ್ಥೆಗಳು ಇವರಿಗೆ ವಿಜ್ಞಾನ ಕಲಾವಿಶಾರದ, ಹೊಯ್ಸಳ ಪ್ರಶಸ್ತಿ, ಸಾಹಿತ್ಯಶ್ರೀ, ಸರ್ ಎಂ. ವಿಶ್ವೇಶ್ವರಯ್ಯ ಪ್ರಶಸ್ತಿ, ಆದರ್ಶ ಸೇವಾ ರತ್ನ ಸೇರಿದಂತೆ ಹಲವು ಪ್ರಶಸ್ತಿಗಳನ್ನು ನೀಡಿ ಗೌರವಿಸಿದೆ. ಡಿ.2 ರಿಂದ 6 ರವರೆಗೆ ಮೈಸೂರು ಜೆಎಸ್‌ಎಸ್ ಮಹಿಳಾ ಕಾಲೇಜಿನ ಸಭಾಂಗಣದಲ್ಲಿ ನಡೆಯಲಿರುವ 30ನೇ ಸಂಗೀತ ಸಮ್ಮೇಳನದ ಉದ್ಘಾಟನಾ ಸಮಾರಂಭ ದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಎಸ್.ರಾಮಪ್ರಸಾದ್ ಅವರಿಗೆ ಸಂಗೀತ ಸೇವಾನಿಧಿ ಪ್ರಶಸ್ತಿ ನೀಡಿ ಆಶೀರ್ವದಿಸಲಿದ್ದಾರೆ.

ಕ್ರೀಡಾ ಸಾಧಕಿ ಕು.ಪ್ರಕೃತಿ ಆರ್.ಗೌಡಗೆ ಸನ್ಮಾನ



ಕರಾಟೆ ಪ್ರತಿಭೆ ಕು.ಪ್ರಕೃತಿ ಆರ್.ಗೌಡರನ್ನು ಸುತ್ತೂರು ಶ್ರೀಗಳು ಸನ್ಮಾನಿಸಿದರು.

ಮೈಸೂರು, ಅ. 25–ಮೈಸೂರಿನ ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಅಂತಿಮ ಬಿಬಿಎ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕು.ಪ್ರಕೃತಿ ಆರ್.ಗೌಡ ಅವರು ಕರಾಟೆಯಲ್ಲಿ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿ, ಸಮಗ್ರ ಚಾಂಪಿಯನ್ ಶಿಪ್ ಪ್ರಶಸ್ತಿಯನ್ನು ಪಡೆದಿದ್ದಾರೆ. ಇವರನ್ನು ಸುತ್ತೂರು ಶ್ರೀ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ಸನ್ಮಾನಿಸಿದ್ದಾರೆ.

2025ರ ಆಗಸ್ಟ್ ತಿಂಗಳಿನಲ್ಲಿ ಶಿವಮೊಗ್ಗದಲ್ಲಿ ನಡೆದ 6ನೇ ಅಂತಾರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್ (ಶ್ರೀಲಂಕಾ, ನೇಪಾಳ, ಯು.ಎಸ್.ಎ ಇತ್ಯಾದಿ) ನಲ್ಲಿ ಕತಾ, ಕುಮಿತೆ ವಿಭಾಗಗಳಲ್ಲಿ ಪ್ರಥಮ ಹಾಗೂ ಗುಂಪು ಕುಮಿತೆ ವಿಭಾಗದಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದರು. ಜೊತೆಗೆ ಸಮಗ್ರ ಚಾಂಪಿಯನ್‌ಶಿಪ್ ಪಡೆದಿದ್ದಾರೆ. ಇದಲ್ಲದೆ ವಿಶ್ವ ಕರಾಟೆ ಸ್ಪರ್ಧೆಯ ತೀರ್ಪುಗಾರರಾಗಿ ಕಾರ್ಯನಿರ್ವಹಿಸಲು ಅರ್ಹತೆ ಪಡೆದಿರುವುದು ಹೆಮ್ಮೆಯ ವಿಷಯ.

2025ರ ಫೆಬ್ರವರಿ ತಿಂಗಳಿನಲ್ಲಿ ಹಂಪಿಯ ವಿಜಯನಗರದಲ್ಲಿ ನಡೆದ 2ನೇ ರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಕರಾಟೆಯ ಕತಾ ಮತ್ತು ಕುಮಿತೆ (ಬ್ಲಾಕ್ ಬೆಲ್ಟ್) ವಿಭಾಗಗಳಲ್ಲಿ ಪ್ರಥಮ ಸ್ಥಾನ ಹಾಗೂ ಸಮಗ್ರ ಚಾಂಪಿಯನ್‌ಶಿಪ್ ಪ್ರಶಸ್ತಿಯನ್ನು ಪಡೆದುಕೊಂಡಿದ್ದಾರೆ.

2024ರ ಆಗಸ್ಟ್ ತಿಂಗಳಿನಲ್ಲಿ ಶಿವಮೊಗ್ಗದಲ್ಲಿ ನಡೆದ 5ನೇ ಅಂತಾರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ (ಶ್ರೀಲಂಕಾ, ನೇಪಾಳ, ಯು.ಎಸ್.ಎ, ಮಲೇಷಿಯ್ಯಾ, ಇತ್ಯಾದಿ) ಕರಾಟೆಯ ಕತಾ, ಕುಮಿತೆ (ಬ್ಲಾಕ್ ಬೆಲ್ಟ್) ವಿಭಾಗಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿದ್ದಾರೆ. 2024ರ ಜನವರಿ ತಿಂಗಳನಲ್ಲಿ ಶಿವಮೊಗ್ಗದಲ್ಲಿ ನಡೆದ ಗಣರಾಜ್ಯೋತ್ಸವ ಕಪ್ ಹಾಗೂ ಜಿಲ್ಲಾ ಮಟ್ಟದ ಕರಾಟೆ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ ಕತಾ ಮತ್ತು ಕುಮಿತೆ (ಬ್ಲಾಕ್ ಬೆಲ್ಟ್) ವಿಭಾಗಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಗಳಿಸುವುದರ ಜೊತೆಗೆ ಮಿಸ್ ಕರಾಟೆ ಆಫ್ ಶಿವಮೊಗ್ಗ ಎಂಬ ಬಿರುದಿಗೆ ಪಾತ್ರರಾಗಿದ್ದಾರೆ.

2024 ನವೆಂಬರ್ ತಿಂಗಳಿನಲ್ಲಿ ಭದ್ರಾವತಿ ತಾಲ್ಲೂಕು ಆಡಳಿತ ವಿಭಾಗವು 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ತಾಲ್ಲೂಕು ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.

2023ರ ಆಗಸ್ಟ್ ತಿಂಗಳನಲ್ಲಿ ಶಿವಮೊಗ್ಗದಲ್ಲಿ ನಡೆದ 4ನೇ ಅಂತಾರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್ ಸ್ಪರ್ಧೆಯಲ್ಲಿ (ಶ್ರೀಲಂಕಾ, ನೇಪಾಳ ಇತ್ಯಾದಿ) ಕರಾಟೆಯ ಕತಾ ಮತ್ತು ಕುಮಿತೆ (ಬ್ಲಾಕ್ ಬೆಲ್ಟ್) ವಿಭಾಗಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಗಳಿಸಿದ್ದಾರೆ.

ಸವಿತಾ ಸಮಾಜದಿಂದ ಅ.28ರಂದು ಅಭಿನಂದನೆ

ಮೈಸೂರು, ಅ.25(ಜಿಎ)–ಕರ್ನಾಟಕ ರಾಜ್ಯ ಸವಿತಾ ನಾದಬ್ರಹ್ಮ ಸಂಗೀತ ಕಲಾ ಸಂಘ, ಸವಿತ ವಿವಿಧೋದ್ದೇಶ ಸಹಕಾರ ಸಂಘಗಳ ಸಂಯುಕ್ತಾಶ್ರಯದಲ್ಲಿ ಅ.28 ರಂದು ಬೆಳಗ್ಗೆ 11ಗಂಟೆಗೆ ಟಿ.ಕೆ.ಬಡಾವಣೆ 4ನೇ ಹಂತ ಪಿ–2 ಸಂಖ್ಯೆಯ ಕಟ್ಟಡದಲ್ಲಿ ರಾಜ್ಯ ಸವಿತಾ ಸಮಾಜ ನಿಗಮದ ಅಧ್ಯಕ್ಷ ಡಾ.ಎಂ.ಎಸ್.ಮುತ್ತುರಾಜ್, ಮಾಜಿ ಅಧ್ಯಕ್ಷ ಎಸ್.ನರೇಶ್‌ಕುಮಾರ್ ಅವರಿಗೆ ಅಭಿನಂದನಾ ಕಾರ್ಯಕ್ರಮ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಂಘದ ಕಾರ್ಯದರ್ಶಿ ರಮೇಶ್ ಈ ವಿಷಯ ತಿಳಿಸಿ , ಸಂಸದ ಯದುವೀರ್ ಒಡೆಯರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಟಿ.ಎಸ್. ಶ್ರೀವತ್ಸ ಅಧ್ಯಕ್ಷತೆ ವಹಿಸುವರು. ಡಾ.ಶುಶ್ರೂಷ್‌ಗೌಡ, ಮಾಜಿ ಮೇಯರ್ ಶಿವಕುಮಾರ್, ಪುಷ್ಪಲತ ಚಿಕ್ಕಣ್ಣ, ಜಿ.ಗೋಪಿ, ಸವಿತಾ ಸುರೇಶ್, ಆರ್.ಆನಂದ್, ನಾಗರಾಜು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು. ಗೋಷ್ಠಿಯಲ್ಲಿ ತ್ಯಾಗರಾಜು, ಮಧುಕುಮಾರ್, ನಾಗರಾಜು, ಮಂಜು, ಧನರಾಜ್ ಇದ್ದರು.

ಇಂದು ಡಾ.ವಿಷ್ಣು ಮ್ಯೂಸಿಕಲ್ ನೈಟ್



ಮೈಸೂರು,ಅ.25(ಜಿಎ)–ನಟ ವಿಷ್ಣುವರ್ಧನ್‌ಗೆ ಕರ್ನಾಟಕ ರತ್ನ ಘೋಷಣೆಯಾಗಿರುವ ಹಿನ್ನೆಲೆಯಲ್ಲಿ ಅ.26ರಂದು ಸಂಜೆ 5 ಗಂಟೆಗೆ ನಗರದ ಜಗನ್ಮೋಹನ ಅರಮನೆ ಸಭಾಂಗಣದಲ್ಲಿ ಮೂನ್‌ಲೈಟ್ ಎಂಟರ್ಟೈನರ್ಸ್ ಮತ್ತು ಆನಂದ್ ಶೆಟ್ಟಿ ರಾಗ ಕ್ರಿಯೇಷನ್ಸ್ ಆಶ್ರಯದಲ್ಲಿ ಡಾ. ವಿಷ್ಣುವರ್ಧನ್ ಮ್ಯೂಸಿಕಲ್ ನೈಟ್ ಕಾರ್ಯಕ್ರಮ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮೂನ್‌ಲೈಟ್ ಸಂಸ್ಥೆಯ ಸ್ಟ್ಯಾನ್ಲಿ ಪಾರ್ಕರ್ ಈ ವಿಷಯ ತಿಳಿಸಿ, ರಾಜ್ಯ ಸರ್ಕಾರ ಡಾ. ವಿಷ್ಣುವರ್ಧನ್ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡುವುದಾಗಿ ಘೋಷಿಸಿರುವುದು ವಿಷ್ಣು ಅಭಿಮಾನಿಗಳಿಗೆ ಸಂತಸ ತಂದಿದೆ. ಈಗಾಗಲೇ ತಮ್ಮ ಸಂಸ್ಥೆ ಪ್ರತಿ ವರ್ಷ ವಿಷ್ಣುವರ್ಧನ್ ನೆನಪಿನಲ್ಲಿ ಸಂಗೀತ ರಸಸಂಜೆ ಕಾರ್ಯಕ್ರಮ ಆಯೋಜಿಸುತ್ತಾ ಬಂದಿದೆ.

ಕಾರ್ಯಕ್ರಮದಲ್ಲಿ ಡಾ.ವಿಷ್ಣುವರ್ಧನ್ ಅವರ ಚಿತ್ರಗಳ ಸುಮಾರು 40 ಗೀತೆಗಳನ್ನು ಕರೋಕೆ ನೆರವಿನಿಂದ ಹಾಡಲಾಗುವುದು. ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸ್ಟ್ಯಾನಿ ಮರ್ಸರ್, ಆನಂದ್‌ಶೆಟ್ಟಿ, ರಶ್ಮಿ ನಾರಾಯಣ್ ಉಪಸ್ಥಿತರಿದ್ದರು.

ಆರ್.ಕೆ.ನಾರಾಯಣ್, ಆರ್.ಕೆ.ಲಕ್ಷ್ಮಣ್ ಸೋದರ ಸಂಬಂಧಿ ಆರ್.ಎಸ್.ಕೃಷ್ಣಸ್ವಾಮಿ ಇನ್ನಿಲ್ಲ



ಬೆಂಗಳೂರು, ಅ.25– ಪ್ರತಿಭಾನ್ವಿತ ಬರಹಗಾರರಾಗಿದ್ದ ಆರ್.ಎಸ್. ಕೃಷ್ಣಸ್ವಾಮಿ (ಆರ್‌ಎಸ್‌ಕೆ–84 ವರ್ಷ) ಅವರು ಬೆಂಗಳೂರಲ್ಲಿ ಇಂದು ಮುಂಜಾನೆ ನಿಧನರಾದರು.

ಇವರು ದಿವಂಗತ ಆರ್.ಕೆ.ಶ್ರೀನಿವಾಸನ್ ಅವರ ಪುತ್ರ ಮತ್ತು ಖ್ಯಾತ ಬರಹಗಾರ ಆರ್.ಕೆ.ನಾರಾಯಣ್ ಹಾಗೂ ಖ್ಯಾತ ವ್ಯಂಗ್ಯಚಿತ್ರಕಾರ ಆರ್.ಕೆ.ಲಕ್ಷ್ಮಣ್ ಅವರ ಸೋದರಳಿಯ. ಮೃತರು ಪುತ್ರರಾದ ಚೇತನ್ ಮತ್ತು ಕಾರ್ತಿಕ್ ಅವರನ್ನು ಅಗಲಿದ್ದಾರೆ. ಇಂದು ಮಧ್ಯಾಹ್ನ ಅಂತ್ಯಸಂಸ್ಕಾರ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ತಂಬಿ ಎಂದೇ ಜನಪ್ರಿಯರಾಗಿದ್ದ ಕೃಷ್ಣಸ್ವಾಮಿ ಅವರು ತಮ್ಮ ಸುದೀರ್ಘ ವೃತ್ತಿ ಜೀವನದಲ್ಲಿ ಹಲವಾರು ಪ್ರತಿಷ್ಠಿತ ಸಂಸ್ಥೆಗಳಲ್ಲಿ ಪ್ರಮುಖ ಜವಾಬ್ದಾರಿಗಳನ್ನು ನಿರ್ವಹಿಸಿದ್ದಾರೆ. ಮೈಸೂರಿನ ಎನ್‌ಐಇ ಸಂಸ್ಥೆಯಲ್ಲಿ ಮೆಕ್ಯಾನಿಕಲ್ ಇಂಜಿನಿಯರಿಂಗ್ ಪದವೀಧರರಾದ ಇವರು, ತಮ್ಮ ಬುದ್ಧಿಮತ್ತೆ ಹಾಗೂ ಬದ್ಧತೆಯಿಂದಾಗಿ ಅಪಾರ ಮೆಚ್ಚುಗೆ ಗಳಿಸಿದ್ದರು.

ಅಂತರರಾಷ್ಟ್ರೀಯ ಕ್ರಿಕೆಟ್ ವಿಶ್ಲೇಷಣೆಕಾರರಾಗಿಯೂ ಕಾರ್ಯನಿರ್ವಹಿಸಿದ ಇವರು, ಹಲವಾರು ಟೆಸ್ಟ್ ಮತ್ತು ಏಕದಿನ ಅಂತರರಾಷ್ಟ್ರೀಯ ಪಂದ್ಯಗಳಿಗೆ ತಮ್ಮ ವಿಶಿಷ್ಟ ಧ್ವನಿಯಲ್ಲಿ ವಿವರಣೆ ನೀಡಿದ್ದಾರೆ. ಎಂ.ಎಸ್.ರಾಮಯ್ಯ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನಲ್ಲಿ ಪ್ರಾಧ್ಯಾಪಕರಾಗಿ ಹಲವು ವರ್ಷಗಳ ಕಾಲ ಸೇವೆ ಸಲ್ಲಿಸಿದ್ದರು.

ವೃತ್ತಿಪರ ಅನ್ವೇಷಣೆಗಳ ಜೊತೆಗೆ ಕೃಷ್ಣಸ್ವಾಮಿ ಅವರು ಪ್ರತಿಭಾನ್ವಿತ ಬರಹಗಾರ ಮತ್ತು ಕ್ರೀಡಾ ಉತ್ಸಾಹಿಯಾಗಿದ್ದರು. 'ಸ್ಟಾರ್ ಆಫ್ ಮೈಸೂರ್'ನಲ್ಲಿ ಪ್ರಕಟವಾದ ಅವರ ಸಾಪ್ತಾಹಿಕ ಅಂಕಣ 'ನವ್ ಆನ್ ಟು ಪ್ಲೇ ಗ್ರೌಂಡ್ಸ್' ಓದುಗರ ಮೆಚ್ಚುಗೆ ಪಡೆದಿತ್ತು. ಬಹುಮುಖ ವ್ಯಕ್ತಿತ್ವದ ಕೃಷ್ಣಸ್ವಾಮಿ ಅವರ ವಿಷಯಗಳ ಒಳನೋಟ ಮತ್ತು ಆಕರ್ಷಕ ಶೈಲಿ ಎಲ್ಲರ ಗಮನ ಸೆಳೆದಿತ್ತು.

ಮೈಸೂರಿನ ಖ್ಯಾತ ವೈದ್ಯ ಡಾ.ಬಿ.ವಿ.ರಾಜಗೋಪಾಲ್ ನಿಧನ



ಮೈಸೂರು, ಅ.25– ಮೈಸೂರಿನಲ್ಲಿ ಐದು ದಶಕಕ್ಕೂ ಹೆಚ್ಚು ಕಾಲ ವೈದ್ಯಕೀಯ ಸೇವೆ ಸಲ್ಲಿಸಿದ್ದ ಡಾ.ಬಿ.ವಿ.ರಾಜಗೋಪಾಲ್ ಅವರು ಶನಿವಾರ ನಿಧನರಾದರು.

ಇವರು ಕುವೆಂಪುನಗರದ ಅಪಾರ್ಟ್‌ಮೆಂಟ್‌ವೊಂದರಲ್ಲಿ ವಾಸವಿದ್ದರು. ಅನಾರೋಗ್ಯದಿಂದ ಬಳಲುತ್ತಿದ್ದ ಇವರು ಕೆಲ ದಿನಗಳ ಹಿಂದೆ ಪತ್ನಿಯನ್ನು ಕಳೆದುಕೊಂಡು ನೋವಿನಲ್ಲಿದ್ದರು. ಪುತ್ರಿ, ಇಬ್ಬರು ಪುತ್ರರು ವೈದ್ಯರಾಗಿದ್ದು, ವಿದೇಶಗಳಲ್ಲಿ ನೆಲೆಸಿದ್ದಾರೆ. ತಾಯಿ ಅಂತಿಮ ಸಂಸ್ಕಾರದ ಬಳಿಕ ಓರ್ವ ಪುತ್ರ ವಿದೇಶಕ್ಕೆ ವಾಪಸ್ಸಾಗಿದ್ದು, ಅವರು ಬಂದ ನಂತರ ರಾಜಗೋಪಾಲ್ ಅವರ ಅಂತ್ಯಸಂಸ್ಕಾರ ನಡೆಸಲು ಕುಟುಂಬದವರು ನಿರ್ಧರಿಸಿದ್ದಾರೆ ಎಂದು ಅವರ ಪರಿಚಿತರು ತಿಳಿಸಿದ್ದಾರೆ.

ಪ್ರಖ್ಯಾತ ಫಿಜಿಷಿಯನ್ ಮತ್ತು ಕಾರ್ಡಿಯಾಲಜಿಸ್ಟ್ ಆಗಿದ್ದ ಡಾ.ಬಿ.ವಿ.ರಾಜಗೋಪಾಲ್ ಅವರು ಐಎಂಎ ರಾಜ್ಯ ಶಾಖೆ ಅಧ್ಯಕ್ಷ, ರಾಷ್ಟ್ರೀಯ ಉಪಾಧ್ಯಕ್ಷ, ಮೈಸೂರು ಶಾಖೆ ಅಧ್ಯಕ್ಷ, ಎಪಿಐ, ಸಿಎಸ್‌ಐ ಅಧ್ಯಕ್ಷರಾಗಿ, ವೃತ್ತಿಸಂಸ್ಥೆಗಳ ಸಂಸ್ಥಾಪಕ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವ ಮೂಲಕ ವೈದ್ಯಕೀಯ ಕ್ಷೇತ್ರಕ್ಕೆ ಗಣನೀಯ ಸೇವೆ ಸಲ್ಲಿಸಿದ್ದಾರೆ.

ಇವರ ನಿಧನಕ್ಕೆ ಸಂತಾಪ ಸೂಚಿಸಿರುವ ಸುಯೋಗ್ ಆಸ್ಪತ್ರೆ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ, ನಂಜನಗೂಡಿನ ಬಿ.ವಿ.ಪಂಡಿತರ ಪುತ್ರ ಡಾ.ಬಿ.ವಿ.ರಾಜಗೋಪಾಲ್ ಅವರು ಆಯುರ್ವೇದದ ಅಭಿವೃದ್ಧಿಗೂ ವಿಶೇಷ ಕೊಡುಗೆ ಜೊತೆಗೆ ಇಡೀ ವೈದ್ಯಕೀಯ ಕ್ಷೇತ್ರಕ್ಕೆ ಅವಿಸ್ಮರಣೀಯ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿಕೊಂಡಿದ್ದಾರೆ.

ನಿಧನ



ಲಕ್ಷ್ಮಣಸ್ವಾಮಿ

ಮೈಸೂರು, ಅ. 25– ಮೈಸೂರಿನ ವಿದ್ಯಾರಣ್ಯಪುರಂ ನಿವಾಸಿ ಲಕ್ಷ್ಮಣಸ್ವಾಮಿ (84) ಶನಿವಾರ ಬೆಳಗ್ಗೆ ನಿಧನರಾದರು.

ಮೃತರು ಆರ್‌ಟಿಓ ಏಜೆಂಟ್ ಕಾಂತರಾಜು ಸೇರಿದಂತೆ ಇಬ್ಬರು ಪುತ್ರರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಾಜಶೇಖರಮೂರ್ತಿ



ಕೊಳ್ಳೇಗಾಲದ ದೇವಾಂಗಪೇಟೆ ನಿವಾಸಿ ಆರ್.ರಾಜಶೇಖರಮೂರ್ತಿ (63) ಶುಕ್ರವಾರ ನಿಧನರಾದರು. ಮೃತರು ಪತ್ನಿ, ಪುತ್ರಿ ಹಾಗೂ ಅಪಾರ ಬಂಧು ವರ್ಗ ಅಗಲಿದ್ದು, ಶುಕ್ರವಾರ ಸಂಜೆ ಕೊಳ್ಳೇಗಾಲದ ದೇವಾಂಗ ಜನಾಂಗದ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕಣ್ಣನ್



ಮೈಸೂರು, ಅ.25– ಮೈಸೂರು ಗಾಂಧಿನಗರ ಮೂಲದ ಕೆಸರೆ ನಿವಾಸಿ, ರೈಲ್ವೆ ಇಲಾಖೆಯ ನಿವೃತ್ತ ಉದ್ಯೋಗಿ ಕಣ್ಣನ್(72) ಶನಿವಾರ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂದು–ಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಉದಯಗಿರಿ ಪಿ ಅಂಡ್ ಟಿ ಕ್ವಾಟ್ರಸ್ ಬಳಿಯಿರುವ ಹಿಂದೂ ರುದ್ರಭೂಮಿಯಲ್ಲಿ ಭಾನುವಾರ ಮಧ್ಯಾಹ್ನ 3 ಗಂಟೆಗೆ ನಡೆಯಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ಕಾಂಗ್ರೆಸ್ ಸರ್ಕಾರ ಬಂದಂದಿನಿಂದ ದಲಿತರ ಮೇಲೆ ದೌರ್ಜನ್ಯ ಹೆಚ್ಚಾಗಿದೆ

ಮಾಜಿ ಉಪ ಮೇಯರ್ ಶೈಲೇಂದ್ರ ಆರೋಪ



ವಿ.ಶೈಲೇಂದ್ರ

ಮೈಸೂರು,ಅ.25(ಬಿಎಲ್‌ಯು)–ಚಾಮರಾಜನಗರ ಜಿಲ್ಲೆಯ ಜ್ಯೋತಿಗೌಡನಪುರದಲ್ಲಿ ಭಗವಾನ್ ಬುದ್ಧರ ವಿಗ್ರಹ ಧ್ವಂಸ ಮಾಡಿ, ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರ ವಿರೂಪಗೊಳಿಸಿದ್ದು ಖಂಡನೀಯ. ಕಾಂಗ್ರೆಸ್ ಸರ್ಕಾರ ಬಂದಾಗಲಿಂದ ದಲಿತರಿಗೆ ರಕ್ಷಣೆ ಇಲ್ಲದಂತಾಗಿದೆ ಎಂದು ಮಾಜಿ ಉಪ ಮೇಯರ್ ವಿ.ಶೈಲೇಂದ್ರ ಆರೋಪಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸರ್ಕಾರ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ವಿಕೃತಿ ಮೆರೆದಿರುವ ಆರೋಪಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ದಲಿತರ ಮೇಲೆ ಶೋಷಣೆ, ದಬ್ಬಾಳಿಕೆ ಹೆಚ್ಚಾಗಿದೆ. ದಲಿತರು ನಿರ್ಭೀತಿಯಿಂದ ಬದುಕದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ದಲಿತರಿಗೆ ಇಷ್ಟೆಲ್ಲಾ ಅನ್ಯಾಯ ನಡೆಯುತ್ತಿದ್ದರೂ ರಾಜ್ಯ ಸರ್ಕಾರದ ಸಚಿವರು ಮೌನ ವಹಿಸಿರುವುದು ಬೇಸರದ ಸಂಗತಿ ಎಂದು ಶೈಲೇಂದ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅರ್ಹ ಫಲಾನುಭವಿಗಳಿಗೆ ಗ್ಯಾರಂಟಿಗಳು ತಲುಪಬೇಕು



ಅರುಣ್‌ಕುಮಾರ್

ಮೈಸೂರು,ಅ.25(ಎಸ್‌ಪಿಎನ್)– ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಮಾಡಬೇಕು ಎಂದು ಪಂಚ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಎಸ್.ಅರುಣ್‌ಕುಮಾರ್ ತಿಳಿಸಿದರು.

ಮೈಸೂರು ಜಿಲ್ಲಾ ಪಂಚಾಯತ್‌ನ ಡಿ.ದೇವರಾಜ ಅರಸು ಸಭಾಂಗಣದಲ್ಲಿ ಹಮಿಕೊಳ್ಳಲಾಗಿದ್ದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಾಡಿ ಪ್ರದೇಶಗಳಲ್ಲಿ ಶಿಬಿರಗಳನ್ನು ಆಯೋಜಿಸಿ ಹಾಡಿ ಜನರಿಗೆ ಗ್ಯಾರಂಟಿ ಯೋಜನೆಯ ಬಗ್ಗೆ ಅರಿವು ಮೂಡಿಸಬೇಕು ಎಂದು ತಾಕೀತು ಮಾಡಿದರು.

ಅನ್ನಭಾಗ್ಯ ವಿತರಣೆಯಲ್ಲಿ ಕಳಪೆ ಗುಣಮಟ್ಟದ ಅಕ್ಕಿ, ರಾಗಿ ಸರಬರಾಜು ಪೂರೈಕೆಯಾಗುತ್ತಿದೆ. ಗೃಹಲಕ್ಷ್ಮಿ ಯೋಜನೆ ಇನ್ನೂ ಅನೇಕ ಮಹಿಳೆಯರಿಗೆ ದೊರೆಯುತ್ತಿಲ್ಲ. ಅಲ್ಲದೆ ಯುವ ನಿಧಿ ಯೋಜನೆಯಲ್ಲಿ ಯಾವುದೇ ತೊಂದರೆ ಕಂಡುಬಂದಿಲ್ಲ. ಆದರೂ ಹಾಡಿ ಜನರಿಗೆ ಯುವನಿಧಿ ತಲುಪುತ್ತಿದೆಯೇ ಎಂದು ಖಚಿತಪಡಿಸಿಕೊಳ್ಳಬೇಕು. ಅಂತೆಯೇ ಶಕ್ತಿ ಯೋಜನೆಯಲ್ಲಿ ಅನೇಕ ಕಡೆಗಳಿಂದ ದೂರುಗಳು ಬಂದಿದ್ದು, ಆದಷ್ಟು ಬೇಗ ದೂರುಗಳನ್ನು ಪರಿಹರಿಸಬೇಕು ಎಂದು ಅಧಿಕಾರಿಗಳಲ್ಲಿ ಒತ್ತಾಯಿಸಿದರು.

ಅ.28ಕ್ಕೆ ನಟ ಜಯಪ್ರಕಾಶ್(ಜೆಪಿ) ಹುಟ್ಟುಹಬ್ಬ



ಮೈಸೂರು,ಅ.25(ಜಿಎ)–ಬಿಜೆಪಿ ಮುಖಂಡ ಹಾಗೂ ನಟರಾದ ಡೇರಿಂಗ್ ಸ್ಟಾರ್ ಎಸ್.ಜಯಪ್ರಕಾಶ್ (ಜೆಪಿ) ಅವರ ಹುಟ್ಟುಹಬ್ಬದ ಅಂಗವಾಗಿ ಅ.28ರಂದು ಜೆಪಿ ಅಭಿಮಾನಿ ಬಳಗದ ವತಿಯಿಂದ ವಿವಿಧ ಸೇವಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡಪರ ಹೋರಾಟಗಾರ ತೇಜೇಶ್ ಲೋಕೇಶ್‌ಗೌಡ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 6.30ಕ್ಕೆ ಜೆಪಿ ಅವರು ನಂಜನಗೂಡು, ಚಾಮುಂಡಿ ಬೆಟ್ಟಕ್ಕೆ ತೆರಳಿ ಪೂಜೆ ಸಲ್ಲಿಸಲಿದ್ದಾರೆ. ಬಳಿಕ ಡಾ.ರಾಜ್‌ಕುಮಾರ್ ಉದ್ಯಾನವನಕ್ಕೆ ಭೇಟಿ ನೀಡಿ ವರನಟ ಡಾ.ರಾಜ್‌ಕುಮಾರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಅಭಿಮಾನಿಗಳಿಗೆ ಫಲಾಹಾರ ವಿತರಿಸಲಿದ್ದಾರೆ ಎಂದರು. ಬೃಂದಾವನ ಬಡಾವಣೆಯ ಚಾಮುಂಡಿ ಚಿಲ್ಡ್ರನ್ಸ್ ಹೋಂ ವಿಶೇಷಚೇತನ ಮಕ್ಕಳಿಗೆ ಹಣ್ಣು ಹಂಪಲು ವಿತರಣೆ, ಬಾಪೂಜಿ ಆನಂದ ಆಶ್ರಮದ ವಯೋ ವೃದ್ಧರಿಗೆ ಮಧ್ಯಾಹ್ನದ ಊಟ, ಹೆಬ್ಬಾಳಿನ ಚಿಗುರು ವಿಶೇಷ ಚೇತನರಿಗೆ ಅನ್ನ ದಾಸೋಹ ನಡೆಯಲಿದೆ. ನಂತರ ಜಯಪ್ರಕಾಶ್ ಸಂಜೆ 5ಕ್ಕೆ ಬೆಂಗಳೂರು ಗಾಳಿ ಆಂಜನೇಯಸ್ವಾಮಿ ದೇವಸ್ಥಾನ, 6ಕ್ಕೆ ಚಾಮರಾಜಪೇಟೆಯ ಮಹದೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಲಿದ್ದಾರೆ. ಹೀಗೆ ನಾನಾ ರೀತಿ ಸೇವಾ ಕಾರ್ಯಗಳ ಮೂಲಕ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತದೆ. ಜೆಪಿ ಅವರ ದಿಗ್ದರ್ಶಕ ಹೊಸ ಸಿನಿಮಾ ಡಿಸೆಂಬರ್‌ನಲ್ಲಿ ತೆರೆಕಾಣಲಿದೆ ಎಂದರು. ಗೋಷ್ಠಿಯಲ್ಲಿ ಶಿವ ಕುಮಾರ್, ಕೃಷ್ಣಪ್ಪ, ಮಹದೇವಸ್ವಾಮಿ, ರಘುಅರಸ್, ಅಶೋಕ್‌ಕುಮಾರ್ ಇದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

26.10.2025 ಭಾನುವಾರ, ಮಳೆ ನಕ್ಷತ್ರ: ಸ್ವಾತಿ 24.10.2025 ರಿಂದ 05.11.2025
ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಶುಕ್ಲ ಪಕ್ಷ,
ತಿಥಿ: ಪಂಚಮಿ, ನಕ್ಷತ್ರ: ಜ್ಯೇಷ್ಠ, ರಾಹುಕಾಲ: ಸಂಜೆ 4.30ರಿಂದ 6ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾ ಭ್ಯಾಸ ತರಗತಿ, ಬೆಳಗ್ಗೆ 9 ರಿಂದ ಲಕ್ವ/ಪ್ಯಾರಾಲಿಸಿಸ್, ಕಾರ್ನಿಯಾದ ಅಪಾರ ದರ್ಶಕತೆ/ಕಣ್ಣಿನ ಹೂ (ಕಾರ್ನಿಯಲ್ ಒಪೇಸಿಟಿ)ಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.

■ **ಭಾರತೀಯ ಅಂಚೆ ಇಲಾಖೆ, ಯುವಜನ ಮತ್ತು ಕ್ರೀಡಾ ಸಬಲೀಕರಣ ಇಲಾಖೆ :** ಇಂಡಿಯಾ ಪೋಸ್ಟ್ ಮೈಸೂರು ಮಾರಾಥಾನ್, ಚಾಲನೆ : ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸ್ಥಳ: ಪೋಸ್ಟಲ್ ಟ್ರೈನಿಂಗ್ ಸೆಂಟರ್, ಬೆಳಗ್ಗೆ 7ಕ್ಕೆ.

■ **ಶ್ರೀ ವಿವೇಕ ಬಾಲೋದ್ಯಾನ ಪಬ್ಲಿಕ್ ಸ್ಕೂಲ್ :** ಬಾಲೋದ್ಯಾನ ಪ್ರತಿಭಾನ್ವೇಷಣ, ಅಂತರ ಶಾಲಾ ಸ್ಪರ್ಧೆ, ಸ್ಥಳ: ಶ್ರೀ ವಿವೇಕ ಬಾಲೋದ್ಯಾನ ಪಬ್ಲಿಕ್ ಸ್ಕೂಲ್, ಜಯನಗರ, ಬೆಳಗ್ಗೆ 8.30 ರಿಂದ.

■ **ದಟ್ಟಗಳ್ಳಿ ಗ್ರೀನ್ ಫೌಂಡೇಷನ್ :** ಹೊಸ ಬೆಳಕಿನತ್ತ ದಟ್ಟಗಳ್ಳಿ ದಶಮಾನೋತ್ಸವ ಸಮಾರಂಭ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಅಧ್ಯಕ್ಷತೆ : ಶಾಸಕ ಜಿ.ಟಿ. ದೇವೇಗೌಡ, ಉಚಿತ ಬ್ಯಾಗುಗಳ ವಿತರಣೆ : ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಉಚಿತ ಸಸಿಗಳ ವಿತರಣೆ : ವಿಧಾನ ಪರಿಷತ್ ಸದಸ್ಯ ಹೆಚ್. ವಿಶ್ವನಾಥ್, ಪೌರ ಕಾರ್ಮಿಕರಿಗೆ ಸನ್ಮಾನ : ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ, ಮುಖ್ಯ ಅತಿಥಿಗಳು : ಶಾಸಕ ಕೆ. ಹರೀಶ್‌ಗೌಡ, ಮಾಜಿ ಸಚಿವ ಸಾ.ರಾ. ಮಹೇಶ್, ಮೈಸೂರು ನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸೀಫ್, ಮುಡಾ ಆಯುಕ್ತ ಕೆ.ಆರ್. ರಕ್ಷಿತ್, ಪಾಲಿಕೆ ವಲಯ ಆಯುಕ್ತ ಎಂ. ಸಂದೀಪ್, ಅಭಿವೃದ್ಧಿ ಅಧಿಕಾರಿ ಸತ್ಯಮೂರ್ತಿ, ಕುದೇರು ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಿನ್ಸಿಪಾಲ್ ಎನ್.ಎಂ. ಶಿವಪ್ರಕಾಶ್, ಸ್ಥಳ: ಡಿಜಿಎಫ್ ಸರ್ಕಲ್ ಹತ್ತಿರ, ಜೆ ಬ್ಲಾಕ್, ದಟ್ಟಗಳ್ಳಿ, ಬೆಳಗ್ಗೆ 9 ರಿಂದ.

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಮಹಿಳಾ ಮಾನಸಿಕ ಆರೋಗ್ಯ ಮತ್ತು ಭಾವನಾತ್ಮಕ ಸ್ವ–ಆರೈಕೆ ಶಿಬಿರ, ಗರ್ಭಸಂಸ್ಕಾರ, ಉಬ್ಬಿದ ರಕ್ತನಾಳ, ಮೊಡವೆಗಳು, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10ರಿಂದ.

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರೆಯ ಬೊಂಬೆ ಪ್ರದರ್ಶನದ 21ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ.

■ **ಅನ್ನಪೂರ್ಣ ಕಣ್ಣಿನ ಆಸ್ಪತ್ರೆ :** ದೀಪಾವಳಿ ಹಬ್ಬದ ಪ್ರಯುಕ್ತ ಹಿರಿಯ ನಾಗರಿಕರಿಗೆ ಉಚಿತ ಕಣ್ಣಿನ ತಪಾಸಣಾ ಶಿಬಿರ, ಸ್ಥಳ: ಅನ್ನಪೂರ್ಣ ಕಣ್ಣಿನ ಆಸ್ಪತ್ರೆ, ಶಾರದಾದೇವಿನಗರ, ಬೆಳಗ್ಗೆ 10 ರಿಂದ ಸಂಜೆ 6 ರವರೆಗೆ

■ **ಭಾವಸಾರ್ ವಿಷನ್ ಇಂಡಿಯಾ :** ರಾಜ್ಯ ಮಟ್ಟದ ಗುರುವಂದನಾ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಕೆ. ಹರೀಶ್‌ಗೌಡ, ಡಿ. ರವಿಶಂಕರ್, ಸ್ಥಳ:ಕನ್ನಡ ಸಾಹಿತ್ಯ ಪರಿಷತ್ ಆವರಣ, ಬೆಳಗ್ಗೆ 10ಕ್ಕೆ

■ **ಮೈಸೂರು ಜಿಲ್ಲಾ ವಿಶ್ವಕರ್ಮ ನೌಕರರ ಮತ್ತು ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘ :** ವಾರ್ಷಿಕೋತ್ಸವ, ಸರ್ವ ಸದಸ್ಯರ ಮಹಾಸಭೆ, ಉದ್ಘಾಟನೆ : ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಪಿ. ಸುಜ್ಞಾನಮೂರ್ತಿ, ಸ್ಥಳ: ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಬೆಳಗ್ಗೆ 10ಕ್ಕೆ

■ **ಅಭಿರುಚಿ ಬಳಗ :** ಬೆಳಗ್ಗೆ 10.30ಕ್ಕೆ ವಿಶೇಷ ಚೇತನರಿಗೆ ರಾಜ್ಯಮಟ್ಟದ ಅಭಿರುಚಿ ಅಶ್ವಿನ್ ಚೈತನ್ಯದ ಚಿಲುಮೆ ಪ್ರಶಸ್ತಿ–2025 ಹಾಗೂ ಸಾಂಸ್ಕೃತಿಕ ಕಲಾ ಉತ್ಸವ, ಉದ್ಘಾಟನೆ : ನಿವೃತ್ತ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ|| ಹೆಚ್.ಎಸ್. ರುದ್ರೇಶ್, ಅಧ್ಯಕ್ಷತೆ : ಅವ್ವ ಜನಪದ ವೇದಿಕೆ ಅಧ್ಯಕ್ಷರಾದ ಸುಮಾ ಪಂಚವಳ್ಳಿ, ಮುಖ್ಯ ಅತಿಥಿಗಳು : ಡಾ. ನಾರಾಯಣ, ನಿವೃತ್ತ ತಹಸೀಲ್ದಾರ್ ಡಾ. ವಿ. ರಂಗನಾಥ್ ಹಾಗೂ ಬೆಂಗಳೂರಿನ ಮಳೆಬಿಲ್ಲು ಜಿ.ಲೀಲಾ, ಸಂಜೆ 4 ಗಂಟೆಗೆ ಕವಿಗೋಷ್ಠಿ, ಅಧ್ಯಕ್ಷತೆ : ನಾಟಕಕಾರ–ಕವಿ–ಸಾಹಿತಿ ಹರೀಶ್ ಡೋಂಗ್ರೆ, ಸ್ಥಳ: ನಮನ ಕಲಾ ಮಂಟಪ.

■ **ಮೈಸೂರು ಜಿಲ್ಲಾ ಪತ್ರಕರ್ತರ ಸಂಘ, ವಿಜಯಲಕ್ಷ್ಮಿ ಪ್ರಕಾಶನ :** ಈಚನೂರು ಕುಮಾರ್ ಅವರ 50 ವರ್ಷಗಳ ಅಕ್ಷರಯಾನ ನೆನಪಿನಲಿ ಭವ್ಯ ಚಿತ್ರಪಟ ಮೈಸೂರು ಕೃತಿ ಬಿಡುಗಡೆ, ಉಪಸ್ಥಿತರು : ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ನಿರ್ದೇಶಕ ಡಾ. ಗವಿಸಿದ್ದಯ್ಯ, ಹಿರಿಯ ಪತ್ರಕರ್ತ ಜಿ. ಸತ್ಯನಾರಾಯಣ (ಗೌರಿ ಸತ್ಯ), ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್, ಪ್ರಧಾನ ಕಾರ್ಯದರ್ಶಿ ಧರ್ಮಾಪುರ ನಾರಾಯಣ, ಸ್ಥಳ: ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಆವರಣ, ಬೆಳಗ್ಗೆ 10.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸಿನೆಮಾ ಯಾನ, ಸಿನೆಮಾ ಯಾನ–ಜನ ಮೆಚ್ಚಿದ ಕನ್ನಡ ಚಿತ್ರಗಳ ನೆನಪಿನ ಮಾಲೆ, ಪ್ರಸ್ತುತಿ : ಶ್ರೀನಿವಾಸ್ ಪ್ರಸಾದ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ:ಜಿ.ಪುಷ್ಪಲತಾ, ವ್ಯಾಖ್ಯಾನ: ಡಾ.ಪ್ರದೀಪ್‌ಕುಮಾರ್ ಹೆಬ್ರಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು– ಡಾ.ರಾಜ್ ಕುಮಾರ್, 9.05 ಸ್ತನ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ, 9.40 ನಮ್ಮ ಆರೋಗ್ಯ, ಹಿರಿಯ ನಾಗರಿಕರ ಹೃದಯದ ಆರೋಗ್ಯ ಕುರಿತು ತಿಳಿಸಿಕೊಡಲಿದ್ದಾರೆ ಮಂಡ್ಯದ ಇಂಟರ್ವೆನ್ಷನಲ್ ಕಾರ್ಡಿಯಾಲಜಿಸ್ಟ್ ಡಾ.ಹೇಮಾ.ಎಸ್ ಇವರೊಂದಿಗೆ ಭಾಗವಹಿಸುತ್ತಾರೆ–ಡಾ.ಕುಲದೀಪ್.ಎನ್, 10.00 ಕೇಳಿಗಿಳಿಗಳೇ–ವಿಶ್ವೇಶ್ವರನಗರದ ಡಿ.ಎ.ವಿ ಪಬ್ಲಿಕ್ ಶಾಲೆಯ ಪುಟ್ಟ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 10.30 KRISH TRISH and Balty boy ನಾವು ಭಾರತೀಯರು ಭಾರತೀಯ ಸ್ವಾತಂತ್ರ್ಯ ಸಂಗ್ರಾಮದ ತೆರೆಮರೆಯ ನಾಯಕರ ಬಗ್ಗೆ ಬೆಳಕು ಚೆಲ್ಲುವ ಬಾನುಲಿ ಸರಣಿ, 10.55 ಮನ್ ಕೀ ಬಾತ್ – ಭಾರತದ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರು ರಾಷ್ಟ್ರದ ಜನತೆಯೊಡನೆ ಹಂಚಿಕೊಳ್ಳುವ ಮನದ ಮಾತು.

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ : ಮಂಡ್ಯ ಜಿಲ್ಲೆ ಕೀಲಾರ ಗ್ರಾಮದ ಗೌರಮ್ಮ ಮತ್ತು ಸಂಗಡಿಗರು, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ – ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ ಕುರಿತು ಮಾಹಿತಿ, 1.20 ಭಾವಗೀತೆಗಳು: ರೇಣುಕಾ ನಾಕೋಡ್, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ಭಾರತ ಹಾಗೂ ಬಾಂಗ್ಲಾದೇಶ ತಂಡಗಳ ನಡುವೆ ನವಿ ಮುಂಬೈನ ಡಾ.ಡಿ.ವೈ ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿ ಕ್ರೀಡಾಂಗಣದಲ್ಲಿ ನಡೆಯುವ ಐಸಿಸಿ ವಿಶ್ವ ಕಪ್ ಮಹಿಳಾ ಕ್ರಿಕೆಟ್ ಪಂದ್ಯದ ವೀಕ್ಷಕ ವಿವರಣೆ, 8.00 ಭಾರತದ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರು ರಾಷ್ಟ್ರದ ಜನತೆಯೊಡನೆ ಹಂಚಿಕೊಳ್ಳುವ ಮನದ ಮಾತಿನ ಕನ್ನಡ ಅನುವಾದದ ಮರುಪ್ರಸಾರ

■ **ಮೈಸೂರು ಡಿಸ್ಟ್ರಿಕ್ಟ್ ಡೆಫ್ ಅಸೋಸಿಯೇಷನ್ :** ಮೈಸೂರು ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯಲ್ಲಿ ಶ್ರವಣ ಸಾಧನಗಳ ವಿತರಣಾ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಕ್ಯಾನ್‌ಫಿನ್ ಹೋಮ್ಸ್ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕ ಸುರೇಶ್ ಎಸ್. ಐಯ್ಯರ್, ಅಧ್ಯಕ್ಷತೆ : ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ ನಿರ್ದೇಶಕರಾದ ಡಾ. ಪುಷ್ಪಾವತಿ, ಮುಖ್ಯ ಅತಿಥಿಗಳು : ಕ್ಯಾನ್‌ಫಿನ್ ಹೋಮ್ಸ್ ಲಿಮಿಟೆಡ್ ಉಪ ಮಹಾಪ್ರಬಂಧಕ ಪ್ರಶಾಂತ್ ಜೋಶಿ, ಲಯನ್ ಕೆ.ಎಲ್. ರಾಜಶೇಖರ, ಲಯನ್ ಎಸ್. ಮೂರ್ತಿ, ಮಹೇಶ್ ವರ್ಮ, ಸ್ಥಳ: ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ, ಬೆಳಗ್ಗೆ 11.30ಕ್ಕೆ.

■ **ಚಾರು ಸಾಂಸ್ಕೃತಿಕ ಪ್ರತಿಷ್ಠಾನ :** ಚಾರುಮಂಜುಷಾ–10, ಮೈಸೂರಿನ ಪ್ರಥಮ ಮಹಿಳಾ ಕಲಾವಿದೆ ಸುಮಾ ರಾಜಕುಮಾರ್ ಅವರಿಂದ ಮ್ಯಾಜಿಕ್ ಶೋ ಹಾಗೂ ಮಾತನಾಡುವ ಗೊಂಬೆ ಪ್ರದರ್ಶನ, ಮುಖ್ಯ ಅತಿಥಿಗಳು : ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಸ್ಥಳ: ಚಾರು ಸಾಂಸ್ಕೃತಿಕ ಪ್ರತಿಷ್ಠಾನ, ಶ್ರೀರಾಂಪುರ 2ನೇ ಹಂತ, ಸಂಜೆ 5ಕ್ಕೆ.

■ **ಸಾಧನಾ ಮಂದಿರ :** ಪೂಜ್ಯ ಸ್ವಾಮಿ ಹಂಸಾನಂದ ಅವರಿಂದ ಸರಸ್ವತಿ ಪೂಜಾ, ಸಂಜೆ 6 ರಿಂದ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಸಾಹಿತ್ಯ ಭವನ, ವಿಜಯನಗರ 1ನೇ ಹಂತ; ಸಂಜೆ 7.15 ರಿಂದ ಶ್ರೀ ಸಪ್ತಮಾತೃಕಾ ದೇವಸ್ಥಾನಂ, ವಿಜಯನಗರ 3ನೇ ಹಂತ.

■ **ಗಾನಭಾರತೀ :** ವೈ.ಎಸ್. ಸುಬ್ರಹ್ಮಣ್ಯ ಸಂಸ್ಮರಣಾ ಸಂಗೀತ ಕಛೇರಿ, ವಿದುಷಿ ಕಲಾವತಿ ಅವಧೂತ್ ಅವರಿಂದ ಗಾಯನ, ವಿದುಷಿ ಸಿಂಧು ಸುಚೇತನ–ಪಿಟೀಲು, ವಿದ್ವಾನ್ ಹೆಚ್.ಎಲ್. ಶಿವಶಂಕರ್–ಮೃದಂಗ, ವಿದ್ವಾನ್ ರಂಗನಾಥ ಚಕ್ರವರ್ತಿ–ಘಟಂ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 6ಕ್ಕೆ.

■ **ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಬಳಗ :** 7ನೇ ವಾರ್ಷಿಕೋತ್ಸವ, ಉದ್ಘಾಟನೆ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಮುಖ್ಯ ಅತಿಥಿಗಳು : ಹಿರಿಯ ಪ್ರಾಧ್ಯಾಪಕ ಡಾ. ಡಿ.ಎಸ್. ಗುರು, ಮಹಿಳಾ ಸಾಧಕರಿಗೆ ಆದರ್ಶ ಗೃಹಿಣಿ ಪ್ರಶಸ್ತಿ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ : ಹಿರಿಯ ಸಾಹಿತಿ ಪ್ರೊ. ಶಶಿಕಲಾ ವಸ್ತ್ರದ, ಉಪಸ್ಥಿತರು : ಬಳಗದ ಗೌರವಾಧ್ಯಕ್ಷ ಡಾ. ಟಿ. ತಿಪ್ಪೇಸ್ವಾಮಿ, ಅಧ್ಯಕ್ಷತೆ : ಬಳಗದ ಅಧ್ಯಕ್ಷ ಡಾ. ಜಿ.ಎಂ. ವಾಮದೇವ, ಪ್ರಶಸ್ತಿ ಪುರಸ್ಕೃತರು : ಶ್ರೀಮತಿ ಶಿವರುದ್ರಮ್ಮ, ಶ್ರೀಮತಿ ಶಿವಲಿಂಗಮ್ಮ, ಡಾ. ನಾಗಲಕ್ಷ್ಮಿ ಭಟ್ಟಾಚಾರ್ಯ, ಸ್ಥಳ: ಡಾ. ಶಿವರಾತ್ರೀಶ್ವರ ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಸಂಜೆ 6ಕ್ಕೆ

■ **ಶ್ರೀ ರಾಮಕೃಷ್ಣ ಆಶ್ರಮ :** ಸ್ವಾಮಿ ಸರ್ವಜಯಾನಂದ ಅವರಿಂದ ಶ್ರೀ ಶ್ರೀ ರಾಮಕೃಷ್ಣ ಚರಿತೆ ಕುರಿತು ಪ್ರವಚನ, ಸ್ಥಳ: ಸ್ವಾಮಿ ಶಾಂಭವಾನಂದಜೀ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6 ರಿಂದ.

■ **ಶ್ರೀ ನಾದಬ್ರಹ್ಮ ಸಂಗೀತ ಸಭಾ :** ಶ್ರೀಮತಿ ಭಾಗೀರಥಿ ಮತ್ತು ಕುಸ್ನೂರು ಕೃಷ್ಣಮೂರ್ತಿ ಸಂಸ್ಮರಣಾ ಕಾರ್ಯಕ್ರಮ, ಡಾ. ದೀಪಶ್ರೀ ಕಾಯಂಪಾಡಿ ಅವರಿಂದ ಕರ್ನಾಟಕ ಶಾಸ್ತ್ರೀಯ ಗಾಯನ, ವಿದುಷಿ ಪೃಥ್ವಿ ಭಾಸ್ಕರ್–ಪಿಟೀಲು, ವಿದ್ವಾನ್ ನಂದನ್ ಕಶ್ಯಪ್–ಮೃದಂಗ, ವಿದ್ವಾನ್ ಉದಯ್ ಶಾಂತರಾಜ್–ಘಟಂ, ಸ್ಥಳ: ಶ್ರೀ ನಾದಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 6 ರಿಂದ.

■ **ಚಿನ್ಮಯ ಮಿಷನ್, ಶ್ರೀ ಗುರುದೇವ ದತ್ತ ಸನ್ನಿಧಿ :** ಗೀತಾಜ್ಞಾನಯಜ್ಞ, ಪೂಜ್ಯ ಸ್ವಾಮಿ ಗಹನಾನಂದ ಅವರಿಂದ ಭಗವದ್ಗೀತೆಯ 3ನೇ ಅಧ್ಯಾಯ ಕರ್ಮ ಯೋಗ ಕುರಿತು ಪ್ರವಚನ, ಸ್ಥಳ: ಶಿವಾನಂದ ಜ್ಞಾನಾಲಯ, ಜೆಎಲ್‌ಬಿ ರಸ್ತೆ, ಲಕ್ಷ್ಮೀಪುರಂ, ಸಂಜೆ 6.30 ರಿಂದ.



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ


ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಅಕ್ಟೋಬರ್ 26 ಭಾನುವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 188 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಸಿದ್ದರಾಮಯ್ಯ ಉತ್ತರಾಧಿಕಾರಿ ಸತೀಶ್ ಜಾರಕಿಹೊಳಿ ಹೇಳಿಕೆ

ನೋಟಿಸ್ ಕೊಟ್ಟರೆ ನೋಡಿಕೊಳ್ಳೋಣ...

ಮೈಸೂರಲ್ಲಿ ಎಂಎಲ್‌ಸಿ ಡಾ.ಯತೀಂದ್ರ ನಾಯಕರಿಗೆ ಟಾಂಗ್

● ನನ್ನ ಹೇಳಿಕೆಗೆ ಈಗಲೂ ಬದ್ಧ ● ಎಲ್ಲಿ ಮಾತನಾಡಬೇಕೊ ಅಲ್ಲಿ ಮಾತನಾಡುವೆ
● ನವೆಂಬರ್ ಕ್ರಾಂತಿ ಬರೀ ಊಹಾಪೋಹ ● ಸಿದ್ದರಾಮಯ್ಯ ಪೂರ್ಣಾವಧಿ ಸಿಎಂ

ಮೈಸೂರು, ಅ.25(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಉತ್ತರಾಧಿಕಾರಿ ಸತೀಶ್ ಜಾರಕಿಹೊಳಿ ಎಂಬ ಹೇಳಿಕೆ ನೀಡಿ ಕಾಂಗ್ರೆಸ್ ಮನೆಯಲ್ಲಿ ಕಿಚ್ಚೊತ್ತಿಸಿದ ವಿಧಾನಪರಿಷತ್ ಸದಸ್ಯ ಡಾ. ಯತೀಂದ್ರ ಅವರು ತಮ್ಮ ಹೇಳಿಕೆಗೆ ಈಗಲೂ ಬದ್ಧ ಎಂದು ಹೇಳುವ ಮೂಲಕ ಉರಿಯುವ ಬೆಂಕಿಗೆ ಮತ್ತಷ್ಟು ತುಪ್ಪ ಸುರಿದಿದ್ದಾರೆ.

ಮೈಸೂರಿನ ಮಾನಸಗಂಗೋತ್ರಿಯ ಸೆನೆಟ್ ಸಭಾಂಗಣದಲ್ಲಿ ನಡೆದ ಕರ್ನಾಟಕ ಸಾಮಾಜಿಕ, ಶೈಕ್ಷಣಿಕ, ಸಮೀಕ್ಷೆ ಕುರಿತ ವಿಚಾರ ಗೋಷ್ಠಿಯಲ್ಲಿ ಪಾಲ್ಗೊಂಡ ನಂತರ ಮಾತನಾಡಿದ ಅವರು, ನನ್ನ ಹೇಳಿಕೆಗೆ ಪಕ್ಷ ನೋಟಿಸ್ ನೀಡಿದರೆ ಆಗ ನೋಡಿಕೊಳ್ಳೋಣ ಬಿಡಿ ಎಂದು ಎಲ್ಲವನ್ನೂ ಹಗುರವಾಗಿ ಪರಿಗಣಿಸಿರುವಂತೆ ಪ್ರತಿಕ್ರಿಯಿಸಿದರು.

ಬೆಳಗಾವಿಯ ಚಿಕ್ಕೋಡಿಯಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಯತೀಂದ್ರ ಅವರು, ನಮ್ಮ ತಂದೆ ಸಿದ್ದರಾಮಯ್ಯ ಅವರು ರಾಜಕೀಯ ಸಂಧ್ಯಾ ಕಾಲದಲ್ಲಿದ್ದಾರೆ. ಇಂತಹ ಸಮಯದಲ್ಲಿ ಪ್ರಗತಿಪರ ಚಿಂತನೆ ಹೊಂದಿರುವ ಹಾಗೂ ಸೈದ್ಧಾಂತಿಕ ಮಾರ್ಗದರ್ಶನ ನೀಡುವ ನಾಯಕನ ಅವಶ್ಯವಿದ್ದು, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಈ ಸ್ಥಾನ ತುಂಬಲಿದ್ದಾರೆ ಎಂದು ಹೇಳಿದ್ದರು. ಯತೀಂದ್ರ ಅವರ ಈ ಹೇಳಿಕೆ ರಾಜ್ಯ ರಾಜಕೀಯದಲ್ಲಿ ಸಂಚಲನ ಉಂಟು ಮಾಡಿತ್ತು. ಮುಖ್ಯಮಂತ್ರಿ ಕುರ್ಚಿ ಮೇಲೆ ಟವಲ್ ಹಾಕಿ ಚಾತಕ ಪಕ್ಷಿಯಂತೆ ಕಾಯುತ್ತಿರುವ ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ಶಾಕ್ ಉಂಟು ಮಾಡಿತ್ತು. ಕಾಂಗ್ರೆಸ್ ಸಚಿವರು, ಶಾಸಕರು, ಮುಖಂಡರು ಎರಡು ದಿನದಿಂದ ವಿಭಿನ್ನ ಹೇಳಿಕೆ ನೀಡುತ್ತಿದ್ದಾರೆ. ಈ ಮಧ್ಯೆ ಮೈಸೂರಿನಲ್ಲಿ ಇದೇ ವಿಚಾರವಾಗಿ ಪ್ರತಿಕ್ರಿಯೆ ನೀಡಿರುವ ಯತೀಂದ್ರ ಅವರು, ನಾನು ಏನು ಹೇಳಬೇಕೋ ಅದನ್ನು ಹೇಳಿದ್ದೇನೆ. ಅಂದು ನೀಡಿರುವ ಹೇಳಿಕೆಗೆ ಈಗಲೂ ಬದ್ಧ ಎಂದರು.


ಡಾ.ಯತೀಂದ್ರ

ನನ್ನ ಹೇಳಿಕೆಗೆ ವಿಭಿನ್ನ ವ್ಯಾಖ್ಯಾನ ನೀಡಿದ ಸಂದರ್ಭದಲ್ಲಿ ಸ್ಪಷ್ಟೀಕರಣ ನೀಡಿದ್ದೇನೆ. ಮತ್ತೆ ಅದೇ ವಿಚಾರ ಮಾತನಾಡಿ ವಿವಾದ ಸೃಷ್ಟಿ ಮಾಡುವುದಿಲ್ಲ ಎಂದರು. ಈ ವಿಚಾರದ ಬಗ್ಗೆ ಎಲ್ಲಿ ಮಾತನಾಡಬೇಕೋ ಅಲ್ಲಿ ಮಾತನಾಡುತ್ತೇನೆ. ಪಕ್ಷದ ಆಂತರಿಕ ವಿಚಾರಗಳ ಬಗ್ಗೆ ಒಳಗೆ ಮಾತನಾಡುತ್ತೇನೆ. ಮಾಧ್ಯಮದವರ ಜೊತೆ ಯಾವುದೇ ವಿಚಾರ ಹಂಚಿಕೊಳ್ಳುವುದಿಲ್ಲ ಎಂದರು.

ನವೆಂಬರ್ ಕ್ರಾಂತಿ ಎಂಬುದು ಊಹಾಪೋಹ. ಇಂದಿನ ಪರಿಸ್ಥಿತಿಯಲ್ಲಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಪೂರ್ಣಾವಧಿ ಅಧಿಕಾರ ನಡೆಸಲಿದ್ದಾರೆ ಎಂದು ಯತೀಂದ್ರ ಪುನರುಚ್ಚರಿಸಿದರು.

ಬಾಲಕನ ರಕ್ಷಣೆಗೆ ಮುಂದಾದ ಸಹೋದರರು ಜಲಸಮಾಧಿ

● ಇವರಲ್ಲಿ ಓರ್ವ ನವವಿವಾಹಿತ ● ಬಾಲಕ ಸ್ವಯಂ ಅಪಾಯದಿಂದ ಪಾರು

ಮೈಸೂರು,ಅ.25(ಎಂಟಿವೈ)– ಈಜಲು ಹೋಗಿ, ನೀರಿನಲ್ಲಿ ಮುಳುಗುತ್ತಿದ್ದ ಬಾಲಕನೊಬ್ಬನನ್ನು ರಕ್ಷಿಸಲು ಹೋದ ನವವಿವಾಹಿತ ಸೇರಿದಂತೆ ಸಹೋದರರು ವರುಣ ನಾಲೆಯಲ್ಲಿ ಮುಳುಗಿ ದುರಂತ ರೀತಿ ಸಾವನ್ನಪ್ಪಿರುವ ಘಟನೆ ಮೈಸೂರು ತಾಲೂಕಿನ ಬಡಗಲಹುಂಡಿ ಬಳಿ ಶನಿವಾರ ಮಧ್ಯಾಹ್ನ ನಡೆದಿದೆ.

ಮೈಸೂರು ತಾಲೂಕಿನ ಬಡಗಲಹುಂಡಿ ಗ್ರಾಮದ ರಮೇಶ್ ಅವರ ಮಗ ನಂದನ್ (25), ರವಿ ಎಂಬುವರ ಮಗ ರಾಕೇಶ್ (20) ಮೃತಪಟ್ಟಿರುವ ಸಹೋದರರಾಗಿದ್ದಾರೆ. ಮೃತ ಯುವಕರ ತಂದೆ ಅಣ್ಣ–ತಮ್ಮಂದಿರಾಗಿದ್ದು, ಸಾವಿನಲ್ಲೂ ಸಹೋದರರು ಒಂದಾಗಿರುವುದು ಪೋಷಕರಿಗೆ ಆಘಾತ ಉಂಟುಮಾಡಿದೆ. ಅದರಲ್ಲೂ ನಂದನ್ 15 ದಿನದ ಹಿಂದಷ್ಟೇ ಚನ್ನಪಟ್ಟಣ ಮೂಲದ ಯುವತಿಯನ್ನು ಪ್ರೀತಿಸಿ, ಯುವತಿಯ ಪೋಷಕರ ವಿರೋಧದ ನಡುವೆ ಪೊಲೀಸರ ರಕ್ಷಣೆಯಲ್ಲಿ ವಿವಾಹವಾಗಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.


ನಂದನ್


ರಾಕೇಶ್

ಘಟನೆ ವಿವರ: ವರುಣ ಮುಖ್ಯ ನಾಲೆಯಿಂದ ಬಡಗಲಹುಂಡಿ, ಮೂಡಲಹುಂಡಿ ಮಾರ್ಗವಾಗಿ ನರಸೀಪುರ ರಸ್ತೆಯ ಎಂ.ಸಿ. ಹುಂಡಿ ಕಡೆ ನೀರುಣಿಸುವ ಉಪ ನಾಲೆಯಲ್ಲಿ ಮಾರಿಗುಡಿ ಕ್ರಾಸ್ ಬಳಿ ಬಡಗಲಹುಂಡಿ ಗ್ರಾಮದ 15 ವರ್ಷದ ಬಾಲಕನೊಬ್ಬ ಈಜುತ್ತಿದ್ದಾಗ ಸುಸ್ತಾಗಿ ಮುಳುಗಲಾರಂಭಿಸಿದ್ದಾನೆ. ಮಧ್ಯಾಹ್ನ 2.30ರ ವೇಳೆಗೆ ಗದ್ದೆಗೆ ಗೊಬ್ಬರ ಹಾಕಲು ಬೈಕ್‌ನಲ್ಲಿ ತೆರಳುತ್ತಿದ್ದ ನಂದನ್ ಮತ್ತು ರಾಕೇಶ್ ಬಾಲಕ ಮುಳುಗುತ್ತಿರುವುದನ್ನು ಗಮನಿಸಿದ್ದಾರೆ. ಕೂಡಲೇ ಸಹೋದರರು ನಾಲೆಗೆ ಹಾರಿದ್ದಾರೆ. ಇತ್ತ ಬಾಲಕ ಕಾಲುವೆ ದಡದಲ್ಲಿದ್ದ ಗಿಡವೊಂದನ್ನು ಹಿಡಿದು ದಡ ಸೇರಿದ್ದಾನೆ. ಆದರೆ, ಮಾರಿ ಗುಡಿ ಕ್ರಾಸ್ ಬಳಿ ನಾಲೆಯಲ್ಲಿ ▶ 6ನೇ ಪುಟಕ್ಕೆ

ಎಚ್ಚರ... ಎಚ್ಚರ...

ಈಜು ಬರುತ್ತಿದ್ದರೂ ಇಬ್ಬರು ಯುವಕರು ನೀರಿನ ಸೆಳೆತಕ್ಕೆ ಒಳಗಾಗಿ ಮೃತಪಟ್ಟ ಇದೇ ಸ್ಥಳಕ್ಕೆ ಬನ್ನೂರು ರಸ್ತೆಯ 2–3 ಕಾಲೇಜು ವಿದ್ಯಾರ್ಥಿಗಳು ಈಜಲು ಬರುತ್ತಾರೆ. ನಗರ ಪ್ರದೇಶದ ಈ ವಿದ್ಯಾರ್ಥಿಗಳಿಗೆ ನಾಲೆಯ ಆಳ, ಅಗಲ ಹಾಗೂ ನೀರಿನ ರಭಸ ಗೊತ್ತಿಲ್ಲ. ಆದರೂ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಈಜಲು ಹಾಗೂ ನೀರಲ್ಲಿ ಆಟ ಆಡಲು ಬರುತ್ತಾರೆ. ಸಾಕಷ್ಟು ಬಾರಿ ಸ್ಥಳೀಯರು ವಿದ್ಯಾರ್ಥಿಗಳಿಗೆ ಅಪಾಯದ ಎಚ್ಚರಿಕೆ ನೀಡಿ ವಾಪಸ್ಸು ಹೋಗುವಂತೆ ತಿಳಿ ಹೇಳಿದರೂ ಕೆಲವರು ಉದ್ಧಟತನ ಪ್ರದರ್ಶಿಸುತ್ತಿದ್ದಾರೆ.

ಟಿಪ್ಪರ್–ಕಾರು ಡಿಕ್ಕಿ: ದಂಪತಿ ಸಾವು


ಅಪಘಾತಕ್ಕೆ ಕಾರಣವಾದ ಟಿಪ್ಪರ್


ರಸ್ತೆಯಲ್ಲೇ ನರಳಿ ಮೃತಪಟ್ಟ ಮಹಿಳೆ


ಅಪಘಾತದಲ್ಲಿ ನಜ್ಜುಗುಜ್ಜಾದ ಕಾರು.

3 ವರ್ಷದ ಬಾಲಕ ಸೇರಿ ಮೂವರಿಗೆ ತೀವ್ರ ಗಾಯ

ಗುಂಡ್ಲುಪೇಟೆ, ಅ.25 (ಸೋಮ್.ಜಿ)– ತಾಲೂಕಿನ ಮಾದಾಪಟ್ಟಣ ಗೇಟ್ ಸಮೀಪ ರಾಷ್ಟ್ರೀಯ ಹೆದ್ದಾರಿ 766ರಲ್ಲಿ ಟಿಪ್ಪರ್ ಲಾರಿ (ಕೆಎಲ್32, ಆರ್ 6077) ಹಾಗೂ ಕಾರು (ಕೆಎಲ್12, ಜಿ 4141) ನಡುವೆ ಮುಖಾಮುಖಿ ಡಿಕ್ಕಿಯಾಗಿ ಮಲೇಷಿಯಾ ಪ್ರವಾಸ ಮುಗಿಸಿ ಊರಿಗೆ ತೆರಳುತ್ತಿದ್ದ ಕೇರಳ ಮೂಲದ ದಂಪತಿ ಸ್ಥಳದಲ್ಲೇ ಸಾವಿಗೀಡಾದ ದಾರುಣ ಘಟನೆ ಶನಿವಾರ ನಡೆದಿದೆ. ನೆರೆ ರಾಜ್ಯ ಕೇರಳದ ವೈನಾಡಿನ ಮಡಕಿ ಮಲೆ ನಿವಾಸಿಗಳಾದ ಬಷೀರ್ (53) ಹಾಗೂ ಅವರ ಪತ್ನಿ ನಾಶಿಮಾ(43) ಎಂಬುವರು ಸ್ಥಳದಲ್ಲಿ ಮೃತರಾದರೆ, ಹಿಂಬದಿ ಸೀಟಿನಲ್ಲಿ ಪ್ರಯಾಣಿಸುತ್ತಿದ್ದ ಅವರ ಸಂಬಂಧಿಕರಾದ ಮಹಮ್ಮದ್ ರಫಿ(32), ಜಷಿರ (28) ಹಾಗೂ ಮೃತ ದಂಪತಿ ಪುತ್ರ ಮೂರು ವರ್ಷದ ಅಜೀಂ ಗಂಭೀರವಾಗಿ ಗಾಯಗೊಂಡಿದ್ದು, ಮೈಸೂರಿನ ಅಪೋಲೋ ಆಸ್ಪತ್ರೆಗೆ ದಾಖಲಿಸಲಾಗಿದೆ. ▶ 6ನೇ ಪುಟಕ್ಕೆ

ಚೀನಾದಲ್ಲಿ ಪ್ರಧಾನಿ ಮೋದಿ ಹತ್ಯೆಗೆ ಸಂಚು: ಕಾರಲ್ಲಿ ಕರೆದೊಯ್ದು ಪಾರು ಮಾಡಿದ ಪುಟಿನ್!

ಢಾಕಾ, ಅ.25– ಕಳೆದ ತಿಂಗಳು ಚೀನಾದಲ್ಲಿ ನಡೆದ ಶಾಂಘೈ ಸಹಕಾರ ಸಂಘದ ಸಭೆಯಲ್ಲಿ ಭಾಗಿಯಾಗಿದ್ದ ಪ್ರಧಾನಿ ನರೇಂದ್ರ ಮೋದಿ ಅವರ ಹತ್ಯೆಗೆ ಸಂಚು ನಡೆಸಲಾಗಿತ್ತು ಎಂಬ ಸ್ಫೋಟಕ ಮಾಹಿತಿ ಈಗ ಬಹಿರಂಗವಾಗಿದೆ.

ಅಮೆರಿಕದ ಗುಪ್ತಚರ ಸಂಸ್ಥೆ ಸಿಐಎ ವಿರುದ್ಧ ಈ ಆರೋಪ ಕೇಳಿಬರುತ್ತಿದ್ದು, ಈ ಕುರಿತಂತೆ ಸಾಕಷ್ಟು ಮಾಧ್ಯಮಗಳು ವರದಿಗಳನ್ನು ಪ್ರಕಟಿಸುತ್ತಿದೆ.


ಅಮೆರಿಕದ ಸುಂಕ ಬೆದರಿಕೆಗಳ ಬೆನ್ನಲ್ಲೇ ಭಾರತ–ಚೀನಾ ಸಂಬಂಧಗಳಲ್ಲಿ ಗಮನಾರ್ಹ ಸುಧಾರಣೆ ಕಂಡುಬಂದಿತ್ತು. ಅಷ್ಟೇ ಅಲ್ಲದೇ ರಷ್ಯಾ–ಭಾರತ–ಚೀನಾ ಒಗ್ಗೂಡಿರುವುದನ್ನು ಸಹಿಸದ ದೇಶವೊಂದು ಮೋದಿ ಹತ್ಯೆಗೆ ಸಂಚು ರೂಪಿಸಿದೆ ಎಂದು ಈ ವರದಿಗಳನ್ನು ಆಧರಿಸಿ ವಿಶ್ಲೇಷಿಸಲಾಗುತ್ತಿದೆ.



ಇಷ್ಟೆಲ್ಲಾ ಮಾಹಿತಿಗಳು ಬಹಿರಂಗಗೊಳ್ಳುತ್ತಿರುವುದಕ್ಕೆ ಕಾರಣ ಢಾಕಾದಲ್ಲಿ ನಿಯೋಜಿಸಲಾಗಿದ್ದ ಅಮೆರಿಕದ ವಿಶೇಷ ಪಡೆಗಳ ಅಧಿಕಾರಿ ಟೆರೆನ್ಸ್ ಅರ್ವೆಲ್ಲೆ ಜಾಕ್ಸನ್ ಆ.31ರಂದು ಶವವಾಗಿ ಪತ್ತೆಯಾಗಿರುವುದಾಗಿದೆ. ಈ ವ್ಯಕ್ತಿಯನ್ನು ಅಮೆರಿಕ ಮ್ಯಾನ್ಮಾರ್‌ನಲ್ಲಿ ಅರಾಕನ್ ಆರ್ಮಿಗೆ ಬಾಂಗ್ಲಾಗೆ ನೆರವು ನೀಡಲು ನಿಯೋಜಿಸುವ ನೆಪದಲ್ಲಿ ಸಕ್ರಿಯವಾಗಿರಿಸಿತ್ತು. ಈ ನಿಗೂಢ ಸಾವು ಸಿಐಎ ಹೆಜ್ಜೆ ಗುರುತು ಹಾಗೂ ಚೀನಾದಲ್ಲಿ ಮೋದಿ ಹತ್ಯೆಯ ಸಂಚಿನ ಯೋಜನೆಯನ್ನು ಬಿಚ್ಚಿಡುತ್ತಿದೆ. ಸಿಐಎ ವಿರುದ್ಧದ ಆರೋಪ ಮತ್ತೊಂದು ತಾಷ್ಕೆಂಟ್ ಘಟನೆಯಂತೆ ಮಾಡುವ ಪ್ರಯತ್ನ ಎಂದೇ ವ್ಯಾಪಕವಾಗಿ ವಿಶ್ಲೇಷಿಸಲಾಗುತ್ತಿದೆ. ಚೀನಾದ ನೆಲದಲ್ಲಿ ಭಾರತದ ಪ್ರಧಾನಿಯನ್ನು ಹತ್ಯೆ ಮಾಡಿದರೆ, ▶ 6ನೇ ಪುಟಕ್ಕೆ

ಆರ್‌ಎಸ್‌ಎಸ್ ನಿಯಂತ್ರಿಸುವುದು ರಾಜ್ಯ ಸರ್ಕಾರದಲ್ಲಿರುವ ಎಲ್ಲರ ಉದ್ದೇಶವಲ್ಲ; ಕೆಲವರ ಅಜೆಂಡಾ ಅಷ್ಟೆ

ಇಂಡಿಯಾ ಫೌಂಡೇಷನ್ ಅಧ್ಯಕ್ಷರೂ ಆದ ಚಿಂತಕ ಡಾ.ರಾಮ್ ಮಾಧವ್ ಅಭಿಮತ





ಮೈಸೂರಿನ ವಿಜಯನಗರ ಮೊದಲ ಹಂತದಲ್ಲಿನ ಜಗನ್ನಾಥ ಕಲೆ ಮತ್ತು ಸಾಂಸ್ಕೃತಿಕ ಕೇಂದ್ರದ ವೇದಿಕಾ ಸಭಾಂಗಣದಲ್ಲಿ ಆರ್‌ಎಸ್‌ಎಸ್ ಶತಮಾನೋತ್ಸವದ ಪ್ರಯುಕ್ತ ಸಂಘ ಕುರಿತಂತೆ ಶನಿವಾರ ಹಮ್ಮಿಕೊಂಡಿದ್ದ ಚರ್ಚಾ ಕಾರ್ಯಕ್ರಮವನ್ನು ಜನ ಜಾಗರಣ ಟ್ರಸ್ಟ್ ಮೈಸೂರು ಅಧ್ಯಕ್ಷ ವಾಸುದೇವ ಭಟ್ ಉದ್ಘಾಟಿಸಿದರು. 'ಸ್ಟಾರ್ ಆಫ್ ಮೈಸೂರ್' ಹಾಗೂ 'ಮೈಸೂರು ಮಿತ್ರ' ವ್ಯವಸ್ಥಾಪಕ ಸಂಪಾದಕರಾದ ವಿಕ್ರಂ ಮುತ್ತಣ್ಣ, ಇಂಡಿಯಾ ಫೌಂಡೇಷನ್ ಅಧ್ಯಕ್ಷರೂ ಆದ ಲೇಖಕ ಡಾ.ರಾಮ್ ಮಾಧವ್ ಚಿತ್ರದಲ್ಲಿದ್ದಾರೆ. ಬಲಚಿತ್ರದಲ್ಲಿ ವಿಕ್ರಂ ಮುತ್ತಣ್ಣ ಅವರು ಡಾ.ರಾಮ್ ಮಾಧವ್ ಅವರೊಂದಿಗೆ ಚರ್ಚಾಗೋಷ್ಠಿಯಲ್ಲಿ ಪಾಲ್ಗೊಂಡಿರುವುದನ್ನು ಕಾಣಬಹುದು.

ಮೈಸೂರು,ಅ.25(ಪಿಎಂ)–ರಾಷ್ಟ್ರೀಯ ಸ್ವಯಂ ಸೇವಕ ಸಂಘ(ಆರ್‌ಎಸ್‌ಎಸ್)ದ ಚಟುವಟಿಕೆ ನಿಷೇಧಿಸುವ, ನಿಯಂತ್ರಿಸುವುದು ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿರುವ ಎಲ್ಲರ ಉದ್ದೇಶವಲ್ಲ. ಇದು ಕೆಲ ನಾಯಕರ ಅಜೆಂಡಾ ಅಷ್ಟೇ ಎಂದು ಆರ್‌ಎಸ್‌ಎಸ್ ಮುಖಂಡರೂ ಆದ ಇಂಡಿಯಾ ಫೌಂಡೇಷನ್ ಅಧ್ಯಕ್ಷ ಹಾಗೂ ಚಿಂತಕ ಡಾ.ರಾಮ್ ಮಾಧವ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ವಿಜಯನಗರದಲ್ಲಿರುವ ಜಗನ್ನಾಥ ಕಲೆ ಮತ್ತು ಸಾಂಸ್ಕೃತಿಕ ಕೇಂದ್ರದ ವೇದಿಕಾ ಸಭಾಂಗಣದಲ್ಲಿ ಜನ ಜಾಗರಣ ಟ್ರಸ್ಟ್ ಮೈಸೂರು, ಮಂಥನ ಮೈಸೂರು ಹಾಗೂ ಸದರಿ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಆರ್‌ಎಸ್‌ಎಸ್ ಶತಮಾನೋತ್ಸವದ ಹಿನ್ನೆಲೆಯಲ್ಲಿ ಸಂಘ (ಆರ್‌ಎಸ್‌ಎಸ್) ಕುರಿತಂತೆ ಹಮ್ಮಿಕೊಂಡಿದ್ದ ಚರ್ಚಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಚರ್ಚೆ ನಡೆಸಿಕೊಟ್ಟ 'ಸ್ಟಾರ್ ಆಫ್ ಮೈಸೂರ್' ಹಾಗೂ 'ಮೈಸೂರು ಮಿತ್ರ' ವ್ಯವಸ್ಥಾಪಕ ಸಂಪಾದಕರಾದ ವಿಕ್ರಂ ಮುತ್ತಣ್ಣ ಅವರು, ಕರ್ನಾಟಕ ಕಾಂಗ್ರೆಸ್ ಸರ್ಕಾರವು ಸಾರ್ವಜನಿಕ (ಸರ್ಕಾರಿ) ಸ್ಥಳಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳನ್ನು ನಿಯಂತ್ರಿಸುವ ಅಥವಾ ನಿಷೇಧಿಸುವ ನಿಟ್ಟಿನಲ್ಲಿ ಹೆಜ್ಜೆ ಇಟ್ಟಿದ್ದು, ▶ 6ನೇ ಪುಟಕ್ಕೆ

ಆರ್‌ಎಸ್‌ಎಸ್ ಯಾರನ್ನೂ ಶತ್ರುವೆಂದು ಪರಿಭಾವಿಸಿಲ್ಲ

ಮೈಸೂರು,ಅ.25(ಪಿಎಂ)–ರಾಷ್ಟ್ರೀಯ ಸ್ವಯಂ ಸೇವಕ ಸಂಘವು (ಆರ್‌ಎಸ್‌ಎಸ್) ಯಾರನ್ನೂ ಶತ್ರು ಎಂದು ಎಂದಿಗೂ ಪರಿಭಾವಿಸಿಲ್ಲ. ಆದರೆ, ಅನೇಕರು ಆರ್‌ಎಸ್‌ಎಸ್ ತಮ್ಮ ಶತ್ರು ಎಂದು ಭಾವಿಸಿರಬಹುದು ಎಂದು ಹಿರಿಯ ಆರ್‌ಎಸ್‌ಎಸ್ ಮುಖಂಡರೂ ಆದ ಇಂಡಿಯಾ ಫೌಂಡೇಷನ್ ಅಧ್ಯಕ್ಷ ಡಾ.ರಾಮ್ ಮಾಧವ್ ಹೇಳಿದರು.

ನಮಗೆ ಹಿಂದೆಯೂ ಯಾವುದೇ ಶತ್ರುಗಳು ಇರಲಿಲ್ಲ. ಇಂದಿಗೂ ಯಾವುದೇ ಶತ್ರುಗಳಿಲ್ಲ. ನಾನು ನಾಲ್ಕು ದಶಕಗಳ ಕಾಲ ಆರ್‌ಎಸ್‌ಎಸ್‌ನಲ್ಲಿ ಕೆಲಸ ಮಾಡಿದ್ದೇನೆ. ಹೀಗಾಗಿ ಆರ್‌ಎಸ್‌ಎಸ್ ಅರ್ಥ ಮಾಡಿಕೊಳ್ಳುವುದು ಕಷ್ಟ. ಆದರೆ ಅಪಾರ್ಥ ಮಾಡಿಕೊಳ್ಳುವುದು ಬಹಳ ಸುಲಭ ಎನ್ನುವುದನ್ನು ಕಂಡುಕೊಂಡಿದ್ದೇನೆ ಎಂದರು.

ನೂರು ವರ್ಷಗಳ ನಂತರವೂ ಸಂಘ ಬೆಳೆಯುತ್ತಲೇ ಇದೆ ಮತ್ತು ವಿಶ್ವದಲ್ಲೇ ಅತಿ ಹೆಚ್ಚು ಯುವ ಜನರನ್ನು ಸೆಳೆಯುತ್ತಿದೆ. ನಮಗೆ ರಾಜಕೀಯವಾಗಿ ಸಹಾಯಕವಲ್ಲ ಎನ್ನುವ ಕಾರಣಕ್ಕೆ ಯಾವುದಾದರೂ ಕಾರಣ ಮುಂದೊಡ್ಡಿ ಸಂಘವನ್ನು ನಿಷೇಧಿಸುವ ಪ್ರಯತ್ನಗಳನ್ನು ನೆಹರೂ ಕಾಲದಿಂದಲೂ ನಿರಂತರವಾಗಿ ನಡೆಯುತ್ತಲೇ ಇದೆ. ಇಷ್ಟೆಲ್ಲಾ ವಿರೋಧಗಳ ನಡುವೆಯೂ ಸಂಘ ಮತ್ತಷ್ಟು ಪ್ರಬಲವಾಗುತ್ತಲೇ ಬಂದಿದೆ. ಇದಕ್ಕೆ ಡಾ.ಹೆಡ್ಗೆವಾರ್ ಅವರ ದೂರದೃಷ್ಟಿಯೇ ಕಾರಣ ಎಂದು ವಿವರಿಸಿದರು.

ನಮ್ಮ ಉದ್ದೇಶ ಯಾವುದೇ ಹೊಸ ಸಂಸ್ಥೆಯನ್ನು ಕಟ್ಟುವುದಲ್ಲ, ಯಾವುದೇ ಮುಚ್ಚುಮರೆ ಇಟ್ಟುಕೊಳ್ಳುವುದಲ್ಲ, ಬಹಿರಂಗವಾಗಿಯೇ ಎಲ್ಲ ಚಟುವಟಿಕೆಗಳೂ ನಡೆಯಬೇಕು ಎನ್ನುವುದು ಡಾ.ಹೆಡ್ಗೇವಾರ್ ಅವರ ಸ್ಪಷ್ಟ ಚಿಂತನೆಯಾಗಿತ್ತು. ಆದರೆ ಯಾವುದೇ ಮುಚ್ಚುಮರೆ ಇಲ್ಲದೆ ಬಯಲಿನಲ್ಲಿ ನಡೆಯುತ್ತಿದ್ದ ಸಂಘದ ಶಾಖೆಗಳನ್ನು ಗುಪ್ತವಾಗಿ ಮುಚ್ಚಿದ ಕೋಣೆಯಲ್ಲಿ ನಡೆಸಬೇಕೆಂದು ▶ 6ನೇ ಪುಟಕ್ಕೆ

20 ಮಂದಿ ಸಜೀವ ದಹನಕ್ಕೆ ಬಸ್‌ನಲ್ಲಿತ್ತು 46 ಲಕ್ಷ ಮೌಲ್ಯದ 234 ಹೊಸ ಸ್ಮಾರ್ಟ್ ಫೋನ್!

ಹೈದರಾಬಾದ್: 20 ಮಂದಿ ಸಜೀವ ದಹನಕ್ಕೆ ಕಾರಣವಾದ ಏಸಿ ಬಸ್ ದುರಂತದ ಬಗ್ಗೆ ಮಹತ್ವದ ವಿಚಾರವೊಂದು ಬೆಳಕಿಗೆ ಬಂದಿದೆ. ಈ ಪ್ರಕರಣದ ತನಿಖೆ ವೇಳೆ ಈ ಬಸ್‌ನಲ್ಲಿ 40 ಲಕ್ಷ ಮೌಲ್ಯದ 234 ಹೊಸ ಸ್ಮಾರ್ಟ್ ಫೋನ್‌ಗಳಿದ್ದವು. ಹೈದರಾಬಾದ್ ಮೂಲದ ಉದ್ಯಮಿ ಮಂಗನಾಥ್ ಬೆಂಗಳೂರಿನ ಇ–ಕಾಮರ್ಸ್ ಕಂಪನಿಗೆ ಸ್ಮಾರ್ಟ್‌ಫೋನ್‌ಗಳನ್ನು ಪಾರ್ಸೆಲ್ ಆಗಿ ರವಾನಿಸಿದ್ದು, ಅಲ್ಲಿಂದ ಗ್ರಾಹಕರಿಗೆ ಫೋನ್‌ಗಳನ್ನು ಪೂರೈಸಬೇಕಿತ್ತು. ಫೋನ್‌ಗೆ ಬೆಂಕಿ ಹೊತ್ತಿಕೊಂಡಾಗ ಬ್ಯಾಟರಿಗಳು ಸ್ಫೋಟಗೊಳ್ಳುವ ಶಬ್ದ ಕೇಳಿಸಿತು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ ಎಂದು ವರದಿಯಾಗಿದೆ.





ನಕ್ಕರೆ ಅದೇ ಸ್ವರ್ಗ

ಮಹಿಳೆಯೊಬ್ಬಳು ಗಂಡನನ್ನು ಜೈಲಿನಲ್ಲಿ ಭೇಟಿಯಾಗಿ ವಾಪಸ್ ಬರುವಾಗ ಜೈಲರ್ ಬಳಿ, ಯಾಕೆ ಸರ್ ನನ್ನ ಗಂಡನಿಂದ ಅಷ್ಟೊಂದು ಕಷ್ಟದ ಕೆಲಸ ಮಾಡಿಸ್ತೀರಿ?

ಜೈಲರ್ : ಯಾವ ಕೆಲಸವನ್ನಮ್ಮ, ತಿಂತಾನೆ, ಕುಡಿತಾನೆ, ಮಲಗ್ತಾನೆ... ಇಷ್ಟೆ ಕೆಲಸ.

ಮಹಿಳೆ : ಅವರೇ ಹೇಳಿದ್ರು... ಸುರಂಗ ಕೊರೆಯುತ್ತಿದ್ದೇನೆ ಅಂತ!!

ಮೈಸೂರು ಮಿತ್ರ

ಭಾನುವಾರ, 26 ಅಕ್ಟೋಬರ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ......

ಕೋಪ ಬರುವುದು ತಪ್ಪಲ್ಲ. ಅದು ಸುದೀರ್ಘ ಕಾಲ ಉಳಿಯಬಾರದು ಅಷ್ಟೇ. ಬೆಂಕಿಯಿಂದ ಮೈ ಚಳಿ ಕಾಯಿಸಿಕೊಳ್ಳಬೇಕು, ಅದರಲ್ಲೇ ಧುಮುಕಿ ಬಿಡುವುದಲ್ಲ!

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ರಾವಣನ ಮಾತಿಗೆ ಮನಸೋತವ, ರಾಮನ ಮಾತಿಗೆ ಜಾಣನಾಗುವನೇ?

ನಿಮ್ಮ ಪತ್ರಗಳು

ನವೆಂಬರ್‌ನಲ್ಲಿ ಕ್ರಾಂತಿಯೋ, ವಾಂತಿಯೋ

ಮಾನ್ಯರೆ,

ಆಡಳಿತಾರೂಢ ಕಾಂಗ್ರೆಸ್ ಪಕ್ಷದಲ್ಲಿ ನಾಯಕತ್ವಕ್ಕಾಗಿ ಪೈಪೋಟಿ, ಆಂತರಿಕ ಭಿನ್ನಮತ ಇತ್ಯಾದಿಗಳು ದಿನೇ–ದಿನೆ ಹೆಚ್ಚುತ್ತಿದೆ. ಇತ್ತೀಚೆಗೆ ವಿಧಾನಪರಿಷತ್ ಸದಸ್ಯರಾದ ಡಾ.ಯತೀಂದ್ರ ಸಿದ್ದರಾಮಯ್ಯನವರು ಬೆಳಗಾವಿಯಲ್ಲಿ ತಮ್ಮ ತಂದೆ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಚಿವ ಸತೀಶ್ ಜಾರಕಿಹೊಳಿಯವರು ರಾಜಕೀಯ ಉತ್ತರಾಧಿಕಾರಿ ಎಂಬರ್ಥದಲ್ಲಿ ಮಾತನಾಡಿರುವುದು ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಸಂಚಲನ ಮೂಡಿಸಿದೆ. ಅತ್ತ ಮುಂದಿನ ಮುಖ್ಯಮಂತ್ರಿಯಾಗುವ ಕನಸನ್ನು ಕಾಣುತ್ತಿದ್ದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಈ ಬೆಳವಣಿಗೆಯಿಂದ ವಿಚಲಿತಗೊಂಡಂತೆ ಕಂಡು ಬಂದಿದ್ದು, ವ್ಯಕ್ತಿಗಿಂತ ಪಕ್ಷ ಮುಖ್ಯ, ವ್ಯಕ್ತಿಗಿಂತ ಪಕ್ಷ ಪೂಜೆಮಾಡಿ ಎಂದು ಕಾಂಗ್ರೆಸ್ ನಾಯಕರಿಗೆ ಕಿವಿಮಾತು ಹೇಳಿದ್ದಾರೆ.

ಇನ್ನು ಮುಂದಿನ ನವೆಂಬರ್ ತಿಂಗಳಲ್ಲಿ 'ಕ್ರಾಂತಿ'ಯಾಗುತ್ತದೆ ಎಂದು ಭವಿಷ್ಯ ನುಡಿದಿದ್ದ ಕಾಂಗ್ರೆಸ್ ನಾಯಕರು ಸಹಾ ಇತ್ತೀಚಿನ ಬೆಳವಣಿಗೆಗಳಿಂದ ಅಚ್ಚರಿಗೊಂಡಿದ್ದಾರೆನ್ನಲಾಗಿದೆ. ನಾಯಕತ್ವದ ವಿಚಾರದಲ್ಲಿ ಈ ರೀತಿಯ ಹೇಳಿಕೆಗಳು ಆಡಳಿತದ ಮೇಲೆ ತನ್ನದೇ ಆದ ಪರಿಣಾಮ ಬೀರುವೆ. ವಿರೋಧ ಪಕ್ಷಗಳ ಲೇವಡಿಗೂ ಒಳಗಾಗಿದೆ. ಇನ್ನು ಮುಂದಾದರೂ ರಾಜ್ಯದ ಕಾಂಗ್ರೆಸ್ ನಾಯಕರು ಜವಾಬ್ದಾರಿಯಿಂದ ವರ್ತಿಸಬೇಕಾಗಿದೆ. ಮುಂದಿನ ಮುಖ್ಯಮಂತ್ರಿ ಆಯ್ಕೆಯ ವಿಚಾರವನ್ನು ಕಾಂಗ್ರೆಸ್ ಹೈಕಮಾಂಡ್ ಅಥವಾ ಪಕ್ಷದ ಶಾಸಕಾಂಗ ಪಕ್ಷ ತೀರ್ಮಾನಿಸಬಹುದು. ಕಾಂಗ್ರೆಸ್ ನಾಯಕರು ಇಂತಹ ಹೇಳಿಕೆಗಳಿಂದ, ಪಕ್ಷವನ್ನು ಕಟ್ಟುವ ಬದಲು ದುರ್ಬಲಗೊಳಿಸಲು ಹೊರಟಂತೆ ಕಾಣುತ್ತದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು.

ಬೆಂಗಳೂರು ರಸ್ತೆಯಲ್ಲಿ ಗುಂಡಿಗಳ ದರ್ಬಾರ್

ಮಾನ್ಯರೆ,

ಬೆಂಗಳೂರಿನ ರಸ್ತೆಗಳು ಇತ್ತೀಚೆಗೆ ಗುಂಡಿಮಯವಾಗಿರುವುದನ್ನು ಪತ್ರಿಕೆಗಳಲ್ಲಿ, ದೃಶ್ಯ ಮಾಧ್ಯಮಗಳಲ್ಲಿ ನೋಡಿ ನೋಡಿ ಜನಸಾಮಾನ್ಯರು ಬೇಸರಿಸುವಂತಾಗಿದೆ. ಇಷ್ಟೆಲ್ಲಾ ಆಗಿದ್ದರೂ ಸರ್ಕಾರ ನಡೆಸುವ ಜನಪ್ರತಿನಿಧಿಗಳು ಏನೂ ಆಗಿಲ್ಲವೇನೊ ಎಂದು ಹೇಳುತ್ತಿರುವುದು ಸಾಮಾನ್ಯವಾಗಿದೆ. ಇದೇ ವಿಷಯದ ಬಗ್ಗೆ ಉದ್ಯಮಿ ಕಿರಣ್ ಮುಜುಂದಾರ್ ಶಾ ಹಾಗೂ ಮೋಹನ್ ದಾಸ್ ಪೈ ಅವರು ಬೆಂಗಳೂರಿನ ರಸ್ತೆ ಗುಂಡಿಗಳ ಬಗ್ಗೆ ಸರ್ಕಾರಕ್ಕೆ ಟ್ವೀಟ್ ಮುಖಾಂತರ ಮಾಹಿತಿ ನೀಡಿದರೆ, ಸರ್ಕಾರದ ಜನಪ್ರತಿನಿಧಿಗಳು ಟ್ವೀಟ್‌ಗೆ ಪ್ರತಿಯಾಗಿ ಟೀಕೆ ಮಾಡುತ್ತಿರುವುದು ಸಮಂಜಸವಲ್ಲ. ಬೇರೆ ರಾಜ್ಯಗಳಲ್ಲಿ ಉದ್ಯಮಿಗಳಿಗೆ ಕೊಡುವ ಸವಲತ್ತು, ರಿಯಾಯಿತಿ ನೀಡುವ ಬಗ್ಗೆ ಮಾತನಾಡಿದರೆ ನೀವುಗಳು ಅಲ್ಲಿಗೆ ಬೇಕಾದರೆ ಹೋಗಿ ಇಲ್ಲಿಗೆ ಬರುವ ಅವಶ್ಯಕತೆ ಇಲ್ಲ ಎಂದು ಹೇಳುವುದು ಎಷ್ಟು ಸರಿ. ಇದೇ ರೀತಿ ಮಾತನಾಡಿ ಪ್ರತಿಷ್ಠಿತ ಸಂಸ್ಥೆಯಾದ ಗೂಗಲ್ ಅನ್ನು ನಾವು ಈಗಾಗಲೇ ಕಳೆದುಕೊಂಡಿದ್ದೇವೆ. ರಾಜ್ಯದ ಅಭಿವೃದ್ಧಿ ದೃಷ್ಟಿಯಿಂದ ಇನ್ನಾದರೂ ಸರ್ಕಾರದ ಜನಪ್ರತಿನಿಧಿಗಳು ಎಚ್ಚೆತ್ತುಕೊಳ್ಳುವುದು ಉತ್ತಮ.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

ಪಥ ಸಂಚಲನ ಅಂದೇ ಏಕೆ?

ಮಾನ್ಯರೆ,

ಕಳೆದ ಅಕ್ಟೋಬರ್ 19 ರಂದು ಕಲ್ಬುರ್ಗಿ ಜಿಲ್ಲೆಯ ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥ ಸಂಚಲನ ಮಾಡಲು ಅನುಮತಿ ಕೋರಿ ತಾಲೂಕು ಆಡಳಿತಕ್ಕೆ ಮನವಿ ಸಲ್ಲಿಸಿತ್ತು. ಆದರೆ ಉದ್ದೇಶ ಪೂರ್ವಕವಾಗಿ ಅದೇ ದಿನ ಪಥ ಸಂಚಲನ ಮಾಡಲು ಅನುಮತಿ ಕೋರಿ ಭೀಮ್ ಆರ್ಮಿ ಮತ್ತು ದಲಿತ ಪ್ಯಾಂಥರ್ಸ್ ಸಂಘಟನೆಗಳು ತಾವೂ ಪಥ ಸಂಚಲನ ಮಾಡಲು ತಾಲೂಕು ಆಡಳಿತವನ್ನು ಕೋರಿದವು ಎಂಬ ಕಾರಣ ನೀಡಿ, ತಾಲೂಕು ಆಡಳಿತ ಆರ್‌ಎಸ್‌ಎಸ್ ಪಥ ಸಂಚಲನಕ್ಕೆ ಅನುಮತಿ ನಿರಾಕರಿಸಿದೆ. ಆದರೆ ಅಂದು ಆರ್‌ಎಸ್‌ಎಸ್‌ಗೆ ಪಥ ಸಂಚಲನ ಮಾಡಲು ಅನುಮತಿ ನೀಡಿ ಮತ್ತೊಂದು ದಿನ ಉಳಿದ ಸಂಘಟನೆಗಳಿಗೆ ಪಥ ಸಂಚಲನ ಮಾಡಲು ಅನುಮತಿ ನೀಡಿದ್ದರೆ, ಅಥವಾ ಅಂದೇ ಬೇರೆ ಬೇರೆ ಅವಧಿಯಲ್ಲಿ ಪಥ ಸಂಚಲನಕ್ಕೆ ಎಲ್ಲರಿಗೂ ಅನುಮತಿ ನೀಡಿ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಿದ್ದರೆ, ಈ ವಿವಾದವೇ ಆಗುತ್ತಿರಲಿಲ್ಲ. ಕೋರ್ಟ್ ಆದೇಶದಂತೆ ನವೆಂಬರ್ 2 ರಂದು ಪಥ ಸಂಚಲನಕ್ಕೆ ಮತ್ತೆ ಆರ್‌ಎಸ್‌ಎಸ್ ಮನವಿ ಮಾಡಿದೆ. ಈಗಲೂ ಅದೇ ರೀತಿ ಉಳಿದ ಸಂಘಟನೆಗಳೂ ಮನವಿ ಸಲ್ಲಿಸಿವೆ. ಆದರೆ ತಾಲೂಕು ಆಡಳಿತ ಈಗಲೂ ಯಾವುದೇ ನಿರ್ಧಾರ ಪ್ರಕಟಿಸದೆ ಉಪೇಕ್ಷೆ ಮಾಡುತ್ತಿದೆ ಎಂದರೆ ಇಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಉದ್ದೇಶ ಪೂರ್ವಕವಾಗಿ ತಡೆ ಹಿಡಿಯುತ್ತಿದ್ದಾರೆ ಎನ್ನುವುದು ಗೋಚರವಾಗುತ್ತಿದೆ. ಇದು ಅಪೇಕ್ಷಣೀಯವಲ್ಲ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಇಎಸ್‌ಐಸಿ ವೈದ್ಯಕೀಯ ಕಾಲೇಜುಗಳಲ್ಲಿ ಐಪಿ ಕೋಟಾ ಹೆಚ್ಚಳ ಅತ್ಯಗತ್ಯ

ಮಾನ್ಯರೆ,

ದೇಶದಲ್ಲಿ ಪ್ರಸ್ತುತ ಇಎಸ್‌ಐಸಿ ವೈದ್ಯಕೀಯ ಕಾಲೇಜುಗಳಲ್ಲಿ ಇನ್ಸೂರ್ಡ್ ಪರ್ಸನ್(ಐಪಿ) ಕೋಟಾ ಪ್ರಮಾಣ ಕೇವಲ 35% ರಷ್ಟೇ ಇದೆ. ಇಎಸ್‌ಐ ಯೋಜನೆಯಡಿ ದೇಶದಾದ್ಯಂತ ಲಕ್ಷಾಂತರ ಉದ್ಯೋಗಿಗಳು ಮತ್ತು ಅವರ ಕುಟುಂಬ ಸದಸ್ಯರು ಒಳಗೊಂಡಿರುವುದರಿಂದ ಈ ಪ್ರಮಾಣವು ಅತಿ ಕಡಿಮೆ ಎಂದು ಹೇಳಬಹುದು. ಇಎಸ್‌ಐ ಯೋಜನೆಗೆ ಕಾರ್ಮಿಕರು ತಮ್ಮ ಮಾಸಿಕ ವೇತನದ ಒಂದು ಭಾಗವನ್ನು ಪಾವತಿಸುವ ಮೂಲಕ ನೇರವಾಗಿ ಕೊಡುಗೆ ನೀಡುತ್ತಾರೆ. ಆದ್ದರಿಂದ, ಅವರ ಮಕ್ಕಳಿಗೆ ವೈದ್ಯಕೀಯ ಶಿಕ್ಷಣದ ಹೆಚ್ಚಿನ ಅವಕಾಶ ಒದಗಿಸುವುದು ನ್ಯಾಯಯುತ ಹಾಗೂ ಸಾಮಾಜಿಕ ಸಮಾನತೆಯ ದೃಷ್ಟಿಯಿಂದ ಅತ್ಯಗತ್ಯ. ಇದೇ ವೇಳೆ, ವೈದ್ಯಕೀಯ ಕ್ಷೇತ್ರದಲ್ಲಿ ಕಾರ್ಮಿಕ ವರ್ಗದ ಮಕ್ಕಳ ಪ್ರತಿನಿಧಿತ್ವ ಅತ್ಯಲ್ಪವಾಗಿರುವುದು ಶೋಚನೀಯವಾಗಿದೆ. ಈ ಹಿನ್ನೆಲೆಯಲ್ಲಿ, ಪ್ರಸ್ತುತ ಇರುವ ಐಪಿ ಕೋಟಾವನ್ನು 35% ರಿಂದ ಕನಿಷ್ಠ 45% ರಷ್ಟು ಹೆಚ್ಚಿಸುವುದು ಸಮರ್ಪಕ ಮತ್ತು ನ್ಯಾಯಸಮ್ಮತವಾದ ಕ್ರಮವಾಗುತ್ತದೆ. ಇದು ಕಾರ್ಮಿಕ ಕುಟುಂಬಗಳ ಶೈಕ್ಷಣಿಕ ಮತ್ತು ಆರ್ಥಿಕ ಸಬಲೀಕರಣಕ್ಕೆ ಪೂರಕವಾಗಿದ್ದು, ವೈದ್ಯಕೀಯ ಶಿಕ್ಷಣದಲ್ಲಿ ಸಮಾನ ಅವಕಾಶ ಮತ್ತು ಸಾಮಾಜಿಕ ನ್ಯಾಯದ ಆದರ್ಶವನ್ನು ಬೆಂಬಲಿಸುತ್ತದೆ. ಹೀಗಾಗಿ, ಕೇಂದ್ರ ಸರ್ಕಾರ ಮತ್ತು ಇಎಸ್‌ಐಸಿ ಆಡಳಿತ ಮಂಡಳಿ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಮುಂದಿನ ಶೈಕ್ಷಣಿಕ ವರ್ಷದಿಂದಲೇ ಐಪಿ ಕೋಟಾ ಪ್ರಮಾಣವನ್ನು ಹೆಚ್ಚಿಸುವ ಕ್ರಮ ಕೈಗೊಳ್ಳುವುದು ಅತ್ಯಗತ್ಯ.

–ಡಾ. ಎಚ್.ಕೆ.ವಿಜಯಕುಮಾರ್, ಮೈಸೂರು.



ಡಾ.ರಮಾ ವಿ. ಬೆಣ್ಣೂರ್
ಸಂಗೀತ ವಿಮರ್ಶಕರು
ಮೊ: 99452 82346

ನಾದಲಹರಿ

ದೇವಾನುದೇವತೆಗಳೂ ಸಂಗೀತಪ್ರಿಯರಲ್ಲವೆ...?

ಮನುಷ್ಯನ ಹುಟ್ಟಿನಿಂದ ಸಾವಿನವರೆಗೆ ಒಂದಲ್ಲ ಒಂದು ರೀತಿಯಲ್ಲಿ ಭಾಗಿಯಾಗುವುದು ಯಾವುದು ಎಂದು ಯಾವಾಗಲಾದರೂ ಯೋಚಿಸಿದ್ದೀರಾ ಅದು ಸಂಗೀತ. ಹುಟ್ಟಿದಾಗ ಅಮ್ಮನ ಜೋಗುಳವನ್ನು ಕಿವಿ ತುಂಬಿಸಿಕೊಳ್ಳುತ್ತಾ ಬೆಳೆದಂತೆ ಪುಟ್ಟ–ಪುಟ್ಟ ಹಾಡುಗಳು ನಮ್ಮ ಜೊತೆಗೂಡುತ್ತವೆ. ಮನೆಯ ಹಿರಿಯರು, ಶಾಲೆಯ ಗುರುಗಳು ನಮ್ಮಲ್ಲಿ ಸಂಗೀತದ ಅಭಿರುಚಿಯನ್ನು ಬೆಳೆಸಲು ಪ್ರೇರೇಪಿಸುತ್ತಾರೆ.

ಇದಲ್ಲದೆ ಬೆಳೆಯುವ ಮಗುವಿನ ಸುತ್ತಲ ವಾತಾವರಣದಲ್ಲಿ ಇರಬಹುದಾದ ಅನೇಕ ರೀತಿಯ ಹಾಡು, ಸಂಗೀತವೂ ಅವನೊಳಗೆ ಇಳಿದು ತನ್ನದೇ ಆದ ಪ್ರಭಾವವನ್ನು ಬೀರಲು ಆರಂಭಿಸಿರುತ್ತದೆ. ಸಂಗೀತಗಾರರ ಮನೆಯಲ್ಲಿಯೇ ಹುಟ್ಟಿದ ಮಗುವಂತೂ ಹುಟ್ಟುತ್ತಲೇ ಸಂಗೀತವನ್ನೇ ಉಸಿರಾಗಿಸಿಕೊಂಡಿರುತ್ತದೆ ಎಂಬುದು ಉತ್ಪ್ರೇಕ್ಷೆ ಅಲ್ಲ. ತನ್ನ ಕಿವಿಯ ಮೇಲೆ ಬಿದ್ದ ಶಬ್ದಗಳನ್ನು ಅನುಕರಿಸುತ್ತಾ ಮಾತು ಕಲಿಯುವಂತೆಯೇ ಮಗು ಹಾಡುವುದನ್ನೂ ಕೂಡ ಕಲಿಯಲು ಯತ್ನಿಸುತ್ತದೆ.

ಅದರಲ್ಲಿ ಮಗು ಯಶಸ್ವಿ ಆಗಲೇ ಬೇಕೆಂದೇನು ಇಲ್ಲ. ಎಲ್ಲರಿಗೂ ಹಾಡಲು ಸಾಧ್ಯ ಆಗಿಯೇ ಆಗುತ್ತದೆ ಎಂದೇನೂ ಖಂಡಿತಾ ಇಲ್ಲ. ಇದರಿಂದ ಒಂದು ಕೇಳ್ಮೆ ಸಿದ್ಧಿಸುತ್ತದೆ ಎಂದು ಹೇಳಬಹುದು. ಮಗು ದೊಡ್ಡದಾದಂತೆ ಅದರ ಸ್ವಂತ ಅಭಿರುಚಿಗಳೂ ಸ್ಪಷ್ಟವಾಗುತ್ತಾ, ನಿಖರವಾಗುತ್ತಾ ಹೋಗುವುದನ್ನು ಗುರುತಿಸಬಹುದು. ನಮ್ಮ ಮಗಳಿಗೆ ಸಿಹಿ ಅಂದರೆ ಸ್ವಲ್ಪವೂ ಇಷ್ಟವಿಲ್ಲ. ಖಾರ ಬೇಕಾದರೆ ಎಷ್ಟು ಕೊಟ್ಟರೂ ತಿನ್ನುತ್ತಾಳೆ ಎಂದೋ, ಶಾಸ್ತ್ರೀಯ ಸಂಗೀತವನ್ನು ತೊಟ್ಟಿಲಿನಲ್ಲಿ ಇದ್ದಾಗಲೇ ಅವನು ಕಲಿಯಲು ಪ್ರಾರಂಭಿಸಿದ್ದ ಎಂದೋ ತಾಯಿ ತಂದೆಯರು ತಮ್ಮ ಮಕ್ಕಳ ಬಗ್ಗೆ ಹೇಳುವುದನ್ನು ಕೇಳುತ್ತಿರುತ್ತೇವೆ.

ನಮ್ಮ ಬಾಲ್ಯದಲ್ಲಿ ಮನೆಯ ಮುಂದೆ ದೇವರ ನಾಮಗಳನ್ನು ಹಾಡುತ್ತಾ, ಶಂಖ, ಊದುತ್ತಾ ಜಾಗಟೆಗಳನ್ನು ಬಾರಿಸುತ್ತಾ ಬರುತ್ತಿದ್ದ, ಮಕ್ಕಳನ್ನು ಒಂದು ಅಚ್ಚರಿಯ ಲೋಕಕ್ಕೆ ಕರೆದೊಯ್ಯುತ್ತಿದ್ದ ನಾಮಧಾರೀ ದಾಸಯ್ಯಗಳು ಈಗ ಹೆಚ್ಚು ಕಡಿಮೆ ಮರೆಯಾಗಿರುವಂತೆ ಕಾಣುತ್ತದೆ. ಹಾಗೇ ಬುಡುಬುಡುಕೆಯವರು, ಕಣಿ ಹೇಳುವವರು, ಜೋಗತಿಯರು, ಹಾವಾಡಿಗರು, ವಾ(ಓ)ಲಗ ಊದುತ್ತಾ ಬಸವಣ್ಣನನ್ನು ಕರೆದೊಯ್ಯುವವರು ಒಂದು ಸಾಂಸ್ಕೃತಿಕ ತಲೆಮಾರನ್ನೇ ನಾವು ಕಳೆದುಕೊಂಡು ಬಿಟ್ಟಿದ್ದೇವೆ ಎಂಬಂತೆ ಕಾಣುತ್ತದೆ.



ಇವರು, ಮತ್ತು ಜೊತೆಗೆ ಹಳ್ಳಿಗಳಿಂದ ಬುಟ್ಟಿಗಳಲ್ಲಿ ಮೊಸರು, ಹಾಲು ಮತ್ತು ಬೆಣ್ಣೆಯನ್ನು, ಮತ್ತೆ ಕೆಲವರು ತಾಜಾ ತರಕಾರಿ, ಹಣ್ಣುಗಳನ್ನು ಹೊತ್ತು ತಂದು ಮಾರುತ್ತಿದ್ದವರ ಚಿತ್ರ ಈಗ ಬರೀ ನೆನಪು. ಅವರು ಬಂದು ಮನೆಯ ಮುಂದಿನ ಜಗುಲಿಯಲ್ಲಿ ಕುಳಿತರೆಂದರೆ, ಮಕ್ಕಳೂ ಸಹ ಅವರ ಸುತ್ತ ಕುಳಿತು, ತಮ್ಮ ಪುಟ್ಟ ಕೈಗಳನ್ನು ಅವರೆದುರು ಒಡ್ಡುತ್ತಿದ್ದರು. ತಮ್ಮ ಹಿತ್ತಾಳೆಯ ಪಾತ್ರೆಯಿಂದ ಆ ಪುಟ್ಟ ಕೈಗಳಿಗೆ ನಗುನಗುತ್ತಲೇ ಮೊಸರ ಗರಣೆಯನ್ನೋ ತುಸು ಬೆಣ್ಣೆಯನ್ನೋ ಹಾಕಿದರೆ ಮಕ್ಕಳು ಖುಷಿಯಾಗಿ ಓಡಿಹೋಗುತ್ತಿದ್ದರು.

ತಮ್ಮ ಅನುಭವದ ಮಾತುಗಳಿಂದ ಸಮಾಜದ ಶುದ್ಧಿಯನ್ನು ಮಾಡುತ್ತಿದ್ದ ಶಿವ ಶರಣರೂ ಸಹ ಅಂದಿನ ಸಮಾಜದ ಒಂದು ಭಾಗವೇ ಆಗಿದ್ದರು. ಅವರ ಬಾಯಲ್ಲಿ ಕೇಳಿ ಬರುತ್ತಿದ್ದ ವಚನಗಳ ಸೊಂಪು ಎಲ್ಲಿ ಹೋಯಿತು.

ಈ ವಾತಾವರಣದಲ್ಲಿ ಮಕ್ಕಳು ಸಹಜವಾಗಿಯೇ ಸಂಪ್ರದಾಯದ ಹಾಡುಗಳಿಗೆ, ಜನಪದ ತ್ರಿಪದಿಗಳಿಗೆ, ವಚನಗಳಿಗೆ ಮುಕ್ತವಾಗಿ ತೆರೆದುಕೊಳ್ಳುತ್ತಿದ್ದರು. ಸಿನೆಮಾ ಲೋಕದ ಪರಿಚಯ ಆದಂತೆ ಅದರ ಸಂಗೀತದ ಆಕರ್ಷಣೆಗೂ ಒಳಗಾಗುತ್ತಿದ್ದುದು ಸಹಜ. ಅಂದಿನ ಸಿನೆಮಾ ಸಂಗೀತವಾದರೂ ಶಾಸ್ತ್ರೀಯ ಸಂಗೀತವನ್ನು ಆಧರಿಸುತ್ತಿದ್ದುದೇ ಆಗಿತ್ತು. ಶಾಲೆಗಳಲ್ಲಿ ಪದ್ಯಗಳನ್ನು ಆಯಾ ಛಂದಸ್ಸುಗಳಿಗೆ ಒಗ್ಗುವಂತಹ ಅಥವಾ ಕ್ರಮಬದ್ಧವಾದಂತಹ ಮಟ್ಟುಗಳಲ್ಲಿಯೇ ಕಲಿಸುತ್ತಿದ್ದುದು ಕಲಿಯಲು ಆಕರ್ಷಕವಾಗಿರುವುದರ ಜೊತೆಗೆ ನೆನಪಿನಲ್ಲಿ ಇಟ್ಟುಕೊಳ್ಳಲೂ ಸಹ ಸಹಕಾರಿ ಆಗಿರುತ್ತಿತ್ತು. ಹಳಗನ್ನಡದ ಪದ್ಯಗಳನ್ನು, ಸಾಂಗತ್ಯವನ್ನು ಕೇಳುತ್ತಿದ್ದರೆ, ಮನಸ್ಸು ತಲ್ಲೀನವಾಗುತ್ತಿತ್ತು. ಅದು ಕಲಿಯಲು ಕಷ್ಟ ಎಂಬ ಭಾವನೆ ಹತ್ತಿರಕ್ಕೂ ಸುಳಿಯುತ್ತಿರಲಿಲ್ಲ. ಅಷ್ಟೇ ಆತ್ಮೀಯವಾಗಿ ಕಲಿಸುತ್ತಿದ್ದ ಗುರುಗಳು ಇರುತ್ತಿದ್ದರು. (ಈಗ ಬಿಡಿ, ಬರೆದ ನಾಕು ಸಾಲು ಕನ್ನಡ ವಾಕ್ಯವನ್ನು ನೆಟ್ಟಗೆ ಓದಲು ಬಾರದವರು ವಿದ್ಯಾ ಮಂತ್ರಿಗಳಾಗುತ್ತಾರೆ). ಮಗ್ಗಿಯನ್ನೂ ಸಹ ರಾಗವಾಗಿಯೇ ಕಲಿಸುತ್ತಿದ್ದರು ಆಗ.

> ನಮ್ಮ ದೇವ ದೇವತೆಗಳೂ ಸಂಗೀತಪ್ರಿಯರೇ. ಶಿವನ ಕೈಯಲ್ಲಿ ಡಮರುಗ, ಕೃಷ್ಣನ ಕೈಯ ಕೊಳಲು, ಸರಸ್ವತಿಯ ವೀಣೆ, ನಾರದರ ಮಹತಿ, ನಂದಿಯ ಮದ್ದಳೆ ಇವೆಲ್ಲವೂ ಇದನ್ನೇ ಸಾರುತ್ತಿದೆ. ಸಂಗೀತವನ್ನು ಕಲಿಯದಿದ್ದರೂ, ಅದನ್ನು ಕೇಳಿ ಆನಂದಿಸುವುದೂ, ಆಸ್ವಾದಿಸುವುದೂ ಸಹ ಅಷ್ಟೇ ಮುಖ್ಯ. ಯಾವ ಪ್ರಕಾರದ್ದೇ ಆಗಲಿ, ನಮ್ಮ ಕಿವಿಗಳಲ್ಲಿ ನಾದ ದೇವತೆ ನೆಲೆಸಿರಲಿ.

ಅಪ್ಪ ಅಮ್ಮಂದಿರಿಗೆ ಶಾಸ್ತ್ರೀಯ ಸಂಗೀತದಲ್ಲಿ ಅಭಿರುಚಿ ಇದ್ದರೆ, ಮಕ್ಕಳನ್ನು ಸಂಗೀತ ಕಛೇರಿಗಳಿಗೆ ಕರೆದೊಯ್ಯುವ ಅಭ್ಯಾಸವನ್ನೂ ಮಾಡಿರುತ್ತಾರೆ. ಇದರಿಂದ ಸಹಜವಾಗಿಯೇ ಅದನ್ನು ಅರ್ಥ ಮಾಡಿಕೊಳ್ಳುವ, ಆನಂದಿಸುವ ಅಭ್ಯಾಸ ಆಗುತ್ತದೆ. ಜೊತೆಗೆ, ಅದನ್ನು ಕೇಳಬೇಕು, ಕಲಿಯಬೇಕು ಎಂಬ ಆಸೆ ಮನದಲ್ಲಿ ಮೂಡಲು ಸಾಧ್ಯ. ಅಥವಾ ಕೆಲವರಿಗೆ ಭಾವಗೀತೆಗಳಲ್ಲಿ, ಜಾನಪದ ಹಾಡುಗಳಲ್ಲಿ, ಸಿನೆಮಾ ಸಂಗೀತದಲ್ಲಿ ಆಸಕ್ತಿ ಮೂಡಬಹುದು.

ಒಟ್ಟಾರೆ ಯಾವುದಾದರೂ ಒಂದು ರೂಪದಲ್ಲಿ ಸಂಗೀತ ಅವರ ಬದುಕನ್ನು ಪ್ರವೇಶಿಸಿ, ಮನೆ ಮಾಡಿಕೊಂಡು ಆಗಿರುತ್ತದೆ. ಕೆಲವರಿಗೆ ಹಾಡಬೇಕೆಂಬ ಆಸೆ ಇದ್ದರೂ ಕಂಠ ಸಹಕರಿಸುವುದಿಲ್ಲ. ಅಂತಹವರು ಯಾವುದಾದರೂ ವಾದ್ಯವನ್ನು ಕಲಿಯುವುದರ ಕಡೆಗೆ ಹೊರಳುತ್ತಾರೆ. ವಾದ್ಯದಿಂದ ಮೊದಲಿಂದಲೂ ಆಕರ್ಷಿತರಾದವರೂ ಸಹ ತಂತೀ, ಗಾಳಿ ಅಥವಾ ಚರ್ಮ ವಾದ್ಯಗಳನ್ನು ಕಲಿಯುವ ಕಡೆಗೆ ಮುಖ ಮಾಡುತ್ತಾರೆ. ಊಟದಲ್ಲಿ ಹಲವು ವಿಧದ ಪದಾರ್ಥಗಳಿರುವಂತೆ ಬದುಕಿನಲ್ಲಿ ಗಾಯನ–ವಾದನ ಎಲ್ಲವೂ ಬೇಕೇ ಬೇಕಲ್ಲವೆ! ಧಾರ್ಮಿಕ ಉತ್ಸವ, ಮದುವೆ, ಮುಂಜಿ ಇರಬಹುದು, ಶಾಲಾ ಕಾಲೇಜುಗಳ ಸಮಾರಂಭ ಅಥವಾ ವಾರ್ಷಿಕೋತ್ಸವ ಇರಬಹುದು, ಗೆಳೆಯರೆಲ್ಲ ಒಟ್ಟಾಗಿ ಹೋಗುವ ಪ್ರವಾಸ ಇರಬಹುದು, ಅವುಗಳನ್ನು ಸಂಗೀತ–ಹಾಡುಗಳಿಲ್ಲದಂತೆ ಊಹಿಸಿಕೊಳ್ಳಲು ಸಾಧ್ಯವೇ ಸಮಾನ ಮನಸ್ಕರು ಸೇರಿದಾಗಲಂತೂ ಹಾಡಲು ಬರಲಿ, ಬಿಡಲಿ, ಹಾಡುವುದೇ, ಅಂತ್ಯಾಕ್ಷರಿಯು ಅಲ್ಲಿ ವಿಜೃಂಭಿಸುವುದೇ !

ಹೀಗೆ ನಮ್ಮ ಬದುಕಿನ ಒಳಗೆ ಸದ್ದಿಲ್ಲದೆ ನುಸುಳಿ ಮನೆ ಮಾಡಿಕೊಂಡಿರುವ ಸಂಗೀತದ ಮೋಡಿಗೆ ಒಳಗಾಗದವರೂ ಇರಲು ಸಾಧ್ಯವೇ ನಾನು ಹಾಡುವುದೂ ಇಲ್ಲ, ನುಡಿಸುವುದೂ ಇಲ್ಲ. ನನಗೆ ಸಂಗೀತ ಕಂಡರೆ ಆಗುವುದಿಲ್ಲ ಎಂದು ಹೇಳುವ ಔರಂಗಜೇಬನ ವಂಶಸ್ಥರೂ ಸಹ ಸ್ನಾನಕ್ಕೆ ಹೋದಾಗ ಮೈಮೇಲೆ ನೀರು ಬಿದ್ದ ಕೂಡಲೇ ತಮ್ಮಷ್ಟಕ್ಕೆ ತಾವೇ ಹಾಡುಗಾರರಾಗಿಬಿಡುತ್ತಾರೆ ಎಂಬುದು ನನ್ನ ಗುಮಾನಿ. ಹೀಗೆ ಮನುಷ್ಯನ ಬಾಳುವೆಯಲ್ಲಿ ಹೊಂದಿಕೊಂಡೇ ಬಂದಂತಹ ಸಂಗೀತವನ್ನು ಕೆಲವರು ಬಹಳ ಉನ್ನತ ಮಟ್ಟಕ್ಕೆ ಒಯ್ದರು ಎಂಬ ಸತ್ಯವನ್ನು ಇತಿಹಾಸ ಸಾರುತ್ತದೆ.

ಸಂಗೀತ ಎಂದರೆ ನಾದ. ಆ ನಾದವನ್ನು ಒಂದು ಉಪಾಸನೆಯ ಮಾಧ್ಯಮವನ್ನಾಗಿ ಮಾಡಿಕೊಂಡ ಹಲವು ಮಹನೀಯರು ನಮ್ಮಲ್ಲಿ ಆಗಿಹೋಗಿದ್ದಾರೆ. ಹೋಮ–ಯಜ್ಞ–ಯಾಗಾದಿಗಳಿಂದ, ಪೂಜೆ ಪುನಸ್ಕಾರಗಳಿಂದ, ಮಂತ್ರಗಳಿಂದ, ತಪಸ್ಸಿನಿಂದ ಭಗವಂತನನ್ನು ಒಲಿಸಿಕೊಂಡಂತೆ ಶುದ್ಧ ನಾದದಿಂದಲೂ ಒಲಿಸಿಕೊಳ್ಳುವುದು ಸಾಧ್ಯ ಎಂಬುದನ್ನು ತೋರಿಸಿಕೊಟ್ಟ ಪುಣ್ಯಜೀವಿಗಳಿವರು.

ಶುದ್ಧವಾಗಿ ಬರುವ ಒಂದೊಂದು ಸ್ವರಕ್ಕೂ ದೇವರನ್ನು ಆಕರ್ಷಿಸುವ ಗುಣ ಇದೆ ಎಂದು ನಂಬಿ, ನಡೆದು ಆ ಭಗವಂತನನ್ನು ಸಾಕ್ಷಾತ್ಕರಿಸಿಕೊಂಡಿದ್ದ ದೈವಿಕ ಸಂಗೀತಗಾರರು ಭಾರತದ ಉದ್ದಗಲದಲ್ಲೂ ಇದ್ದರು. ಅಂತೆಯೇ ಅವರ ಸಂಗೀತದಿಂದ ಅನೇಕ ಪವಾಡಗಳು ನಡೆದುವು. ದೀಪಗಳು ತಾವಾಗಿಯೇ ಪ್ರಜ್ವಲಿಸಿದುವು, ಕ್ರೂರ ಮೃಗಗಳು ಸಂಗೀತದ ಮೋಡಿಗೆ ಒಳಗಾದುವು, ಬರಗಾಲದಲ್ಲಿ ಮಳೆ ಸುರಿದುವು. ಎಲ್ಲವೂ ಸಾಧ್ಯ– ನಂಬಿಕೆ–ಶ್ರದ್ಧೆ ಇದ್ದರೆ.

ನಮ್ಮ ದೇವ ದೇವತೆಗಳೂ ಸಂಗೀತಪ್ರಿಯರೇ. ಶಿವನ ಕೈಯಲ್ಲಿ ಡಮರುಗ, ಕೃಷ್ಣನ ಕೈಯ ಕೊಳಲು, ಸರಸ್ವತಿಯ ವೀಣೆ, ನಾರದರ ಮಹತಿ, ನಂದಿಯ ಮದ್ದಳೆ ಇವೆಲ್ಲವೂ ಇದನ್ನೇ ಸಾರುತ್ತಿದೆ. ಸಂಗೀತವನ್ನು ಕಲಿಯದಿದ್ದರೂ, ಅದನ್ನು ಕೇಳಿ ಆನಂದಿಸುವುದೂ, ಆಸ್ವಾದಿಸುವುದೂ ಸಹ ಅಷ್ಟೇ ಮುಖ್ಯ. ಯಾವ ಪ್ರಕಾರದ್ದೇ ಆಗಲಿ, ನಮ್ಮ ಕಿವಿಗಳಲ್ಲಿ ನಾದ ದೇವತೆ ನೆಲೆಸಿರಲಿ.

ನ.2ರಂದು ಕನ್ನಡ ಹಬ್ಬ, ಸಾಧಕರಿಗೆ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ

ಮೈಸೂರು, ಅ.25– ಕರ್ನಾಟಕ ಸುಗಮ ಸಂಗೀತ ಪರಿಷತ್ತು, ಶ್ರೀ ಅನಂತೇಶ್ವರ ಟ್ರಸ್ಟ್ ವತಿಯಿಂದ ನ. 2ರ ಸಂಜೆ 4ಕ್ಕೆ ನಾದಬ್ರಹ್ಮ ಸಂಗೀತ ಸಭಾದಲ್ಲಿ ನಾಗರಾಜ ವಿ. ಬೈರಿ ಅಧ್ಯಕ್ಷತೆಯಲ್ಲಿ ಕನ್ನಡ ಹಬ್ಬ, ಸಾಧಕರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ, ಗೀತಗಾಯನ ಸಮಾರಂಭ ನಡೆಯಲಿದೆ. ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಉದ್ಘಾಟಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಎಂ.ಡಿ. ಸುದರ್ಶನ್ ಪ್ರಶಸ್ತಿ ಪ್ರದಾನ ಮಾಡುವರು. ಮೈಸೂರು ಕನ್ನಡ ಜಿಲ್ಲಾ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಕನ್ನಡ ಧ್ವಜಾರೋಹಣ ನೆರವೇರಿಸುವರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಗಾಯಕರನ್ನು ಸನ್ಮಾನಿಸುವರು. ಸಾಹಿತಿ ಜಯಪ್ಪ ಹೊನ್ನಾಳಿ, ಪತ್ರಕರ್ತ ಎಸ್.ಟಿ. ರವಿಕುಮಾರ್ ಅಭಿನಂದನಾ ಭಾಷಣ ಮಾಡುವರು.

ಹಿರಿಯ ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್ ಅವರಿಗೆ ಜೀವಮಾನದ ಸಾಧನೆಗಾಗಿ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕಿ ಪ್ರೊ.ಎನ್.ಕೆ.ಲೋಲಾಕ್ಷಿ, ಗಾಯಕ ಡಾ.ಎ.ಡಿ.ಶ್ರೀನಿವಾಸನ್ ಹಾಗೂ ತಬಲಾ ವಾದಕ ಇಂದುಶೇಖರ್ ಅವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಗಾಯಕರಾದ ಡಾ.ಎ.ಡಿ.ಶ್ರೀನಿವಾಸನ್, ಇಂದ್ರಾಣಿ ಅನಂತರಾಜ್, ರಶ್ಮಿ ಚಿಕ್ಕಮಗಳೂರು, ರಾಜೇಶ್ ಪಡಿಯಾರ್, ಎನ್. ಬೆಟ್ಟೇಗೌಡ, ಶ್ರೀಧರ್, ಡಾ.ವೈ.ಡಿ. ರಾಜಣ್ಣ, ರವಿರಾಜ್ ಹಾಸು, ಕವಿತಾ ಕಾಮತ್, ಪೂರ್ಣಿಮಾ, ಶ್ರೀಲತಾ, ಸಿ.ಎಸ್. ವಾಣಿ, ಅಬ್ದುಲ್ ಖಯ್ಯಾಂ, ನಾಗೇಂದ್ರ ವೇದಶ್ರೀ, ಸುಜಾತಾ ಜಯಕುಮಾರ್, ವಾಣಿಶ್ರೀ, ಸುರೇಶ್, ಶುಭಪಲ್ಲವಿ, ಶಶಿಕಲಾ ಅನಂತರಾಮ್, ಸ್ಫೂರ್ತಿ, ಶೀಲಾ ಗುರುದತ್, ಸಿಂಚನ ಹುಣಸೂರು, ಸಿ.ರಮೇಶ್, ಸುಗಂಧಮ್ಮ ಜಯಪ್ಪ, ಸುಮಿತ್ರ, ಮಾನ್ವಿ ಯು.ಎಸ್. ಆಚಾರ್, ಚಾರ್ವಿ ಸತೀಶ್, ಪಿ. ಮಾನ್ಯತಾ, ಉಪಾಸನಾ, ಜರುಷ ಗೀತೆಗಳನ್ನು ಪ್ರಸ್ತುತಪಡಿಸಲಿದ್ದಾರೆ.

ವಾದ್ಯಗಾರರಾದ ಗಣೇಶ್ ಭಟ್– ಕೀಬೋರ್ಡ್, ನಾಲಿಂಗೇಶ್ ಆಚಾರ್– ಕೀಬೋರ್ಡ್, ಇಂದುಶೇಖರ್ ಮತ್ತು ರಘುನಾಥ್–ತಬಲ, ರಾಘವೇಂದ್ರ ಪ್ರಸಾದ್–ಡ್ರಮ್ಸ್ ಗುರುದತ್– ರಿದಂ ಪ್ಯಾಡ್, ಬಾಲ ಸುಬ್ರಹ್ಮಣ್ಯ–ಕೊಳಲು ನುಡಿಸಲಿದ್ದಾರೆ.

ನೊದೆಕೊಪ್ಪಲು ಶ್ರೀ ಮಾರಮ್ಮ ದೇವಾಲಯ ಅ.27, 28ಕ್ಕೆ ಉದ್ಘಾಟನೆ

ಮಂಡ್ಯ, ಅ.25– ತಾಲೂಕಿನ ಕೊತ್ತತ್ತಿ ಹೋಬಳಿ ನೊದೆಕೊಪ್ಪಲು ಗ್ರಾಮದ ಶ್ರೀ ಮಾರಮ್ಮ ದೇವಿಯ ದೇವಾಲಯ ಉದ್ಘಾಟನೆ ಹಾಗೂ ದೇವಿಯ ಪ್ರತಿಷ್ಠಾಪನಾ ಮಹೋತ್ಸವ ಅ.27 ಮತ್ತು 28ರಂದು ಜರುಗಲಿದೆ.

ಮೊದಲ ದಿನ ಗೋಧೂಳಿ ಲಗ್ನದಲ್ಲಿ ಆರಂಭಗೊಂಡು ವಿವಿಧ ಪೂಜಾ ಕೈಂಕರ್ಯಗಳು ನೆರವೇರಲಿದ್ದು, 2ನೇ ದಿನ ಬೆಳಗ್ಗೆ 7ರಿಂದ 7.40ಕ್ಕೆ ಸಲ್ಲುವ ಶುಭ ಲಗ್ನದಲ್ಲಿ ಪ್ರತಿಷ್ಠಾಪನಾ ಮಹೋತ್ಸವ ಜರುಗಲಿದೆ. ಮಧ್ಯಾಹ್ನ 12.30ಕ್ಕೆ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ.

ಗ್ರಾಮೀಣ ಬಡಮಕ್ಕಳಿಗೂ ಗುಣಮಟ್ಟದ ಶಿಕ್ಷಣ ದೊರಕಬೇಕು

ಶೌಚಾಲಯ, ಗ್ರಂಥಾಲಯ ಕಟ್ಟಡ ಉದ್ಘಾಟನೆ ಬಳಿಕ ಶಾಸಕ ಜಿ.ಟಿ.ದೇವೇಗೌಡ ಸಲಹೆ



ಮೈಸೂರು ತಾಲೂಕಿನ ಮಂಡಕಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಲಯನ್ಸ್ ಕ್ಲಬ್ ಆಫ್ ಮೈಸೂರು ನಿಸರ್ಗ ಮತ್ತು ಮಯೂರಿ ಸಹಯೋಗದಲ್ಲಿ ಆಯೋಜಿಸಿದ್ದ ನೂತನ ಶೌಚಾಲಯ ಕಟ್ಟಡ, ಗ್ರಂಥಾಲಯ ಕಟ್ಟಡದ ಸಮಾರಂಭವನ್ನು ಶಾಸಕ ಜಿ.ಟಿ.ದೇವೇಗೌಡ ಉದ್ಘಾಟಿಸಿದರು.

ಮೈಸೂರು,ಅ.25(ಜಿಎ)–ಗ್ರಾಮಾಂತರ ಪ್ರದೇಶದ ಬಡವರು, ಮಧ್ಯಮ ವರ್ಗದ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ಕೊಡಬೇಕು. ಜೊತೆಗೆ ಶಾಲೆಗಳಿಗೆ ಮೂಲ ಸೌಕರ್ಯವನ್ನು ಒದಗಿಸಿದರೆ ಹಾಜರಾತಿ ಪ್ರಮಾಣ ಹೆಚ್ಚಾಗಲಿದೆ ಎಂದು ಸಲಹೆ ನೀಡಿದ ಶಾಸಕ ಜಿ.ಟಿ.ದೇವೇಗೌಡ, ಶಾಲೆಗಳಲ್ಲಿ ಜಾತಿ, ಪಕ್ಷ ಮತ್ತು ರಾಜಕೀಯ ಕಾಂಪೌಂಡ್‌ನಿಂದ ಹೊರಗಿಡಬೇಕು ಆಗ ಮಾತ್ರ ಶಾಲಾಭಿವೃದ್ಧಿ ಸಾಧ್ಯ ಎಂದರು.

ಮೈಸೂರು ತಾಲೂಕಿನ ಮಂಡಕಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಲಯನ್ಸ್ ಕ್ಲಬ್ ಆಫ್ ಮೈಸೂರು ನಿಸರ್ಗ ಮತ್ತು ಮಯೂರಿ ಸಹಯೋಗದಲ್ಲಿ ಆಯೋಜಿಸಿದ್ದ ನೂತನ ಶೌಚಾಲಯ ಹಾಗೂ ಗ್ರಂಥಾಲಯ ಕಟ್ಟಡದ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಬಡವರ ಮಕ್ಕಳು ಶಿಕ್ಷಣ ಕಲಿಯಲು ಹೆಚ್ಚಾಗಿ ಬರುತ್ತಾರೆ. ಬಡವರು, ಹಿಂದುಳಿದ, ಶೋಷಿತ ವರ್ಗದ ಮಕ್ಕಳು ಶಿಕ್ಷಣ ಕಲಿಯಬೇಕು ಎನ್ನುವ ಆಶಯದಿಂದಾಗಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಶಿಕ್ಷಣದ ಮಹತ್ವವನ್ನು ಸಾರಿದರು. ಅಂಬೇಡ್ಕರ್ ಹೇಳಿದಂತೆ ಶಿಕ್ಷಣವೇ ದೊಡ್ಡ ಆಸ್ತಿ ಎನ್ನುವುದನ್ನು ಮರೆಯಬಾರದು ಎಂದು ಸಲಹೆ ನೀಡಿದರು.

ಹಳ್ಳಿಗಳಲ್ಲಿ ಶಿಕ್ಷಣ ಕಲಿತರೆ ವಿದ್ಯಾವಂತರು, ಪ್ರತಿಭಾವಂತರು, ಉತ್ತಮ ಪ್ರಜೆಗಳಾಗಬಹುದು. ಸಮಾನತೆಯಿಂದ ಇರುವ ಜೊತೆಗೆ ಅಸಮಾನತೆಯನ್ನು ನಿವಾರಿಸಿ ಸಮಾನವಾಗಿ ಇರಬಹುದಾಗಿದೆ. ಒಂದು ವೇಳೆ ಶಿಕ್ಷಣ ಸರಿಯಾಗಿ ದೊರೆಯದಿದ್ದರೆ ಸಮಸ್ಯೆಯಾಗಲಿದೆ ಎಂದರು.

ಹಳ್ಳಿಗಳ ಶಾಲೆಗಳಲ್ಲಿ ಬಡವರು, ಶ್ರೀಮಂತರು ಎನ್ನದೆ ಸಮಾನ ಶಿಕ್ಷಣ ದೊರೆಯುತ್ತದೆ. ಸರ್ಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಣದೊಟ್ಟಿಗೆ ಇಂಗ್ಲಿಷ್ ತರಗತಿ ನಡೆಯಲಿದೆ. ಬೇರೆ ಬೇರೆ ಸರ್ಕಾರಿ ಶಾಲೆಗಳು ಮಂಡಕಳ್ಳಿ ಶಾಲೆಯ ಕಡೆಗೆ ನೋಡುವಂತೆ ಮಾದರಿ ಶಾಲೆಯಾಗಿ ಹೊರಹೊಮ್ಮಬೇಕು ಎಂದು ನುಡಿದರು.

ಶಿಕ್ಷಕರು ಮತ್ತು ಶಾಲಾಭಿವೃದ್ಧಿ ಸಮಿತಿಗೆ ಶೌಚಾಲಯ ಮತ್ತು ಗ್ರಂಥಾಲಯದ ನಿರ್ವಹಣೆಯ ಹೊಣೆಯನ್ನು ವಹಿಸಲಾಗಿದೆ. ಶಿಕ್ಷಕರು ಮತ್ತು ಮುಖ್ಯೋಪಾಧ್ಯಾಯರು ಶಾಲೆಯನ್ನು ನಿರ್ವಹಣೆ ಮಾಡಲು ಗಮನ ಹರಿಸಬೇಕು. ಪರಿಸರ, ಸ್ವಚ್ಛತೆಯ ಕಾಳಜಿ ವಹಿಸಬೇಕು. ನಾವು ನಮ್ಮ ಶಾಲೆಯನ್ನು ಮನೆಯಂತೆ ಭಾವಿಸಬೇಕು. ಮನೆಯನ್ನು ನೋಡಿಕೊಳ್ಳುವಂತೆ [illegible] ಮಾಡುವ ದೇವಾಲಯವನ್ನು ನೋಡಬೇಕಿದೆ ಎಂದರು.

ಶಾಲೆ ದೇವಾಲಯ ಇದ್ದಂತೆ. ಶಾಲೆಗೆ ಯಾರೂ ದ್ರೋಹ ಮಾಡಬಾರದು. ಪ್ರೀತಿ, ವಿಶ್ವಾಸದಿಂದ ನೋಡಿಕೊಂಡು ಹೋಗಬೇಕು. ಶಾಲೆಯ ಕೊಠಡಿಗೆ ಕಿಡಿಗೇಡಿಗಳು ಕಲ್ಲು ತೂರುತ್ತಾರೆಂದರೆ ಏನರ್ಥ. ಅಂತಹವರನ್ನು ನೀವೇ ಹಿಡಿದುಕೊಂಡು ಪೊಲೀಸರಿಗೆ ಒಪ್ಪಿಸಬೇಕು ಎಂದು ಗ್ರಾಮದ ಮುಖಂಡರಿಗೆ ಸೂಚಿಸಿದರು.

ಗ್ರಾಮದಲ್ಲಿ ರಾಜಕೀಯ, ಪಕ್ಷ, ಜಾತಿ ಶಾಲೆಯ ಕಾಂಪೌಂಡ್‌ನಿಂದ ಹೊರಗೆ ಇರಬೇಕು. ಶಾಲೆಯ ಒಳಗೆ ಬಂದರೆ ನಾವೆಲ್ಲರೂ ಒಂದೇ ಎನ್ನುವುದು ಇರಬೇಕು. ಅದೇ ರೀತಿ ಶಿಕ್ಷಕರು ಗುರು ಎನ್ನುವ ಭಾವನೆ ಅರಿತು ಕೆಲಸ ಮಾಡಬೇಕು. ಕೆಲವು ಶಿಕ್ಷಕರಿಗೆ ಗುರುಗಳ ಸ್ಥಾನದಲ್ಲಿ ಇರುವ ನಾವು ಹೇಗಿರಬೇಕು ಎಂಬುದು ಗೊತ್ತಿರಲ್ಲ ಎಂದು ಬೇಸರಿಸಿದರು.

ಗ್ರಂಥಾಲಯಕ್ಕೆ ಬೇಕಾದ ಪುಸ್ತಕಗಳನ್ನು ಒದಗಿಸಲಾಗಿದೆ. ಮಕ್ಕಳಿಗೆ ಹೆಚ್ಚಿನ ಜ್ಞಾನ ಸಿಗುವಂತೆ ಮಾಡಬೇಕು. ಶಾಲೆಗೆ ಬೇಕಾದ ಕೊಠಡಿಗಳು, ಮೂಲ ಸೌಕರ್ಯವನ್ನು ಒದಗಿಸಲಾಗುವುದು. ಚಾಮುಂಡೇಶ್ವರಿ ಕ್ಷೇತ್ರದ ಅನೇಕ ಗ್ರಾಮಗಳ ಹಿರಿಯ ಮತ್ತು ಪ್ರೌಢ ಶಾಲೆಗಳಿಗೆ ಸಿಎಸ್‌ಆರ್ ನಿಧಿ, ಲಯನ್ಸ್, ರೋಟರಿ ಸಂಸ್ಥೆಗಳ ಮೂಲಕ ಶಾಲಾ ಕೊಠಡಿ, ಗ್ರಂಥಾಲಯ, ಶೌಚಾಲಯ ಕಟ್ಟಡವನ್ನು ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ಕೆನರಾ ಬ್ಯಾಂಕ್ ನಿವೃತ್ತ ಸಹಾಯಕ ಪ್ರಧಾನ ವ್ಯವಸ್ಥಾಪಕ ಕೆ.ಎನ್.ಶಾಮರಾವ್, 317ರ ಜಿಲ್ಲೆ ಜಿಲ್ಲಾ ಗವರ್ನರ್ ಕೆ.ಎಲ್.ರಾಜಶೇಖರ್, ಮಾಜಿ ಜಿಲ್ಲಾ ಗವರ್ನರ್ ಎನ್.ಸುಬ್ರಹ್ಮಣ್ಯ, ಎಂಡಿಡಿಎ ಅಧ್ಯಕ್ಷ ಎಸ್.ಮೂರ್ತಿ, ಜಯಕುಮಾರ್, ಜಯರಾಮು,ವೆಂಕಟೇಶ್, ಎಲ್‌ಸಿಎಂ ನಿಸರ್ಗ ಅಧ್ಯಕ್ಷ ಕುಮಾರ, ಎಲ್‌ಸಿಎಂ ಮಯೂರಿ ಅಧ್ಯಕ್ಷ ಸುಮಿತ್ರ ಮೂರ್ತಿ ಹಾಜರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರಿನ ಕುಖ್ಯಾತ ಮನೆಗಳ್ಳ ಬೆಂಗಳೂರಲ್ಲಿ ಸೆರೆ

●2 ಕೋಟಿಗೂ ಹೆಚ್ಚು ಮೌಲ್ಯದ ಆಭರಣ, ನಗದು ವಶ ●50ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಭಾಗಿ, ಹುಣಸೂರು ಟೌನ್ ಮನೆಯಲ್ಲಿ ಕಳವು ಮಾಡುವಾಗ ಸೆರೆಯಾದ ಸಿಸಿ ಕ್ಯಾಮರಾ ದೃಶ್ಯಾವಳಿ ಆಧರಿಸಿ ಆರೋಪಿ ಗುರುತು ಪತ್ತೆ

ಮೈಸೂರು, ಅ. 25 (ಆರ್‌ಕೆ)– ಮೈಸೂರು, ಮಂಡ್ಯ, ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ 50 ಕ್ಕೂ ಹೆಚ್ಚು ಮನೆಗಳ್ಳತನದಲ್ಲಿ ಭಾಗಿಯಾಗಿ ತಲೆಮರೆಸಿಕೊಂಡಿದ್ದ ಮೈಸೂರಿನ ಕುಖ್ಯಾತ ಖದೀಮನನ್ನು ಬೆಂಗಳೂರಿನ ವಿದ್ಯಾರಣ್ಯಪುರಂ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಮೈಸೂರಿನ ರಾಜೀವ್‌ನಗರ 2ನೇ ಹಂತದ ನಿವಾಸಿ ಸೈಯದ್ ಅಸ್ಲಾಂ ಅಲಿಯಾಸ್ ಅಸ್ಲಾಂ (35) ಪೊಲೀಸರ ವಶದಲ್ಲಿರುವ ಆರೋಪಿಯಾಗಿದ್ದು, ಆತನಿಂದ ಸುಮಾರು 50 ಮನೆಗಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ ಈವರೆಗೆ ಒಟ್ಟು 2 ಕೋಟಿಗೂ ಅಧಿಕ ಮೌಲ್ಯದ ಚಿನ್ನಾಭರಣ, ಬೆಳ್ಳಿ ಪದಾರ್ಥಗಳು ಹಾಗೂ ನಗದು ವಶಪಡಿಸಿಕೊಳ್ಳಲಾಗಿದೆ.

ಹುಣಸೂರು ಮನೆಯಲ್ಲಿ ಕಳವು: 2025 ರ ಸೆ.1 ರಂದು ರಾತ್ರಿ ಹುಣಸೂರು ಪಟ್ಟಣದ ಮಂಜುನಾಥ ಬಡಾವಣೆಯ ಸಾಯಿಬಾಬಾ ದೇವಸ್ಥಾನ ಹಿಂಭಾಗವಿರುವ ಸಿ.ಆರ್.ರವೀಂದ್ರಕುಮಾರ್ ಎಂಬುವರ ಮನೆಯ ಬಾಗಿಲು ಮೀಟಿ ಒಳನುಸುಳಿದ ಖದೀಮ ರೂಂನ ವಾಲ್‌ಡ್ರೋಬ್, ಸೂಟ್‌ಕೇಸ್‌ಗಳನ್ನು ತೆರೆದು ಬಟ್ಟೆಗಳನ್ನೆಲ್ಲಾ ಚೆಲ್ಲಾಪಿಲ್ಲಿ ಮಾಡಿ ಅದರಲ್ಲಿದ್ದ 2 ಕೆಜಿ ಬೆಳ್ಳಿ ಪದಾರ್ಥಗಳು, 1 ಲಕ್ಷ ರೂ. ಮೌಲ್ಯದ ಚಿನ್ನದ ಒಡವೆ ಹಾಗೂ 2 ಲಕ್ಷ ರೂ. ನಗದು ಕಳವು ಮಾಡಿ ಪರಾರಿಯಾಗಿದ್ದ.

ರವೀಂದ್ರಕುಮಾರ್ ಅವರು ಆ.13 ರಂದು ಕುಟುಂಬ ಸಮೇತ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಳ್ಳಲು ಬೆಂಗಳೂರಿನ ಸಂಬಂಧಿಕರ ಮನೆಗೆ ಹೋಗಿ ಸೆ.2 ರಂದು ಹಿಂತಿರುಗಿದಾಗ ಮನೆ ಬೀಗ ಮುರಿದು ಕಳವು ಮಾಡಿರುವುದು ಗೊತ್ತಾಗಿ, ಹುಣಸೂರು ಪಟ್ಟಣ ಠಾಣೆಗೆ ದೂರು ಸಲ್ಲಿಸಿದ್ದರು.

ಹುಣಸೂರು ಪಟ್ಟಣ ಠಾಣೆ ಪೊಲೀಸರ ಜೊತೆ ಜಿಲ್ಲಾ ಬೆರಳಚ್ಚು ಘಟಕದ ಇನ್ಸ್‌ಪೆಕ್ಟರ್ ಎಂ.ಎನ್. ಬಾಲಸುಬ್ರಮಣ್ಯ, ಎಎಸ್‌ಐ ಹೆಚ್.ಆರ್.ಹರೀಶ್, ಶ್ವಾನದಳ ಹಾಗೂ ಸೀನ್ ಆಫ್ ಕ್ರೈಂ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ, ಅಗತ್ಯ ಮಾಹಿತಿ ಸಂಗ್ರಹಿಸಿದ್ದರು. ಜಿಲ್ಲಾ ಎಸ್ಪಿ ಎನ್. ವಿಷ್ಣುವರ್ಧನ್, ಎಎಸ್ಪಿ ನಾಗೇಶ್, ಹುಣಸೂರು ಉಪ ವಿಭಾಗದ ಗೋಪಾಲಕೃಷ್ಣ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು.



ಸೈಯದ್ ಅಸ್ಲಾಂ

ಸಿಸಿ ಕ್ಯಾಮರಾ ದೃಶ್ಯಾವಳಿ ಸುಳಿವು: ಮನೆಯ ಶೋಕೇಸ್‌ನಲ್ಲಿದ್ದ ಸಿಸಿ ಕ್ಯಾಮರಾ ದೃಶ್ಯಾವಳಿ ಆಧರಿಸಿ, ಪೊಲೀಸರು ತನಿಖೆ ಕೈಗೊಂಡಾಗ ಕೃತ್ಯವೆಸಗಿದವನು ಮೈಸೂರಿನ ರಾಜೀವ್‌ನಗರ ನಿವಾಸಿ ಸೈಯದ್ ಅಸ್ಲಾಂ ಎಂಬುದು ಖಚಿತವಾಯಿತು.

ಬೆಂಗಳೂರು ಪೋಲಿಸರಿಗೆ ಸಿಕ್ಕಿಬಿದ್ದ: ರಾಜ್ಯದಾದ್ಯಂತ ಹಲವು ಪೊಲೀಸ್ ಠಾಣೆಗಳಿಗೆ ಬೇಕಾಗಿದ್ದ ಆರೋಪಿ ಸೈಯದ್ ಬೆಂಗಳೂರಿನ ವಿದ್ಯಾರಣ್ಯಪುರಂ ಪೊಲೀಸರಿಗೆ ಸಿಕ್ಕಿಬಿದ್ದಿದ್ದಾನೆ. ಆತನನ್ನು ತೀವ್ರ ವಿಚಾರಣೆ ಗೊಳಪಡಿಸಿದಾಗ ಬೆಂಗಳೂರಿನ ಬಗಲಗುಂಟೆ ಹಾಗೂ ಸೋಲದೇವನಹಳ್ಳಿ ಠಾಣಾ ವ್ಯಾಪ್ತಿಯಲ್ಲೂ ಮನೆಗಳ್ಳತನ ಮಾಡಿದ್ದಾನೆಂಬ ವಿಷಯ ತಿಳಿಯುತ್ತಿದ್ದಂತೆ ಆ ಠಾಣೆಗಳ ಪೋಲಿಸರು ಕೂಡ ಆರೋಪಿಯನ್ನು ವಿಚಾರಣೆಗೊಳಪಡಿಸಿ ಕಳವು ಮಾಲು ವಶಪಡಿಸಿಕೊಂಡಿದ್ದಾರೆ.

ಹುಣಸೂರು ಪೋಲಿಸರ ವಶದಲ್ಲಿ ಸೈಯದ್: ಶುಕ್ರವಾರ ಬಾಡಿ ವಾರೆಂಟ್ ಮೇಲೆ ಬೆಂಗಳೂರಿನ ವಿದ್ಯಾರಣ್ಯಪುರಂ ಪೋಲಿಸರಿಂದ ತಮ್ಮ ವಶಕ್ಕೆ ಪಡೆದಿರುವ ಹುಣಸೂರು ಪಟ್ಟಣ ಠಾಣೆ ಪೋಲಿಸರು ರವೀಂದ್ರಕುಮಾರ್ ಮನೆಯಲ್ಲಿ ಕಳವು ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಕಳವು ಮಾಡಿದ್ದ ಮಾಲನ್ನು ವಶಪಡಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ. ವಿಚಾರಣೆ ಪೂರ್ಣಗೊಂಡ ನಂತರ ಆರೋಪಿಯನ್ನು ಮೈಸೂರಿನ ನ್ಯಾಯಾಲಯಕ್ಕೆ ಹಾಜರು ಪಡಿಸಲಾಗುವುದು ಎಂದು ಎಸ್ಪಿ ಎನ್. ವಿಷ್ಣುವರ್ಧನ್ ಅವರು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

50 ಪ್ರಕರಣಗಳಲ್ಲಿ ಬೇಕಾಗಿದ್ದ ಸೈಯದ್: ಮನೆಗಳವು ಮಾಡಿ ಐಷಾರಾಮಿ ಜೀವನ ನಡೆಸುತ್ತಿದ್ದ ಸೈಯದ್ ಅಸ್ಲಾಂ ಕರ್ನಾಟಕ ರಾಜ್ಯದಾದ್ಯಂತ ಸುಮಾರು 50 ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಪೋಲಿಸರಿಗೆ ಬೇಕಾಗಿದ್ದ ಕುಖ್ಯಾತ ಖದೀಮನಾಗಿದ್ದಾನೆ. ಆತ ಈ ಹಿಂದೆ ಬೆಂಗಳೂರಿನ ಕಮರ್ಷಿಯಲ್ ಸ್ಟ್ರೀಟ್, ಗಂಗಮ್ಮನ ಗುಡಿ, ಇಂದಿರಾ ನಗರ, ಜೆಸಿ ನಗರ, ಜ್ಞಾನಭಾರತಿ, ತಿಲಕ್‌ನಗರ, ಅಲಸೂರು, ಉಪ್ಪಾರಪೇಟೆ, ಮೈಕೋ ಲೇಔಟ್, ಯಶವಂತಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ, ಬೆಳಗಾವಿ ನಗರ, ಖಡೇ ಬಜಾರ್, ಹಾಸನದ ಅರಕಲಗೂಡು, ಹಾವೇರಿ ಟೌನ್, ಮಂಡ್ಯ ಜಿಲ್ಲೆಯ ಮದ್ದೂರು, ಮೈಸೂರು ನಗರದ ಮಂಡಿ, ಉದಯಗಿರಿ ಠಾಣೆ ವ್ಯಾಪ್ತಿಗಳಲ್ಲೂ ಮನೆಗಳವು ಮಾಡಿದ್ದ. ಈತನಿಗೆ ಬೆಂಗಳೂರಿನ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ನ್ಯಾಯಾಲಯವು ಶಿಕ್ಷೆ ವಿಧಿಸಿದ್ದು, ಪರಪ್ಪನ ಅಗ್ರಹಾರ ಜೈಲಿನಲ್ಲಿ ಶಿಕ್ಷೆ ಅನುಭವಿಸಿದ ಬಳಿಕ ಮೈಸೂರಿಗೆ ಬಂದು ಹುಣಸೂರು ಟೌನ್‌ನಲ್ಲಿ ಮತ್ತೆ ತನ್ನ ಕೈಚಳಕ ತೋರಿದ್ದ.

ಚಾಲಾಕಿ ಆಸಾಮಿ: ಕೇವಲ ತಾನೊಬ್ಬನೇ ಬೀಗ ಹಾಕಿದ ಮನೆಯನ್ನೇ ಗುರಿಯಾಗಿಸಿಕೊಂಡು ಬಾಗಿಲು ಮೀಟಿ ಒಳನುಗ್ಗಿ ಕಳ್ಳತನ ಮಾಡುವುದು ಸೈಯದ್ ಅಸ್ಲಾಂನ ಕೈಚಳಕ ವಿಶೇಷ. ಕೃತ್ಯವೆಸಗುವಾಗ ಸ್ಥಳದಲ್ಲಿ ಯಾವುದೇ ರೀತಿಯ ಕುರುಹು ದೊರಕದಂತೆ ಎಚ್ಚರಿಕೆ ವಹಿಸುವುದು, ಬೆರಳಚ್ಚು ಮುದ್ರೆಗಳು ಸಿಗದಂತೆ ನೀರನ್ನು ಚೆಲ್ಲಾಡುವುದು ಮಾಡುತ್ತಿದ್ದ. ಈತನನ್ನು ರಾಮನಗರ, ತುಮಕೂರು, ಚನ್ನಪಟ್ಟಣ ಪೋಲಿಸರು ಸಹ ಹುಡುಕುತ್ತಿದ್ದಾರೆ ಎಂಬ ಮಾಹಿತಿ ಲಭ್ಯವಿದೆ.

ತನಗರಿವಿಲ್ಲದೆಯೇ ಸಿಸಿ ಕ್ಯಾಮರಾಕ್ಕೆ ಪೋಸ್ ನೀಡಿದ್ದ ಖದೀಮ!

ಮೈಸೂರು, ಅ. 25 (ಆರ್‌ಕೆ)– ಸಾಕ್ಷ್ಯ ನಾಶ ಮಾಡಿ, ಯಾವುದೇ ಸುಳಿವು ಸಿಗದಂತೆ ಕೃತ್ಯವೆಸಗುವಲ್ಲಿ ನಿಸ್ಸೀಮನಾಗಿರುವ ಸೈಯದ್ ಅಸ್ಲಾಂ ಹುಣಸೂರು ಮನೆಯಲ್ಲಿ ಕಳವು ಮಾಡುವಾಗ ರೂಪಿಸಿದ ಚಾಲಾಕಿ ತಂತ್ರವೇ ಆತನ ಸುಳಿವು ಪತ್ತೆಗೆ ಸಹಕಾರಿಯಾಯಿತು.

ಸೆ.1 ರಂದು ಹುಣಸೂರಿನ ಸಿ.ಆರ್. ರವೀಂದ್ರಕುಮಾರ್ ಮನೆಯಲ್ಲಿ ಕಳವು ಮಾಡುವಾಗ ಅಲ್ಲಿನ ಶೋಕೇಸ್‌ನಲ್ಲಿ ಸಿಸಿ ಕ್ಯಾಮರಾ ಇದೆ ಎಂಬುವುದು ಅರಿವಿಗೆ ಬಾರದ ಸೈಯ್ಯದ್ ಗೊಂಬೆಗಳನ್ನು ಶೋಧಿಸುವ ಭರದಲ್ಲಿ ಕ್ಯಾಮರವನ್ನು ತನ್ನ ಮುಖದ ಕಡೆ ತಿರುಗಿಸಿಕೊಂಡಿದ್ದ. ಆಗ ಸಿಸಿ ಕ್ಯಾಮರದಲ್ಲಿ ಆತನ ಮುಖಚರ್ಯೆ ಸ್ಪಷ್ಟವಾಗಿ ಸೆರೆಯಾಗಿರುವುದು ಮಹಜರು ವೇಳೆ ಪೊಲೀಸರಿಗೆ ಕಂಡು ಬಂದಿದೆ.

ಆ ದೃಶ್ಯಾವಳಿಗಳ ಸುಳಿವಿನ ಬೆನ್ನತ್ತಿದ ಹುಣಸೂರು ಪಟ್ಟಣ ಠಾಣೆ ಇನ್ಸ್‌ಪೆಕ್ಟರ್ ಸಂತೋಷ್ ಕಶ್ಯಪ್ ಹಾಗೂ ಮೈಸೂರು ದಕ್ಷಿಣ ಗ್ರಾಮಾಂತರ ಠಾಣೆ ಇನ್ಸ್‌ಪೆಕ್ಟರ್ ಶೇಖರ್ ಅವರು ಕ್ರೈಂ ಸಿಬ್ಬಂದಿಗಳೊಂದಿಗೆ ತಂಡ ರಚಿಸಿ ಡಿವೈಎಸ್ಪಿ ಗೋಪಾಲಕೃಷ್ಣ ಅವರ ಮಾರ್ಗದರ್ಶನದಂತೆ ಕುಖ್ಯಾತ ಮನೆಗಳ್ಳ ಸೈಯದ್ ಅಸ್ಲಾಂ ಸೆರೆಗೆ ಬಲೆ ಬೀಸಿದ್ದರಾದರೂ, ಅಂತಿಮವಾಗಿ ಬೆಂಗಳೂರಿನ ವಿದ್ಯಾರಣ್ಯಪುರಂ ಠಾಣೆ ಪೋಲಿಸರಿಗೆ ಆತ ಸಿಕ್ಕಿ ಬಿದ್ದಿದ್ದಾನೆ.

ಮಾಲೀಕನ ಚಾಣಾಕ್ಷತನ: ಸಾಮಾನ್ಯವಾಗಿ ಸಿಸಿ ಕ್ಯಾಮರಾಗಳನ್ನು ಮನೆ ಸುತ್ತಮುತ್ತ, ಕಾರಿಡಾರ್, ಪ್ರವೇಶ ದ್ವಾರ, ಪೋರ್ಟಿಕೋ ಹಾಗೂ ರಸ್ತೆಗಳಿಗೆ ಅಭಿಮುಖವಾಗಿ ಅಳವಡಿಸಲಾಗುತ್ತದೆ. ಆದರೆ, ಹುಣಸೂರಿನ ರವೀಂದ್ರಕುಮಾರ್ ಅವರು ತಮ್ಮ ಮನೆಯ ಶೋಕೇಸ್‌ನ ಗೊಂಬೆಗಳ ನಡುವೆ ಕ್ಯಾಮರಾ ಅಳವಡಿಸಿ, ಖದೀಮರಿಗೆ ಚಳ್ಳೆ ಹಣ್ಣು ತಿನ್ನಿಸಿರುವುದು ವಿಶೇಷ.

ಯುವ ನಾಯಕರೆ ಸಂಯಮ ಕಳೆದುಕೊಳ್ಳಬೇಡಿ

ಪ್ರತಾಪ್ ಸಿಂಹ, ಪ್ರದೀಪ್ ಈಶ್ವರ್ ನಡುವಿನ ವೈಯಕ್ತಿಕ ಟೀಕೆಗೆ ಬೇಸರ

ಮೈಸೂರು, ಅ. 25– ರಾಜ್ಯ ನಾಯಕರಿಬ್ಬರ ನಡುವೆ ನಡೆಯುತ್ತಿರುವ ಆರೋಪ–ಪ್ರತ್ಯಾರೋಪ, ವಾಗ್ಯುದ್ಧ, ಪದಬಳಕೆ, ಅವಾಚ್ಯ ನಿಂದನೆಗಳು ರಾಜಕಾರಣ ಎತ್ತ ಸಾಗುತ್ತಿದೆ ಎಂಬ ಪ್ರಶ್ನೆಯನ್ನು ಸಾರ್ವಜನಿಕ ವಲಯದಲ್ಲಿ ಮೂಡಿಸಿದೆ ಎಂದು ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ. ಮಲ್ಲೇಶ್ ಬೇಸರ ವ್ಯಕ್ತಪಡಿಸಿದ್ದಾರೆ.



ಕೆ.ವಿ. ಮಲ್ಲೇಶ್

ಮೌಲ್ಯಾಧಾರಿತ ಪ್ರಜಾಪ್ರಭುತ್ವದ ರಾಜಕಾರಣಕ್ಕೆ, ಸಭ್ಯ ರಾಜಕಾರಣಕ್ಕೆ ಕರ್ನಾಟಕ ರಾಜ್ಯ ಹೆಸರುವಾಸಿ. ಈ ಮಣ್ಣಿನಲ್ಲಿ ಎಸ್.ನಿಜಲಿಂಗಪ್ಪ, ಡಿ. ದೇವರಾಜ ಅರಸು, ರಾಮಕೃಷ್ಣ ಹೆಗಡೆ, ಜೆ.ಎಚ್. ಪಟೇಲ್, ಎಚ್.ಡಿ. ದೇವೇಗೌಡ, ಎಸ್.ಎಂ. ಕೃಷ್ಣ, ಅಬ್ದುಲ್ ನಜೀರ್‌ಸಾಬ್, ಕೆ.ಎಚ್. ರಂಗನಾಥ್ ರಂತಹ ದಿಗ್ಗಜರು ರಾಜಕೀಯ ಮಾಡಿದ್ದಾರೆ. ಒಬ್ಬರಿಗೊಬ್ಬರು ಆರೋಪ ಪ್ರತ್ಯಾರೋಪಗಳನ್ನೂ ಮಾಡಿದ್ದಾರೆ. ಆದರೆ, ಅವರೆಂದಿಗೂ ಸಭ್ಯತೆಯ ಎಲ್ಲೆ ಮೀರಿಲ್ಲ. ಅಂತಹ ನಾಯಕರನ್ನು ನೋಡಿ, ಕೇಳಿ ಬೆಳೆದ ಮಾಜಿ ಸಂಸದ ಪ್ರತಾಪ್ ಸಿಂಹ ಹಾಗೂ ಶಾಸಕ ಪ್ರದೀಪ್ ಈಶ್ವರ್ ಅವರ ನಡುವಿನ ಮಾತಿನ ಯುದ್ಧ ಎಲ್ಲೆ ಮೀರಿರುವುದು ನಾಗರಿಕ ಸಮಾಜ ನಾಚುವಂತೆ ಮಾಡಿದೆ.

ನಾಡಿನ ಯುವ ಜನತೆಗೆ ಮಾರ್ಗದರ್ಶಕರಾಗಬೇಕಾದ ಯುವನಾಯಕರಿಬ್ಬರು ತಮ್ಮ ನಾಲಿಗೆ ಹರಿಬಿಟ್ಟಿರುವ ಪರಿ ಅಸಹ್ಯ ಹುಟ್ಟಿಸುತ್ತಿದೆ.

ರಾಜಕೀಯ ನಾಯಕರ ನಡುವೆ ಆರೋಪ ಪ್ರತ್ಯಾರೋಪ ಸಾಮಾನ್ಯ. ಆದರೆ, ಅದು ತೀರಾ ಕೆಳಮಟ್ಟಕ್ಕೆ ಇಳಿಯಬಾರದು. ರಾಜಕೀಯ ನಾಯಕರಿಬ್ಬರು ಅಭಿವೃದ್ಧಿ ವಿಚಾರವಾಗಿ ಜನಸಾಮಾನ್ಯರ ಸಮಸ್ಯೆಗಳ ಕುರಿತು ಚರ್ಚೆ ನಡೆಸಬೇಕು, ವಿಚಾರ ಮಂಡಿಸಬೇಕು. ಆದರೆ, ಅದೆಲ್ಲವೂ ಪ್ರಸ್ತುತ ಗೌಣವಾಗಿದ್ದು, ತೀರ ವೈಯಕ್ತಿಕ ವಿಚಾರಗಳೇ ಚರ್ಚೆಗೆ ಬರುತ್ತಿರುವುದು ಸರಿಯಲ್ಲ. ಇಂದಿನ ಯುವ ಜನತೆಗೆ ತಮ್ಮಂತಹ ಯುವ ನಾಯಕರು ಮಾದರಿಯಾಬೇಕಿತ್ತು. ಆದರೆ, ತಮ್ಮ ನಡವಳಿಕೆ, ವರ್ತನೆ ನೋಡಿದರೆ ನೀವು ಹೇಗೆ ಮಾದರಿಯಾಗುತ್ತೀರಿ ಎಂಬ ಪ್ರಶ್ನೆ ಕಾಡುತ್ತಿದೆ.

ರಾಜಕಾರಣವನ್ನು ಬದಿಗಿಟ್ಟು ನೋಡಿದರೂ ಇಬ್ಬರು ಸಾಮಾನ್ಯ ನಾಗರಿಕರು, ಶಿಕ್ಷಿತರು ಮಾತನಾಡದಂತ ಕೀಳು ಮಟ್ಟದ ಪದ ಬಳಕೆಯನ್ನು ಮಾಡುತ್ತಿರುವುದು ಅಕ್ಷಮ್ಯ.

ಮುಂದಾದರೂ ಬಸವಣ್ಣ, ಕುವೆಂಪು, ಕನಕದಾಸರು ಅವರಂತಹ ಮಹನೀಯರು ಜನ್ಮ ತಾಳಿದ ಈ ಪುಣ್ಯ ನೆಲಕ್ಕೆ ಕಳಂಕ ಬರದಂತೆ ನಡೆದುಕೊಳ್ಳಬೇಕಿದೆ. ವೈಯಕ್ತಿಕ ನಿಂದನೆಗಳನ್ನು ಬಿಟ್ಟು ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸುವ ದಿಕ್ಕಿನಲ್ಲಿ ತಮ್ಮ ಚರ್ಚೆ ಸಾಗಲಿ ಎಂದು ಬಯಸುತ್ತೇನೆ ಎಂದರು.

'ಬಂಗಾರದ ಮನುಷ್ಯ' ಪ್ರಶಸ್ತಿ ಪ್ರದಾನ



ಬೆಂಗಳೂರಿನ ವಿವಿ ಪುರಂ ಜೈನ್ ಕಾಲೇಜು ಸಭಾಂಗಣದಲ್ಲಿ ಶನಿವಾರ ನಡೆದ ಕಾರ್ಯಕ್ರಮದಲ್ಲಿ ವಾಸವಿ ಕ್ಲಬ್ ಇಂಟರ್ ನ್ಯಾಷನಲ್ ಯಡಿಯೂರು ವಿಭಾಗ ವತಿಯಿಂದ ಹುಣಸೂರಿನ ಮಾಜಿ ಶಾಸಕ ಹೆಚ್.ಪಿ. ಮಂಜುನಾಥ್ ಅವರಿಗೆ 'ಬಂಗಾರದ ಮನುಷ್ಯ' ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ವೇಳೆ ವಾಸವಿ ಕ್ಲಬ್ ಇಂಟರ್ ನ್ಯಾಷನಲ್ ಯಡಿಯೂರು ವಿಭಾಗದ ಅಧ್ಯಕ್ಷ ಸುರೇಶ್ ಕೆ, ಉಪಾಧ್ಯಕ್ಷ ಡಿ.ವೆಂಕಟೇಶ್ ಗುಪ್ತಾ, ಕಾರ್ಯದರ್ಶಿ ಸಾಯಿ ರಮೇಶ್ ಸೇರಿದಂತೆ ಕ್ಲಬ್‌ನ ಪದಾಧಿಕಾರಿಗಳು, ಸದಸ್ಯರುಗಳು ಹಾಗೂ ಆರ್ಯವೈಶ್ಯ ಸಮಾಜದ ಮುಖಂಡರುಗಳು ಹಾಜರಿದ್ದರು.

ಬೆಂಗಳೂರಲ್ಲಿ ಗುಂಡಿ ತಪ್ಪಿಸಲು ಯತ್ನಿಸಿ ಬೈಕ್‌ಗೆ ಗುದ್ದಿದ ಟ್ರಕ್: ಬ್ಯಾಂಕ್ ಉದ್ಯೋಗಿ ಸ್ಥಳದಲ್ಲೇ ಸಾವು

ಬೆಂಗಳೂರು, ಅ.25– ಟ್ರಕ್ ಚಕ್ರಕ್ಕೆ ಸಿಲುಕಿ ಬ್ಯಾಂಕ್ ಉದ್ಯೋಗಿಯೊಬ್ಬರು ಸಾವನ್ನಪ್ಪಿದ ಘಟನೆ ಮಾದನಾಯಕನಹಳ್ಳಿ ಹುಸ್ಕೂರು ಎಪಿಎಂಸಿ ಬಳಿ ನಡೆದಿದೆ.



ಮೃತ ಮಹಿಳೆಯನ್ನು ಪ್ರಿಯಾಂಕಾ ಕುಮಾರ್ ಪೂನಿಯಾ ಎಂದು ಗುರುತಿಸಲಾಗಿದೆ. ಯುವತಿ ಅಣ್ಣನ ಜೊತೆ ಬೈಕ್‌ನಲ್ಲಿ ಎಪಿಎಂಸಿ ಹುಸ್ಕೂರು ರಸ್ತೆಯಿಂದ ಮಾದಾವರಕ್ಕೆ ತೆರಳುತ್ತಿದ್ದರು. ಈ ವೇಳೆ ಅಪಘಾತ ನಡೆದಿದೆ.

ಲೈಟ್ಸ್ ಮೆಕ್ಯಾನಿಕ್ ಕಂಪನಿ ಬಳಿ ಬೆಳಿಗ್ಗೆ 10.55ರ ಸುಮಾರಿಗೆ ಆಕೆಯ ಸಹೋದರ ಮಾದಾವರ ಮೆಟ್ರೋ ನಿಲ್ದಾಣದಲ್ಲಿ ಆಕೆಯನ್ನು ಇಳಿಸುತ್ತಿದ್ದಾಗ ಈ ಘಟನೆ ಸಂಭವಿಸಿದೆ. ದಾಸನಪುರದ ಎಪಿಎಂಸಿ ಮಾರುಕಟ್ಟೆ ಕಡೆಗೆ ಹೋಗುತ್ತಿದ್ದ ಟ್ರಕ್ ಒಂದು ಗುಂಡಿಯನ್ನು ತಪ್ಪಿಸಲು ಪ್ರಯತ್ನಿಸುತ್ತಿದ್ದಾಗ ಬಲಕ್ಕೆ ತಿರುಗಿತು. ಟ್ರಕ್ ವಿರುದ್ಧ ದಿಕ್ಕಿನಿಂದ ಬರುತ್ತಿದ್ದ ಬೈಕ್‌ನ ಹ್ಯಾಂಡಲ್‌ಗೆ ತಗುಲಿದೆ.

ಈ ವೇಳೆ ಬೈಕ್ ಸವಾರ ಸಮತೋಲನ ಕಳೆದುಕೊಂಡು ಇಬ್ಬರೂ ರಸ್ತೆಗೆ ಬಿದ್ದಿದ್ದಾರೆ. ಬಲಕ್ಕೆ ಬಿದ್ದ ಪ್ರಿಯಾಂಕಾ ಮೇಲೆ ಟ್ರಕ್‌ನ ಚಕ್ರ ಹರಿದು ಸ್ಥಳದಲ್ಲೇ ಸಾವನ್ನಪ್ಪಿದರೆ, ಸಹೋದರ ಗಾಯಗೊಂಡರು. ಸಂತ್ರಸ್ತೆ ಹೆಲ್ಮೆಟ್ ಧರಿಸದ ಕಾರಣ ಸ್ಥಳದಲ್ಲೇ ಸಾವನ್ನಪ್ಪಿದ್ದಾಳೆ. ಹೆಬ್ಬಗೋಡಿ ಸಂಚಾರ ಠಾಣೆಗೆ [illegible] ಹೊಯ್ಸಳ ನೋಂದಾಯಿತ ವಾಹನವಾದ ಟ್ರಕ್ ವಶಪಡಿಸಿಕೊಳ್ಳಲಾಗಿದೆ, ಚಾಲಕನನ್ನು ಬಂಧಿಸಲಾಗಿದೆ.


ಶಬರಿಮಲೆ ಅಯ್ಯಪ್ಪ ದೇವಸ್ಥಾನದಲ್ಲಿ ಚಿನ್ನ ಕಳವು ಪ್ರಕರಣ

ಬೆಂಗಳೂರು, ಬಳ್ಳಾರಿಯಲ್ಲಿ ಕೇರಳ ಎಸ್‌ಐಟಿ ದಾಳಿ, ಚಿನ್ನ ವಶ

ಬೆಂಗಳೂರು, ಅ.25– ಶಬರಿಮಲೆ ಅಯ್ಯಪ್ಪ ದೇವಸ್ಥಾನದ ಚಿನ್ನ ಕಳವು ಪ್ರಕರಣದ ತನಿಖೆ ಚುರುಕುಗೊಳಿಸಿರುವ ಕೇರಳ ಪೊಲೀಸರ ವಿಶೇಷ ತನಿಖಾ ತಂಡ ಬೆಂಗಳೂರು ಹಾಗೂ ಬಳ್ಳಾರಿಯಲ್ಲಿ ಪರಿಶೀಲನೆ ನಡೆಸಿದೆ. ಬೆಂಗಳೂರಿನ ಶ್ರೀರಾಂಪುರ ವ್ಯಾಪ್ತಿಯಲ್ಲಿರುವ ಆರೋಪಿ ಅರ್ಚಕ ಪೋಟಿ ಉನ್ನಿಕೃಷ್ಣನ್ ನಿವಾಸ ಹಾಗೂ ಬಳ್ಳಾರಿಯ ರೊದ್ದಂ ಜ್ಯುವೆಲ್ಲರ್ಸ್ ಮೇಲೆ ಕೇರಳ ಪೊಲೀಸರು ದಾಳಿ ನಡೆಸಿದ್ದಾರೆ.

ಶಬರಿಮಲೆ ದೇವಾಲಯದ ದ್ವಾರಪಾಲಕ ಮೂರ್ತಿಗಳಿಂದ 475 ಗ್ರಾಂ ಚಿನ್ನದ ಪ್ಲೇಟ್ ಕದ್ದ ಆರೋಪದಡಿ ಪೋಟಿ ಉನ್ನಿಕೃಷ್ಣನ್ ಅವರನ್ನು ಕೇರಳ ಪೊಲೀಸರು ವಶಕ್ಕೆ ಪಡೆದಿದ್ದರು. ದಾಳಿ ವೇಳೆ ಮಹತ್ವದ ದಾಖಲೆಗಳು ಲಭ್ಯವಾಗಿವೆ ಎನ್ನಲಾಗಿದೆ. ಉದ್ಯಮಿ ಗೋವರ್ಧನ್ ಅವರ ಒಡೆತನದ ರೊದ್ದಂ ಆಭರಣ ಅಂಗಡಿಯಿಂದ ವಿಶೇಷ ತನಿಖಾ ತಂಡ ಹಲವಾರು ಚಿನ್ನದ ಗಟ್ಟಿಗಳನ್ನು ವಶಪಡಿಸಿಕೊಂಡಿದೆ 476 ಗ್ರಾಂ ಚಿನ್ನ ಖರೀದಿಸಿದ್ದಾಗಿ ಗೋವರ್ಧನ್ ಒಪ್ಪಿಕೊಂಡಿದ್ದಾರೆ.

ಅಭಿನಂದನೆ



ಮೈಸೂರು ಜಿಲ್ಲಾ ಹಾಲು ಒಕ್ಕೂಟದ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಈರೇಗೌಡ ಅವರನ್ನು ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ, ಮೈಸೂರು ನಗರ ಕಾಂಗ್ರೆಸ್ ಸಮಿತಿಯ ಉಪಾಧ್ಯಕ್ಷ ವಿಕ್ರಾಂತ್ ಪಿ ದೇವೇಗೌಡ, ಮುಖಂಡರಾದ ಎಳೆ ಪಾಪಣ್ಣ, ಕೃಷ್ಣಪ್ಪ, ಡೆಲ್ಲಿ ರವಿ, ಸುಜಿತ್‌ಕುಮಾರ್, ರಾಜಕುಮಾರ್, ರಂಗಪ್ಪ, ಮಾದೇವ್, ನಾಗಣ್ಣ, ಕುಮಾರ್ ಮುಂತಾದವರು ಅಭಿನಂದಿಸಿದರು.

ಆನ್‌ಲೈನ್‌ನಲ್ಲಿ ಹೂಡಿಕೆ; ಮೈಸೂರಿನ ಇಬ್ಬರಿಗೆ 31 ಲಕ್ಷಕ್ಕೂ ಅಧಿಕ ವಂಚನೆ

ಮೈಸೂರು, ಅ.25– ಸೈಬರ್ ವಂಚಕರು ಮೈಸೂರಿನ ಇಬ್ಬರಿಂದ 31 ಲಕ್ಷಕ್ಕೂ ಹೆಚ್ಚು ಹಣ ಲಪಟಾಯಿಸಿರುವ ಸಂಬಂಧ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ.

ಸ್ವ–ಉದ್ಯೋಗಿ ಮಹಿಳೆಯೊಬ್ಬರು ನಕಲಿ ಟ್ರೇಡಿಂಗ್‌ನಲ್ಲಿ ಹಣ ಹೂಡಿಕೆ ಮಾಡಿ 19.74 ಲಕ್ಷ ಹಾಗೂ ಎಪಿಕೆ ಫೈಲ್‌ಗಳ ಡೌನ್‌ಲೋಡ್ ಆಗಿದ್ದರಿಂದ ಖಾಸಗಿ ಸಂಸ್ಥೆ ಉದ್ಯೋಗಿ 11.69 ಲಕ್ಷ ಹಣ ಕಳೆದುಕೊಂಡಿದ್ದಾರೆ.

ಐಪಿಎಸ್ ಶ್ರೀನಿವಾಸನಗರದ ಮಹಿಳೆ, ನಾಲ್ಕು ತಿಂಗಳ ಹಿಂದೆ ಫೇಸ್‌ಬುಕ್‌ನಲ್ಲಿ ಟ್ರೇಡಿಂಗ್ ಜಾಹೀರಾತು ನೋಡಿ, ಅದರಲ್ಲಿದ್ದ ಲಿಂಕ್ ಕ್ಲಿಕ್ ಮಾಡಿದ್ದಾರೆ. ನಂತರ ತಮ್ಮ ಹೆಸರು ಹಾಗೂ ಮೊಬೈಲ್ ನಂಬರ್ ನಮೂದಿಸಿ, ರಿಜಿಸ್ಟರ್ ಮಾಡಿಕೊಂಡಿದ್ದಾರೆ. ಕೂಡಲೇ ರಾಘವ್ ರಾಮಚಂದ್ರ ಹೆಸರಿನಲ್ಲಿ ಇಮೇಲ್ ಮೂಲಕ ಲಿಂಕ್ ಬಂದಿದ್ದು, ಅದರ ಮೂಲಕ ಮಹಿಳೆ ಟ್ರೇಡಿಂಗ್ ಅಕೌಂಟ್ ತೆರೆದಿದ್ದಾರೆ.

ನಂತರ ನಿಖಿಲ್ ಗೌಡ ಹೆಸರಿನಲ್ಲಿ ಕರೆ ಮಾಡಿದ ವ್ಯಕ್ತಿಯೊಬ್ಬ, ತನ್ನನ್ನು ಹಣಕಾಸು ಸಲಹೆಗಾರ ಎಂದು ಪರಿಚಯಿಸಿಕೊಂಡು, ಹೈ ವಾಲ್ಯೂಂ ಟ್ರೇಡಿಂಗ್ ಬಗ್ಗೆ ಮಾಹಿತಿ ನೀಡಿದ್ದಾನೆ ಬಳಿಕ ಸೂರಜ್ ರೆಡ್ಡಿ ಹೆಸರಿನಲ್ಲಿ ಕರೆ ಮಾಡಿದ ಮತ್ತೋರ್ವನೂ ಹಣಕಾಸು ಸಲಹೆಗಾರನೆಂದು ಹೇಳಿಕೊಂಡು ಟ್ರೇಡಿಂಗ್‌ನಲ್ಲಿ ಭಾರೀ ಲಾಭ ಸಿಗಲಿದೆ ಎಂದು ತಿಳಿಸಿದ್ದಾನೆ. ಇವರುಗಳ ಮಾತು ನಂಬಿದ ಮಹಿಳೆ ಹಂತ ಹಂತವಾಗಿ 19,74,700 ರೂ.ಗಳನ್ನು ವರ್ಗಾವಣೆ ಮಾಡಿದ್ದಾರೆ. ಒಮ್ಮೆ ಹಣವನ್ನು ವಿತ್‌ಡ್ರಾ ಮಾಡಲು ಯತ್ನಿಸಿದಾಗ ತೆರಿಗೆ ಮೊತ್ತ ಪಾವತಿಸುವಂತೆ ಸೂಚಿಸಲಾಗಿದೆ. ಅದರಂತೆ ಹಣ ಪಾವತಿಸಿದ ನಂತರವೂ ವಿತ್‌ಡ್ರಾ ಸಾಧ್ಯವಾಗದಿದ್ದಾಗ ಸೆನ್ ಪೊಲೀಸರಿಗೆ ದೂರು ನೀಡಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ಮೈಸೂರು ತಾಲೂಕು ನಡಹಳ್ಳಿ ನಿವಾಸಿಯೊಬ್ಬರ ಮೊಬೈಲ್‌ಗೆ ಬಂದ ಎಪಿಕೆ ಫೈಲ್‌ಗಳು ಡೌನ್ಲೋಡ್ ಆದ ಬಳಿಕ ಅವರ ಬ್ಯಾಂಕ್ ಖಾತೆಗೆ ಕನ್ನ ಹಾಕಲಾಗಿದೆ. ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿನ ಅವರ ಖಾತೆಯಿಂದ ಅ.21ರಿಂದ 23ರವರೆಗೆ ಒಟ್ಟು 11,69,600 ರೂ. ಅಪರಿಚಿತರ ಖಾತೆಗೆ ವರ್ಗಾವಣೆಗೊಂಡಿದ್ದು, ಈ ಸಂಬಂಧ ದೂರು ದಾಖಲಿಸಿಕೊಂಡಿರುವ ಪೊಲೀಸರು, ಮುಂದಿನ ಕ್ರಮ ಕೈಗೊಂಡಿದ್ದಾರೆ.

ದೀಪಾವಳಿ ಹಬ್ಬಕ್ಕೆ ಹೋಗಿದ್ದವರ ಮನೆ ಬಾಗಿಲು ಮೀಟಿ ಕಳವು

ಮೈಸೂರು, ಅ.25– ಮನೆಯವರೆಲ್ಲಾ ದೀಪಾವಳಿ ಹಬ್ಬಕ್ಕೆಂದು ಊರಿಗೆ ಹೋಗಿದ್ದಾಗ ಬಾಗಿಲು ಮೀಟಿ, ವಿವಿಧ ವಸ್ತುಗಳನ್ನು ಕಳ್ಳತನ ಮಾಡಿರುವ ಘಟನೆ ಮೈಸೂರಿನ ದಟ್ಟಗಳ್ಳಿಯಲ್ಲಿ ನಡೆದಿದೆ ಇಲ್ಲಿನ ನಿವಾಸಿ ಆದರ್ಶ, ಕುಟುಂಬದವರೊಂದಿಗೆ ಅ.20ರಂದು ಬೆಳಗ್ಗೆ ಕೊಡಗಿನ ಸೋಮವಾರಪೇಟೆ ಸಮೀಪದ ಸ್ವಗ್ರಾಮಕ್ಕೆ ತೆರಳಿದ್ದರು. ದೀಪಾವಳಿ ಹಬ್ಬ ಮುಗಿಸಿಕೊಂಡು ಅ.22ರಂದು ಮಧ್ಯಾಹ್ನ ವಾಪಸ್ಸಾದಾಗ ಮನೆಯ ಬಾಗಿಲನ್ನು ಮೀಟಿ ತೆರೆಯಲಾಗಿತ್ತು. ಒಳಹೋಗಿ ಪರಿಶೀಲಿಸಿದಾಗ ಸುಮಾರು 350 ಗ್ರಾಂ ಬೆಳ್ಳಿ ಆಭರಣ, ಬೀರುವಿನಲ್ಲಿದ್ದ 4 ಗ್ರಾಂನ ಚಿನ್ನದ ಓಲೆ, ಪ್ರತಿಷ್ಠಿತ ಕಂಪನಿಯ ಇಯರ್ ಬಡ್ಸ್ ಸೇರಿದಂತೆ ಒಂದು ಲಕ್ಷ ಮೌಲ್ಯದ ವಸ್ತುಗಳು ಕಳುವಾಗಿದ್ದು ತಿಳಿದಿದೆ. ಈ ಸಂಬಂಧ ಕುವೆಂಪುನಗರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಸಂಘಟಿತ ಹೋರಾಟ, ರೋಹಿತ್, ಕೊಹ್ಲಿ ಭರ್ಜರಿ ಆಟದ ಪ್ರದರ್ಶನ

ಸತತ ಸೋಲಿನಿಂದ ಹೊರಬಂದ ಭಾರತ

ಸಿಡ್ನಿ: ರೋಹಿತ್ ಶರ್ಮಾ ಅವರ ಭರ್ಜರಿ ಶತಕ ಹಾಗೂ ವಿರಾಟ್ ಕೊಹ್ಲಿಯವರ ಸೊಗಸಾದ ಅರ್ಧಶತಕದ ನೆರವಿನಿಂದ ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಯ ಕೊನೆಯ ಪಂದ್ಯದಲ್ಲಿ ಭಾರತ 9 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸುವ ಮೂಲಕ ಸತತ ಸೋಲಿನಿಂದ ಹೊರಬಂದಿತು.

ಮೊದಲ ಎರಡು ಪಂದ್ಯದಲ್ಲಿ ಸೋತಿದ್ದ ಭಾರತ ಈ ಪಂದ್ಯದಲ್ಲಿ ಶಿಸ್ತಿನ ಬೌಲಿಂಗ್ ದಾಳಿ ಹಾಗೂ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶಿಸಿತು. ರೋಹಿತ್ ಶರ್ಮ ಮತ್ತು ವಿರಾಟ್ ಕೊಹ್ಲಿ ಜೋಡಿ ಮುರಿಯದ ಎರಡನೇ ವಿಕೆಟ್‌ಗೆ 169 ಎಸೆತಗಳಲ್ಲಿ 168 ರನ್‌ಗಳ ಜೊತೆಯಾಟ ನೀಡಿ ಗೆಲುವು ತಂದುಕೊಟ್ಟಿತು.

ಆಸ್ಟ್ರೇಲಿಯಾ ಒಡ್ಡಿದ 237 ರನ್‌ಗಳ ಗುರಿಯನ್ನು ಬೆನ್ನಟ್ಟಿದ ಭಾರತಕ್ಕೆ ಉತ್ತಮ ಆರಂಭ ಲಭಿಸಿತು. ಮೊದಲ ವಿಕೆಟ್‌ಗೆ ರೋಹಿತ್ ಹಾಗೂ ಶುಭಮನ್ 69 ರನ್‌ಗಳನ್ನು ಪೇರಿಸಿದರು. ಇದರಲ್ಲಿ ಗಿಲ್ ಕೊಡುಗೆ 24.

ಇದಾದ ಬಳಿಕ ರೋಹಿತ್ ಮತ್ತು ಕೊಹ್ಲಿ ಪಂದ್ಯವನ್ನು ತಮ್ಮ ಹಿಡಿತಕ್ಕೆ ತೆಗೆದುಕೊಂಡರು. ಉಭಯ ಆಟಗಾರರು ಮನಮೋಹಕ ಹೊಡೆತಗಳ ಮೂಲಕ ರಂಜಿಸಿದರು. ದೀರ್ಘ ಕಾಲದ ಬಳಿಕ ಈ ಜೋಡಿಯ ಇನಿಂಗ್ಸ್ ನೋಡಿ ಪ್ರೇಕ್ಷಕರು ಹರ್ಷ ವ್ಯಕ್ತಪಡಿಸಿದರು. ಇವರಿಬ್ಬರ ಪೋಸ್ಟರ್ ಹಿಡಿದುಕೊಂಡು ಕುಣಿದು ಸಂಭ್ರಮಿಸಿದರು.



ರೋಹಿತ್ ಶರ್ಮಾ ಅವರ 121 ರನ್‌ಗಳ ಇನಿಂಗ್ಸ್ 125 ಎಸೆತಗಳಲ್ಲಿ ಬಂತು. ಇದರಲ್ಲಿ 13 ಬೌಂಡರಿ ಹಾಗೂ 3 ಸಿಕ್ಸರ್‌ಗಳಿದ್ದವು. 81 ಎಸೆತಗಳಲ್ಲಿ 74 ರನ್ ಗಳಿಸಿದ ಕೊಹ್ಲಿ ಇನಿಂಗ್ಸ್‌ನಲ್ಲಿ 7 ಬೌಂಡರಿಗಳಿದ್ದವು.

ಟಾಸ್ ಗೆದ್ದು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ ತಂಡ ಹರ್ಷಿತ್ ರಾಣಾ (39/4) ಬೌಲಿಂಗ್ ದಾಳಿಗೆ ಸಿಲುಕಿ, 46.4 ಓವರ್‌ಗಳಲ್ಲಿ 236 ರನ್‌ಗಳಿಗೆ ತನ್ನೆಲ್ಲ ವಿಕೆಟ್ ಕಳೆದುಕೊಂಡಿತು. ಆಸ್ಟ್ರೇಲಿಯಾ ಪರ ಆರಂಭಿಕ ಬ್ಯಾಟರ್‌ಗಳಾದ ಮಿಚೆಲ್ ಮಾರ್ಷ್ ಹಾಗೂ ಟ್ರಾವಿಸ್ ಹೆಡ್ ಉತ್ತಮ ಆರಂಭ ನೀಡಿದರು. ಈ ಜೋಡಿ ಮೊದಲ ವಿಕೆಟ್‌ಗೆ 61 ರನ್‌ಗಳ ಜೊತೆಯಾಟ ಆಡಿದರು. ಈ ಹಂತದಲ್ಲಿ 29 ರನ್ ಗಳಿಸಿದ್ದ ಹೆಡ್ ಸಿರಾಜ್‌ಗೆ ವಿಕೆಟ್ ಒಪ್ಪಿಸಿ ಹೊರನಡೆದರು.

ನಂತರ ಬಂದ ಮ್ಯಾಥ್ಯೂ ಶಾರ್ಟ್ (30), ನಾಯಕ ಮಿಚೆಲ್ ಮಾರ್ಷ್ (41) ಹಾಗೂ ರೆನ್‌ಶಾ (56) ರನ್ ಗಳಿಸಿ ಪೆವಿಲಿಯನ್ ಸೇರಿಕೊಂಡರು. ಮಧ್ಯಮ ಕ್ರಮಾಂಕದಲ್ಲಿ ಅಲೆಕ್ಸ್ ಕ್ಯಾರಿ (24) ಹಾಗೂ ಕೂಪರ್ ಕೊನೊಲಿ (23) ರನ್ ಗಳಿಸಿ ತಂಡದ ಮೊತ್ತ 200ರ ಗಡಿದಾಟಲು ನೆರವಾದರು. ಈ ಸರಣಿಯನ್ನು 2–1 ಅಂತರದಿಂದ ಆಸ್ಟ್ರೇಲಿಯಾ ಜಯಿಸಿತು.

ಸಚಿನ್ ದಾಖಲೆ ಮುರಿದ ಕೊಹ್ಲಿ

ಸಿಡ್ನಿ: ವಿರಾಟ್ ಕೊಹ್ಲಿ ಅಂತಿಮ ಏಕದಿನ ಪಂದ್ಯದಲ್ಲಿ ಫಾರ್ಮ್‌ಗೆ ಮರಳಿದ್ದಾರೆ. ಮಾತ್ರವಲ್ಲ, ಇಂದಿನ ಪಂದ್ಯದಲ್ಲಿ ಆಕರ್ಷಕ ಅರ್ಧಶತಕ ಸಿಡಿಸಿ ಭಾರತದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು. ಮಾತ್ರವಲ್ಲ, ಸಚಿನ್ ತೆಂಡೂಲ್ಕರ್ ಅವರ ಹೆಸರಿನಲ್ಲಿದ್ದ ದಾಖಲೆಯೊಂದನ್ನು ಕೊಹ್ಲಿ ಮುರಿದಿದ್ದಾರೆ.

ಗುರಿ ಬೆನ್ನಟ್ಟುವಾಗ ಅತೀ ಹೆಚ್ಚು ಬಾರಿ 50ಕ್ಕೂ ಅಧಿಕ ರನ್ಸ್: ಏಕದಿನ ಕ್ರಿಕೆಟ್‌ನಲ್ಲಿ ಗುರಿ ಬೆನ್ನಟ್ಟುವಾಗ ಅತೀ ಹೆಚ್ಚು ಬಾರಿ 50ಕ್ಕೂ ಅಧಿಕ ರನ್ಸ್ ಹೊಡೆದ ದಾಖಲೆ ಹೊಂದಿದ್ದ ಸಚಿನ್ ತೆಂಡೂಲ್ಕರ್ ಅವರ ದಾಖಲೆಯನ್ನು ವಿರಾಟ್ ಕೊಹ್ಲಿ ಹಿಂದಿಕ್ಕಿದ್ದಾರೆ. ಆ ಮೂಲಕ ಏಕದಿನ ಕ್ರಿಕೆಟ್‌ನಲ್ಲಿ ಗುರಿ ಬೆನ್ನಟ್ಟುವಾಗ ಅತೀ ಹೆಚ್ಚು ಬಾರಿ 50ಕ್ಕೂ ಅಧಿಕ ರನ್ ಸಿಡಿಸಿದ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

ಏಕದಿನ ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಗುರಿ ಬೆನ್ನಟ್ಟುವಾಗ ವಿರಾಟ್ ಕೊಹ್ಲಿ 70 ಬಾರಿ 50ಕ್ಕೂ ಅಧಿಕ ರನ್ ಬಾರಿಸುವ ಮೂಲಕ ಈ ಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದ್ದಾರೆ. 69 ಬಾರಿ ಈ ಸಾಧನೆ ಮಾಡಿರುವ ಸಚಿನ್ ತೆಂಡೂಲ್ಕರ್ ಈ ಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದ್ದಾರೆ.

ಏಕದಿನ + ಟಿ20 ಕ್ರಿಕೆಟ್‌ನಲ್ಲಿ ಅತೀ ಹೆಚ್ಚು ರನ್: ಇದರ ಜೊತೆಗೆ ವಿರಾಟ್ ಕೊಹ್ಲಿ ಅಂತರರಾಷ್ಟ್ರೀಯ ಏಕದಿನ ಹಾಗೂ ಟಿ20 ಕ್ರಿಕೆಟ್ ಎರಡೂ ಮಾದರಿಗಳಿಂದ ಅತೀ ಹೆಚ್ಚು ರನ್ ಸಿಡಿಸಿದ್ದ ಸಚಿನ್ ತೆಂಡೂಲ್ಕರ್ ಅವರ ದಾಖಲೆಯನ್ನು ಮುರಿದಿದ್ದಾರೆ. ಈ ಎರಡೂ ಮಾದರಿಗಳಿಂದ ಸಚಿನ್ 18,436 ರನ್ ಕಲೆಹಾಕಿದ್ದರೆ, ವಿರಾಟ್ ಕೊಹ್ಲಿ 18,437 ರನ್ ಕಲೆಹಾಕುವ ಮೂಲಕ ಅಗ್ರಸ್ಥಾನಕ್ಕೇರಿದರು.

ಈ ಪಟ್ಟಿಯಲ್ಲಿ 15,616 ರನ್ ಗಳಿಸಿರುವ ಕುಮಾರ ಸಂಗಕ್ಕಾರ ಮೂರನೇ ಸ್ಥಾನ, 15,589 ರನ್ ಗಳಿಸಿರುವ ರೋಹಿತ್ ಶರ್ಮಾ ನಾಲ್ಕು ಮತ್ತು 14,143 ರನ್ ಗಳಿಸಿರುವ ಮಹೇಲಾ ಜಯವರ್ಧನೆ ಐದನೇ ಸ್ಥಾನದಲ್ಲಿದ್ದಾರೆ.

ಕೊಹ್ಲಿ ಸೇರಿದಂತೆ ಹಲವರ ದಾಖಲೆ ಮುರಿದ ರೋಹಿತ್

ಆಸ್ಟ್ರೇಲಿಯಾ ವಿರುದ್ಧದ 3ನೇ ಏಕದಿನ ಪಂದ್ಯದಲ್ಲಿ ಭರ್ಜರಿ ಬ್ಯಾಟಿಂಗ್ ನಡೆಸಿದ ಭಾರತದ ಹಿಟ್ ಮ್ಯಾನ್ ರೋಹಿತ್ ಶರ್ಮಾ ವಿರಾಟ್ ಕೊಹ್ಲಿಯ ಸಾಧನೆ ಸೇರಿದಂತೆ ಹಲವು ದಾಖಲೆಗಳನ್ನು ಛಿದ್ರಗೊಳಿಸಿದ್ದಾರೆ.

ಆಸ್ಟ್ರೇಲಿಯಾ ವಿರುದ್ಧ ಅತೀ ಹೆಚ್ಚು ಶತಕ: ಇನ್ನು ಆಸ್ಟ್ರೇಲಿಯಾ ವಿರುದ್ಧ ರೋಹಿತ್ ಶರ್ಮಾ ಶತಕ ಸಿಡಿಸಿದರು. ಇದು ಅವರ ಏಕದಿನ ವೃತ್ತಿ ಜೀವನದ 33ನೇ ಶತಕವಾಗಿದ್ದು, ಆಸ್ಟ್ರೇಲಿಯಾ ವಿರುದ್ಧ 9ನೇ ಶತಕವಾಗಿದೆ. ಆ ಮೂಲಕ ಒಂದು ತಂಡದ ವಿರುದ್ಧ ಅತೀ ಹೆಚ್ಚು ಶತಕ ಸಿಡಿಸಿದ ಜಂಟಿ 2ನೇ ಆಟಗಾರ ಎಂಬ ಕೀರ್ತಿಗೆ ಭಾಜನರಾಗಿದ್ದಾರೆ. ಈ ಹಿಂದೆ ವಿರಾಟ್ ಕೊಹ್ಲಿ ಶ್ರೀಲಂಕಾ ವಿರುದ್ಧ 10 ಮತ್ತು ವೆಸ್ಟ್ ಇಂಡೀಸ್ ವಿರುದ್ಧ 9 ಶತಕಗಳನ್ನು ಸಿಡಿಸಿ ಅಗ್ರಸ್ಥಾನದಲ್ಲಿದ್ದು, ಇದೇ ಆಸ್ಟ್ರೇಲಿಯಾ ವಿರುದ್ಧ ಸಚಿನ್ ತೆಂಡೂಲ್ಕರ್ 9 ಶತಕ ಸಿಡಿಸಿದ್ದು, ರೋಹಿತ್ ಶರ್ಮಾ ಕೂಡ ಆಸ್ಟ್ರೇಲಿಯಾ ವಿರುದ್ಧ 9 ಶತಕ ಸಿಡಿಸಿದ್ದಾರೆ.

ಆಸಿಸ್ ನೆಲದಲ್ಲಿ ಗರಿಷ್ಠ ಶತಕ, ಕೊಹ್ಲಿ ದಾಖಲೆ ಮುರಿದ ರೋಹಿತ್: ಇನ್ನು ಆಸ್ಟ್ರೇಲಿಯಾ ನೆಲದಲ್ಲಿ ಗರಿಷ್ಠ ಶತಕ ಸಿಡಿಸಿದ ದಾಖಲೆಯೂ ಇದೀಗ ರೋಹಿತ್ ಶರ್ಮಾ ಹೆಸರಿಗೆ ಬಂದಿದೆ. ಇಂದಿನ ಪಂದ್ಯದ ಶತಕವೂ ಸೇರಿದಂತೆ ರೋಹಿತ್ ಶರ್ಮಾ ಆಸ್ಟ್ರೇಲಿಯಾದಲ್ಲಿ ಒಟ್ಟು 6 ಶತಕಗಳನ್ನು ಸಿಡಿಸಿದ್ದಾರೆ. ಈ ದಾಖಲೆ ಇಷ್ಟು ದಿನ ವಿರಾಟ್ ಕೊಹ್ಲಿ ಹೆಸರಲ್ಲಿತ್ತು, ಕೊಹ್ಲಿ ಈವರೆಗೂ ಆಸಿಸ್ ನೆಲದಲ್ಲಿ 5 ಏಕದಿನ ಶತಕ ಸಿಡಿಸಿದ್ದಾರೆ. ಇದೀಗ 2ನೇ ಸ್ಥಾನಕ್ಕೆ ಕುಸಿದಿದ್ದಾರೆ. ಕುಮಾರ ಸಂಗಕ್ಕಾರ ಕೂಡ 5 ಶತಕ ಸಿಡಿಸಿದ್ದಾರೆ.

ಬ್ಯಾಟಿಂಗ್ ಅಷ್ಟೇ ಅಲ್ಲ.. ಫೀಲ್ಡಿಂಗ್ ನಲ್ಲೂ ದಾಖಲೆ: ಇನ್ನು ಮೂರನೇ ಏಕದಿನ ಪಂದ್ಯದಲ್ಲಿ ಟೀಂ ಇಂಡಿಯಾ ಮಾಜಿ ನಾಯಕ ರೋಹಿತ್ ಶರ್ಮಾ ಬ್ಯಾಟ್ ಹಿಡಿದು ಕ್ರೀಸ್‌ಗಿಳಿಯುವ ಮುನ್ನವೇ ವಿಶೇಷ ಶತಕ ಪೂರೈಸಿದರು.

ರೋಹಿತ್ ಶರ್ಮಾ ಅಂತರರಾಷ್ಟ್ರೀಯ ಏಕದಿನ ಕ್ರಿಕೆಟ್‌ನಲ್ಲಿ 100 ಕ್ಯಾಚ್‌ಗಳನ್ನು ಪೂರೈಸಿದ್ದು, ಈ ಮೂಲಕ ಈ ಸಾಧನೆ ಮಾಡಿದ ಏಳನೇ ಭಾರತೀಯ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಮೂರನೇ ಏಕದಿನ ಪಂದ್ಯದಲ್ಲಿ ರೋಹಿತ್, ಸ್ಲಿಪ್‌ನಲ್ಲಿ ಮಿಚೆಲ್ ಓವನ್ ಮತ್ತು ನಾಥನ್ ಎಲಿಸ್ ಅವರ ಕ್ಯಾಚ್ ಅನ್ನು ಹಿಡಿಯುವ ಮೂಲಕ ಕ್ಯಾಚ್‌ಗಳ ಶತಕ ಪೂರೈಸಿದರು.

ಆಸ್ಟ್ರೇಲಿಯಾ ವಿರುದ್ಧ 2500 ರನ್: ಇನ್ನು ಇಂದಿನ ಶತಕ ಮಾತ್ರವಲ್ಲದೇ ರೋಹಿತ್ ಶರ್ಮಾ ಏಕದಿನ ಕ್ರಿಕೆಟ್‌ನಲ್ಲಿ ಆಸ್ಟ್ರೇಲಿಯಾ ವಿರುದ್ಧ 2500 ರನ್ ಪೂರೈಸಿದ ದಾಖಲೆಯನ್ನು ನಿರ್ಮಿಸಿದರು. ಆ ಮೂಲಕ ಈ ಸಾಧನೆ ಮಾಡಿದ 2ನೇ ಆಟಗಾರ ಎಂಬ ಕೀರ್ತಿಗೆ ಭಾಜನರಾದರು. ಇದಕ್ಕೂ ಮೊದಲು ಸಚಿನ್ ತೆಂಡೂಲ್ಕರ್ ಈ ಸಾಧನೆ ಮಾಡಿದ ಮೊದಲ ಆಟಗಾರ ಎಂಬ ಕೀರ್ತಿಗೆ ಭಾಜನರಾಗಿದ್ದಾರೆ.

ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ: ಮಂಡ್ಯ ಜಿಲ್ಲೆಯಲ್ಲಿ ಶೇ.98.3 ಪ್ರಗತಿ

ಮಂಡ್ಯ, ಅ.25– ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ನಡೆಸುತ್ತಿರುವ 'ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ'ಯಲ್ಲಿ ಮಂಡ್ಯ ಜಿಲ್ಲೆಯು ಶೇ 98.03ರಷ್ಟು ಪ್ರಗತಿ ಸಾಧಿಸಿದ್ದು, ರಾಜ್ಯದ 31 ಜಿಲ್ಲೆಗಳ ಪೈಕಿ ಅಗ್ರಸ್ಥಾನ ಗಳಿಸಿದೆ.

ಮಂಡ್ಯ ಜಿಲ್ಲೆಯಲ್ಲಿ 5,04,016 ಕುಟುಂಬಗಳಿದ್ದು, 18,66,350 ಜನಸಂಖ್ಯೆಯಿದೆ. ಇದುವರೆಗೆ 18,29,582 ಮಂದಿಯನ್ನು ಸಮೀಕ್ಷೆ ಮಾಡಲಾಗಿದ್ದು, ಶೇ 98.03 ರಷ್ಟು ಪ್ರಗತಿ ಸಾಧಿಸಲಾಗಿದೆ.


ಸಾಂದರ್ಭಿಕ ಚಿತ್ರ

ತುಮಕೂರು (ಶೇ 97.03) ಮತ್ತು ಚಿಕ್ಕಮಗಳೂರು (ಶೇ 96.02) ಎರಡು ಮತ್ತು ಮೂರನೇ ಸ್ಥಾನದಲ್ಲಿವೆ. ಚಿತ್ರದುರ್ಗ, ಹಾವೇರಿ, ದಾವಣಗೆರೆ ಜಿಲ್ಲೆಗಳು ಕ್ರಮವಾಗಿ 4 ರಿಂದ 6ನೇ ಸ್ಥಾನದಲ್ಲಿವೆ. ಕೋಲಾರ (ಶೇ 83.72), ಬೀದರ್ (ಶೇ 83.32), ಯಾದಗಿರಿ (ಶೇ 83.02), ಬಳ್ಳಾರಿ (ಶೇ 82.19), ಧಾರವಾಡ (ಶೇ 80.96) ಈ ಐದೂ ಜಿಲ್ಲೆಗಳು ಕಡೆಯ ಸ್ಥಾನದಲ್ಲಿವೆ.

ರಾಜ್ಯದ 31 ಜಿಲ್ಲೆಗಳಲ್ಲಿ 1.48 ಕೋಟಿ ಕುಟುಂಬಗಳಿದ್ದು, ಇದರಲ್ಲಿ 1.43 ಕೋಟಿ ಕುಟುಂಬಗಳನ್ನು ಸಮೀಕ್ಷೆ ಮಾಡಲಾಗಿದೆ. 6.14 ಕೋಟಿ ಜನಸಂಖ್ಯೆಯಲ್ಲಿ ಇದುವರೆಗೆ 5.43 ಕೋಟಿ ಮಂದಿಯನ್ನು ಸಮೀಕ್ಷೆ ಮಾಡಲಾಗಿದ್ದು, ಶೇ 88.03ರಷ್ಟು ಪ್ರಗತಿಯಾಗಿದೆ ಎಂದು ಹಿಂದುಳಿದ ವರ್ಗಗಳ ಆಯೋಗದ ಜಾಲತಾಣದಲ್ಲಿ ಮಾಹಿತಿ ಲಭ್ಯವಾಗಿದೆ.

4,651 ಸಮೀಕ್ಷೆದಾರರ ನೇಮಕ: ಸಮೀಕ್ಷೆಗೆ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಮಂಡ್ಯ ನಗರದ ವಾರ್ಡ್ ನಂ.20ರಲ್ಲಿರುವ ಬಸವರಾಜು ಎಚ್.ಸಿ ಅವರ ಮನೆಯಿಂದ ಸೆ.22 ರಂದು ಚಾಲನೆ ನೀಡಿದ್ದರು. ಮಂಡ್ಯ ಜಿಲ್ಲೆಯಲ್ಲಿ 5,04,016 ಕುಟುಂಬಗಳಿದ್ದು, 4,651 ಸಮೀಕ್ಷೆದಾರರನ್ನು ನಿಯೋಜಿಸಲಾಗಿದೆ. ಒಬ್ಬ ಗಣತಿದಾರರಿಗೆ 120 ಕುಟುಂಬಗಳಂತೆ ಬ್ಲಾಕ್ ಹಂಚಿಕೆ ಮಾಡಲಾಗಿದೆ. 20 ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದೆ.

ಅ.31ರವರೆಗೆ ವಿಸ್ತರಣೆ: ಸೆ. 22ರಿಂದ ಅ.7ರೊಳಗೆ ಸಮೀಕ್ಷೆ ಪೂರ್ಣಗೊಳಿಸಲು ಒಟ್ಟು 16 ದಿನಗಳ ಗಡುವು ನೀಡಲಾಗಿತ್ತು. ಕೆಲವು ಜಿಲ್ಲೆಗಳಲ್ಲಿ ಸಮೀಕ್ಷೆ ಪೂರ್ಣಗೊಳ್ಳದ ಕಾರಣ ಸರ್ಕಾರ ಮತ್ತೆ ಅ.18ರವರೆಗೆ ದಿನಾಂಕ ವಿಸ್ತರಿಸಿತ್ತು ಮತ್ತೆ ಅ.31ರವರೆಗೆ ಸಮೀಕ್ಷೆ ಅವಧಿಯನ್ನು ಮುಖ್ಯಮಂತ್ರಿಯವರು ವಿಸ್ತರಣೆ ಮಾಡಿದ್ದಾರೆ. ದಸರಾ ರಜೆ ಕಳೆದು ಶಾಲೆಗಳು ಆರಂಭವಾಗಿರುವ ಕಾರಣ ಮುಂದಿನ 9 ದಿನ ನಡೆಯಲಿರುವ ಸಮೀಕ್ಷಾ ಕಾರ್ಯದಲ್ಲಿ ಶಿಕ್ಷಕರನ್ನು ಬಳಕೆ ಮಾಡಿಕೊಳ್ಳದಿರಲು ತೀರ್ಮಾನಿಸಲಾಗಿದೆ.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಮಂಡ್ಯ ಜಿಲ್ಲೆಯ 7 ತಾಲೂಕುಗಳ ಪೈಕಿ ನಾಗಮಂಗಲ, ಕೃಷ್ಣರಾಜಪೇಟೆ, ಮದ್ದೂರು, ಮಳವಳ್ಳಿ ಈ ನಾಲ್ಕು ತಾಲೂಕುಗಳು ಶೇ 100ರಷ್ಟು ಪ್ರಗತಿ ಸಾಧಿಸಿವೆ.

ಉಳಿದ ಮೂರು ತಾಲೂಕುಗಳಾದ ಪಾಂಡವಪುರ (ಶೇ 99.39), ಮಂಡ್ಯ (ಶೇ 95.17) ಶ್ರೀರಂಗಪಟ್ಟಣ (ಶೇ 93.81)ರಷ್ಟು ಪ್ರಗತಿ ಸಾಧಿಸಿವೆ.

ಮಲ್ಲೇನ ಹಳ್ಳಿ ಗ್ರಾಮದಲ್ಲಿ ಬೋನಿಗೆ ಬಿದ್ದ ಚಿರತೆ



ಕೆ.ಆರ್.ಪೇಟೆ, ಅ.25– ತಾಲೂಕಿನ ಮಲ್ಲೇನಹಳ್ಳಿ ಗ್ರಾಮದ ಬಳಿ ಹಲವು ದಿನಗಳಿಂದ ರೈತರಿಗೆ ಉಪಟಳ ನೀಡುತ್ತಿದ್ದ ಚಿರತೆಯು ಅರಣ್ಯ ಇಲಾಖೆಯು ಇರಿಸಿದ್ದ ಬೋನಿನಲ್ಲಿ ಸೆರೆಯಾಗಿದೆ.

ಮಲ್ಲೇನಹಳ್ಳಿ ಗ್ರಾಮದ ಸರ್ವೆ ನಂ.31 ರಲ್ಲಿರುವ ರಾಜೇಗೌಡರ ಮಗ ಮಂಜೇಗೌಡರಿಗೆ ಸೇರಿದ ಜಮೀನಿನಲ್ಲಿ ಹಲವು ದಿನಗಳಿಂದ ಚಿರತೆಯು ರೈತರಿಗೆ ಕಾಣಿಸಿಕೊಂಡಿದ್ದು ಆತಂಕ ಸೃಷ್ಟಿಸಿತ್ತು. ಈ ಹಿನ್ನೆಲೆಯಲ್ಲಿ ತಾಲೂಕು ಅರಣ್ಯ ಇಲಾಖೆಯ ಆರ್.ಎಫ್.ಓ. ಅನಿತಾ ನೇತೃತ್ವದಲ್ಲಿ ಶುಕ್ರವಾರ ರಾತ್ರಿ ಬೋನಿಟ್ಟು ಕಾರ್ಯಾಚರಣೆ ನಡೆಸಿದ್ದರು. ಶನಿವಾರ ಮುಂಜಾನೆ ಸುಮಾರು ಎರಡು ವರ್ಷ ಹೆಣ್ಣು ಚಿರತೆಯು ಬೋನಿನಲ್ಲಿ ಸೆರೆಯಾಗಿದೆ. ಇದರಿಂದ ಮಲ್ಲೇನಹಳ್ಳಿ, ಕುಂದನಹಳ್ಳಿ, ಬಿ.ಜಿ.ಕಾವಲು, ಬಂಡಿಹೊಳೆ, ಸಾಧುಗೋನಹಳ್ಳಿ ಮತ್ತಿತರ ಗ್ರಾಮಗಳ ರೈತರಲ್ಲಿ ಉಂಟಾಗಿದ್ದ ಆತಂಕ ದೂರವಾಗಿದೆ.

ಕಾರ್ಯಾಚರಣೆಯಲ್ಲಿ ತಾಲೂಕು ಅರಣ್ಯ ಸಂರಕ್ಷಣಾಧಿಕಾರಿ ಅನಿತಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ನಂದಕುಮಾರ್, ಪ್ರಶಾಂತ್, ಸಿಬ್ಬಂದಿ ವರ್ಗದವರಾದ ಸಂಜಯ್, ರಂಗಸ್ವಾಮಿ, ಶ್ರೀಧರ್, ಚಿರತೆ ಕ್ಷಿಪ್ರ ಕಾರ್ಯಪಡೆ ಸಿಬ್ಬಂದಿಗಳಾದ ಅಭಿಲಾಷ್, ನಿರಂಜನ್, ರಾಜೇಶ್, ಕಾರ್ತಿಕ್, ಕುಮಾರ್ ಮತ್ತಿತರರು ಭಾಗವಹಿಸಿದ್ದರು. ಬೋನಿನಲ್ಲಿ ಸೆರೆಯಾದ ಚಿರತೆಯನ್ನು ಬಂಡೀಪುರ ಚಿರತೆ ವನ್ಯಜೀವಿ ಅರಣ್ಯಕ್ಕೆ ಸುರಕ್ಷಿತವಾಗಿ ಬಿಡಲಾಯಿತು ಎಂದು ತಾಲೂಕು ಅರಣ್ಯ ಸಂರಕ್ಷಣಾಧಿಕಾರಿ ಅನಿತಾ ಅವರು ತಿಳಿಸಿದರು. ಈ ವೇಳೆ ಮಾತನಾಡಿದ ತಾಲೂಕು ಅರಣ್ಯ ಸಂರಕ್ಷಣಾಧಿಕಾರಿ ಅನಿತಾ ಅವರು ತಾಲ್ಲೂಕಿನಲ್ಲಿ ಯಾವುದೇ ಚಿರತೆಗಳು ಕಾಣಿಸಿಕೊಂಡರೂ ತಕ್ಷಣ ನಮ್ಮ ಅರಣ್ಯ ಇಲಾಖೆಗೆ ಮಾಹಿತಿ ನೀಡಬೇಕು. ಇಲಾಖೆಯು ಬೇಗನೆ ಸ್ಥಳಕ್ಕೆ ಬಂದು ತಕ್ಷಣ ಕ್ರಮ ಕೈಗೊಂಡು ಚಿರತೆಯನ್ನು ಹಿಡಿದು ವನ್ಯಜೀವಿ ಅರಣ್ಯಕ್ಕೆ ಬಿಡಲು ಸೂಕ್ತ ಕ್ರಮವಹಿಸುತ್ತೇವೆ ಎಂದು ತಿಳಿಸಿದರು.

ವೈದ್ಯನಾಥೇಶ್ವರ ದೇಗುಲದಲ್ಲಿ ಕಾರ್ತಿಕ ಮಾಸ ಪೂಜಾ ಕಾರ್ಯಕ್ರಮ

ಮದ್ದೂರು, ಅ.25– ತಾಲೂಕಿನ ವೈದ್ಯನಾಥಪುರ ಗ್ರಾಮದ ಪುರಾಣ ಪ್ರಸಿದ್ಧ ಶ್ರೀ ವೈದ್ಯನಾಥೇಶ್ವರಸ್ವಾಮಿಯವರ ದೇವಸ್ಥಾನದಲ್ಲಿ ಕಾರ್ತಿಕ ಸೋಮವಾರಗಳಂದು ವಿಶೇಷ ಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಪ್ರಸನ್ನ ಪಾರ್ವತಾಂಭ ವೈದ್ಯನಾಥೇಶ್ವರ ಟ್ರಸ್ಟ್ ಅಧ್ಯಕ್ಷ ವಿ.ಟಿ.ಶಿವರಾಜ್ ತಿಳಿಸಿದ್ದಾರೆ. ಅ.27, ನ.3, 10 ಹಾಗೂ 17ರ ಕಾರ್ತೀಕ ಸೋಮವಾರದಂದು ದೇಗುಲದಲ್ಲಿ ಮುಂಜಾನೆಯಿಂದಲೇ ವಿಶೇಷ ಪೂಜೆ ಹಾಗೂ ಸಹಸ್ರಾರು ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ಹಮ್ಮಿಕೊಳ್ಳಲಾಗಿದೆ ಹಾಗೂ ಮದ್ದೂರಿನಿಂದ ವೈದ್ಯನಾಥಪುರ ಗ್ರಾಮಕ್ಕೆ ಬರಲು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಿಂದ ವಿಶೇಷ ಬಸ್ ಸೌಲಭ್ಯವನ್ನು ಏರ್ಪಡಿಸಲಾಗಿದ್ದು, ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಶ್ರೀ ಪ್ರಸನ್ನ ಪಾರ್ವತಾಂಭ ವೈದ್ಯನಾಥೇಶ್ವರ ಟ್ರಸ್ಟ್‌ನ ಮಹಾಪೋಷಕರು, ಧರ್ಮದರ್ಶಿಗಳು ಹಾಗೂ ವೈದ್ಯನಾಥಪುರ ಗ್ರಾಮಸ್ಥರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಸಾಲಬಾಧೆ: ಲಕ್ಷ್ಮಿಸಾಗರದಲ್ಲಿ ರೈತ ಅತ್ಮಹತ್ಯೆ



ಪಾಂಡವಪುರ: ಸಾಲಬಾಧೆ ತಾಳಲಾರದೆ ರೈತನೋರ್ವ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಲಕ್ಷ್ಮೀಸಾಗರ ಗ್ರಾಮದಲ್ಲಿ ಶನಿವಾರ ಬೆಳಿಗ್ಗೆ ನಡೆದಿದೆ.

ಗ್ರಾಮದ ಎಲ್.ಎಸ್.ಧನ್ಯಕುಮಾರ್(54) ಮೃತ ರೈತ. ಮೃತ ರೈತ ಎಲ್.ಎಸ್.ಧನ್ಯಕುಮಾರ್ ಅವರಿಗೆ 1 ಎಕರೆ ಜಮೀನಿದ್ದು ಕೃಷಿಯ ಚಟುವಟಿಕೆ ಮೂಲಕವೇ ಜೀವನ ನಿರ್ವಹಣೆ ಮಾಡುತ್ತಿದ್ದರು ಎನ್ನಲಾಗಿದೆ. ಕೃಷಿ ಚಟುವಟಿಕೆಗಾಗಿ ಬ್ಯಾಂಕ್ ಸೇರಿ ದಂತೆ ಕೈಸಾಲ ಮಾಡಿಕೊಂಡಿದ್ದರು ಎನ್ನಲಾಗಿದೆ. ಇವರು ವಿಎಸ್‌ಎಸ್‌ಎನ್‌ಬಿಯಲ್ಲಿ 60 ಸಾವಿರ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಲ್ಲಿ 1.50 ಲಕ್ಷ, ಉಜ್ಜೀವನ್ ಬ್ಯಾಂಕ್ 60 ಸಾವಿರ, ಎಲ್‌ಆಂಡ್‌ಟಿ ಸಂಸ್ಥೆಯಲ್ಲಿ 50 ಸಾವಿರ ಸಾಲ ಮಾಡಿಕೊಂಡಿದ್ದರು ಎನ್ನಲಾಗಿದೆ. ಇದರ ಜತೆಗೆ ಕೈಸಾಲವನ್ನು ಸಹ ಮಾಡಿಕೊಂಡಿದ್ದರು, ಇತ್ತೀಚಿನ ದಿನಗಳಲ್ಲಿ ಸಾಲಗಾರರ ಕಾಟ ಹೆಚ್ಚಾದ ಹಿನ್ನೆಲೆಯಲ್ಲಿ ಶನಿವಾರ ಬೆಳಗ್ಗೆ ಮನೆಯ ಪಕ್ಕದಲ್ಲಿ ಇರುವ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಮೃತರಿಗೆ ಪತ್ನಿ ಸವಿತ, ಓರ್ವ ಪುತ್ರ, ಪುತ್ರಿ ಇದ್ದಾರೆ. ಘಟನೆ ಸಂಬಂಧ ಪತ್ನಿ ಸವಿತ ಮೇಲುಕೋಟೆ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಸ್ಥಳಕ್ಕೆ ಆಗಮಿಸಿದ ಪೊಲೀಸರು ಸ್ಥಳ ಪರಿಶೀಲನೆ ನಡೆಸಿ ಪಾಂಡವಪುರ ಸಾರ್ವಜನಿಕ ಆಸ್ಪತ್ರೆಯಲ್ಲಿ ಶವಪರೀಕ್ಷೆ ನಡೆಸಿ ವಾರಸುದಾರರಿಗೆ ಒಪ್ಪಿಸಿದ್ದಾರೆ. ಮೇಲುಕೋಟೆ ಠಾಣೆಯಲ್ಲಿ ದೂರು ದಾಖಲಾಗಿದೆ.

ಉಚಿತ ಆರೋಗ್ಯ ತಪಾಸಣೆ; ರಕ್ತದಾನ ಶಿಬಿರ

ಮದ್ದೂರು: ರೋಟರಿ ಮದ್ದೂರು, ಅನನ್ಯ ಹಾರ್ಟ್ ಸಂಸ್ಥೆ ಮಂಡ್ಯ, ರೆಡ್ ಕ್ರಾಸ್ ಮಂಡ್ಯ, ಮಂಡ್ಯ ಜಿಲ್ಲಾ ಸ್ತ್ರೀರೋಗ ಮತ್ತು ಪ್ರಸೂತಿ ವೈದ್ಯರುಗಳ ಸಂಘದ ವತಿಯಿಂದ ಅ.28 ರಂದು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ನಗರ ಜಿ.ಪಿ.ಎಸ್ ಕನ್ವೆನ್ಷನ್ ಹಾಲ್ (ಕೆಮ್ಮಣ್ಣುನಾಲೆ ಸರ್ಕಲ್ ಬಳಿ) ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ.

ನುಲಿಯ ಚಂದಯ್ಯ ಸಮುದಾಯ ಭವನ ನಿರ್ಮಾಣ

ನಾಗಮಂಗಲ, ಅ.25– ಜಿಲ್ಲಾ ಕೇಂದ್ರದಲ್ಲಿ ನುಲಿಯ ಚಂದ್ರಯ್ಯ ಸಮುದಾಯ ಭವನ ನಿರ್ಮಿಸಲು ಮುಡಾ ವ್ಯಾಪ್ತಿಯಲ್ಲಿ ಸೂಕ್ತ ನಿವೇಶನ ಕೊಡಿಸಲು ಅಗತ್ಯ ಕ್ರಮ ವಹಿಸಲಾಗುವುದೆಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಭರವಸೆ ನೀಡಿದರು.


ಸಮಾರಂಭದಲ್ಲಿ ಸಾಧಕರನ್ನು ಸಚಿವ ಚಲುವರಾಯಸ್ವಾಮಿ ಅಭಿನಂದಿಸಿದರು.

ಪಟ್ಟಣದ ಶಿಕ್ಷಕರ ಭವನದಲ್ಲಿ ಏರ್ಪಡಿಸಿದ್ದ ಜಿಲ್ಲಾಡಳಿತ, ಕನ್ನಡ ಸಂಸ್ಕೃತಿ ಇಲಾಖೆ ಹಾಗೂ ನಾಗಮಂಗಲ ತಾಲೂಕು ಆಡಳಿತ ಜೊತೆಗೂಡಿ ಆಯೋಜಿಸಿದ್ದ ನುಲಿಯ ಚಂದಯ್ಯ ಜಯಂತಿಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಾತಿ ವ್ಯವಸ್ಥೆಯನ್ನು ಹೋಗಲಾಡಿಸಿ ನಾಡಿನ ಜನರಿಗೆ ಉತ್ತಮ ಸಂಸ್ಕಾರ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಸಮಾಜವನ್ನು ಒಟ್ಟಿಗೆ ಕೊಂಡೊಯ್ಯುವ ಸಿದ್ಧಾಂತದೊಂದಿಗೆ ಬಸವಣ್ಣನವರ ತತ್ವದಂತೆ ಹೋರಾಟ ನಡೆಸುವ ಸಂದೇಶ ಕೊಟ್ಟ ನುಲಿಯ ಚಂದಯ್ಯ ಮಹಾನ್ ಶರಣರು ಇಂತಹ ಮಹಾನ್ ವ್ಯಕ್ತಿಯ ಜಯಂತಿ ಆಚರಿಸುವ ಮೂಲಕ ಸ್ಮರಿಸದಿದ್ದರೆ ಅವರ ಹೆಸರನ್ನು ಮರೆತು ಹೋಗುತ್ತೇವೆ. ತಳ ಸಮುದಾಯಕ್ಕೆ ಹೆಚ್ಚು ಶಕ್ತಿ ತುಂಬುವ ಸಲುವಾಗಿ ಸರ್ಕಾರ ಪ್ರತಿಯೊಬ್ಬ ಮಹನೀಯರ ಜಯಂತಿಯನ್ನು ಆಚರಣೆಗೆ ತಂದಿದೆ ಎಂದರು.

ರಾಜ್ಯ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಹೊರತುಪಡಿಸಿ ಸಮುದಾಯದ ಎಲ್ಲಾ ಸಮಸ್ಯೆಗಳನ್ನು ಹಂತ ಹಂತವಾಗಿ ಬಗೆಹರಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು. ಸಮಾಜದ ಕಟ್ಟ ಕಡೆಯ ಸಮುದಾಯಗಳನ್ನು ಗಮನದಲ್ಲಿಟ್ಟುಕೊಂಡು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಎಲ್ಲಾ ಸಮುದಾಯಗಳಿಗೆ ಶಕ್ತಿ ತುಂಬುವ ನಿರಂತರವಾಗಿ ಜನಪರ ಕಾರ್ಯಕ್ರಮವನ್ನು ನೀಡುತ್ತಿದೆ. ಎಲ್ಲರ ಸಮಸ್ಯೆಗಳನ್ನು ಒಂದೇ ಬಾರಿಗೆ ಪರಿಹರಿಸಲು ಸಾಧ್ಯವಿಲ್ಲ. ಹಂತ ಹಂತವಾಗಿ ಬಗೆಹರಿಸಬೇಕಾಗುತ್ತದೆ ಎಂದರು.

ಇದಕ್ಕೂ ಮುನ್ನ ನುಲಿಯ ಚಂದಯ್ಯ ಅವರ ಭಾವಚಿತ್ರವಿರುವ ಬೆಳ್ಳಿ ಮಾದರಿಯ ಸಾರೋಟಿನಲ್ಲಿ ಇರಿಸಿ ಪೂರ್ಣ ಕುಂಭ ಸ್ವಾಗತ ಹಾಗೂ ವಿವಿಧ ಜನಪದ ಕಲಾ ತಂಡಗಳೊಂದಿಗೆ ತಾಲೂಕು ಆಡಳಿತ ಸಹೋದರಿಯಿಂದ ಶಿಕ್ಷಕರ ಭವನದ ವರೆಗೆ ಮೆರವಣಿಗೆ ನಡೆಸಲಾಯಿತು.

ಎಸ್ಸಿ ಎಸ್ಟಿ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ ಪಲ್ಲವಿ, ಮಾಜಿ ಶಾಸಕ ಜಿ.ಚಂದ್ರಣ್ಣ ತಹಸಿಲ್ದಾರ್ ಆದರ್ಶ, ಬಿಇಓ ಲೋಕೇಶ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ವೆಂಕಟೇಶ್, ಅರಣ್ಯ ಅಧಿಕಾರಿ ಸಂಪತ್ ಪಾಟೀಲ್ ಉಪಸ್ಥಿತರಿದ್ದರು.

ವೈಭವದ ಲಕ್ಷ್ಮೀದೇವಿ ಸಿಡಿಲು ಕಲ್ಲು ಜಾತ್ರೆ



ಕೆ.ಆರ್.ಪೇಟೆ,ಅ.25– ತಾಲೂಕಿನ ಸಂತೇಬಾಚಹಳ್ಳಿ ಹೋಬಳಿಯ ಗಡಿಯಲ್ಲಿರುವ ದಡಿಘಟ್ಟ ಗ್ರಾಮದ ಗ್ರಾಮದೇವತೆ ಶ್ರೀ ಲಕ್ಷ್ಮೀದೇವಿ (ದಡಿಘಟ್ಟದಮ್ಮ) ಅಮ್ಮನವರ ಸಿಡಿಲುಕಲ್ಲು ಜಾತ್ರೆಯು ವಿಜೃಂಭಣೆಯಿಂದ ನಡೆಯಿತು.

ಈ ಭಾಗದ ಶಕ್ತಿ ದೇವತೆಯಾಗಿರುವ ಶ್ರೀ ದಡಿಘಟ್ಟದಮ್ಮನವರನ್ನು ಚಲ್ಯ, ಕುಂಭೇನಹಳ್ಳಿ, ದಡಿಘಟ್ಟ ಗ್ರಾಮಗಳಲ್ಲಿ ಮೆರವಣಿಗೆ ಮಾಡಿ, ವಿಶೇಷ ಪೂಜೆ ಸಲ್ಲಿಸಿ ಕೆ.ಆರ್.ಪೇಟೆ, ನಾಗಮಂಗಲ, ಚನ್ನರಾಯಪಟ್ಟಣ ತಾಲೂಕುಗಳಿಗೆ ಹೊಂದಿಕೊಂಡಂತೆ ಇರುವ ದಡಿಘಟ್ಟ ಗ್ರಾಮದಿಂದ 2 ಕಿ.ಮೀ ದೂರದಲ್ಲಿರುವ ಸಿಡಿಲುಕಲ್ಲು ಜಾತ್ರಾಮಾಳದಲ್ಲಿರುವ ದೇವರ ಮಂಟಪದಲ್ಲಿ ಮಧ್ಯಾಹ್ನ 3 ಗಂಟೆಯಿಂದ ಸಂಜೆ 6ಗಂಟೆಯವರೆವಿಗೂ ಶ್ರೀ ಲಕ್ಷ್ಮೀದೇವಿ ಮತ್ತು ಮೈಲಾರಲಿಂಗೇಶ್ವರ, ಶ್ರೀ ದೊಡ್ಡಯ್ಯ ಸ್ವಾಮಿ, ಶ್ರೀ ಚಿಕ್ಕಯ್ಯ ಸ್ವಾಮಿ ದೇವರುಗಳಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಮಂಡ್ಯ, ಹಾಸನ ಜಿಲ್ಲೆಗಳ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾವಿರಾರು ಭಕ್ತಾಧಿಗಳು ಹಣ್ಣು ಕಾಯಿ ಸಮರ್ಪಿಸಿ ಪೂಜೆ ಸಲ್ಲಿಸಿ ದೇವರ ದರ್ಶನ ಮಾಡಿ ಪುನೀತರಾದರು. ಶ್ರೀಲಕ್ಷ್ಮೀದೇವಿಯು ಹೆಣ್ಣು ಮಕ್ಕಳು ಪರಸ್ಪರ ಕೈಹಿಡಿದು ಉಪ್ಪುಪ್ಪೆ ಕುಣಿತ ಕುಣಿಯಲು ಆರಂಭಿಸಿದಾಗ ದೇವರು ಸಹ ಹೆಣ್ಣು ಮಕ್ಕಳ ಹೆಜ್ಜೆಯೊಂದಿಗೆ ಮೆರವಣಿಗೆಯಲ್ಲಿ ಸಾಗಿದ್ದು ವಿಶೇಷವಾಗಿತ್ತು. ಸಿಡಲುಕಲ್ಲು ಜಾತ್ರೆಗೆಂದು ತವರಿಗೆ ಬಂದಿದ್ದ ನೂರಾರು ಇದು ಹೆಣ್ಣು ಮಕ್ಕಳನ್ನು ಇದು ಸಂತೋಷಪಡಿಸಿತು.

ಜಾತ್ರಾ ಮಹೋತ್ಸವದ ನೇತೃತ್ವವನ್ನು ದಡಿಘಟ್ಟ ಗ್ರಾಮದ ಶ್ರೀ ಲಕ್ಷ್ಮೀದೇವಿ ಯುವಕರ ಸಂಘ ಹಾಗೂ ಗ್ರಾಮದ ಮುಖಂಡರು ವಹಿಸಿಕೊಂಡು ಯಶಸ್ವಿಯಾಗಿ ನಡೆಸಿಕೊಟ್ಟರು.

ಮೂರನೇ ಪುಟದಿಂದ

ಟಿಪ್ಪರ್–ಕಾರು ಡಿಕ್ಕಿ: ದಂಪತಿ ಸಾವು

ಮಲೇಷಿಯಾ ಪ್ರವಾಸ ಮುಗಿಸಿಕೊಂಡು ಶುಕ್ರವಾರ ರಾತ್ರಿ ಬೆಂಗಳೂರಿಗೆ ವಿಮಾನದಲ್ಲಿ ಆಗಮಿಸಿ ಮಧ್ಯರಾತ್ರಿ ಬಸ್ಸಿನಲ್ಲಿ ಆಗಮಿಸಿದ ಇವರು ಮೈಸೂರಿನಲ್ಲಿದ್ದ ಕಾರಿನಲ್ಲಿ ಊರಿಗೆ ಹೋಗುವಾಗ ಮಾದಾಪಟ್ಟಣ ಗೇಟ್ ಸಮೀಪ ಎದುರಾದ ಟಿಪ್ಪರ್‌ಗೆ ಡಿಕ್ಕಿ ಹೊಡೆದಿದೆ ಘಟನೆ ನಡೆದ ಕೂಡಲೇ ಟಿಪ್ಪರ್ ಬಿಟ್ಟು ಚಾಲಕ ಪರಾರಿಯಾಗಿದ್ದಾನೆ. ಈತನ ಪತ್ತೆಗೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಡಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣ ನಜ್ಜು ಗುಜ್ಜಾಗಿದ್ದು ಕಾರು ಚಾಲನೆ ಮಾಡುತ್ತಿದ್ದ ಬಷೀರ್ ದೇಹ ಅಪ್ಪಚ್ಚಿಯಾಗಿದೆ. ಮುಂದಿನ ಸೀಟಿನಲ್ಲಿ ಕುಳಿತಿದ್ದ ನಾಶಿಮಾ ಜತೆ ಕಾರಿನ ಬಾಗಿಲು ಕಿತ್ತು ರಸ್ತೆಯ ನಡುವೆ ಬಿದ್ದಿದೆ. ಹಿಂದಿನ ಸೀಟಿನಲ್ಲಿ ಕುಳಿತಿದ್ದ ಅವರ ಮಗು ಅಜೀಂ ಹಾಗೂ ಮತ್ತಿಬ್ಬರ ಸ್ಥಿತಿ ಗಂಭೀರವಾಗಿದೆ. ಕೂಡಲೇ ಸ್ಥಳಕ್ಕೆ ಧಾವಿಸಿದ ಬೇಗೂರು ಪೊಲೀಸರು ಗಾಯಾಳುಗಳನ್ನು ನೇರವಾಗಿ ಮೈಸೂರಿನ ಅಪೊಲೋ ಆಸ್ಪತ್ರೆಗೆ ಕರೆದೊಯ್ದರು. ದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಆಸ್ಪತ್ರೆಗೆ ಕೊಂಡೊಯ್ದರು. ಅಪಘಾತಕ್ಕೀಡಾದ ವಾಹನಗಳನ್ನು ಸ್ಥಳಾಂತರಿಸಿ ಹೆದ್ದಾರಿಯಲ್ಲಿ ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ಪಾರು ಮಾಡಿದ ಪುಟಿನ್

ಶಾಶ್ವತವಾಗಿ ಚೀನಾ–ಭಾರತವನ್ನು ದೂರ ಮಾಡುವ ಮತ್ತು ಭಾರತದಲ್ಲಿ ಈಗಿನ ದೃಢ ಸರ್ಕಾರವನ್ನು ತೆಗೆದು ಅರಾಜಕತೆ ಉಂಟುಮಾಡಿ ತನ್ನ ಮಾತು ಕೇಳುವ ಸರ್ಕಾರವನ್ನು ಸ್ಥಾಪಿಸಬಹುದು ಎಂಬುದು ಈ ಯೋಜನೆಯ ಹಿಂದಿನ ಲೆಕ್ಕಾಚಾರವಾಗಿತ್ತು ಆದರೆ ರಷ್ಯಾ–ಭಾರತ ಜಂಟಿಯಾಗಿ ಈ ಲೆಕ್ಕಾಚಾರ ತಲೆಕೆಳಗೆ ಮಾಡಿದವು ಎಂದು ಹೇಳಲಾಗುತ್ತಿದೆ. ಮೋದಿ ಅವರನ್ನು ಹತ್ಯೆ ಮಾಡಲು ಬಂದಿದ್ದ ಏಜೆಂಟ್ ನಿಗೂಢವಾಗಿ ಬಾಂಗ್ಲಾದೇಶದ ಹೊಟೆಲ್‌ನಲ್ಲಿ ಸಾವಿಗೀಡಾಗಿದ್ದಾನೆ. ಈ ಮೂಲಕ ಸಿಐಎ ಲೆಕ್ಕಾಚಾರವನ್ನು ಭಾರತದರಾ ಸಂಪೂರ್ಣವಾಗಿ ತಲೆಕೆಳಗೆ ಮಾಡಿದೆ. ಇದಕ್ಕೆ ಪೂರಕವೆಂಬಂತೆ ಚೀನಾದಲ್ಲಿ ನಡೆದ ಕೆಲವು ಘಟನೆಗಳು ಹೊಂದಾಣಿಕೆಯಾಗುತ್ತಿವೆ. ಮೋದಿ ಇದ್ದ ಹೊಟೆಲ್‌ಗೆ ರಷ್ಯಾ ಅಧ್ಯಕ್ಷ ಪುಟಿನ್ ಭೇಟಿ ನೀಡಿದ್ದು, ಯಾರಿಗೂ ಯಾವತ್ತೂ ಕಾಯದ ಪುಟಿನ್ ಮೋದಿಗಾಗಿ ಕಾದು ಅವರನ್ನು ತಮ್ಮ ಕಾರಿನಲ್ಲೇ ಶೃಂಗಸಭೆ ನಡೆಯುತ್ತಿದ್ದ ಸ್ಥಳಕ್ಕೆ ಒಟ್ಟಿಗೆ ಕರೆದೊಯ್ದಿದ್ದು, ಇವೆಲ್ಲವೂ ಹತ್ಯೆಯ ಸಂಚನ್ನು ವಿಫಲಗೊಳಿಸಿದ್ದ ಪ್ರತಿತಂತ್ರದ ಭಾಗವೆಂದು ವಿಶ್ಲೇಷಿಸಲಾಗುತ್ತಿದೆ. ಇದಷ್ಟೇ ಅಲ್ಲದೇ ಮೋದಿ ದೃಢಪಡಿಸಿದ ಮತ್ತೊಂದು ಹೇಳಿಕೆಯು ಮೇಲಿನ ಊಹಾಪೋಹಗಳಿಗೆ ಮತ್ತಷ್ಟು ಬಲವನ್ನು ನೀಡುತ್ತದೆ. ಸೆ.2ರಂದು, ಚೀನಾದ ಟಿಯಾಂಜಿನ್‌ನಿಂದ ಹಿಂದಿರುಗಿದ ಮರುದಿನ, ಪ್ರಧಾನಿ ಮೋದಿ ನವದೆಹಲಿಯಲ್ಲಿ ನಡೆದ ಸೆಮಿಕಾನ್ ಶೃಂಗಸಭೆಯನ್ನು ಉದ್ದೇಶಿಸಿ ಒಗಟಾಗಿ ಮಾತನಾಡಿದ್ದರು. 'ನಾನು ಚೀನಾಕ್ಕೆ ಹೋಗಿದ್ದರಿಂದ ನೀವು ಚಪ್ಪಾಳೆ ತಟ್ಟುತ್ತಿದ್ದೀರಾ ಅಥವಾ ನಾನು ಹಿಂತಿರುಗಿದ್ದರಿಂದ ನೀವು ಚಪ್ಪಾಳೆ ತಟ್ಟುತ್ತಿದ್ದೀರಾ?' ಎಂದು ಪ್ರಧಾನಿ ಮೋದಿ ಗೂಢಾರ್ಥದಲ್ಲಿ ಕೇಳಿದರು. ವಿಶ್ಲೇಷಕರ ಪ್ರಕಾರ ಪ್ರಧಾನಿ ಮೋದಿಯವರ ಈ ನಿಗೂಢ ಹೇಳಿಕೆಗಳು ಗಂಭೀರ ಸಂದೇಶವಾಗಿತ್ತು. ಇದು ಪ್ರಧಾನಿ ಎದುರಿಸುತ್ತಿರುವ ಜೀವ ಬೆದರಿಕೆಗಳ ಬಗ್ಗೆ ಸಂದೇಶಗಳನ್ನು ಒಳಗೊಂಡಿತ್ತು ಎಂದು ಹೇಳಲಾಗುತ್ತಿದೆ.

ಸಹೋದರರು ಜಲಸಮಾಧಿ

ನೀರು ರಭಸವಾಗಿ ಹರಿಯುತ್ತಿರುವುದರಿಂದ ಬಾಲಕನ ರಕ್ಷಣೆಗೆ ಕಾಲುವೆಗಿಳಿದ ನಂದನ್ ಮತ್ತು ರವಿ ನೀರಿನ ಸೆಳೆತಕ್ಕೆ ಸಿಲುಕಿದ್ದಾರೆ. ದುರದೃಷ್ಟವಶಾತ್, ಇಬ್ಬರಿಗೂ ಈಜು ಬರುತ್ತಿತ್ತಾದರೂ ರಭಸವಾಗಿ ಹರಿಯುತ್ತಿದ್ದ ನೀರಿನ ಸೆಳೆತದಿಂದ ತಪ್ಪಿಸಿಕೊಳ್ಳಲಾಗದೆ ಕೊಚ್ಚಿಕೊಂಡು ಹೋಗಿದ್ದಾರೆ.

ಅಣ್ಣ–ತಮ್ಮಂದಿರು ನೀರಿನಲ್ಲಿ ಕೊಚ್ಚಿಕೊಂಡು ಹೋಗುತ್ತಿರುವುದನ್ನು ಗಮನಿಸಿದ ಆ ಬಾಲಕ ಕಾಲುವೆ ಏರಿಯ ಮೇಲೆ ನಿಂತು ಕೂಗಿಕೊಂಡು ಗ್ರಾಮಸ್ಥರಿಗೆ ವಿಷಯ ತಿಳಿಸಿದ್ದಾನೆ. ಅಷ್ಟರಲ್ಲಾಗಲೇ ಇಬ್ಬರು ನೀರಿನಲ್ಲಿ ನಾಪತ್ತೆಯಗಿದ್ದಾರೆ. ಕೂಡಲೇ ನಾಲೆಗೆ ಬರುವ ನೀರನ್ನು ನಿಲ್ಲಿಸುವಂತೆ ಕೋರಿಕೊಂಡ ಹಿನ್ನೆಲೆಯಲ್ಲಿ ಮುಖ್ಯ ಕಾಲುವೆಯಿಂದ ಉಪ ಕಾಲುವೆಗೆ ಹರಿಯುವ ನೀರನ್ನು ಕಡಿಮೆ ಮಾಡಲಾಯಿತು. ಬಳಿಕ ಇಬ್ಬರ ಮೃತದೇಹ ಘಟನಾ ಸ್ಥಳದಿಂದ 500ರಿಂದ 600 ಮೀಟರ್ ಅಂತರದಲ್ಲಿ ನಾಲೆಯಲ್ಲಿ ಪತ್ತೆಯಾಗಿದೆ. ಮೈಸೂರು ಗ್ರಾಮಾಂತರ ವೃತ್ತ ಸರ್ಕಲ್ ಇನ್ಸ್‌ಪೆಕ್ಟರ್ ಶಿವನಂಜನಶೆಟ್ಟಿ, ವರುಣಾ ಠಾಣೆ ಸಬ್ ಇನ್ಸ್‌ಪೆಕ್ಟರ್ ಸದಾಶಿವ ತಿಪ್ಪಾರೆಡ್ಡಿ ಸ್ಥಳಕ್ಕೆ ಆಗಮಿಸಿ ಮಹಜರ್ ನಡೆಸಿದರು. ಬಳಿಕ ಯುವಕರ ಪೋಷಕ ರಿಂದ ಹೇಳಿಕೆ ಪಡೆದು ಪ್ರಕರಣ ದಾಖಲಿಸಿಕೊಂಡು ಮೃತದೇಹವನ್ನು ಮೈಸೂರು ಮೆಡಿಕಲ್ ಕಾಲೇಜಿನ ಶವಾಗಾರಕ್ಕೆ ಸ್ಥಳಾಂತರಿಸಿದರು. ಭಾನುವಾರ(ಅ.26) ಬೆಳಗ್ಗೆ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ದೇಹವನ್ನು ವಾರಸುದಾರರಿಗೆ ಹಸ್ತಾಂತರಿಸಲಾಗುತ್ತದೆ. ಅಂತ್ಯಕ್ರಿಯೆ ಭಾನುವಾರ ಮಧ್ಯಾಹ್ನದ ನಂತರ ನೆರವೇರಲಿದೆ.

ಪೋಷಕರ ಆಕ್ರಂದನ

ನಾಲೆಯಲ್ಲಿ ಮುಳುಗಿ ಸಹೋದರರು ಮೃತಪಟ್ಟ ವಿಷಯ ತಿಳಿದು ಈ ಇಬ್ಬರ ಪೋಷಕರು ಹಾಗೂ 15 ದಿನದ ಹಿಂದಷ್ಟೇ ವಿವಾಹವಾಗಿದ್ದ ನಂದನ್ ಪತ್ನಿ ಆಕ್ರಂದನ ಮುಗಿಲು ಮುಟ್ಟಿತ್ತು. ಇಬ್ಬರ ಸಾವಿನಿಂದ ಗ್ರಾಮದಲ್ಲಿ ಶೋಕ ಮಡುಗಟ್ಟಿದ್ದು, ಗ್ರಾಮಸ್ಥರು ಮರುಕ ವ್ಯಕ್ತಪಡಿಸಿದ್ದಾರೆ.

ಆರ್‌ಎಸ್‌ಎಸ್ ನಿಯಂತ್ರಿಸುವುದು ರಾಜ್ಯ ಸರ್ಕಾರದಲ್ಲಿರುವ ಎಲ್ಲರ ಉದ್ದೇಶವಲ್ಲ; ಕೆಲವರ ಅಜೆಂಡಾ ಅಷ್ಟೆ

ಸರ್ಕಾರಿ ನೌಕರರು ಆರ್‌ಎಸ್‌ಎಸ್ ಚಟುವಟಿಕೆಗಳಲ್ಲಿ ಭಾಗವಹಿಸದಂತೆ ಕಡಿವಾಣಕ್ಕೂ ಮುಂದಾಗಿದೆ. ಇದರ ಬಗ್ಗೆ ನಿಮ್ಮ ಅಭಿಪ್ರಾಯವೇನು? ಎಂದು ಪ್ರಶ್ನಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಡಾ.ರಾಮ್ ಮಾಧವ್, ಅವರಿಗೆ ಶುಭವಾಗಲಿ ಎಂದು ವ್ಯಂಗ್ಯವಾಡಿದರಲ್ಲದೆ, ಇಡೀ ಕಾಂಗ್ರೆಸ್ ಸರ್ಕಾರದಲ್ಲಿರುವ ಎಲ್ಲರೂ ಈ ನಿಟ್ಟಿನಲ್ಲಿ ಆಲೋಚಿಸುತ್ತಿಲ್ಲ ಎಂಬುದು ನನಗೆ ತಿಳಿದಿದೆ. ಕೆಲ ನಾಯಕರು ಇದನ್ನು ಬಹುಶಃ ತಮ್ಮ ವೈಯಕ್ತಿಕ ಅಜೆಂಡಾವಾಗಿಟ್ಟುಕೊಂಡು ಈ ನಿಟ್ಟಿನಲ್ಲಿ ಮುಂದಾಗಿದ್ದಾರೆ. ಜೊತೆಗೆ ನಮ್ಮ ಸಂಘಟನೆ ಐತಿಹಾಸಿಕವಾಗಿ ಇಂತಹ ಸಂದರ್ಭಗಳನ್ನು ಸಮರ್ಥವಾಗಿ ಎದುರಿಸಿದೆ. ನನ್ನ ಅನುಭವದ ಆಧಾರದಲ್ಲಿ ಹೇಳುವುದಾದರೆ ಇದರ ಹಿಂದೆ ರಾಜಕೀಯ ಉದ್ದೇಶ ಹೊರತಾಗಿ ಬೇರೇನೂ ಇಲ್ಲ ಎಂದರು.

ಆರ್‌ಎಸ್‌ಎಸ್‌ಗೆ ಕಡಿವಾಣ ಹಾಕುವುದು ಕೆಲವರ ಆಂತರಿಕ ಅಜೆಂಡಾ ಇರಬಹುದು. ಆದರೆ ಆರ್‌ಎಸ್‌ಎಸ್ ಇಂತಹ ಸವಾಲುಗಳ ವಿರುದ್ಧ ಸೆಣಸುವಲ್ಲಿ ಸಮರ್ಥವಾಗಿದೆ. ಅವರಲ್ಲೇ ಹಲವರು(ಕಾಂಗ್ರೆಸ್ ಸರ್ಕಾರದವರು) ಆರ್‌ಎಸ್‌ಎಸ್ ಒಳ್ಳೆಯ ಕೆಲಸ ಮಾಡುತ್ತಿದೆ. ಆದರೆ ನಮಗೆ ನಮ್ಮದೇ ರಾಜಕೀಯ ಉದ್ದೇಶ ಇದೆಯಲ್ಲ ಎಂದು ವೈಯಕ್ತಿಕವಾಗಿ ಹೇಳುತ್ತಾರೆ. ಅದಕ್ಕಾಗಿಯೇ ನಾನು ಶುಭವಾಗಲಿ ಎಂದು ಹೇಳಿದ್ದು ಎಂದು ಲೇವಡಿ ಮಾಡಿದರು.

ನಾನು ಒಂದು ವಿಷಯ ಸ್ಪಷ್ಟಪಡಿಸುತ್ತೇನೆ, ನಮ್ಮ ಸಂಘಟನೆ ಮೂರು ಬಾರಿ ನಿಷೇಧವನ್ನು ಎದುರಿಸಿದೆ. 1980ರಲ್ಲಿ ಇಂದಿರಾ ಗಾಂಧಿಯವರ ಮುಂದೆ ಆರ್‌ಎಸ್‌ಎಸ್ ನಿಷೇಧದ ಪ್ರಸ್ತಾಪ ಬಂದಾಗ, ಅವರು ತಮ್ಮ ಪಕ್ಷದವರಿಗೆ, 'ಆರ್‌ಎಸ್‌ಎಸ್ ರಬ್ಬರ್ ಬಾಲ್ ನಂತೆ. ಅದನ್ನು ನೆಲಕ್ಕೆ ಬಡಿದಷ್ಟು ಎರಡು ಪಟ್ಟು ಬಲದೊಂದಿಗೆ ಮೇಲೇಳುತ್ತದೆ' ಎಂದು ಹೇಳಿದ್ದರಂತೆ. ಇದನ್ನು ಕೆಲ ಖ್ಯಾತನಾಮರಿಂದ ಕೇಳಿದ್ದೇನೆ ಹೊರತು ಆ ಬಗ್ಗೆ ದಾಖಲೆ ನನ್ನ ಬಳಿ ಇಲ್ಲ. ಹಾಗಾಗಿ ಆರ್‌ಎಸ್‌ಎಸ್ ನಿಯಂತ್ರಿಸುವ ಪ್ರಯತ್ನ ಸೂಕ್ತವಲ್ಲ ಎಂದರು.

ಅಲ್ಲದೆ, ಕಳೆದ 100 ವರ್ಷಗಳಲ್ಲಿ ವಿವಿಧ ನ್ಯಾಯಾಲಯಗಳಿಂದ ಕನಿಷ್ಠ 30 ತೀರ್ಪುಗಳು ಬಂದಿದ್ದು, ಅವು ಆರ್‌ಎಸ್‌ಎಸ್ ನಿಯಂತ್ರಿಸುವುದರ ವಿರುದ್ಧವಾಗಿಯೇ ಇವೆ. ಈ ಸಂಬಂಧ ಆರ್‌ಎಸ್‌ಎಸ್ ಪುಸ್ತಕ ಕೂಡ ಪ್ರಕಟಿಸಿದೆ. ಈ ಎಲ್ಲಾ ಹಿನ್ನೆಲೆಯಲ್ಲಿ ಆರ್‌ಎಸ್‌ಎಸ್ ನಿಷೇಧ ಸಾಧ್ಯವಿಲ್ಲ.





ಮೈಸೂರಿನ ಜಗನ್ನಾಥ ಕಲೆ ಮತ್ತು ಸಾಂಸ್ಕೃತಿಕ ಕೇಂದ್ರದ ವೇದಿಕಾ ಸಭಾಂಗಣದಲ್ಲಿ ಆರ್‌ಎಸ್‌ಎಸ್ ಶತಮಾನೋತ್ಸವದ ಪ್ರಯುಕ್ತ ಸಂಘ ಕುರಿತಂತೆ ಶನಿವಾರ ಹಮ್ಮಿಕೊಂಡಿದ್ದ ಚರ್ಚಾ ಕಾರ್ಯಕ್ರಮದಲ್ಲಿ ಇಂಡಿಯಾ ಫೌಂಡೇಷನ್ ಅಧ್ಯಕ್ಷರೂ ಆದ ಲೇಖಕ ಡಾ.ರಾಮ್ ಮಾಧವ್ ಮಾತನಾಡಿದರು. 'ಸ್ಟಾರ್ ಆಫ್ ಮೈಸೂರ್' ಹಾಗೂ 'ಮೈಸೂರು ಮಿತ್ರ' ವ್ಯವಸ್ಥಾಪಕ ಸಂಪಾದಕರಾದ ವಿಕ್ರಂ ಮುತ್ತಣ್ಣ ಚಿತ್ರದಲ್ಲಿದ್ದಾರೆ.. ಬಲಚಿತ್ರದಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸಭಿಕರನ್ನು ಕಾಣಬಹುದು.

ಆರ್‌ಎಸ್‌ಎಸ್ ಯಾರನ್ನೂ ಶತ್ರುವೆಂದು ಪರಿಭಾವಿಸಿಲ್ಲ

ಇದೀಗ ಕೆಲವು ವಿರೋಧಿಗಳು ಬಯಸುತ್ತಿರುವುದು ವಿಪರ್ಯಾಸದ ಸಂಗತಿ ಎಂದರು. ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು 'ಪ್ರತಿಯೊಬ್ಬರೂ ಪ್ರತಿ ದಿನವೂ, ಪ್ರತಿ ಕ್ಷಣವೂ ದೇಶಭಕ್ತರಾಗಿರಬೇಕು, ಜಾತಿಮುಕ್ತ ಸಮಾಜ ನಮ್ಮದಾಗಬೇಕು, ಅಸ್ಪೃಶ್ಯತೆ ತೊಲಗಬೇಕು, ಪ್ರತಿಯೊಬ್ಬ ಪ್ರಜೆಗೂ ಮೂಲಭೂತ ಹಕ್ಕುಗಳು ದೊರೆಯಬೇಕು ಎನ್ನುವುದು ಹಿಂದುತ್ವದ ಕುರಿತು ಸಂಘದ ವ್ಯಾಖ್ಯಾನವಾಗಿದೆ. ಶ್ರೇಣೀಕೃತ ಜಾತಿ ವ್ಯವಸ್ಥೆಯನ್ನು ಆರ್‌ಎಸ್‌ಎಸ್ ತಿರಸ್ಕರಿಸಿದೆ ಎಂದು ತಿಳಿಸಿದರು.

ಆರ್‌ಎಸ್‌ಎಸ್ ತನ್ನ ಈ ನೂರನೇ ವರ್ಷದ ಸಂದರ್ಭದಲ್ಲಿ 'ಪಂಚ ಪರಿವರ್ತನ್' ಎನ್ನುವ ಉಪಕ್ರಮವನ್ನು ಆರಂಭಿಸಿದ್ದು, ಭಾರತೀಯ ಮೌಲ್ಯಗಳಾದ ಸಾಮಾಜಿಕ ಸಾಮರಸ್ಯ, ಕೌಟುಂಬಿಕ ಮೌಲ್ಯಗಳು, ಪರಿಸರ ಸಂರಕ್ಷಣೆ, ಸ್ವದೇಶಿ ಮತ್ತು ಸ್ವಾವಲಂಬನೆ ಮತ್ತು ನಾಗರಿಕ ಜವಾಬ್ದಾರಿ ಕುರಿತು ಅರಿವು ಮೂಡಿಸುವ ಪ್ರಯತ್ನವನ್ನು ನಿರಂತರವಾಗಿ ನಡೆಸುವ ಉದ್ದೇಶ ಹೊಂದಿದೆ ಎಂದು ಮಾಹಿತಿ ನೀಡಿದರು.

ಅಲ್ಲದೆ, ಯಾವುದೇ ಸರ್ಕಾರಿ ನೌಕರರು ಈ ಚಟುವಟಿಕೆಯಲ್ಲಿ ಭಾಗವಹಿಸುವಿಕೆಯನ್ನು ತಡೆಯಲೂ ಸಾಧ್ಯವಿಲ್ಲ.

ಆರ್‌ಎಸ್‌ಎಸ್‌ನ ಚಟುವಟಿಕೆಯಲ್ಲಿ ರಾಜಕಾರಣವೂ ಇಲ್ಲ, ದೇಶ ವಿರೋಧಿ ಅಂಶಗಳೂ ಇಲ್ಲ. ಹಾಗಾಗಿ ಆರ್‌ಎಸ್‌ಎಸ್ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವುದಕ್ಕೆ ಸರ್ಕಾರಿ ನೌಕರರ ಮೇಲೆ ನಿರ್ಬಂಧ ವಿಧಿಸಲು ಸಾಧ್ಯವಿಲ್ಲ ಎಂದು ಹೇಳಿದರು.

ಕೆಲ ತಪ್ಪು ಕಲ್ಪನೆಗಳಿವೆ: ಆರ್‌ಎಸ್‌ಎಸ್ ಅನ್ನು ತಪ್ಪಾಗಿ ಅರ್ಥ ಮಾಡಿಕೊಳ್ಳಲಾಗಿದೆಯೇ? ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ರಾಮ್ ಮಾಧವ್, ಹಲವರಲ್ಲಿ ತಪ್ಪು ತಿಳುವಳಿಕೆ ಇದೆ. ಕರ್ನಾಟಕದಲ್ಲಿಯೂ ಅನೇಕರು ಆರ್‌ಎಸ್‌ಎಸ್ ಬಗ್ಗೆ ನಿರಂತರವಾಗಿ ನಕಾರಾತ್ಮಕ ಭಾವನೆ ಮೂಡುವಂತೆ ಪ್ರಚಾರ ಮಾಡುತ್ತಿದ್ದಾರೆ. ಇದೂ ಒಂದು ಕಾರಣ. ಸಂಘವು ಆರಂಭದಿಂದಲೂ ಇಂತಹ ಸನ್ನಿವೇಶ ಎದುರಿಸುತ್ತಲೇ ಬಂದಿದೆ. ಈ ಹಿಂದೆ ಆರ್‌ಎಸ್‌ಎಸ್, ಹಿಂದುತ್ವದ ಪರಿಕಲ್ಪನೆಯನ್ನು ಸಮರ್ಪಕವಾಗಿ ಅರ್ಥ ಮಾಡಿಸುವಲ್ಲಿ ಸೋತಿರಬಹುದು. ಜೊತೆಗೆ ಕೆಲವು ಅನ್ಯರು ಹಿಂದುತ್ವವನ್ನು ಆರ್‌ಎಸ್‌ಎಸ್‌ನ ಪ್ರತ್ಯೇಕವಾದ ಸಿದ್ಧಾಂತ ಎಂದು ಬಿಂಬಿಸಿರುವುದೂ ಇದೆ. ಆದರೆ ನಾನು ಸ್ಪಷ್ಟಪಡಿಸುತ್ತೇನೆ, ಹಿಂದೂ ಧರ್ಮ ಎಂಬುದರ ಅರ್ಥವು ಅದೊಂದು ಜೀವನಶೈಲಿಯಾಗಿದೆ. ಉದಾಹರಣೆಗೆ ನೀವು ಹಿಂದೂ ಧರ್ಮದ ತತ್ವಗಳನ್ನು ಪಾಲಿಸುತ್ತಿದ್ದರೆ, ಅದೇ ಹಿಂದುತ್ವ. ಆದರೆ ಹಿಂದುತ್ವದ ಅರ್ಥವನ್ನು ತಪ್ಪಾಗಿ ಬಿಂಬಿಸ ಲಾಗುತ್ತಿದೆ. ಹೀಗಾಗಿ ಕೆಲ ತಪ್ಪು ಕಲ್ಪನೆಗಳಿಗೆ ಈ ಎಲ್ಲವೂ ಕಾರಣವಾಗಿವೆ ಎಂದು ಅವರು ತಿಳಿಸಿದರು.

ವಾಸ್ತವವಾಗಿ ಆರ್‌ಎಸ್‌ಎಸ್ 1990ರ ದಶಕದವರೆಗೆ ಪ್ರಚಾರ ವಿಭಾಗ ಹೊಂದಿರಲಿಲ್ಲ. ಹಾಗಾಗಿ ಹಲವರು ಸಂಘದ ಮೇಲೆ ಇಲ್ಲಸಲ್ಲದ ವಿಚಾರ ಮುಂದಿಟ್ಟುಕೊಂಡು ವಾಗ್ದಾಳಿ ನಡೆಸುತ್ತಿದ್ದರು. ಇದರ ವಿರುದ್ಧ ಸಂಘದಿಂದ ಯಾರು ಪ್ರತಿಕ್ರಿಯೆಯನ್ನೇ ನೀಡುತ್ತಿರಲಿಲ್ಲ. ಇದು ಸಹ ಸಂಘದ ಬಗ್ಗೆ ತಪ್ಪು ತಿಳಿದುಕೊಳ್ಳಲು ಕಾರಣವಾಗಿದೆ. ಆದರೆ ಹಲವು ವರ್ಷಗಳಿಂದ ಆರ್‌ಎಸ್‌ಎಸ್ ಸಮಾಜಕ್ಕೆ ಮುಕ್ತವಾಗಿ ತೆರೆದುಕೊಂಡಿದೆ. ಸಮಾಜದೊಂದಿಗೆ ಸಕ್ರಿಯವಾಗಿ ತೊಡಗಿಸಿಕೊಂಡಿದ್ದು, ಇದರ ಪರಿಣಾಮವಾಗಿ ಆರ್‌ಎಸ್‌ಎಸ್ ಬಗೆಗಿನ ತಪ್ಪು ಕಲ್ಪನೆಗಳು ದೂರವಾಗುತ್ತಿವೆ ಎಂದರು.

ಸಾಂವಿಧಾನಿಕವಾಗಿ ನಾವು ಜಾತ್ಯಾತೀತರು. ಆದರೆ ಸಾಂಸ್ಕೃತಿಕವಾಗಿ ನಾವೆಲ್ಲರೂ ಹಿಂದೂಗಳು ಎಂಬುದನ್ನು ವಿವರಿಸಬಹುದೇ? ಎಂಬ ವಿಕ್ರಂ ಮುತ್ತಣ್ಣ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ರಾಮ್ ಮಾಧವ್, ಭಾರತವನ್ನು ಜಾತ್ಯಾತೀತ ದೇಶ ಎಂದು ಕರೆಯಬೇಕೇ ಎಂಬ ಬಗ್ಗೆ ಸಂವಿಧಾನ ಸಭೆಯಲ್ಲೇ ಚರ್ಚೆ ನಡೆದಿದೆ. ನಮ್ಮ ಸಂವಿಧಾನ ಪೀಠಿಕೆಯಲ್ಲಿ ಜಾತ್ಯಾತೀತ ಎಂಬ ಪದ ಇರಬೇಕೆಂದು ಅನೇಕರು 1949ರಲ್ಲಿ ಸಲಹೆ ನೀಡಿದರು. ಅದರ ಅಗತ್ಯತೆ ಇಲ್ಲವೆಂದು ಹೇಳಿದವರು ಡಾ.ಬಿ.ಆರ್. ಅಂಬೇಡ್ಕರ್ ಎಂದರು.

ಕಾರಣ, ಈ ದೇಶದಲ್ಲಿ ನಾವು ಸ್ವಾಭಾವಿಕವಾಗಿಯೇ ಜಾತ್ಯಾತೀತರು ಎಂಬುದು ಅಂಬೇಡ್ಕರ್ ಅವರ ದೃಷ್ಟಿಕೋನವಾಗಿತ್ತು. ಈ ದೇಶದ ನೀತಿ ಎಂದರೆ ಎಲ್ಲರನ್ನೂ ಸಮಾನ ಗೌರವದಿಂದ ನಡೆಸಿಕೊಳ್ಳುವುದು. ಯಾವುದೇ ನಿರ್ದಿಷ್ಟ ನಂಬಿಕೆಯನ್ನು ಜನರ ಮೇಲೆ ಎಂದಿಗೂ ಹೇರುವುದಲ್ಲ ಅಥವಾ ನಮ್ಮ ದೇಶದಲ್ಲಿ ಯಾವುದೇ ನಂಬಿಕೆಯನ್ನು ಸ್ಪಷ್ಟವಾಗಿ ತಿರಸ್ಕರಿಸುವುದೂ ಅಲ್ಲ. ಆದ್ದರಿಂದ ನಮ್ಮದು ಯಾವಾಗಲೂ ಆ ತತ್ವದಲ್ಲಿ ನಂಬಿಕೆ ಹೊಂದಿರುವ ಸಮಾಜ. ಇದನ್ನು ನಮ್ಮದೇ ಪರಿಭಾಷೆಯಲ್ಲಿ ನಾವು 'ಸರ್ವ ಧರ್ಮ ಸಮಭಾವ' ಎಂದು ಕರೆಯುತ್ತೇವೆ. ಅಂದರೆ ಎಲ್ಲಾ ವಿಭಿನ್ನ ನಂಬಿಕೆಗಳಿಗೆ ಸಮಾನ ಗೌರವ ನೀಡುವುದಾಗಿದೆ. ಆದ್ದರಿಂದ ಅಂಬೇಡ್ಕರ್ ಹೇಳಿದರು 'ಹೆಚ್ಚಿನ ಗೊಂದಲಕ್ಕೆ ಕಾರಣವಾಗುವ ಪದವನ್ನು ನೀವು ನಿರ್ದಿಷ್ಟವಾಗಿ ಏಕೆ ಪರಿಚಯಿಸಲು ಬಯಸುತ್ತೀರಿ?' ಎಂದು. ಈ ಪದವನ್ನು ಪರಿಚಯಿಸುವುದರಿಂದ ಹೆಚ್ಚಿನ ಗೊಂದಲ ಉಂಟಾಗುತ್ತದೆ ಎಂದು ನೆಹರು ಕೂಡ ಹೇಳಿದ್ದರು. ಸಮಾಜದಲ್ಲಿ ಸಂಘರ್ಷ ಉಂಟು ಮಾಡುವ ಪದಗಳನ್ನು ಪರಿಚಯಿಸಬೇಡಿ ಎಂದಿದ್ದರು. ವಿಭಿನ್ನ ಧರ್ಮ ಹಾಗೂ ದೃಷ್ಟಿಕೋನವನ್ನು ಒಂದೇ ಗೌರವದಿಂದ ಪರಿಗಣಿಸುವುದು ಭಾರತೀಯತೆಯ ಮೂಲ ಪರಿಕಲ್ಪನೆ. ಇದಕ್ಕೆ ಆರ್‌ಎಸ್‌ಎಸ್ ವಿರುದ್ಧವಾಗಿಲ್ಲ ಎಂದು ಮಾಧವ್ ಪ್ರತಿಪಾದಿಸಿದರು.

ನಾವು ಎಲ್ಲರ ಸಂಸ್ಕೃತಿ ಗೌರವಿಸುತ್ತೇವೆ. ನಮ್ಮ ಸಂವಿಧಾನದಲ್ಲಿ ಜಾತ್ಯಾತೀತ ಪದ ಪರಿಚಯಿಸಿದ್ದು 1976ರಲ್ಲಿ. ಅಂದರೆ 1950ರಿಂದ 76ರವರೆಗೆ ಭಾರತ ಜಾತ್ಯಾತೀತವಾಗಿರಲಿಲ್ಲ ಎಂದು ಹೇಳಬೇಕೇ? 1976ರಲ್ಲಿ ಸಂವಿಧಾನಕ್ಕೆ ಜಾತ್ಯಾತೀತ ಹಾಗೂ ಸಮಾಜವಾದ ಪದಗಳನ್ನು ಪರಿಚಯಿಸಲಾಯಿತು.

1991ರಲ್ಲಿ ನರಸಿಂಹರಾವ್ ಹಾಗೂ ಮನಮೋಹನ್ ಸಿಂಗ್ ಅವರ ಆಡಳಿತಾವಧಿಯಲ್ಲಿ ಜಾಗತೀಕರಣಕ್ಕೆ ಅವಕಾಶ ಕಲ್ಪಿಸಿ 'ಸಮಾಜವಾದ'ಕ್ಕೆ ತಿಲಾಂಜಲಿ ಇಡಲಾಯಿತು.

ಆ ಮೂಲಕ ಬಂಡವಾಳಶಾಹಿ ಹಾಗೂ ಜಾಗತಿಕವಾದಿಗಳಾಗಬೇಕೆಂದು ನಿರ್ಧರಿಸಿಯಾಗಿದೆ. ಇದಕ್ಕೆ ತದ್ವಿರುದ್ಧವಾಗಿ ಸಂವಿಧಾನದಲ್ಲಿ ಇನ್ನು ಸಮಾಜವಾದ ಪದ ಇದೆ. ಇದಕ್ಕೆ ನಮ್ಮ ಆಕ್ಷೇಪವೇನೂ ಇಲ್ಲ. ಆದರೆ ಈ ಸಮಾಜದ ಲಕ್ಷಣವಾದ ಜಾತ್ಯಾತೀತತೆ ಮನೋಭಾವವನ್ನು ನಾವು ವಿರೋಧಿಸುವುದಿಲ್ಲ ಎಂದು ಹೇಳಿದರು.

ಶಾಸಕ ಟಿ.ಎಸ್.ಶ್ರೀವತ್ಸ, ಜನಜಾಗರಣ ಟ್ರಸ್ಟ್ ಮೈಸೂರು ಅಧ್ಯಕ್ಷ ವಾಸುದೇವ ಭಟ್, ಉದ್ಯಮಿ ಜಗನ್ನಾಥಶೆಣೈ, ಆದಿತ್ಯ ಅಧಿಕಾರಿ ಆಸ್ಪತ್ರೆಯ ಡಾ.ಚಂದ್ರಶೇಖರ್ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು.

ಬೆಂಗಳೂರಿಗರೇ, ಇನ್ನೆರಡು ವರ್ಷದಲ್ಲಿ ನಾವು ಅಧಿಕಾರಕ್ಕೆ ಬರುತ್ತೇವೆ!

ಕಡಿಮೆ ಖರ್ಚಲ್ಲಿ 'ಎ' ಖಾತಾ ಮಾಡಿ ಕೊಡ್ತೇವೆ...

●ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಘೋಷಣೆ ●ಕಾಂಗ್ರೆಸ್ ಸರ್ಕಾರ ಹಗಲುದರೋಡೆ ಮಾಡ್ತಾ ಇದೆ ●ಇದಕ್ಕೆ ನೀವು ಆಸ್ಪದ ಮಾಡಿಕೊಡಬೇಡಿ



ಹೆಚ್.ಡಿ.ಕುಮಾರಸ್ವಾಮಿ

ಬೆಂಗಳೂರು, ಅ.25(ಕೆಎಂಶಿ)–ಬಿ ಖಾತಾದಿಂದ ಎ ಖಾತಾ ಪರಿವರ್ತನೆ ಎನ್ನುವುದೇ ಬೋಗಸ್. ದುಡ್ಡು ಹೊಡೆಯುವುದಕ್ಕೆ ಮಾಡಿರುವ ಸುಲಿಗೆ ಕಾರ್ಯಕ್ರಮ ಇದಾಗಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾರೂ ಖಾತಾ ಬದಲಾವಣೆ ಮಾಡಿಸಿಕೊಳ್ಳಲು ಹಣ ಕಟ್ಟಬೇಡಿ. ಎರಡು ವರ್ಷಗಳಲ್ಲಿ ಜೆಡಿಎಸ್–ಬಿಜೆಪಿ ಮೈತ್ರಿ ಸರ್ಕಾರ ಅಧಿಕಾರಕ್ಕೆ ಬರುತ್ತದೆ. ಕಡಿಮೆ ದರದಲ್ಲಿ ನಿಮಗೆ ಖಾತೆ ಮಾಡಿಕೊಡುತ್ತೇವೆ. ಈ ಸರ್ಕಾರದ ಬೋಗಸ್ ಆಮಿಷಕ್ಕೆ ಮರುಳಾಗಬೇಡಿ. ಇದು ನಾನು ಬೆಂಗಳೂರು ಜನತೆಗೆ ನೀಡುತ್ತಿರುವ ಮುಕ್ತ ಕರೆ ಎಂದರು.

ಕಾಂಗ್ರೆಸ್ ಸರ್ಕಾರ ಹಗಲು ದರೋಡೆ ಮಾಡುತ್ತಿದೆ. ಜನರನ್ನು ಸುಲಿಗೆ ಸರಕನ್ನಾಗಿ ಮಾಡಿಕೊಂಡಿದೆ. ಬೆಂಗಳೂರು ಜನರಿಗೆ ನಾನು ಹೇಳಲು ಬಯಸುತ್ತೇನೆ. ಯಾವುದೇ ಕಾರಣಕ್ಕೂ ಒಂದು ನಯಾಪೈಸೆ ಕಟ್ಟಬೇಡಿ. ಎರಡು ವರ್ಷ ಖಾತೆ ಮಾಡಿಸಿಕೊಳ್ಳಬೇಡಿ. ಇವರ ಮಾತಿಗೆ ಮರುಳಾಗಬೇಡಿ. ನಿಮ್ಮನ್ನು ಉಳಿಸುವ, ನಿಮ್ಮ ಹಿತ ಕಾಯುವ ಜವಾಬ್ದಾರಿ ನಮ್ಮದು ಎಂದು ಹೇಳಿದರು.

ಜನತೆ ಆತಂಕಕ್ಕೆ ಒಳಗಾಗಬೇಕಿಲ್ಲ ಎರಡು ವರ್ಷ ಆದ ಮೇಲೆ ನಮ್ಮ ಮೈತ್ರಿ ಸರ್ಕಾರ ಬಂದೇ ಬರುತ್ತದೆ. ಆಗ ಅತ್ಯಂತ ಸರಳವಾಗಿ, ಸುಲಭವಾಗಿ ಖಾತೆ ಮಾಡಿಕೊಡುತ್ತೇವೆ. ನಿಮಗೆ ಯಾವುದೇ ಹಣಕಾಸಿನ ಹೊರೆ ಆಗುವುದಿಲ್ಲ. ಈಗಾಗಲೇ ಆಸ್ತಿ ಸಂಪಾದನೆ ಮಾಡಲು ಸಾಲ ಮಾಡಿ ಬಡ್ಡಿ ಕಟ್ಟುತ್ತಿದ್ದೀರಿ. ಈಗ ಮತ್ತೊಮ್ಮೆ ಈ ಎ ಖಾತಾ ಮಾಡಿಸಲು ಲಕ್ಷಾಂತರ ರೂಪಾಯಿ ಸಾಲ ಮಾಡಬೇಡಿ. ಇನ್ನೊಮ್ಮೆ ಸಾಲದ ಸುಳಿಗೆ ಸಿಕ್ಕಿಕೊಳ್ಳಬೇಡಿ ಎಂದು ಅವರು ಜನರನ್ನು ಕೋರಿದರು.

ಈಗಾಗಲೇ ಬೆಲೆ ಏರಿಕೆ ಮತ್ತು ತೆರಿಗೆ ಹೇರಿಕೆಯಿಂದ ಜನತೆ ಬಸವಳಿದಿದ್ದಾರೆ. ಇಂಥ ಹೊತ್ತಿನಲ್ಲಿ ದೀಪಾವಳಿ ಕೊಡುಗೆ ಎಂದು ಪುಟಗಟ್ಟಲೆ ಜಾಹೀರಾತು ಕೊಟ್ಟುಕೊಂಡು ಬಂದ ಈ ಸರ್ಕಾರ ಎ ಖಾತಾ ಎನ್ನುವ ದೋಖಾ ಕಾರ್ಯಕ್ರಮವನ್ನು 6ನೇ ಗ್ಯಾರಂಟಿಯನ್ನು ಜನರಿಗೆ ದೀಪಾವಳಿ ಉಡುಗೊರೆ ಕೊಟ್ಟಿದ್ದೇವೆ ಎಂದು ಸಿಎಂ, ಡಿಸಿಎಂ ಹೇಳಿದ್ದಾರೆ. ದೀಪಾವಳಿ ಕೊಡುಗೆ ಎಂದರೆ ಜನರಿಂದ ಲಕ್ಷ ಲಕ್ಷ ಪೀಕುವುದೇ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಬೋಗಸ್ ಕಾರ್ಯಕ್ರಮದ ಬಗ್ಗೆ ಈ ಸರ್ಕಾರ ನಿತ್ಯ ಜಾಹೀರಾತು ನೀಡುತ್ತಿದೆ. 15 ದಿನಗಳಿಂದ ಜಾಹೀರಾತು ಕೊಡುತ್ತಿದೆ. ಇದು ನಾಡಿನ ಜನರಿಗೆ ಟೋಪಿ ಹಾಕುವ ಕೆಲಸ. ಖಾತಾ ಪರಿವರ್ತನೆ ಮಾಡಲಿ, ಬೇಡ ಎಂದವರು ಯಾರು? ಆದರೆ, ಲಕ್ಷ ಲಕ್ಷ ಸುಲಿಗೆ ಯಾಕೆ? ಎಂದು ಅವರು ಪ್ರಶ್ನಿಸಿದರು.

1995ರಿಂದ ಈ ಸಮಸ್ಯೆಯನ್ನು ಬೆಂಗಳೂರು ಜನ ಅನುಭವಿಸುತ್ತಿದ್ದಾರೆ. ಇಂತಹ ಸಮಸ್ಯೆ ಬೆಂಗಳೂರು, ಗ್ರಾಮೀಣ ಪ್ರದೇಶದಲ್ಲಿ ಇದೆ. 1997ರಲ್ಲಿ ಒಂದು ಆದೇಶ ಆಗಿದೆ. 2003ನೇ ಇಸವಿವರೆಗೂ ನಗರಸಭೆ, ಪುರಸಭೆಯಲ್ಲಿ ಯಾವುದೇ ನಿವೇಶನಗಳಿಗೆ ಅಂದಿನ ಮುಖ್ಯಮಂತ್ರಿಯಾಗಿದ್ದ ಹೆಚ್.ಡಿ.ದೇವೇಗೌಡರ ಸರ್ಕಾರ 60 ನಗರ ಪಾಲಿಕೆ ವಾರ್ಡ್‌ಗಳನ್ನು 90 ವಾರ್ಡ್‌ಗಳನ್ನಾಗಿ ವಿಂಗಡಿಸಿ ಹೊಸ ಪಟ್ಟಣ ಪಂಚಾಯತಿ, ನಗರ ಸಭೆ ರಚನೆ ಮಾಡಿತ್ತು.

ಬೆಂಗಳೂರು ಹೊರ ವಲಯದಲ್ಲಿ ಅಭಿವೃದ್ಧಿ ಆಗಿರಲಿಲ್ಲ. ಹೀಗಾಗಿ ಹೊಸ ನಗರಪಾಲಿಕೆ ಮಾಡಲಾಯಿತು. 1997ರಲ್ಲಿ ಅಂದು ಚದರ ಮೀಟರ್‌ಗೆ 110 ರೂಪಾಯಿ ನಿಗದಿ ಮಾಡಲಾಗಿತ್ತು. ಫಾರಂ 19 ಮೂಲಕ ಖಾತೆ ವಿತರಣೆ ಮಾಡಲಾಗುತ್ತಿತ್ತು. 30X40 ನಿವೇಶನಕ್ಕೆ ಅಂದು 12,263 ರೂಪಾಯಿ ಆಗುತ್ತಿತ್ತು. ಭೂ ಪರಿವರ್ತನೆಗೆ 1500 ರೂಪಾಯಿ ಕಟ್ಟಿಸಿಕೊಂಡರು ಎಂದು ಮಾಹಿತಿ ನೀಡಿದರು.

2007ರಲ್ಲಿ ನಾನು ಸಿಎಂ ಇದ್ದಾಗ ಕೇಂದ್ರ ಸರ್ಕಾರದಿಂದ ಒಂದು ಯೋಜನೆ ಆರಂಭವಾಯಿತು. ಅದರ ಮೂಲಕ 5 ವರ್ಷಗಳಲ್ಲಿ ನಗರಗಳ ಅಭಿವೃದ್ಧಿ ಮಾಡುವ ಯೋಜನೆ ಅದು. ನಾನು ಆಗ ಬೆಂಗಳೂರು, ಮೈಸೂರು ಅಭಿವೃದ್ಧಿಗೆ ಒತ್ತು ನೀಡಿದೆ. ಬೆಂಗಳೂರಿನಲ್ಲಿ 198 ವಾರ್ಡ್ ಮಾಡಿ ಬಿಬಿಎಂಪಿ ಆಯಿತು. ಅದಕ್ಕೆ 110 ಹಳ್ಳಿಗಳನ್ನು ಸೇರಿಸಿದ್ದೆ. ಬೆಂಗಳೂರು, ಮೈಸೂರು ಅಭಿವೃದ್ಧಿಗೆ 25 ಸಾವಿರ ಕೋಟಿ ಹಣ ಹೊಂದಿಸುವ ಯೋಜನೆ ಅದು. ಬೆಂಗಳೂರು ಅಭಿವೃದ್ಧಿಗೆ ಸಮಗ್ರ ಕಾರ್ಯಕ್ರಮ ರೂಪಿಸಿದ್ದೆ ಎಂದು ಹೇಳಿದರು.

2007ರ ನನ್ನ ಕಾಲದಲ್ಲಿ ಇಂಥ ನಿವೇಶನಗಳಿಗೆ ಖಾತೆ ಮಾಡಿಕೊಡುವ ನಿರ್ಧಾರ ಮಾಡಿದೆವು. 60 ಮತ್ತು ಅದರ ಒಳಗಿನ ಪ್ರತಿ ಚದರ ಮೀಟರ್‌ಗೆ 200 ರೂ., 60 ರಿಂದ 120 ಚದರ ಮೀಟರ್‌ಗೆ 400 ರೂ., 120 ಚದರ ಅಡಿ ಮೇಲ್ಪಟ್ಟ 600 ರೂ. ನಿಗದಿ ಮಾಡಿದೆವು. ಆದಾದ ಮೇಲೆ ಕೆಲವರು ಕೋರ್ಟ್‌ಗೆ ಹೋಗ್ತಾರೆ. ಕೋರ್ಟ್ ಅಂದು 15 ದಿನಗಳಲ್ಲಿ ಖಾತೆ ಮಾಡಿಕೊಡಿ ಅಂತ ಹೇಳಿತ್ತು. ಅಂದೇ ಜನರಿಂದ ಖಾತೆ ಮಾಡಿಸಿಕೊಡಲು ಸರ್ಕಾರ ಹಣ ಪಡೆದಿದೆ. ಹೀಗಾಗಿ ಮತ್ತೆ ಇವರು ಯಾಕೆ ಹಣ ಪಡೆಯಬೇಕು ಎಂದು ಟೀಕಾ ಪ್ರಹಾರ ನಡೆಸಿದರು.

ಬೆಂಗಳೂರು ವೇಗವಾಗಿ ಬೆಳೆಯುತ್ತಿರುವ ನಗರ. ಅದರ ಅಭಿವೃದ್ಧಿ ಕಡೆಗಣಿಸುವಂತೆ ಇಲ್ಲ. ಅನಿಯಂತ್ರಿತ, ಅಸುರಕ್ಷಿತ ಕಟ್ಟಡಗಳಿಂದ ನಾಗರಿಕರಿಗೆ ಸಮಸ್ಯೆ ಸೇರಿ ಹಲವು ತೊಂದರೆಗೆ ದಾರಿ ಆಗಿದೆ ಎಂದು ಇವರು ಖಾತಾ ಪರಿವರ್ತನೆ ಆದೇಶದಲ್ಲಿ ಹೇಳಿದ್ದಾರೆ. ಹಾಗಾದರೆ, ಬಿ ಖಾತಾ ಮನೆಗಳು ಮಳೆಯಲ್ಲಿ ಕುಸಿಯುತ್ತಿವೆಯಾ? ಅದಕ್ಕೆ ಇವರು ಎ ಖಾತಾ ಮಾಡುತ್ತಿದ್ದಾರಾ? ಯಾರಾದರೂ ನಂಬುವ ಹಾಗೆ ಇದೆಯಾ ಇದನ್ನು ಎಂದು ಅವರು ಲೇವಡಿ ಮಾಡಿದರು.

ಇನ್ನು ಎಷ್ಟು ದಿನ ಎಂದು ಜನರಿಂದ ಹಗಲು ದರೋಡೆ ಮಾಡ್ತೀರಾ? ನಿಮಗೆ ಕೆಟ್ಟಕಾಲ ಬಂದಿದೆ. ಜನರ ಪರ ಮಾತನಾಡಿದರೆ ಅಸೂಯೆಗೆ ನಾವು ಮಾತಾಡ್ತೀವಿ ಅಂತಾರೆ. ಬಿ ಖಾತಾ ಎ ಖಾತಾ ಎಲ್ಲೂ ಇಲ್ಲ. ಅದೂ ಸಾಲದು ಅನ್ನುವಂತೆ ಈಗ ಓಸಿ, ಸಿಸಿ ಅಂತ ಮತ್ತೊಂದು ಮಾಡ್ತಾ ಇದ್ದಾರೆ. 70% ಜನರಿಗೆ ಓಸಿ ವಿನಾಯಿತಿಯಿಂದ ಲಾಭ ಅಂತ ಹೇಳ್ತಿದ್ದಾರೆ ಎಂದು ಕುಮಾರಸ್ವಾಮಿ ಆರೋಪಿಸಿದರು.

ಕುಮಾರಸ್ವಾಮಿ ದಾಖಲೆ ಮೂಲಕ ಬಹಿರಂಗ ಚರ್ಚೆಗೆ ಬರಲಿ



ಬೆಂಗಳೂರು,ಅ.25(ಕೆಎಂಶಿ)–ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚರ್ಚೆ, ವಾದ–ವಿವಾದ ಇರಬೇಕು. ಹಿಟ್ ಅಂಡ್ ರನ್, ಬ್ಲ್ಯಾಕ್ ಮೇಲ್ ಮಾಡುವುದಲ್ಲ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ನನ್ನ ವಿರುದ್ಧ ಇರುವ ದಾಖಲೆ ತಂದು ಬಹಿರಂಗ ಚರ್ಚೆಯಲ್ಲಿ ಭಾಗವಹಿಸಲಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಿರುಗೇಟು ನೀಡಿದ್ದಾರೆ.

ಶಿವಕುಮಾರ್ ಜೊತೆ ಮಾತನಾಡಲು ಆಗುತ್ತಾ, ಆ ಯೋಗ್ಯತೆ ಉಳಿಸಿಕೊಂಡಿದ್ದಾರಾ ಎಂಬ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಸುದ್ದಿಗಾರರು ಕೇಳಿದಾಗ, ಕುಮಾರಸ್ವಾಮಿ ಬಳಿ ಸಾಕ್ಷಿಗುಡ್ಡೆ ಇದ್ದರೆ, ಜನಕ್ಕೆ, ರಾಜ್ಯಕ್ಕೆ ಒಳ್ಳೆಯದು ಮಾಡಿದ್ದರೆ ಅದನ್ನು ದಾಖಲೆ ಸಮೇತ ಬಂದು ಹೇಳಲಿ. ಜನ ಅವರಿಗೆ ಮತ ಕೊಟ್ಟು ದೊಡ್ಡ ಹುದ್ದೆ ನೀಡಿದ್ದಾರೆ. ಸಾರ್ವಜನಿಕವಾಗಿ ಬಂದು ಉತ್ತರ ನೀಡಲಿ. ಕೇವಲ ಸುಳ್ಳು ಆರೋಪ ಮಾಡುತ್ತಾ, ಬೇರೆ ಯವರಿಗೆ ಹೆದರಿಸುತ್ತಾ ಹೋಗುವುದಲ್ಲ. ಸದನದಲ್ಲಿ ಜೇಬು ತೋರಿಸಿ ಪೆನ್‌ಡ್ರೈವ್ ತೆಗೆಯುತ್ತೇನೆ ಎಂದು ಹೇಳಿದಂತೆ ಅಲ್ಲ. ಬಹಿರಂಗ ಚರ್ಚೆಗೆ ಬರಲಿ. ಇದರಲ್ಲಿ ಅವಮಾನ ಆಗುವಂತದ್ದು ಏನೂ ಇಲ್ಲ. ಅವರು ಸಿಎಂ ಆಗಿದ್ದಾಗ ನಾನು ಸಾತನೂರಿಗೆ ಚರ್ಚೆಗೆ ಹೋಗಲಿಲ್ಲವೇ? ಎಂದು ಪ್ರಶ್ನಿಸಿದರು.

"ನಾನು ಏನು ಮಾಡಿದ್ದೇನೆ, ನನ್ನ ಹುಳುಕು ಏನಿದೆ ಎಂಬುದನ್ನು ನೀನು ಹೇಳು, ನಿನ್ನದು ಏನಿದೆ ಎಂದು ನಾನು ಹೇಳುತ್ತೇನೆ. ನಂತರ ಜನ ತೀರ್ಮಾನ ಮಾಡುತ್ತಾರೆ ಎಂದು ಸವಾಲು ಹಾಕಿದರು. ಅವರು ನನ್ನ ಯಾವ ವಿಚಾರ ಬಿಚ್ಚಿಡುತ್ತಾರೋ ಬಿಚ್ಚಿಡಲಿ. ಅವರ ಬಳಿಯೇ ಕೇಂದ್ರ ಸರ್ಕಾರ ಇದೆಯಲ್ಲಾ. ಈ ಡಿ.ಕೆ.ಶಿವ ಕುಮಾರ್ ಅದಕ್ಕೆಲ್ಲಾ ಹೆದರುವ ಮಗ ಅಲ್ಲ ಎಂದು ಪುನರುಚ್ಛರಿಸಿದರು. ಎರಡೂವರೆ ವರ್ಷಗಳ ನಂತರ ನಮ್ಮ ಸರ್ಕಾರ ಬರುತ್ತದೆ ಎಂಬ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಈ ಡೈಲಾಗ್ ಎಷ್ಟು ಸಾರಿ ಹೇಳಿ ಆಗಿದೆ. ಕೇಳಿ, ಕೇಳಿ ಸಾಕಾಗಿದೆ. ಇವರ ನಾಯಕತ್ವದಲ್ಲಿ ಇವರ ಪಕ್ಷ 18 ಸ್ಥಾನಕ್ಕೆ ಇಳಿದಿದೆ. ಮುಂದಿನ ಬಾರಿ 8 ಅಥವಾ 9 ಸ್ಥಾನಗಳಿಗೆ ಕುಸಿಯಲಿದೆ ಎಂದು ತಿರುಗೇಟು ನೀಡಿದರು.

ಅವಘಡಗಳಲ್ಲಿ ಗಾಯಾಳುವಿಗೆ ಪ್ರಥಮ ಚಿಕಿತ್ಸೆ ನೀಡುವ ವಿಧಾನವನ್ನು ಎಲ್ಲರೂ ಅರಿತಿರಬೇಕು

●ಸೆಂಟ್ ಜಾನ್ಸ್ ಆಸ್ಪತ್ರೆ ತಜ್ಞ ವೈದ್ಯ ಡಾ.ಬಿ.ಪ್ರಕಾಶ್ ಅಭಿಮತ ●ವೈದ್ಯರ ಅನುಪಸ್ಥಿತಿಯಲ್ಲಿ ಇದು ಅತ್ಯಂತ ಸಹಕಾರಿ

ಮೈಸೂರು,ಅ.25(ಎಂಟಿವೈ)– ಕೈಗಾರಿಕೆ ಸೇರಿದಂತೆ ಎಲ್ಲೆಡೆ ಯಾವುದೇ ತರಹದ ಅವಘಡ ಸಂಭವಿಸಿದಾಗ ಸಂತ್ರಸ್ತರಿಗೆ ತತ್‌ಕ್ಷಣ ಚಿಕಿತ್ಸೆ ನೀಡಲು ವೈದ್ಯರು ಸಿಗದೆ ಇರುವ ಕಾರಣ ಗಾಯಾಳುವಿಗೆ ಉಪಚರಿಸಿ, ಪ್ರಥಮ ಚಿಕಿತ್ಸೆ ನೀಡುವ ವಿಧಾನವನ್ನು ಎಲ್ಲರೂ ಕರಗತ ಮಾಡಿಕೊಳ್ಳಬೇಕಾದ ಅನಿವಾರ್ಯತೆ ಇದೆ ಎಂದು ಸೆಂಟ್ ಜಾನ್ಸ್ ಆಂಬುಲೆನ್ಸ್ ಅಸೋಸಿಯೇಷನ್ ಮುಖ್ಯಸ್ಥರೂ ಆದ ತಜ್ಞ ವೈದ್ಯ ಡಾ.ಬಿ.ಪ್ರಕಾಶ್ ಸಲಹೆ ನೀಡಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯ ರೋಟರಿ ಸಭಾಂಗಣದಲ್ಲಿ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಪರ್ಸನಲ್ ಮ್ಯಾನೇಜ್‌ಮೆಂಟ್(ಎನ್‌ಐಪಿಎಂ) ಮೈಸೂರು ಘಟಕ, ಕೈಗಾರಿಕೆ ಮತ್ತು ಬಾಯ್ಲರ್ಸ್ ಇಲಾಖೆ ಸಹಯೋಗದೊಂದಿಗೆ 'ಕೈಗಾರಿಕೆಯಲ್ಲಿ ಪ್ರಥಮ ಚಿಕಿತ್ಸೆ' ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಯಾವುದೇ ಅವಘಡಗಳಲ್ಲಿ ಗಾಯಗೊಂಡ ಗಾಯಾಳುವಿಗೆ ಎಲ್ಲಿ ರಕ್ತ ಸೋರುತ್ತಿದೆ ಎಂದು ಗಮನಿಸಬೇಕು. ರಕ್ತ ಸೋರುವ ಸ್ಥಳವನ್ನು ಗಟ್ಟಿಯಾಗಿ ಒತ್ತಿ ಹಿಡಿದುಕೊಳ್ಳಬೇಕು. ಆಗ ರಕ್ತ ಹೆಪ್ಪುಗಟ್ಟಿ ಸೋರುವಿಕೆ ನಿಲ್ಲುತ್ತದೆ. ಇದನ್ನು ಯಾವುದೇ ಕಾರ್ಖಾನೆಯಲ್ಲಿರುವ ಸಿಬ್ಬಂದಿ ಅರಿತುಕೊಳ್ಳಬಹುದು ಎಂದರು.



ಮೈಸೂರಿನ ರೋಟರಿ ಸಭಾಂಗಣದಲ್ಲಿ ನಡೆದ 'ಕೈಗಾರಿಕೆಯಲ್ಲಿ ಪ್ರಥಮ ಚಿಕಿತ್ಸೆ' ಕುರಿತ ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಸೆಂಟ್ ಜಾನ್ಸ್ ಆಂಬುಲೆನ್ಸ್ ಅಸೋಸಿಯೇಷನ್ ಮುಖ್ಯಸ್ಥರೂ ಆದ ತಜ್ಞ ವೈದ್ಯ ಡಾ.ಬಿ.ಪ್ರಕಾಶ್ ಮಾತನಾಡಿದರು.

ಯಾರಾದರು ಪ್ರಜ್ಞೆ ತಪ್ಪಿದರೆ ಅವರ ಮುಖದ ಮೇಲೆ ನೀರು ಚಿಮುಕಿಸುವುದು ಸಾಮಾನ್ಯ ಸಂಗತಿ. ಪ್ರಜ್ಞೆ ಬಂದ ಕೂಡಲೇ ನೀರು ಕುಡಿಸಲು ಮುಂದಾಗುತ್ತಾರೆ. ಇದು ಅಪಾಯಕಾರಿ. ನಮ್ಮ ಗಂಟಲಿನಲ್ಲಿ ಅನ್ನನಾಳ ಮತ್ತು ವಾಯುನಾಳ ಎಂಬ ಎರಡು ಬಗೆಯ ನಾಳ ಇರುತ್ತವೆ. ಅನ್ನನಾಳದಲ್ಲಿ ಅನ್ನ, ನೀರು, ಗಾಳಿ ಸೇರಿದಂತೆ ಯಾವುದೇ ತಿನಿಸು ಬೇಕಾದರೂ ಹೋದರೆ ಅಪಾಯವಿಲ್ಲ. ಆದರೆ, ವಾಯುನಾಳದಲ್ಲಿ ಗಾಳಿ ಹೊರತುಪಡಿಸಿ ಬೇರೆ ಏನೇ ಹೋದರೂ ಅಪಾಯ ಕಟ್ಟಿಟ್ಟಬುತ್ತಿ. ಆ ಕಾರಣದಿಂದ ಅಪಘಾತದಲ್ಲಿ ಗಾಯಗೊಂಡವರಿಗೆ ಯಾವುದೇ ಕಾರಣಕ್ಕೂ ನೀರು ಕುಡಿಸಬಾರದು ಎಂದು ಅವರು ಎಚ್ಚರಿಸಿದರು.

ಎಲ್ಲ ಸಮಯದಲ್ಲಿ ವೈದ್ಯರು ಸಿಗುವುದಿಲ್ಲ. ಹಾಗಾಗಿ ಗೊತ್ತಿರುವವರು ಪ್ರಥಮ ಚಿಕಿತ್ಸೆ ನೀಡಿ ಉಪಚರಿಸುವುದರಿಂದ ಅನೇಕರನ್ನು ಪ್ರಾಣಾಪಾಯದಿಂದ ಪಾರು ಮಾಡಬಹುದು. ಗಾಯಾಳುವನ್ನು ಆಸ್ಪತ್ರೆಗೆ ಕರೆ ತಂದಾಗ ವೈದ್ಯರು ಮೊದಲು ಸಂಬಂಧಿಸಿದವರ ಹೆಲ್ತ್ ಹಿಸ್ಟರಿ ಕೇಳುತ್ತಾರೆ. ಹೀಗೆ ರೋಗಿ ಅಥವಾ ಗಾಯಾಳು ನೀಡುವ ನಿಖರ ಮಾಹಿತಿಯಿಂದ ಶೇ.75ರಷ್ಟು ಸಮಸ್ಯೆ ಪರಿಹಾರಕ್ಕೆ ಚಿಕಿತ್ಸೆ ನೀಡಬಹುದಾಗಿದೆ ಎಂದು ತಿಳಿಸಿದರು.

ಘಟನೆಗಳು ಸಂಭವಿಸಿದಾಗ ಸಂತ್ರಸ್ತರ ಮುಖದ ಬದಲಾವಣೆ ಗಮನಿಸಬೇಕು. ಕೆಲವೊಮ್ಮೆ ಮುಖ ನೀಲಿ, ಕೆಂಪು, ಬೂದು ಬಣ್ಣಕ್ಕೆ ತಿರುಗಿರುತ್ತದೆ. ಕೆಲವೊಮ್ಮೆ ಸುಕ್ಕುಗಟ್ಟಿದಂತೆ ಭಾಸವಾಗುತ್ತದೆ. ಯಾವುದೇ ವ್ಯಕ್ತಿಗೆ ಉಸಿರಾಟಕ್ಕೆ ತೊಂದರೆ ಆದಾಗ ಮುಖ ನೀಲಿ ಬಣ್ಣಕ್ಕೆ ತಿರುಗುತ್ತದೆ. ಹಾವು ಕಚ್ಚಿದಾಗಲೂ ನೀಲಿ ಬಣ್ಣವಾಗುತ್ತದೆ. ಪ್ರಜ್ಞೆತಪ್ಪಿ ಬಿದ್ದಾಗ ಹಾಗೂ ಅತೀವ ರಕ್ತ ಸ್ರಾವವಾದಾಗ ಮುಖ ಬಿಳಿಚಿಕೊಳ್ಳುತ್ತದೆ. ತಲೆಗೆ ಏಟು ಬಿದ್ದಾಗ ಮುಖ ಕೆಂಪಾಗುತ್ತದೆ. ಅಲ್ಲದೆ, ಫಿಡ್ಸ್ ಬಂದಾಗ, ಹಾವು ಕಚ್ಚಿದಾಗ, ವಿಷ ಸೇವಿಸಿದಾಗ ಬಾಯಿಯಿಂದ ನೊರೆ ಬರುತ್ತದೆ. ತುಟಿ ಮತ್ತು ನಾಲಿಗೆಯ ಬಣ್ಣ ಬದಲಾಗುತ್ತದೆ. ವಿಷ ಮತ್ತು ಡ್ರಗ್ಸ್ ಸೇವನೆಯಿಂದ ಬಾಯಿಂದ ವಾಸನೆ ಬರುತ್ತದೆ. ಈ ಎಲ್ಲಾ ಅಂಶವನ್ನು ಸೂಕ್ಷ್ಮವಾಗಿ ಗಮನಿಸಬೇಕು ಎಂದು ಸಲಹೆ ನೀಡಿದರು.

ಇದೆ ವೇಳೆ ವಿವಿಧ ಸ್ವರೂಪದ ಅವಘಡ, ಅಪಘಾತದ ಸಂದರ್ಭದಲ್ಲಿ ಏನೆಲ್ಲಾ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಗಾಯಾಳುವಿನ ರಕ್ಷಣೆ, ಪ್ರಥಮ ಚಿಕಿತ್ಸೆ, ಆಸ್ಪತ್ರೆಗೆ ಸಾಗಿಸುವಿಕೆ ಸೇರಿದಂತೆ ವಿವಿಧ ಮಹತ್ತರ ವಿಷಯಗಳ ಬಗ್ಗೆ ಚಿತ್ರಣದೊಂದಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕೈಗಾರಿಕೆ ಮತ್ತು ಬಾಯ್ಲರ್ಸ್ ಇಲಾಖೆ ಉಪನಿರ್ದೇಶಕ ಎಂ.ಎಸ್.ಮಹದೇವ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಅಲ್ಲದೆ, ವಿವಿಧ ಕೈಗಾರಿಕೆಗಳಲ್ಲಿ ಕೆಲಸ ಮಾಡುವ ಸಿಬ್ಬಂದಿ ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

ರಾಜ್ಯದ ರೈತರಿಗೆ ವಂಚಿಸಿದವರ ಕೇಸ್ ಮುಚ್ಚಿ ಹಾಕಲು ಸಚಿವ ಜಮೀರ್ ಪ್ರಭಾವ

ಸ್ಫೋಟಕ ಆಡಿಯೋ ವೈರಲ್, ಜೆಡಿಎಸ್ ಕಿಡಿ



ಬೆಂಗಳೂರು,ಅ.25–ರಾಜ್ಯದ ರೈತರಿಗೆ ವಂಚಿಸಿದ ತೆಲಂಗಾಣದ ವ್ಯಾಪಾರಿಗಳ ಕೇಸ್ ಮುಚ್ಚಿ ಹಾಕಲು ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಪ್ರಭಾವ ಬೀರಿದ್ದಾರೆ ಎನ್ನಲಾದ ಫೋನ್ ಸಂಭಾಷಣೆಯ ಆಡಿಯೋ ವೈರಲ್ ಆಗಿದೆ. ಚಿಕ್ಕಬಳ್ಳಾಪುರದ ಪೆರೆಸಂದ್ರ ಪಿಐಎಸ್‌ಐ ಜಗದೀಶ್ ರೆಡ್ಡಿ ಅವರಿಗೆ ಫೋನ್ ಮಾಡಿರುವ ಜಮೀರ್ ಅಹ್ಮದ್ ಖಾನ್, ರಾಜ್ಯದ ರೈತರಿಗೆ ವಂಚಿಸಿದವರ ಪರ ನಿಂತಿದ್ದು, ಕೇಸ್ ಸೆಟಲ್ ಮೆಂಟ್ ಮಾಡುವಂತೆ ಒತ್ತಡ ಹಾಕಿದ್ದಾರೆ. ಈ ಆಡಿಯೋವನ್ನು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಹಂಚಿಕೊಂಡಿರುವ ಜೆಡಿಎಸ್, ಜಮ್ಮೀರ್ ಅಹ್ಮದ್ ವಿರುದ್ಧ ಕಿಡಿಕಾರಿದೆ. ರಾಜ್ಯದ ಜವಾಬ್ದಾರಿಯುತ ಸಚಿವರಾಗಿ ವಂಚಕರ ಪರ ವಹಿಸಿ, ರಾಜ್ಯದ ರೈತರಿಗೆ ಮೋಸ ಮಾಡಲು ಆತ್ಮಸಾಕ್ಷಿ ಹೇಗೆ ಒಪ್ಪುತ್ತದೆ ಎಂದು ಪ್ರಶ್ನಿಸಿದೆ. ರಾಜ್ಯದಲ್ಲಿ ಅನ್ಯಾಯಕ್ಕೊಳಗಾದವರಿಗೆ ನ್ಯಾಯಕೊಡಿಸುವುದನ್ನು ಬಿಟ್ಟು ಪೊಲೀಸ್ ಇಲಾಖೆ ಸೆಟಲ್‌ಮೆಂಟ್ ಕೇಂದ್ರಗಳಾಗಿವೆ ಎಂಬುದಕ್ಕೆ ಈ ಪ್ರಕರಣ ಉದಾಹರಣೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದೆ. ಸಿಎಂ ಸಿದ್ದರಾಮಯ್ಯ ಅವರೇ, ಸದಾ ರೌಡಿಗಳು ಹಾಗೂ ವಂಚಕರ ಪರ ವಹಿಸುವ ಸೆಟಲ್‌ಮೆಂಟ್ ಸಚಿವ ಜಮೀರ್ ಅವರನ್ನು ಸಂಪುಟದಿಂದ ವಜಾ ಮಾಡಿ. ನಿಮ್ಮ ನೈತಿಕತೆ ಪ್ರದರ್ಶಿಸಿ ಎಂದು ಒತ್ತಾಯಿಸಿದೆ.

ಪಲ್ಸ್ ಪೋಲಿಯೊ ಜಾಗೃತಿ ಅಭಿಯಾನ



ಮೈಸೂರು, ಅ. 25– ಮೈಸೂರಿನ ರೋಟರಿ ಮಿಡ್‌ಟೌನ್ ಅಕಾಡೆಮಿ ವತಿಯಿಂದ ಪಲ್ಸ್ ಪೋಲಿಯೊ ಜಾಗೃತಿ ಅಭಿಯಾನ ಆಯೋಜಿಸಲಾಗಿತ್ತು. ಅಭಿಯಾನದಲ್ಲಿ ಐದು ವರ್ಷದೊಳಗಿನ ಮಕ್ಕಳಿಗೆ ಮೌಖಿಕ ಪೋಲಿಯೊ ಹನಿ ಮತ್ತು ಲಸಿಕೆಗಳ ಮಹತ್ವದ ಕುರಿತು ಸಮುದಾಯದಲ್ಲಿ ಅರಿವು ಮೂಡಿಸಿದರು. ಅಭಿಯಾನದಲ್ಲಿ ರೋಟರಿ ಮೈಸೂರು ಮಿಡ್‌ಟೌನ್ ಅಧ್ಯಕ್ಷ ಆರ್‌ಟಿಎನ್ ರಾಕೇಶ್ ಬಾಬು, ಭಾಸ್ಕರ್ ಸೈನಿಕ್, ಆರ್‌ಟಿಎನ್ ನವೀನ್ ಚಂದ್ರ, ಆರ್‌ಟಿಎನ್ ಕುಮಾರಸ್ವಾಮಿ, ಆರ್‌ಟಿಎನ್ ಪವಿತ್ರನ್, ಆರ್‌ಟಿಎನ್ ನಾಗರಾಜು, ಆರ್ಟಿಎನ್ ಸುನಂದಾ ಪಾರ್ಥ, ಪ್ರಾಂಶುಪಾಲ ಆತ್ಮಾನಂದ, ಸರ್ಲಿ, ನಿವೇದಾ, ಶಿಕ್ಷಕರು, ವಿದ್ಯಾರ್ಥಿಗಳು, ಸ್ಕೌಟ್ & ಗೈಡ್ಸ್ ವಿದ್ಯಾರ್ಥಿಗಳು ಇದ್ದರು.

ಡಾ.ಎಸ್.ಎಲ್.ಭೈರಪ್ಪ, ಡಾ. ಮೊಗಳ್ಳಿ ಗಣೇಶರಿಗೆ ಕನ್ನಡ ಉಪನ್ಯಾಸಕರ ವೇದಿಕೆ ನುಡಿನಮನ

ಸಾಹಿತಿಗಳು ಯಾರೇ ಆಗಿರಲಿ ಅವರದ್ದು ಸೈದ್ಧಾಂತಿಕ ಚಿಂತನೆ



ಮೈಸೂರು ಕನ್ನಡ ಉಪನ್ಯಾಸಕರ ವೇದಿಕೆ ವತಿಯಿಂದ ಸಾಹಿತಿಗಳಾದ ಡಾ.ಎಸ್.ಎಲ್.ಭೈರಪ್ಪ ಹಾಗೂ ಡಾ.ಮೊಗಳ್ಳಿ ಗಣೇಶ್ ಅವರಿಗೆ ನುಡಿನಮನ ಸಲ್ಲಿಸಲಾಯಿತು.

ಮೈಸೂರು, ಅ.25(ವಿವಿಹೆಚ್)– ನಮ್ಮ ನಾಡಿಗೆ ಸಾಂಸ್ಕೃತಿಕ, ಸಾಹಿತ್ಯಿಕವಾಗಿ ಸಮೃದ್ಧ ಇತಿಹಾಸವನ್ನು ಉಳಿಸಿಕೊಟ್ಟು ಹೋದಂತಹ ಸಾಹಿತಿಗಳನ್ನು ಸ್ಮರಿಸಬೇಕು ಎಂದು ಕನ್ನಡ ಉಪನ್ಯಾಸಕರ ವೇದಿಕೆ ಅಧ್ಯಕ್ಷ ಕ್ಯಾತಮಾರನಹಳ್ಳಿ ಎಂ ಮಹೇಶ ಅಭಿಪ್ರಾಯಪಟ್ಟರು.

ಪದವಿಪೂರ್ವ ಕಾಲೇಜು, ಮೈಸೂರು ಕನ್ನಡ ಉಪನ್ಯಾಸಕರ ವೇದಿಕೆ ವತಿಯಿಂದ ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಶನಿವಾರ ಆಯೋಜಿಸಿದ್ದ ಸಾಹಿತಿಗಳಾದ ಡಾ.ಎಸ್.ಎಲ್.ಭೈರಪ್ಪ ಹಾಗೂ ಡಾ.ಮೊಗಳ್ಳಿ ಗಣೇಶ್ ಅವರಿಗೆ ನುಡಿನಮನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಎಡ ಅಥವಾ ಬಲ, ಯಾವುದೇ ಸಾಹಿತಿಗಳಿರಲಿ ಅವರ ಸಾಹಿತ್ಯ ರೂಪಗಳು ಅವರ ಸೈದ್ಧಾಂತಿಕ ಚಿಂತನೆಗಳಾಗಿವೆ. ಅವುಗಳೆಲ್ಲಾ ಅಂತಿಮವಾಗಿ ಒಂದೇ ತೀರವನ್ನು ಸೇರುತ್ತವೆ. ಅವರ ಚಿಂತನೆಗಳನ್ನು ವೇದಿಕೆಯಲ್ಲಿ ವಿನಾಕಾರಣ ಚರ್ಚಿಸುವ ಬದಲು, ಹಿರಿಯ ಸಾಹಿತಿಗಳು ಕನ್ನಡ ನಾಡಿಗೆ, ಸಾಹಿತ್ಯ ಪರಂಪರೆಗೆ ನೀಡಿದ ಕೊಡುಗೆಗಳನ್ನು ಸ್ಮರಿಸಬೇಕು. ಆ ಮೂಲಕ ಅವರನ್ನು ಗೌರವಿಸಬೇಕು ಎಂದರು.

ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕಿ ಕೆ.ಮಾಲತಿ ಮಾತನಾಡಿ, ಬದುಕಿನ ಜೀವನಾನುಭವಗಳು ವ್ಯಕ್ತಿಯನ್ನು ಹೇಗೆ ರೂಪುಗೊಳಿಸುತ್ತದೆ ಎಂಬುದಕ್ಕೆ ಭೈರಪ್ಪ ಅವರ ಜೀವನ ಉದಾಹರಣೆಯಾಗಿದೆ. ಹಸಿವು, ಬಡತನ, ಸಾವಿನ ಕುರಿತ ಪ್ರಶ್ನೆ ಹಾಗೂ ಅನುಭವಗಳು ಎಸ್.ಎಲ್. ಭೈರಪ್ಪ ಅವರನ್ನು ಗಟ್ಟಿಗೊಳಿಸುತ್ತಾ ಹೋಗಿದೆ. ಆತ್ಮಕಥೆಯು ಅವರ ವಿರಾಟ್ ರೂಪವನ್ನು ತೋರಿಸುತ್ತದೆ. ಇತರೆ ಚರ್ಚೆಗಳನ್ನು ಬಿಟ್ಟು, ಸಾಹಿತ್ಯದ ನೆಲೆಯಲ್ಲಿ ಅವರನ್ನು ಅವಲೋಕಿಸಬೇಕಿದೆ ಎಂದು ತಿಳಿಸಿದರು.

ಭೈರಪ್ಪ ಅವರು ವಿದ್ವಾಂಸರಾಗಿ ಮುಂದುವರೆಯದೆ ತನ್ನೊಳಗಿನ ಚಿಂತನೆಗಳನ್ನು ಬರೆಯತೊಡಗಿದರು. ಪ್ರಥಮವಾಗಿ ಧರ್ಮ ಶ್ರೀ ಕೃತಿ ಮೂಲಕ ಬರವಣಿಗೆಯಲ್ಲಿ ತೊಡಗಿಸಿಕೊಂಡರು. ಯಾವುದೇ ಪಂಥಕ್ಕೆ ಒಳಗಾಗದೆ ತನಗನ್ನಿಸಿದ್ದನ್ನು ಬರೆಯುತ್ತಿದ್ದ ಕಾರಣದಿಂದ ಅವರ ಕಾದಂಬರಿಗಳು ವೈವಿಧ್ಯತೆಯಿಂದ ಕೂಡಿವೆ. ಅವು ಪರಂಪರೆ ಹಾಗೂ ವೈಜ್ಞಾನಿಕತೆಯ ನಡುವೆ ಮನುಷ್ಯನ ಜೀವನ ತತ್ತರದ ಬಗ್ಗೆ ತಿಳಿಸಿದೆ. ಹಳ್ಳಿ– ನಗರ ಬದುಕಿನ ವೈರುಧ್ಯದ ನಡುವೆ ಬದುಕು ಕಟ್ಟಿಕೊಳ್ಳುವ ಬಗೆಯನ್ನು ತಿಳಿಸಿದೆ ಎಂದರು.

ಕೆ.ಆರ್.ನಗರ ಸರ್ಕಾರಿ ಪಿಯು ಕಾಲೇಜು ಉಪನ್ಯಾಸಕ ಡಾ.ಪ್ರಭು ಬಿಸ್ಲೇಹಳ್ಳಿ ಮೊಗಳ್ಳಿ ಗಣೇಶ್ ಅವರ ಜೀವನ, ಶಿಕ್ಷಣ, ವೃತ್ತಿ, ವೃತ್ತಿಯೇತರ ಕಾರ್ಯಗಳ ಬಗ್ಗೆ ಮಾತನಾಡಿದರು.

ಕವಿ ಸಂತೋಷ್ ಚೊಕ್ಕಾಡಿ, ಮಹಾರಾಜ ಕಾಲೇಜಿನ ಪ್ರಾಂಶುಪಾಲ ಉದಯಶಂಕರ್, ಮಹಾಜನ ಕಾಲೇಜು ಪ್ರಾಂಶುಪಾಲ ವಿಷಕಂಠಮೂರ್ತಿ, ರಾಜೀವ್ ನಗರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಾಂಶುಪಾಲ ಬಾಲಸುಬ್ರಹ್ಮಣ್ಯಂ, ಬೆಟ್ಟದಪುರ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರಾದ ಕೌಶಲ್ಯದೇವಿ ಉಪಸ್ಥಿತರಿದ್ದರು.

ಗ್ರೀನ್ ಫೌಂಡೇಷನ್‌ನ ದಶಮಾನೋತ್ಸವ ಇಂದು

ಮೈಸೂರು,ಅ.25(ಜಿಎ)–ದಟ್ಟಗಳ್ಳಿ ಗ್ರೀನ್ ಫೌಂಡೇಷನ್ ದಶಮಾನೋತ್ಸವದ ಅಂಗವಾಗಿ ಅ.26ರಂದು ಬೆಳಗ್ಗೆ 9ರಿಂದ ರಾತ್ರಿ 9ರವರೆಗೆ ದಟ್ಟಗಳ್ಳಿ ಜೆ.ಬ್ಲಾಕ್ ಡಿ.ಜಿ.ಎಫ್ ವೃತ್ತದ ಬಳಿ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಫೌಂಡೇಷನ್ ಅಧ್ಯಕ್ಷ ನಟರಾಜ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 9ರಿಂದ ಆಹಾರ ಮೇಳ, ಆರೋಗ್ಯ ತಪಾಸಣೆ ಮೊದಲಾದವು ನಡೆಯಲಿವೆ. ಸಂಜೆ 6ಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹ ದೇವಪ್ಪ ಸಮಾರಂಭ ಉದ್ಘಾಟಿಸುವರು. ಶಾಸಕ ಜಿ.ಟಿ.ದೇವೇಗೌಡರು ಅಧ್ಯಕ್ಷತೆ ವಹಿಸಲಿದ್ದಾರೆ. ಸಂಸದ ಯದುವೀರ್ ಒಡೆಯರ್ ಪರಿಸರ ಸ್ನೇಹಿ ಬ್ಯಾಗ್ ವಿತರಿಸಲಿದ್ದಾರೆ. ಎಂಎಲ್‌ಸಿ ಹೆಚ್.ವಿಶ್ವನಾಥ್ ಉಚಿತ ಸಸಿ ವಿತರಿಸುವರು, ಎಂಎಲ್‌ಸಿ ಡಾ.ಯತೀಂದ್ರ ಪೌರಕಾರ್ಮಿಕರನ್ನು ಸನ್ಮಾನಿಸಲಿದ್ದಾರೆ. ಶಾಸಕ ಕೆ.ಹರೀಶ್ ಗೌಡ, ಮಾಜಿ ಸಚಿವ ಸಾ.ರಾ.ಮಹೇಶ್, ಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸೀಫ್, ಎಂಡಿಎ ಆಯುಕ್ತ ಕೆ.ಆರ್.ರಕ್ಷಿತ್, ಪಾಲಿಕೆ ವಲಯ ಕಚೇರಿ 6ರ ವಲಯ ಆಯುಕ್ತ ಎಂ.ಸಂದೀಪ್, ವಲಯ ಕಚೇರಿ 3ರ ಅಭಿವೃದ್ಧಿ ಅಧಿಕಾರಿ ಸತ್ಯಮೂರ್ತಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಗೋಷ್ಠಿಯಲ್ಲಿ ಲೆನ್ನಿ ಜಾನ್, ನಾಗೇಂದ್ರ ಕುಮಾರ್, ನಟರಾಜ್, ರಾಜು, ರಮೇಶ್, ಪುರುಷೋತ್ತಮ್ ಇದ್ದರು.

ದೇಶ - ವಿದೇಶ

ಅಫ್ಘಾನಿಸ್ತಾನ ಗಡಿ ಬಂದ್: ಪಾಕಿಸ್ತಾನದಲ್ಲಿ ಟೊಮೆಟೊ ಬೆಲೆ ಶೇ.400ರಷ್ಟು ಏರಿಕೆ



ಕಾಬೂಲ್: ಅಫ್ಘಾನಿಸ್ತಾನದೊಂದಿಗಿನ ಇತ್ತೀಚಿನ ಸಂಘರ್ಷದ ಬಳಿಕ ಪಾಕಿಸ್ತಾನದ ದೇಶೀಯ ಮಾರುಕಟ್ಟೆ ತೀವ್ರ ಸಂಕಷ್ಟದಲ್ಲಿದೆ. ಟೊಮೆಟೊ ಬೆಲೆಗಳು ಗಗನಕ್ಕೇರಿವೆ. ಇದೀಗ ಅಫ್ಘಾನಿಸ್ತಾನ ತನ್ನ ಗಡಿ ಮುಚ್ಚಿದ್ದು, ಪಾಕಿಸ್ತಾನದಲ್ಲಿ ಟೊಮೆಟೊ ಬೆಲೆ ಶೇ.400ರಷ್ಟು ಏರಿಕೆ ಕಂಡಿದೆ. ಲಾಹೋರ್ ಮತ್ತು ಕರಾಚಿ ಸೇರಿದಂತೆ ಹಲವಾರು ಪ್ರಮುಖ ನಗರಗಳಲ್ಲಿ ಟೊಮೆಟೊ ಬೆಲೆ ಪ್ರತಿ ಕಿಲೋಗ್ರಾಂಗೆ 700 ರೂ. ತಲುಪಿದೆ. ಸ್ವಲ್ಪ ದಿನಗಳ ಹಿಂದೆ ಇದರ ಬೆಲೆ 100 ರೂ. ಗಳಿತ್ತು. ಈಗ ಇನ್ನೂ ಹೆಚ್ಚಾಗುವ ಸಾಧ್ಯತೆ ಇದೆ. ದೇಶದ ಹಲವು ಭಾಗಗಳಲ್ಲಿ ಪ್ರವಾಹ ಉಂಟಾಗಿದ್ದು, ಬೆಳೆಗಳು ಸಂಪೂರ್ಣವಾಗಿ ನಾಶವಾಗಿವೆ. ಇದರ ಜೊತೆಗೆ ವ್ಯಾಪಾರ ಮತ್ತು ಪೂರೈಕೆ ಕೊರತೆಯಿಂದಾಗಿ ಪಾಕಿಸ್ತಾನದಲ್ಲಿ ಟೊಮೆಟೊ ಬೆಲೆಗಳು ಗಗನಕ್ಕೇರಿವೆ. ಇರಾನಿನ ಟೊಮೆಟೊಗಳು ಪ್ರಸ್ತುತ ಪಾಕಿಸ್ತಾನ ಮಾರುಕಟ್ಟೆಗೆ ಬರುತ್ತಿವೆ. ಗಡಿ ಉದ್ವಿಗ್ನತೆ ಮತ್ತು ಮಿಲಿಟರಿ ಸಂಘರ್ಷದ ನಂತರ ಅಫ್ಘಾನಿಸ್ತಾನಕ್ಕೆ ರಫ್ತು ಸ್ಥಗಿತಗೊಳಿಸುವುದರಿಂದ ಪಾಕಿಸ್ತಾನದಾದ್ಯಂತ ಟೊಮೆಟೊ ಸೇರಿದಂತೆ ಅನೇಕ ತರಕಾರಿಗಳ ಬೆಲೆ ತೀವ್ರವಾಗಿ ಏರಿಕೆಯಾಗಿವೆ.

ಭಾರತದ ವಿರುದ್ಧ ಯುದ್ಧ ಮಾಡಿದರೆ ಸೋಲು ಖಚಿತ: ಪಾಕಿಸ್ತಾನಕ್ಕೆ ಮಾಜಿ ಸಿಐಎ ಅಧಿಕಾರಿ ಎಚ್ಚರಿಕೆ



ಇಸ್ಲಾಮಾಬಾದ್: ಪಾಕಿಸ್ತಾನದಲ್ಲಿ ಕೇಂದ್ರ ಗುಪ್ತಚರ ಸಂಸ್ಥೆ(ಸಿಐಎ)ಯ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳ ನೇತೃತ್ವ ವಹಿಸಿದ್ದ ಮಾಜಿ ಅಧಿಕಾರಿ ಜಾನ್ ಕಿರಿಯಾಕೌ ಅವರು ಭಾರತದೊಂದಿಗೆ ಯುದ್ಧ ಮಾಡಲು ನಿರ್ಧರಿಸಿದರೆ ಸೋಲು ನಿಶ್ಚಿತ ಎಂದು ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದ್ದಾರೆ. ಎಎನ್‌ಐ ಸುದ್ದಿ ಸಂಸ್ಥೆಯೊಂದಿಗೆ ಮಾತನಾಡಿದ ಅವರು, ಭಾರತ ಮತ್ತು ಪಾಕಿಸ್ತಾನದ ನಡುವಿನ ಯುದ್ಧದಿಂದ ಏನೂ ಒಳ್ಳೆಯದಾಗುವುದಿಲ್ಲ, ಏಕೆಂದರೆ ಪಾಕಿಸ್ತಾನಿಗಳು ಸೋಲುತ್ತಾರೆ. ಇಲ್ಲಿ ವಿಷಯ ಸರಳವಾಗಿದೆ ಎಂದು ಹೇಳಿದರು. 15 ವರ್ಷಗಳ ಕಾಲ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳಲ್ಲಿ ತಮ್ಮ ವೃತ್ತಿಜೀವನದ ಸಂಪೂರ್ಣ ದ್ವಿತೀಯಾರ್ಧವನ್ನು ಕಳೆದ ಕಿರಿಯಾಕೌ, ಪಾಕಿಸ್ತಾನವು ಭಾರತೀಯರನ್ನು ಪ್ರಚೋದಿಸುವುದನ್ನು ನಿಲ್ಲಿಸಿ ಎಂದು ಕರೆ ನೀಡಿದ್ದಾರೆ.

2002ರಲ್ಲಿ ಕಿರಿಯಾಕೌ ಅವರು ಪಾಕಿಸ್ತಾನದ ಪರಮಾಣು ಶಸ್ತ್ರಾಸ್ತ್ರಗಳನ್ನು ಅಮೆರಿಕ ನಿಯಂತ್ರಿಸುತ್ತದೆ ಎಂದು ಅನಧಿಕೃತವಾಗಿ ಹೇಳುತ್ತಿದ್ದರು ಎಂದರು.

ಕರ್ನೂಲ್ ದುರಂತ: ಬಸ್ಸಿನ ಸೀಟುಗಳನ್ನು ಅಕ್ರಮವಾಗಿ ಸ್ಲೀಪರ್ ಕೋಚ್ ಆಗಿ ಮಾರ್ಪಡಿಸಲಾಗಿತ್ತು



ವಿಜಯವಾಡ: ನಿನ್ನೆ ಶುಕ್ರವಾರ ಮುಂಜಾನೆ ಆಂಧ್ರ ಪ್ರದೇಶದ ಕರ್ನೂಲ್ ಜಿಲ್ಲೆಯ ಚಿನ್ನತೇಕೂರ್ ಗ್ರಾಮದ ಬಳಿ ಭೀಕರ ಬೆಂಕಿ ಅವಘಡಕ್ಕೆ ಸಂಪೂರ್ಣ ಸುಟ್ಟುಹೋಗಿ 21 ಮಂದಿಯ ಸಾವಿಗೆ ಕಾರಣವಾದ ವೇಮುರಿ ವಿನೋದ್ ಕುಮಾರ್ ಒಡೆತನದ ವೇಮುರಿ ಕಾವೇರಿ ಟ್ರಾವೆಲ್ಸ್‌ಗೆ ಸೇರಿದ ಬಸ್ ಹಲವಾರು ಸಾರಿಗೆ ನಿಯಮಗಳನ್ನು ಉಲ್ಲಂಘಿಸಿದೆ ಎಂದು ತಿಳಿದುಬಂದಿದೆ. ಸರಿಯಾದ ಅನುಮತಿಯಿಲ್ಲದೆ ಬಸ್ ಅನ್ನು ಸ್ಲೀಪರ್ ಸೀಟುಗಳಾಗಿ ಆಗಿ ಪರಿವರ್ತಿಸಲಾಗಿತ್ತು. ಇದನ್ನು ಸರಿಯಾದ ದಾಖಲೆಗಳಿಲ್ಲದೆ ರಾಜ್ಯ, ಹೊರರಾಜ್ಯಗಳಲ್ಲಿ ಸಂಚಾರ ನಡೆಸಲಾಗುತ್ತಿತ್ತು ಎಂದು ತನಿಖೆಯಿಂದ ತಿಳಿದುಬಂದಿದೆ.

ಈ ಬಸ್ ಅನ್ನು ವೇಮುರಿ ಕಾವೇರಿ ಟ್ರಾವೆಲ್ಸ್‌ನ ಮಾಲೀಕ ವೇಮುರಿ ವಿನೋದ್ ಕುಮಾರ್ ಒಡೆತನದಲ್ಲಿತ್ತು. ಇದನ್ನು ಮೇ 2, 2018ರಂದು ಖರೀದಿಸಲಾಗಿತ್ತು. ಏಪ್ರಿಲ್ 29, 2025ರಂದು, ನೋಂದಣಿಯನ್ನು ಒಡಿಶಾದ ರಾಯಗಡ ಆರ್‌ಟಿಒಗೆ ಜಿ.ವಿಜಯಲಕ್ಷ್ಮಿ ಹೆಸರಿನಲ್ಲಿ ವರ್ಗಾಯಿಸಲಾಗಿತ್ತು. ವಿಳಾಸವನ್ನು ಪರಿಶೀಲಿಸಿರಲಿಲ್ಲ ಎಂದು ಗೊತ್ತಾಗಿದೆ.

ನೇಪಾಳದಲ್ಲಿ ಕಂದಕಕ್ಕೆ ಉರುಳಿದ ಜೀಪ್: ಎಂಟು ಮಂದಿ ಸಾವು



ಕಠ್ಮಂಡು: ನೇಪಾಳದ ಕರ್ನಾಲಿ ಪ್ರಾಂತ್ಯದಲ್ಲಿ 18 ಪ್ರಯಾಣಿಕರಿದ್ದ ಜೀಪ್ 700 ಅಡಿಗಳಷ್ಟು ಕಂದಕಕ್ಕೆ ಉರುಳಿ ಬಿದ್ದ ಪರಿಣಾಮ ಎಂಟು ಮಂದಿ ಸಾವನ್ನಪ್ಪಿದ್ದು, 10 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ.

ಕಠ್ಮಂಡುವಿನ ಪಶ್ಚಿಮಕ್ಕೆ ಸುಮಾರು 500 ಕಿಮೀ ದೂರದಲ್ಲಿರುವ ರುಕುಮ್ ಪಶ್ಚಿಮ ಜಿಲ್ಲೆಯ ಬಾಫಿಕೋಟ್‌ನ ಝುರ್ಮಾರೆ ಪ್ರದೇಶದಲ್ಲಿ ಶುಕ್ರವಾರ ರಾತ್ರಿ ಈ ದುರ್ಘಟನೆ ಸಂಭವಿಸಿದೆ. ಜೀಪ್ ಮುಸಿಕೋಟ್‌ನ ಖಲಂಗಾದಿಂದ ಅಥ್ಬಿಸ್ಕೋಟ್ ಪುರಸಭೆಯ ಸೈಲಿಖಾಡಿ ಪ್ರದೇಶದ ಕಡೆಗೆ ಹೋಗುತ್ತಿದ್ದಾಗ ಅಪಘಾತ ಸಂಭವಿಸಿದೆ. ಅತಿವೇಗದ ಚಾಲನೆಯಿಂದ ಅಪಘಾತ ಸಂಭವಿಸಿದೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆಯಲ್ಲಿ ಏಳು ಜನರು ಸ್ಥಳದಲ್ಲೇ ಸಾವನ್ನಪ್ಪಿದ್ದು, ಒಬ್ಬರು ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಮೃತಪಟ್ಟಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಮಹಿಳಾ ಡಾಕ್ಟರ್ ಆತ್ಮಹತ್ಯೆ ಪ್ರಕರಣ: ಓರ್ವನ ಬಂಧನ, ಪ್ರಮುಖ ಆರೋಪಿ ಪಿಎಸ್‌ಐಗಾಗಿ ಶೋಧ



ಮುಂಬೈ: ಮಹಾರಾಷ್ಟ್ರದಲ್ಲಿ ಮಹಿಳಾ ಡಾಕ್ಟರ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಶಾಂತ್ ಬಣಕಾರ್ ಎಂಬ ಆರೋಪಿಯನ್ನು ಸತಾರಾ ಪೊಲೀಸರು ಬಂಧಿಸಿದ್ದಾರೆ.

ಪ್ರಮುಖ ಆರೋಪಿ ಎನ್ನಲಾದ ಅಮಾನತುಗೊಂಡ ಪಿಎಸ್‌ಐ ಗೋಪಾಲ್ ಬದಾನೆ ತಲೆಮರೆಸಿಕೊಂಡಿದ್ದು, ಆತನಿಗಾಗಿ ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ. ಮಹಾರಾಷ್ಟ್ರದ ಸತಾರಾ ಜಿಲ್ಲೆಯ ಫಾಲ್ತಾನ್‌ನಲ್ಲಿ 26 ವರ್ಷದ ಮಹಿಳಾ ಡಾಕ್ಟರ್ ತನ್ನ ಮೇಲೆ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಗೋಪಾಲ್ ಬನಾಡೆ ಪದೇ ಪದೇ ಅತ್ಯಾಚಾರ ಮತ್ತು ಲೈಂಗಿಕ ಶೋಷಣೆ ಮಾಡಿದ್ದಾನೆ. ತನ್ನ ಜಮೀನುದಾರನ ಮಗ ಪ್ರಶಾಂತ್ ಬಣಕಾರ್ ಕಿರುಕುಳ ಮತ್ತು ಚಿತ್ರಹಿಂಸೆ ನೀಡಿರುವುದಾಗಿ ಆರೋಪಿಸಿದ್ದಾರೆ. ಇಬ್ಬರೂ ನಾಲ್ಕು ತಿಂಗಳ ಕಾಲ ಮಾನಸಿಕವಾಗಿ ಹಿಂಸಿಸುತ್ತಿದ್ದರು ಎಂದೂ ಆಕೆ ಹೇಳಿಕೊಂಡಿದ್ದಾರೆ. ಆತ್ಮಹತ್ಯೆಗೂ ಮುನ್ನಾ ಆಕೆ ಪ್ರಶಾಂತ್ ಬಣಕಾರ್ ಜೊತೆ ಮಾತನಾಡಿರುವುದು ವರದಿಯಾಗಿದೆ.

ಮಳೆಯಲ್ಲಿ ರಸ್ತೆ ಕಾಮಗಾರಿ ನಡೆಸುವ ತಂತ್ರಜ್ಞಾನವಿದ್ದರೆ ಬಿಜೆಪಿಯವರು ತಿಳಿಸಲಿ

ಶಾಸಕ ಪೊನ್ನಣ್ಣ ವ್ಯಂಗ್ಯ

ವಿರಾಜಪೇಟೆ, ಅ. 25– ಬಿಜೆಪಿಯವರ ಬಳಿ ಮಳೆಯಲ್ಲಿ ಕಾಮಗಾರಿ ನಡೆಸುವ ಯಂತ್ರ ಅಥವಾ ತಂತ್ರಜ್ಞಾನ ಇದ್ದರೆ ದಯವಿಟ್ಟು ನಮಗೆ ನೀಡಿ ಸಹಕರಿಸಿದರೆ ನಾವು ಮಳೆಯಲ್ಲೇ ರಸ್ತೆ ಕಾಮಗಾರಿ ನಡೆಸುತ್ತೇವೆ ಎಂದು ಶಾಸಕ ಎ.ಎಸ್. ಪೊನ್ನಣ್ಣ ವ್ಯಂಗ್ಯವಾಡಿದ್ದಾರೆ



20 ಕೋಟಿ ರೂ.ಗಳ ವೆಚ್ಚದಲ್ಲಿ ರಸ್ತೆ, ಚರಂಡಿ, ಕೆರೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಎ ಎಸ್ ಪೊನ್ನಣ್ಣ ಭೂಮಿಪೂಜೆ ನೆರವೇರಿಸಿದರು.

ಮುಖ್ಯ ಮಂತ್ರಿಗಳ ವಿಶೇಷ ಅನುದಾನದಡಿ (ಎಸ್‌ಎಫ್‌ಸಿ) 20 ಕೋಟಿ ರೂ.ಗಳ ವೆಚ್ಚದಲ್ಲಿ ರಸ್ತೆ, ಚರಂಡಿ, ಕೆರೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ, ರಸ್ತೆ ದುಸ್ಥಿತಿ ಬಗ್ಗೆ ಬಿಜೆಪಿ ಪದೇ ಪದೇ ಪ್ರಸ್ತಾಪಿಸುತ್ತಿದೆ ನನಗೂ ಆ ಬಗ್ಗೆ ಅರಿವಿದೆ. ಈಗಾಗಲೆ ರಸ್ತೆ ಕಾಮಗಾರಿಗೆ 140 ಕೋಟಿ ರೂ.ಗಳ ಟೆಂಡರ್ ಆಗಿದ್ದು ಮಳೆ ನಿಲುಗಡೆಯನ್ನು ನಾವು ಕಾಯುತ್ತಿದ್ದೇವೆ. 26 ಕೋಟಿ ರೂ. ಗ್ರಾಮೀಣ ರಸ್ತೆಗೆ ಕ್ರಿಯಾ ಯೋಜನೆ ರೂಪಿಸಲಾಗಿದ್ದು ಶೀಘ್ರವೇ ಕಾಮಗಾರಿ ಆರಂಭಿಸಲಾಗುತ್ತದೆ ಎಂದರು.

ಟೀಕೆಗಳು ಆರೋಗ್ಯಕರ ರೀತಿಯಲ್ಲಿರಬೇಕು ಸಿದ್ದಾಪುರದಲ್ಲಿ ರಸ್ತೆ ಕಾಮಗಾರಿ ನಡೆಯುತ್ತಿದ್ದು ಹೆಚ್ಚಿನ ಮಳೆ ಕಾರಣ ಕೆಸರುಮಯವಾಗಿದೆ. ಅದಕ್ಕೆ ಪ್ರತಿಭಟನೆ–ಬಂದ್ ಎಂದು ಹಾದಿ ತಪ್ಪಿಸುವ ಕೆಲಸ ಬೇಡ. ಈಗ ರಸ್ತೆ ಹಾಳಾಗಿರುವುದಕ್ಕೆ ಬಿಜೆಪಿಯೇ ಕಾರಣ. ಎರಡು ವರ್ಷದ ಹಿಂದೆ ಸೂಕ್ತ ರಸ್ತೆಗಳ ಕೆಲಸ ಮಾಡಿದ್ದರೆ ಹೀಗಾಗುತ್ತಿರಲಿಲ್ಲ ಎಂದು ಮೂದಲಿಸಿದರು.

ಮೊದಲಿಗೆ ನಿಸರ್ಗ ಬಡಾವಣೆಯಲ್ಲಿ ರಸ್ತೆ ಕಾಮಗಾರಿ, ಕಲ್ಲುಬಾಣೆಯಲ್ಲಿ ಚರಂಡಿ ಮತ್ತು ರಸ್ತೆ ಕಾಮಗಾರಿ, ಗಾಂಧಿನಗರ ಬಡಾವಣೆಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿ, ಕೆ.ಬೊಯಿಕೇರಿ ರಸ್ತೆ ಕಾಮಗಾರಿ, ಶಿವಕೇರಿಯಲ್ಲಿ ರಸ್ತೆ–ಕೆರೆ ಅಭಿವೃದ್ಧಿ ಕಾಮಗಾರಿ, ತಿಮ್ಮಯ್ಯ ಲೇಔಟ್‌ನಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ಪುರಸಭಾಧ್ಯಕ್ಷೆ ಮನೆಯಪಂಡ ದೇಚಮ್ಮ, ಉಪಾಧ್ಯಕ್ಷೆ ಫಸಿಹಾ ತಬ್ಸಂ, ಮುಖ್ಯಾಧಿಕಾರಿ ಪಟ್ಟಚರುವಂಡ ನಾಚಪ್ಪ, ಅಭಿಯಂತರ ಹೇಮಾ ಕುಮಾರ್, ಪುರಸಭೆ ಸದಸ್ಯರಾದ ರಂಜಿ ಪೂಣಚ್ಚ, ಸುನೀತಾ (ಜೂನ), ಪೂರ್ಣಿಮ, ಮಹ್ಮದ್ ರಾಫಿ, ಅಗಸ್ಟಿನ್ ಬೆನ್ನಿ, ಮತ್ತೀನ್, ಪ್ರಥ್ವಿನಾಥ್, ದಿನೇಶ್ ನಂಬಿಯಾರ್ ಅತಿಫ್ ಮನ್ನಾ, ಶಾಹುಲ್ ಹಮೀದ್, ಸಿ.ಬಿ.ರವಿ, ಜಲೀಲ್, ರಜನಿಕಾಂತ್ ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಧರ್ಮಜ ಉತ್ತಪ್ಪ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಜಾನ್ಸನ್, ಅಕ್ರಮ ಸಕ್ರಮ ಸಮಿತಿ ಅಧ್ಯಕ್ಷ ಆರ್.ಕೆ ಸಲಾಂ, ಮೊದಲಾದವರು ಉಪಸ್ಥಿತರಿದ್ದರು.

ಅಪ್ಪಚ್ಚುಕವಿ ನೆನಪಿನಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಬ್ಯಾಗ್ ವಿತರಣೆ



ಪಾರಾಣೆಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ವಿದ್ಯಾರ್ಥಿಗಳಿಗೆ ಅಪ್ಪಚ್ಚುಕವಿ ಮೊಮ್ಮಗ ಅಪ್ಪನೆರವಂಡ ವಿನು ಮಾದಪ್ಪ ಶಾಲಾ ಬ್ಯಾಗ್ ಮತ್ತು ಸಿಹಿ ವಿತರಿಸಿದರು.

ನಾಪೋಕ್ಲು,ಅ.25–ಆದಿಕವಿ ಹರದಾಸ ಅಪ್ಪನೆರವಂಡ ಅಪ್ಪಚ್ಚುಕವಿ ಜನ್ಮದಿನದ ಪ್ರಯುಕ್ತ ಶಾಲಾ ವಿದ್ಯಾರ್ಥಿಗಳಿಗೆ ಬ್ಯಾಗ್ ಮತ್ತು ಸಿಹಿ ವಿತರಿಸಲಾಯಿತು.

ಮೊಮ್ಮಗ ಅಪ್ಪನೆರವಂಡ ವಿನು ಮಾದಪ್ಪ ಪಾರಾಣೆಯ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್ ಮತ್ತು ಸಿಹಿ ವಿತರಿಸಿದರು. ಶಾಲಾ ಮಕ್ಕಳಿಗೆ ಕೇರಂಸ್ಪರ್ಧೆ ಆಯೋಜಿಸಲಾಗಿತ್ತು. ಇದರಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ನೀಡಿ ಪ್ರೋತ್ಸಾಹಿಸಲಾಯಿತು. ಇವರು ಪ್ರತಿ ವರ್ಷ ತಮ್ಮ ತಾತನವರ ನೆನಪಿನಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಉಪಯುಕ್ತವಾದ ವಸ್ತುಗಳನ್ನು ನೀಡುತ್ತಿದ್ದಾರೆ.

ಶಾಲಾ ಮುಖ್ಯ ಶಿಕ್ಷಕ ವೇದಪ್ರಸಾದ್, ಅತಿಥಿ ಶಿಕ್ಷಕಿ ಮಂಜುಳಾ ಮತ್ತು ಅಪ್ಪನೆರವಂಡ ರಾಜೇಶ್, ನಯನ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಪಿಯು ಕಾಲೇಜುಗಳ ತಾಲೂಕು ಅಥ್ಲೆಟಿಕ್ಸ್ ಕ್ರೀಡಾಕೂಟಕ್ಕೆ ಚಾಲನೆ



ತಾಲೂಕು ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟಕ್ಕೆ ಪ್ರಾಂಶುಪಾಲ ಸೋಮಚಂದ್ರ ಚಾಲನೆ ನೀಡಿದರು.

ಕುಶಾಲನಗರ: ಕುಶಾಲನಗರ ಮತ್ತು ಸೋಮವಾರಪೇಟೆ ತಾಲೂಕು ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟ ಕೂಡಿಗೆ ಶಾಲಾ ಕ್ರೀಡಾ ಮೈದಾನದಲ್ಲಿ ಶುಕ್ರವಾರ ನಡೆಯಿತು.

ಮಹಾತ್ಮಗಾಂಧಿ ಪದವಿ ಕಾಲೇಜಿನ ಪ್ರಾಂಶುಪಾಲೆ ಲಿಖಿತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕ್ರೀಡಾಪಟುಗಳು ಸ್ಪರ್ಧಾ ಮನೋಭಾವದಿಂದ ಎಲ್ಲಾ ಕ್ರೀಡೆಗಳಲ್ಲೂ ಪಾಲ್ಗೊಳ್ಳುವ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು ಎಂದು ಶುಭ ಹಾರೈಸಿದರು.

ಶಿರಂಗಾಲ ಪಿಯು ಕಾಲೇಜು ಪ್ರಾಂಶುಪಾಲ ಸೋಮಚಂದ್ರ ಅಧ್ಯಕ್ಷತೆ ವಹಿಸಿ ಮಾತನಾಡಿ, ಕ್ರೀಡಾಪಟುಗಳು ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು. ದೇಶಕ್ಕೆ ಉತ್ತಮ ಕ್ರೀಡಾಪಟುಗಳನ್ನು ತಯಾರಿ ಮಾಡಲು ಕ್ರೀಡಾ ಶಾಲೆ, ಸೈನಿಕ ಶಾಲೆ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ತುಂಬ ಅಗತ್ಯವಾಗಿವೆ. ಹೆಚ್ಚಿನ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವ ಮೂಲಕ ದೇಶಕ್ಕೆ ಉತ್ತಮ ಸೈನಿಕರಾಗಿ ಹಾಗೂ ಪ್ರಜೆಗಳಾಗಿ ಸೇವೆ ಸಲ್ಲಿಸಬೇಕು ಎಂದರು.

ಉಪನ್ಯಾಸಕ ನಾಗೇಶ್ ಅಥ್ಲೆಟಿಕ್ಸ್ ಕ್ರೀಡೆಗಳಿಗೆ ಚಾಲನೆ ನೀಡಿದರು. ಪ್ರಾಂಶುಪಾಲ ಅಶೋಕ್, ಕೂಡಿಗೆ ಸರ್ಕಾರಿ ಪಿಯು ಕಾಲೇಜು ಉಪನ್ಯಾಸಕ ರಮೇಶ್ ಹಾಗೂ ವಿವೇಕಾನಂದ ಪಿಯು ಕಾಲೇಜಿನ ಪ್ರಾಂಶುಪಾಲೆ ಕ್ಲಾರ ರೇಷ್ಮಾ ಪಾಲ್ಗೊಂಡಿದ್ದರು. ಉಪನ್ಯಾಸಕಿ ಜ್ಯೋತಿಲಕ್ಷ್ಮಿ ನಿರೂಪಿದರು. ಉಪನ್ಯಾಸಕ ಗಂಗಾಧರ ವಂದಿಸಿದರು. ತೀರ್ಪುಗಾರರಾಗಿ ದೈಹಿಕ ಶಿಕ್ಷಕರಾದ ರಂಗಸ್ವಾಮಿ, ನಾಚಪ್ಪ ಚಿದಾನಂದ ಮೂರ್ತಿ, ದಿನೇಶ್, ಶಿವಕುಮಾರ್, ಲೋಹಿತ್, ಪವನ್, ಸತೀಶ್ ಕಾರ್ಯನಿರ್ವಹಿಸಿದರು.


ನ.2ಕ್ಕೆ ತೆಂಗಿನಕಾಯಿಗೆ ಗುಂಡು ಹೊಡೆಯುವ ಸ್ಪರ್ಧೆ

ನಾಪೋಕ್ಲು, ಅ.25–ಮದೆ ಗ್ರಾಮ ಪಂಚಾಯತ್ ಮತ್ತು ಗೋಪಾಲಕೃಷ್ಣ ಯುವ ಸಂಘ (ರಿ.) ಸಂಯುಕ್ತ ಆಶ್ರಯದಲ್ಲಿ ನ.2 ರಂದು ಸಾರ್ವಜನಿಕರಿಗೆ ಮುಕ್ತ ತೆಂಗಿನಕಾಯಿಗೆ ಗುಂಡು ಹೊಡೆಯುವ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಅವಂದೂರು ಗ್ರಾಮದ ಊರಂಬಲ ಬಳಿಯ ಮದೆ ಪಂಚಾಯತ್ ಆಟದ ಮೈದಾನದಲ್ಲಿ ದ್ವಿತೀಯ ವರ್ಷದ ತೆಂಗಿನ ಕಾಯಿಗೆ ಗುಂಡು ಹೊಡೆಯುವ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ. ಈ ಸ್ಪರ್ಧೆಯಲ್ಲಿ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಸ್ಪರ್ಧಾರ್ಥಿಗಳು ಮತ್ತು ಕ್ರೀಡಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಗಮನಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಸಂಘಟಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕೀರ್ತನ್ ದೇವಾಯಿರ ಮೊ.ನಂ.:9591094700, ಹರ್ಷಿತ್ ಊರೊಳನ ಮೊ.ನಂ.: 9845033429, ಚಂದ್ರಶೇಖರ್ ದೇವಾಯಿರ ಮೊ.ನಂ.: 8861142814, ಮಧು ಕಾಳೇರಮ್ಮನ ಮೊ.ನಂ.: 8792004031. ಸಂಪರ್ಕಿಸಿ.

ಜಾಲತಾಣದಿಂದ ಪುಸ್ತಕ ಪ್ರೇಮಿಗಳ ಸಂಖ್ಯೆ ವಿರಳ



ಕೊಡವ ಮಕ್ಕಡ ಕೂಟದ 'ಬಂಡಂದ ಬಾಳ್' ಕೃತಿಯನ್ನು ಮಾಳೇಟಿರ ಸೀತಮ್ಮ ವಿವೇಕ್ ಬಿಡುಗಡೆ ಮಾಡಿದರು. ಲೇಖಕಿ ಕೊಟ್ಟಂಗಡ ಕವಿತಾ ವಾಸುದೇವ, ಅವರೆಮಾದಂಡ ಶರಣ್ ಪೂಣಚ್ಚ, ಅಜ್ಜಿಕುಟ್ಟೀರ ಸಿ.ಗಿರೀಶ್ ಉಪಸ್ಥಿತರಿದ್ದರು.

ಮಡಿಕೇರಿ, ಅ.25– ಸಾಮಾಜಿಕ ಜಾಲತಾಣಗಳೇ ಹೆಚ್ಚು ಪ್ರಭಾವ ಬೀರುತ್ತಿರುವ ಇಂದಿನ ದಿನಗಳಲ್ಲಿ ಪುಸ್ತಕಗಳನ್ನು ಓದುವವರ ಸಂಖ್ಯೆ ಬಹಳ ವಿರಳ ಎನ್ನುವ ಮಾತಿದೆ. ಆದರೆ ಪ್ರಪಂಚಕ್ಕೆ ಬರವಣಿಗೆ ನೀಡುವ ಅಮೂಲ್ಯವಾದ ಸಾರವನ್ನು ಎಐ ಅಥವಾ ಗೂಗಲ್ ತಂತ್ರಜ್ಞಾನ ನೀಡಲು ಸಾಧ್ಯವಿಲ್ಲ ಎಂದು ಸಾಹಿತಿ ಹಾಗೂ ಸಮಾಜ ಸೇವಕಿ ಮಾಳೇಟಿರ ಸೀತಮ್ಮ ವಿವೇಕ್ ಅಭಿಪ್ರಾಯಪಟ್ಟಿದ್ದಾರೆ.

ಲೇಖಕಿ ಕೊಟ್ಟಂಗಡ ಕವಿತಾ ವಾಸುದೇವ ರಚಿಸಿರುವ ಕೊಡವ ಮಕ್ಕಡ ಕೂಟದ 119ನೇ ಪುಸ್ತಕ 'ಬಯಂದ ಬಾಳ್' ಕೃತಿಯ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಯಾವುದೇ ನಿರೀಕ್ಷೆಗಳಿಲ್ಲದೆ ಸಾಹಿತ್ಯವನ್ನು ಸಮಾಜಕ್ಕೆ ಧಾರೆ ಎರೆಯಬೇಕು, ಆಗ ಸಮಾಜ ಅದನ್ನು ಉತ್ತಮ ರೀತಿಯಲ್ಲಿ ಸ್ವೀಕರಿಸುತ್ತದೆ. ಸಮಾಜವನ್ನು ಬದಲಾಯಿಸುವ ಶಕ್ತಿ ಸಾಹಿತ್ಯಕ್ಕಿದೆ, ಪ್ರತಿಯೊಬ್ಬ ವ್ಯಕ್ತಿಯಲ್ಲೂ ವೈಯಕ್ತಿಕ ಭಾವಗಳಿರುತ್ತವೆ. ಬರಹಗಾರರು ಅದಕ್ಕೆ ಅಕ್ಷರದ ರೂಪ ನೀಡಿ ಪುಸ್ತಕವನ್ನಾಗಿ ಹೊರ ತರುತ್ತಾರೆ. ಮೌಲ್ಯಯುತವಾದ ಪುಸ್ತಕಗಳನ್ನು ಓದುವ ಸಾಹಿತ್ಯಾಸಕ್ತರು ಸಮಾಜದಲ್ಲಿ ಇನ್ನೂ ಇದ್ದಾರೆ. ಆದ್ದರಿಂದ ಬರಹಗಾರರು ಮತ್ತಷ್ಟು ಬೆಳೆಯಬೇಕು ಎಂದು ಕರೆ ನೀಡಿದರು.

ಕೃತಿ ಬಿಡುಗಡೆಗೊಳಿಸಿ ಮಾತನಾಡಿದ ಸುಂಟಿಕೊಪ್ಪ ಕೊಡವ ಸಮಾಜದ ಕಾರ್ಯದರ್ಶಿ ಅಜ್ಜಿಕುಟ್ಟೀರ ಸಿ.ಗಿರೀಶ್, ಯುವ ಬರಹಗಾರರು ಪುಸ್ತಕ ರಚನೆಯಲ್ಲಿ ಹೆಚ್ಚು ತೊಡಗಿಸಿಕೊಳ್ಳಬೇಕು. ಯುವ ಸಾಹಿತಿಗಳಿಗೆ ಪ್ರೋತ್ಸಾಹದ ಅಗತ್ಯವಿದೆ. ಯುವ ಸಮೂಹ ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕೊಡವ ಮಕ್ಕಡ ಕೂಟದ ಅಧ್ಯಕ್ಷ ಬೊಳ್ಳಜಿರ ಬಿ.ಅಯ್ಯಪ್ಪ ಕೂಟದ ಮೂಲಕ ಜನವರಿಯಿಂದ ಈವರೆಗೆ ಸುಮಾರು 13 ಪುಸ್ತಕಗಳನ್ನು ಬಿಡುಗಡೆಗೊಳಿಸಲಾಗಿದೆ. ಇನ್ನೂ ಹಲವು ಪುಸ್ತಕಗಳು ಮುದ್ರಣ ಹಂತದಲ್ಲಿವೆ. ಸರಕಾರದ ಅನುದಾನವಿಲ್ಲದೆ ಅತಿ ಹೆಚ್ಚು ಪುಸ್ತಕ ಪ್ರಕಟಿಸಿದ ಹೆಗ್ಗಳಿಕೆ ನಮ್ಮದು ಎಂದರು.

ದಾನಿಗಳಾದ ಅವರೆಮಾದಂಡ ಶರಣ್ ಪೂಣಚ್ಚ ಮಾತನಾಡಿ, ಡಿಜಿಟಲ್ ಯುಗದ ಈ ದಿನಗಳಲ್ಲಿ ಬರಹಗಾರರ ಸಂಖ್ಯೆ ಕಡಿಮೆಯಾಗುತ್ತಿದೆ. ಆದರೆ ಪುಸ್ತಕಗಳು ಶಾಶ್ವತವಾಗಿ ಉಳಿಯುವುದರಿಂದ ಮುಂದಿನ ಪೀಳಿಗೆಗೆ ಸಾಹಿತ್ಯ ಕ್ಷೇತ್ರ ಹೆಚ್ಚು ಸಹಕಾರಿಯಾಗಿದೆ ಆದ್ದರಿಂದ ಸಾಹಿತ್ಯಾಸಕ್ತರು ಹಾಗೂ ಬರಹಗಾರರು ಹೆಚ್ಚಾಗಬೇಕು ಎಂದರು.

ಕೃತಿಯ ಲೇಖಕಿ ಕೊಟ್ಟಂಗಡ ಕವಿತಾ ವಾಸುದೇವ ಮಾತನಾಡಿ, ನಮ್ಮಂತಹ ಸಣ್ಣ ಬರಹಗಾರರಿಗೆ ಓದುಗರ ಪ್ರೋತ್ಸಾಹದ ಅಗತ್ಯವಿದೆ ಎಂದರು. ಕೊಡವ ಮಕ್ಕಡ ಕೂಟ ಹಾಗೂ ದಾನಿಗಳ ಸಹಕಾರವನ್ನು ಅವರು ಇದೇ ಸಂದರ್ಭ ಸ್ಮರಿಸಿಕೊಂಡರು. ಸಮಾಜ ಸೇವಕ ಚೇಯಕ ಪೂವಂಡ ಸಚಿನ್ ಪೂವಯ್ಯ ಶುಭ ಹಾರೈಸಿದರು.

ಜೀಪ್–ಬೈಕ್ ಡಿಕ್ಕಿ: ಸವಾರ ಸಾವು

ಕುಶಾಲನಗರ, ಅ.25–ಸಮೀಪದ ಕೂಡುಮಂಗಳೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಸುಂದರನಗರ ಸರ್ಕಲ್ ಬಳಿ ನಡೆದ ಜೀಪ್ ಮತ್ತು ಬೈಕ್ ಮುಖಾಮುಖಿ ಡಿಕ್ಕಿಯಲ್ಲಿ ಬೈಕ್ ಸವಾರ ಮೃತಪಟ್ಟ ಘಟನೆ ನಡೆದಿದೆ.



ಹಾರಂಗಿ ಮುಖ್ಯ ರಸ್ತೆಯಲ್ಲಿ ಶುಕ್ರವಾರ ಸಂಜೆ ನಡೆದ ಅಪಘಾತದಲ್ಲಿ ಬೈಕ್ ಸವಾರ ಸುಂದರನಗರದ ನಾಗರಾಜು ತೀವ್ರ ಗಾಯಗೊಂಡಿದ್ದರು. ಕೂಡಲೇ ಅವರನ್ನು ಕುಶಾಲನಗರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಸ್ಪಂದಿಸದೆ ನಾಗರಾಜು ಮೃತಪಟ್ಟಿದ್ದಾರೆ.

ಕುಶಾಲನಗರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಅಂತ್ಯಸಂಸ್ಕಾರ : ಮೃತ ನಾಗರಾಜು ಪತ್ನಿ, ಮೂವರು ಮಕ್ಕಳನ್ನು ಅಗಲಿದ್ದಾರೆ. ಸ್ವಗ್ರಾಮ ಸುಂದರನಗರದಲ್ಲಿ ಶನಿವಾರ ಸಂಜೆ ಅಂತ್ಯ ಸಂಸ್ಕಾರ ನೆರವೇರಿಸಲಾಯಿತು.

ಜ್ಯೋತಿಗೌಡನಪುರದಲ್ಲಿ ಪರಿಸ್ಥಿತಿ ಶಾಂತ: ನಿಲ್ಲದ ಪ್ರತಿಭಟನೆ

ಚಾಮರಾಜನಗರ, ಅ.25–ತಾಲೂಕಿನ ಜ್ಯೋತಿಗೌಡನಪುರ ಗ್ರಾಮದಲ್ಲಿ ಈಗ ಶಾಂತ ಪರಿಸ್ಥಿತಿ ನೆಲೆಯೂರಿದ್ದರೂ ಒಳಗೊಳಗೆ ಗ್ರಾಮಸ್ಥರ ಕೋಪ ಮಾತ್ರ ಶಮನಗೊಂಡಿಲ್ಲ.



ಜ್ಯೋತಿಗೌಡನಪುರ ಗ್ರಾಮಕ್ಕೆ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನ್ ಕುಮಾರ್, ನಗರಸಭಾ ಅಧ್ಯಕ್ಷ ಸುರೇಶ್ ಹಾಗೂ ಮುಖಂಡರು ಗ್ರಾಮಸ್ಥರು ನಡೆಸುತ್ತಿರುವ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿದರು

ಇಂಥ ಹೇಯಕೃತ್ಯವನ್ನು ಗ್ರಾಮದಲ್ಲಿರುವವರಾರೂ ನಡೆಸಿಲ್ಲ. ಹೊರಗಿನಿಂದ ಬಂದ ಕಿಡಿಗೇಡಿಗಳು ಈ ಕೃತ್ಯ ನಡೆಸಿದ್ದಾರೆ ಎಂಬ ಸಮಾಧಾನ ಮಾತ್ರ ಗ್ರಾಮಸ್ಥರಲ್ಲಿದೆ. ಆದರೆ ಆರೋಪಿಗಳ ಬಂಧನವಾಗುವವರೆಗೂ ಪ್ರತಿಭಟನೆ ನಿಲ್ಲಿಸುವುದಿಲ್ಲ ಎಂದು ಮುಂದುವರೆಸಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿದೆ.

ಬಿಜೆಪಿ ಮುಖಂಡರ ಭೇಟಿ : ಗ್ರಾಮಕ್ಕೆ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್, ನಗರಸಭಾ ಅಧ್ಯಕ್ಷ ಸುರೇಶ್ ಹಾಗೂ ಮುಖಂಡರು ಗ್ರಾಮಸ್ಥರು ನಡೆಸುತ್ತಿರುವ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ಪ್ರತಿಭಟನಾಕಾರರನ್ನುದ್ದೇಶಿಸಿ ಮಾತನಾಡಿ, ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರ ಹಾಗೂ ಬುದ್ಧರ ಪುತ್ಥಳಿಯನ್ನು ವಿರೂಪಗೊಳಿಸಿರುವ ಘಟನೆಯನ್ನು ಇಡೀ ನಾಗರಿಕ ಸಮಾಜವೇ ತಲೆ ತಗ್ಗಿಸುವ ಕೆಲಸವಾಗಿದೆ. ಅಪರಾಧಿಗಳಿಗೆ ದೊಡ್ಡಮಟ್ಟದ ಶಿಕ್ಷೆಗೆ ಒಳಪಡಿಸುವ ಮೂಲಕ ಇತಿಹಾಸದಲ್ಲಿ ನೆನಪಿನಲ್ಲಿ ಉಳಿಯುವಂಥ ಶಿಕ್ಷೆಯನ್ನು ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿ, ಆರೋಪಿಗಳನ್ನು ಬಂಧಿಸುವ ತನಕ ಗ್ರಾಮಸ್ಥರೊಂದಿಗೆ ಇರುವುದಾಗಿ ತಿಳಿಸಿದರು.

ನಗರಸಭಾ ಅಧ್ಯಕ್ಷ ಸುರೇಶ್, ಕಾಡಾ ಮಾಜಿ ಅಧ್ಯಕ್ಷ ನಿಜಗುಣರಾಜು, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೃಷಭೇಂದ್ರಪ್ಪ ಮಾತನಾಡಿ, ಇಂತಹ ಹೇಯಕೃತ ಎಸಗುವ ಆರೋಪಿಗಳಿಗೆ ಕಠಿಣ ಶಿಕ್ಷೆ ನೀಡಲು ಕೇಂದ್ರ, ರಾಜ್ಯ ಸರ್ಕಾರ ವಿಶೇಷ ಕಾನೂನು ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡುಪ್ರಕಾಶ್, ಹೊನ್ನೂರು ಮಹದೇವಸ್ವಾಮಿ, ನಗರಸಭಾ ಅಧ್ಯಕ್ಷ ಸುರೇಶ್, ಜಿಲ್ಲಾ ಉಪಾಧ್ಯಕ್ಷ ಶಿವವಿರಾಟ್, ನಟರಾಜು, ನಗರಸಭಾ ಸದಸ್ಯ ಚಂದ್ರಶೇಖರ್, ಗ್ರಾಮಾಂತರ ಮಂಡಲ ಅಧ್ಯಕ್ಷ ಕಾಡಳ್ಳಿ ಕುಮಾರ್, ಯುವ ಮೋರ್ಚಾದ ಸೂರ್ಯಕುಮಾರ್, ಮುಖಂಡ ಹೊಂಗನೂರು ಮಹದೇವಸ್ವಾಮಿ, ವೇಣುಗೋಪಾಲ್, ಶೇಷಪ್ಪ ಪಾಸ್ವಾನ್, ನಿಂಗನಾಯಕ, ಗಂಗಾಧರ್, ಚಿಕ್ಕಣ್ಣ, ಶಿವಮಲ್ಲು, ಬಸವಣ್ಣನಾಯಕ ಇತರರು ಭಾಗವಹಿಸಿದ್ದರು.

ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ನಿವೃತ್ತ ಮಂಚಾಪುರ ಮಾದೇಶ್‌ರಿಗೆ ಬೀಳ್ಕೊಡುಗೆ

ಕೊಳ್ಳೇಗಾಲ, ಅ.25–ಗ್ರಾಮೀಣ ಅಂಚೆ ಇಲಾಖೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಗ್ರಾಮೀಣ ಅಂಚೆಪೇದೆ ಮಂಚಾಪುರ ಮಾದೇಶ್ ಅವರಿಗೆ ಹಿರಿಯ ಅಧಿಕಾರಿ ಸಿಬ್ಬಂದಿಗಳ ಸಮ್ಮುಖದಲ್ಲಿ ಬೀಳ್ಕೊಡುಗೆ ನೀಡಲಾಯಿತು.



ಸೇವೆಯಿಂದ ನಿವೃತ್ತರಾದ ಗ್ರಾಮೀಣ ಅಂಚೆಪೇದೆ ಮಂಚಾಪುರ ಮಾದೇಶ್ ಅವರನ್ನು ಹಿರಿಯ ಅಧಿಕಾರಿಗಳು ಅಭಿನಂದಿಸಿದರು.

ರಾಷ್ಟ್ರೀಯ ಗ್ರಾಮೀಣ ನೌಕರರ ಸಂಘದ ನಂಜನಗೂಡು ವಿಭಾಗದ ಅಧ್ಯಕ್ಷ ಮಂಚಾಪುರ ಮಾದೇಶ್ ರಾಮಾಪುರ ಅಂಚೆ ಇಲಾಖೆಯಲ್ಲಿ ಪೇದೆಯಾಗಿ ಸತತ 45 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತರಾದ ಹಿನ್ನೆಲೆಯಲ್ಲಿ ಪಟ್ಟಣದ ಕನಕ ಭವನದಲ್ಲಿ ಬೀಳ್ಕೊಡುಗೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ಮಾಜಿ ಶಾಸಕಿ ಪರಿಮಳ ನಾಗಪ್ಪ ಮಾತನಾಡಿ, ಮಂಚಾಪುರ ಮಾದೇಶ್ ಅಂಚೆ ಇಲಾಖೆಯಲ್ಲಿ ತೀರಾ ಕಡಿಮೆ ವೇತನ ಪಡೆಯುತ್ತಿದ್ದರೂ ಸರಳ ಜೀವನ ನಡೆಸಿ ಜನರನ್ನು ಪ್ರೀತಿಯಿಂದ ಆದರಿಸುವ ಗುಣವನ್ನೊಂದಿದ್ದರು. 4 ದಶಕಕ್ಕೂ ಹೆಚ್ಚು ಕಾಲ ಉತ್ತಮ ರೀತಿಯಲ್ಲಿ ಸೇವೆ ಸಲ್ಲಿಸಿದ್ದಾರೆ ಎಂಬುದಕ್ಕೆ ಇಲ್ಲಿ ಪಾಲ್ಗೊಂಡ ಜನರೆ ಸಾಕ್ಷಿಯಾಗಿದ್ದಾರೆ, ಅವರ ನಿವೃತ್ತಿ ಜೀವನ ಸುಖಮಯವಾಗಿರಲಿ ಎಂದು ಹಾರೈಸಿದರು.

ನಿವೃತ್ತ ಹಿರಿಯ ಅಧಿಕಾರಿ ಪ್ರಕಾಶ್ ಮಾತನಾಡಿ, ಇದು ಮಾದೇಶ್ ಅವರ ಬೀಳ್ಕೊಡುಗೆ ಮಾತ್ರವಲ್ಲ, ಇದೊಂದು ಹಿರಿಯ ನಿವೃತ್ತ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ಒಗ್ಗೂಡಿಸಿರುವ ಸುಂದರ ಸ್ಮರಣೀಯವಾದ ಸಮಾಗಮದ ಕಾರ್ಯಕ್ರಮವಾಗಿದೆ ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಮತ್ತೋರ್ವ ನಿವೃತ್ತ ಅಂಚೆ ಅಧೀಕ್ಷಕ ಶ್ರೀನಿವಾಸ್ ಮಾತನಾಡಿ, ಅಂಚೆ ಇಲಾಖೆಯ ನೌಕರ ಮಾದೇಶ್ ಸ್ನೇಹಜೀವಿ, ಸಜ್ಜನ ವ್ಯಕ್ತಿತ್ವ, ಅವರು ನನ್ನಂತಹ ಅನೇಕ ಅಧಿಕಾರಿಗಳಿಗೆ ಬಲತುಂಬಿದ ನೌಕರ. ಅವರ ಸೇವೆ ನಿಜಕ್ಕೂ ಅಭಿನಂದನಾರ್ಹ, ಇಲಾಖೆಯಲ್ಲಿ ಅವರದ್ದು ಪ್ರತಿಫಲಾಪೇಕ್ಷೆ ಇಲ್ಲದ ಸೇವೆ ಎಂಬುದನ್ನು ಇಂದಿನ ಸಮಾರಂಭದಲ್ಲಿ ಪಾಲ್ಗೊಂಡಿರುವವರೇ ನಿರೂಪಿಸಿದ್ದಾರೆ. ಯಾರಿಗೂ ಹೋಲಿಕೆ ಮಾಡಲಾಗದ ವ್ಯಕ್ತಿತ್ವ ಅವರದ್ದು ಎಂದರು.

ನಮಹಳ್ಳಿಯ ಗ್ರಾಮೀಣ ಅಂಚೆ ಇಲಾಖೆ ರಾಷ್ಟ್ರೀಯ ನೌಕರರ ಸಂಘದ ಮುರಳಿಧರನ್, ವಲಯ ಕಾರ್ಯದರ್ಶಿ ಚಿತ್ರಸೇನ, ನಿವೃತ್ತ ಅಂಚೆ ಇಲಾಖೆಯ ಅಧೀಕ್ಷಕರಾದ ವೆಂಕಟರಮಣಸ್ವಾಮಿ, ಬಿ.ಸಿ.ಶ್ರೀನಿವಾಸ್, ನಾಗರಾಜರಾವ್, ರಾಮಲಿಂಗಯ್ಯ, ಹೆಮ್ಮರಗಾಲ ರಾಜಶೇಖರ್, ರಾಮಲಿಂಗಯ್ಯ, ಎನ್.ಪ್ರಕಾಶ್, ಸುರೇಶ್ ಮೂರ್ತಿ, ನಿವೃತ್ತ ಹಿರಿಯ ಅಂಚೆ ಅಧೀಕ್ಷಕ ಶಿವಯ್ಯ, ಲಿಂಗಶೆಟ್ಟಿ, ಮೈಸೂರು ಅಂಚೆ ಇಲಾಖೆಯ ತರಬೇತಿ ಕೇಂದ್ರದ ಸಹಾಯಕ ಅಂಚೆ ಅಧೀಕ್ಷಕ ಸುರೇಶ್ ಕುಮಾರ್, ಅಂಚೆ ನಿರೀಕ್ಷಕ ಮೂರ್ತಿ ನಾಯಕ್, ನರಸೀಪುರ ಅಂಚೆ ಇಲಾಖೆಯ ನಿರೀಕ್ಷಕ ಗಿರೀಶ್, ಅಜಯ್, ಅಂಚೆಪಾಲಕ ನಾಗರಾಜು, ಇನ್ನಿತರ ಅಧಿಕಾರಿಗಳ ಸಮಾಗಮದಲ್ಲಿ ಹೃದಯಸ್ಪರ್ಶಿ ಬೀಳ್ಕೊಡುಗೆ ನೀಡಲಾಯಿತು. ರಾಮಾಪುರ ವಿಶ್ವ ಪ್ರದೀಪ್, ಪಾಳ್ಯ ಮಹೇಶ್, ಭಾಗ್ಯರಾಜು, ಕುಮಾರಿ ರಮ್ಯ, ಸುನೀಲ್ ಕುಮಾರ್, ಕುಳುವ ಸಮಾಜದ ಅಧ್ಯಕ್ಷ ಶ್ರೀನಿವಾಸ್, ಉತ್ತಂಬಳ್ಳಿ ಗಣೇಶ, ಲಕ್ಷ್ಮೀನಾರಾಯಣ ಅರಸು, ನಟೇಶ್, ಮಹದೇವಯ್ಯ, ಸುರೇಶ ಮೂರ್ತಿ ಇತರರಿದ್ದರು.

ಮಹಿಳೆಯರ ಮೇಲಿನ ದೌರ್ಜನ್ಯ ಖಂಡಿಸಿ ಮಹಿಳೋದಯ ಮಹಿಳಾ ಒಕ್ಕೂಟ ಪ್ರತಿಭಟನೆ



ಮಹಿಳೆಯರ ಮೇಲಿನ ದೌರ್ಜನ್ಯವನ್ನು ಖಂಡಿಸಿ ಮಹಿಳೋದಯ ಮಹಿಳಾ ಒಕ್ಕೂಟ, ಓಡಿಪಿ ಸಂಸ್ಥೆ ಪ್ರತಿಭಟನೆ ನಡೆಸಿದವು.

ಚಾಮರಾಜನಗರ, ಅ.25– ಹೆಣ್ಣು ಮಕ್ಕಳ ಮತ್ತು ಮಹಿಳೆಯರ ಮೇಲಿನ ದೌರ್ಜನ್ಯವನ್ನು ಖಂಡಿಸಿ ಮತ್ತು ವಿಧವೆ ವೇತನ, ವೃದ್ಧಾಪ್ಯ, ವಿಕಲಚೇತನರಿಗೆ ಪಿಂಚಣಿಯನ್ನು ಸರ್ಕಾರ ಹೆಚ್ಚಿಸುವಂತೆ ಮಹಿಳೋದಯ ಮಹಿಳಾ ಒಕ್ಕೂಟ ಹಾಗೂ ಓ.ಡಿ.ಪಿ ಸಂಸ್ಥೆ ಶುಕ್ರವಾರ ಪ್ರತಿಭಟನೆ ನಡೆಸಿದವು.

ನಗರದ ಚಾಮರಾಜೇಶ್ವರ ದೇವಸ್ಥಾನದಿಂದ ಒಕ್ಕೂಟದ ಸದಸ್ಯರು ಮೆರವಣಿಗೆಯಲ್ಲಿ ಜಿಲ್ಲಾಧಿಕಾರಿಗಳ ಕಛೇರಿಗೆ ಆಗಮಿಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಓ.ಡಿ.ಪಿ ಸಂಸ್ಥೆಯ ವಲಯ ಸಂಯೋಜಕ ಸಿದ್ದರಾಜು ಮಾತನಾಡಿ, ಹೆಣ್ಣು ಮಕ್ಕಳ ಮತ್ತು ಮಹಿಳೆಯರ ಶೋಷಣೆ ಹಾಗೂ ಲೈಂಗಿಕ ಕಿರುಕುಳಗಳು ಹೆಚ್ಚಾಗಿ ನಡೆಯುತ್ತಿದೆ. ರಕ್ಷಣಾ ಇಲಾಖೆ ಇಂತಹ ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗೆ ಕಾನೂನಿನಲ್ಲಿ ಭದ್ರತೆ ಒದಗಿಸಬೇಕು. ಹಾಗೂ ವಿಧವೆ ವೇತನ, ವೃದ್ಧಾಪ್ಯ, ವಿಕಲಚೇತನರಿಗೆ ಪಿಂಚಣಿಯನ್ನು ಸರ್ಕಾರ ಪ್ರತಿಯೊಬ್ಬ ಪಿಂಚಣಿದಾರರಿಗೆ ತಿಂಗಳಿಗೆ 3 ಸಾವಿರ ನೀಡುವಂತೆ ಒತ್ತಾಯಿಸಿದರು.

ಅತ್ಯಾಚಾರ ಮತ್ತು ಕೊಲೆ ಎಸಗಿದ ಆರೋಪಿಗಳನ್ನು ಕೂಡಲೇ ಬಂಧಿಸಿ ಮರಣ ದಂಡನೆ ವಿಧಿಸಬೇಕು. ಮಹಿಳೆಯರ ಮೇಲಿನ ಹೀನಕೃತ್ಯ ನಡೆಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಮಹಿಳೆಯ ವಿರುದ್ಧ ನಡೆಯುವ ಅಪರಾಧಗಳನ್ನು ಕುರಿತು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಅತ್ಯಂತ ತುರ್ತಾಗಿ ಕ್ರಮವಹಿಸಬೇಕು. ಕೋರ್ಟ್‌ಗಳಲ್ಲಿ ಮಹಿಳೆಯರ ಮೇಲಿನ ಪ್ರಕರಣಗಳು ತ್ವರಿತವಾಗಿ ವಿಲೇವಾರಿ ಮಾಡಬೇಕು ಮತ್ತು ತಪ್ಪಿತಸ್ಥರಿಗೆ ಶಿಕ್ಷೆ ನೀಡಬೇಕೆಂದು ಜಿಲ್ಲಾಧಿಕಾರಿಗಳಿಗೆ ನೀಡಿರುವ ಮನವಿಯಲ್ಲಿ ಆಗ್ರಹಿಸಿದ್ದಾರೆ.

ಪ್ರತಿಭಟನೆಯಲ್ಲಿ ತಾಲೂಕು ಒಕ್ಕೂಟದ ಅಧ್ಯಕ್ಷೆ ಎಸ್ತರ್‌ರೋಜ್ ಕಾರ್ಯಕರ್ತರಾದ ಸರೋಜ, ಬಸಮ್ಮ, ರೇಖಮಣಿ, ಮರಿ ಜೋಸೆಫ್, ಮಹೇಶ್, ರಾಮಕೃಷ್ಣ, ರವಿ, ಪರಮೇಶ್ವರಿ, ಸಾಕಮ್ಮ, ಸುಮತಿ, ಸುಮಿತ್ರ, ಅಭಿಲಾಷ, ಹಾಗೂ ಗ್ರಾಮೀಣಭಾಗದ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಭಾಗವಹಿಸಿದ್ದರು.

ಹೆಲ್ಪ್‌ಡೆಸ್ಕ್ ಪ್ರಾರಂಭ

ಚಾಮರಾಜನಗರ: ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ವತಿಯಿಂದ ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳಿಗೆ ಬ್ಯಾಂಕ್ ಸಾಲದ ಮಾಹಿತಿ ನೀಡಲು ಹೆಲ್ಪ್ ಡೆಸ್ಕ್ ಅನ್ನು ಜಿಲ್ಲಾಡಳಿತ ಭವನದ 3ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 331ರಲ್ಲಿ ಪ್ರಾರಂಭಿಸಲಾಗಿದೆ.

ಕಾಂಗ್ರೆಸ್ ಪ್ರಚಾರ ಸಮಿತಿ ವರ್ಷಪೂರ್ತಿ ಕಾರ್ಯನಿರ್ವಹಿಸುತ್ತದೆ

ಚಾಮರಾಜನಗರ, ಅ.25–ಚುನಾವಣೆಗೆ ಸೀಮಿತವಾಗಿದ್ದ ಕಾಂಗ್ರೆಸ್ ಪ್ರಚಾರ ಸಮಿತಿಯು ಇನ್ನೂ ಮುಂದೆ ವರ್ಷಪೂರ್ತಿ ಕಾರ್ಯನಿರ್ವಹಿಸುತ್ತದೆ ಎಂದು ಕೆಪಿಸಿಸಿ ಪ್ರಚಾರ ಸಮಿತಿಯ ರಾಜ್ಯ ಮುಖ್ಯ ಸಂಯೋಜಕ ಎಸ್.ನಾರಾಯಣ್ ಹೇಳಿದರು.



ಜಿಲ್ಲಾ ಪ್ರಚಾರ ಸಮಿತಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಎಸ್. ನಾರಾಯಣ್ ಮಾತನಾಡಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಪದಾಧಿಕಾರಿಗಳೊಂದಿಗೆ ಮಾತನಾಡಿ, ನಾನು ನೂತನವಾಗಿ ಕೆಪಿಸಿಸಿ ಪ್ರಚಾರ ಸಮಿತಿ ರಾಜ್ಯ ಸಂಯೋಜಕರಾದ ಮೇಲೆ ಜಿಲ್ಲಾ ಪ್ರವಾಸಕೈಗೊಂಡು ಜಿಲ್ಲಾ ಸಮಿತಿ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಪರಿಚಯಿಸಿಕೊಳ್ಳುತ್ತಿದ್ದೇನೆ. ಮುಂದಿನ ದಿನಗಳಲ್ಲಿ ಪ್ರಚಾರ ಸಮಿತಿ ವಿಭಾಗವನ್ನು ಸದೃಢಗೊಳಿಸಲು ಶ್ರಮಿಸಲಾಗುತ್ತದೆ ಎಂದರು.

ಕಾಂಗ್ರೆಸ್ ಸರ್ಕಾರ ಯೋಜನೆಗಳು, ಪಂಚ ಗ್ಯಾರಂಟಿ ಯೋಜನೆಗಳನ್ನು, ಕೇಂದ್ರ ಸರ್ಕಾರದ ದುರಾಡಳಿತವನ್ನು ಮನೆಮನೆಗೆ ತಿಳಿಸಿಕೊಡಲಾಗುತ್ತದೆ. ಪ್ರಚಾರ ಸಮಿತಿಯು ಹಿಂದೆ ಚುನಾವಣೆಗಳಿಗೆ ಮಾತ್ರ ಸೀಮಿತವಾಗಿತ್ತು ಇನ್ನೂ ಮುಂದೆ ವರ್ಷಪೂರ್ತಿ ಕೆಲಸ ಮಾಡುತ್ತದೆ ಎಂದರು.

ಚುನಾವಣೆ ಪೂರ್ವದಲ್ಲಿ ಗ್ಯಾರಂಟಿ ಯೋಜನೆಯನ್ನು ಘೋಷಣೆ ಮಾಡಿದಾಗ ವಿರೋಧ ಪಕ್ಷದವರು ಟೀಕೆ ಮಾಡುತ್ತಿದ್ದರು. ಇಂದು ಗ್ಯಾರಂಟಿ ಯೋಜನೆಯನ್ನು ಬೇರೆಬೇರೆ ರಾಜ್ಯಗಳಲ್ಲಿ ಅಳವಡಿಸಿಕೊಳ್ಳುತ್ತಿದ್ದಾರೆ. ಗ್ಯಾರಂಟಿ ಯೋಜನೆ ಜನರ ಬದುಕು ಆಗಿದೆ ಎಂದರು.

ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ರಘು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಹೆಚ್.ವಿ.ಚಂದ್ರು, ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಕಾವೇರಿ ಶಿವಕುಮಾರ್ ಮಾತನಾಡಿದರು.

ಜಿಲ್ಲಾಧ್ಯಕ್ಷ ಹೊಸಹಳ್ಳಿ ಮಧುಸೂದನ್ ಪ್ರಾಸ್ತಾವಿಕ ಭಾಷಣ ಮಾಡಿದರು. ಸಭೆಯಲ್ಲಿ ಜಿ.ಪಂ.ಮಾಜಿ ಅಧ್ಯಕ್ಷ ಸಿ.ಎ.ಮಹದೇವಶೆಟ್ಟಿ, ಸದಸ್ಯ ಕೆರೆಹಳ್ಳಿ ನವೀನ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರುಸ್ವಾಮಿ, ಮುನಿರಾಜು, ಎಪಿಎಂಸಿ ಅಧ್ಯಕ್ಷ ಸೋಮೇಶ್, ತಾಲೂಕು ಗ್ಯಾರಂಟಿ ಅಧ್ಯಕ್ಷ ನಲ್ಲೂರು ಸೋಮೇಶ್ವರ, ಯುವ ಕಾಂಗ್ರೆಸ್ ಅಧ್ಯಕ್ಷ ಸಿ.ಯೋಗೇಂದ್ರ, ಎನ್‌ಎಸ್‌ಯುಐ ಅಧ್ಯಕ್ಷ ಮೋಹನ್ ನಗು, ಓಬಿಸಿ ಜಿಲ್ಲಾಧ್ಯಕ್ಷ ಚೇತನ್ ಕುಮಾರ್, ಚೂಡಾ ಮಾಜಿ ಅಧ್ಯಕ್ಷ. ಸುಹೇಲ್ ಅಲಿಖಾನ್, ಕಾರ್ಮಿಕ ವಿಭಾಗದ ಅಧ್ಯಕ್ಷ ಮಹೇಶ್, ಮುಖಂಡ ಅಯ್ಯೂಬ್ ಉಲ್ಲಾ ಖಾನ್, ಇತರರು ಭಾಗವಹಿಸಿದ್ದರು.

ವಾರದ ಮಿತ್ರ
ಸಾಪ್ತಾಹಿಕ ಪುರವಣಿ

ಮೈಸೂರು ಮಿತ್ರ

ಭಾನುವಾರ 26-10-2025

ಪುಟ 9

ಬಾಪುಲಿಂಗರಾಜ್ ಅರಸ್



ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರೆತು 17 ವರ್ಷವಾದರೂ ಈ ತನಕ ಪ್ರತ್ಯೇಕ, ಶಾಶ್ವತ ಕಟ್ಟಡದ ಭಾಗ್ಯ ವಿಲ್ಲ. ಕೇಂದ್ರ ಸರ್ಕಾರದಿಂದ ತಮಿಳು ನಾಡಿಗೆ ದೊರೆಯುವಷ್ಟು ಅನುದಾನ ಕೂಡ ಬರುತ್ತಿಲ್ಲ. ಮೈಸೂರು, ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರ ತವರು ಜಿಲ್ಲೆಯಾದರೂ, ಪ್ರಧಾನಮಂತ್ರಿ ನರೇಂದ್ರ ಮೋದಿ ಸರ್ಕಾರದಲ್ಲಿ ಹೆಚ್.ಡಿ.ಕುಮಾರಸ್ವಾಮಿ, ಪ್ರಹ್ಲಾದ್ ಜೋಷಿ, ಶೋಭ ಕರಂದ್ಲಾಜೆ, ಸೋಮಣ್ಣ ಅವರಂತಹ ಪ್ರಭಾವಿ ಸಚಿವರಿದ್ದರೂ ಕನ್ನಡಕ್ಕೆ ದೊರೆಯ ಬೇಕಾದ ಪ್ರಾಧಾನ್ಯತೆ ದೊರೆಯುತ್ತಿಲ್ಲ.

ಕನ್ನಡ ಶಾಸ್ತ್ರೀಯ ನೆಲೆ ದಯನೀಯ

ಕೇಂದ್ರ ಸರ್ಕಾರ ಕನ್ನಡ ಭಾಷೆಗೆ 2008, ಅಕ್ಟೋಬರ್ 31 ರಂದು ಶಾಸ್ತ್ರೀಯ ಸ್ಥಾನಮಾನ ಘೋಷಣೆ ಮಾಡಿತು. ಕೇಂದ್ರ ಸರ್ಕಾರದಿಂದ ಅನುದಾನ ದೊರೆಯದ ಕಾರಣ ಐದು ವರ್ಷದ ನಂತರ ಅಂದರೆ 2013 ರಲ್ಲಿ ಕೆಲಸ ಆರಂಭವಾಯಿತು. ಇದಾದ 4 ವರ್ಷಕ್ಕೆ ಪ್ರಥಮ ನಿರ್ದೇಶಕರನ್ನು ನಿಯೋಜನೆ ಮಾಡಲಾಯಿತು. ನಾಲ್ಕು ನಿರ್ದೇಶಕರ ಅಧಿಕಾರಾವಧಿ ಮುಗಿದಿದ್ದು, ಪ್ರೊ.ತಳವಾರ್ 5 ನೇ ನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಕನ್ನಡಕ್ಕೆ ಶಾಸ್ತ್ರೀಯ ಭಾಷೆಯ ಸ್ಥಾನಮಾನ ದೊರೆತ ನಂತರ ಕೇಂದ್ರ ಸರ್ಕಾರ ತಮಿಳುನಾಡಿಗೆ ನೀಡುವಷ್ಟು ಅನುದಾನ ನೀಡುತ್ತಿಲ್ಲ. ವರ್ಷಕ್ಕೆ ಕೇವಲ ಎರಡು ಕೋಟಿ ರೂಪಾಯಿ ಅನುದಾನ ಮಾತ್ರ ನೀಡುತ್ತಿದೆ.

ಎರಡು ಕೋಟಿ ಅನುದಾನದಲ್ಲಿ ಎಷ್ಟು ಸಾಧ್ಯವೋ ಅಷ್ಟು ಕೆಲಸಗಳು ನಡೆಯುತ್ತಿವೆ. ಇಲ್ಲಿ ತನಕ 210 ಉಪನ್ಯಾಸ ನಡೆಸಲಾಗಿದ್ದು, 8 ಪುಸ್ತಕಗಳನ್ನು ಬಿಡುಗಡೆ ಮಾಡಲಾಗಿದೆ. 22 ಪುಸ್ತಕಗಳು ಬಿಡುಗಡೆಯ ಹಂತದಲ್ಲಿವೆ. ಶಾಸ್ತ್ರೀಯ ಭಾಷೆಯ ಸ್ಥಾನಮಾನದ ಚಟುವಟಿಕೆಗಳು ಎಷ್ಟರ ಮಟ್ಟಿಗೆ ಕುಂಟುತ್ತಾ ಸಾಗುತ್ತಿದೆ ಎಂಬುದನ್ನು ಈ ಅಂಕಿ ಅಂಶಗಳು ಸ್ಪಷ್ಟ ನಿದರ್ಶನ.

ಕೇಂದ್ರ ಸರ್ಕಾರ 2004 ರಲ್ಲಿ ತಮಿಳು ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ನೀಡಿದೆ. ಪ್ರತಿ ವರ್ಷ ಸುಮಾರು 10 ರಿಂದ 15 ಕೋಟಿ ರೂಪಾಯಿ ಅನುದಾನ ನೀಡುತ್ತಿದೆ. ತಮಿಳುನಾಡು ರಾಜಧಾನಿ ಚೆನ್ನೈನಲ್ಲಿ ಶಾಶ್ವತ ಕಟ್ಟಡವನ್ನು ಕೇಂದ್ರ ಸರ್ಕಾರ ನಿರ್ಮಾಣ ಮಾಡಿಕೊಟ್ಟಿದೆ. ತಮಿಳು ಶಾಸ್ತ್ರೀಯ ಭಾಷೆಯ ಕುರಿತಂತೆ ಸಂಶೋಧನೆ ಸೇರಿದಂತೆ ಹಲವು ಚಟುವಟಿಕೆಗಳು ವರ್ಷಪೂರ್ತಿ ನಡೆಯುತ್ತಿವೆ.

ಆದರೆ, ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರೆತು 17 ವರ್ಷವಾದರೂ ಸಮಾಧಾನಕರ ಚಟುವಟಿಕೆಗಳು ನಡೆಯುತ್ತಿಲ್ಲ. ಕೇಂದ್ರ ಸರ್ಕಾರದಿಂದ ದೊರೆಯುವ ಅನುದಾನ ತೀರಾ ಕಡಿಮೆ ಇರುವ ಕಾರಣ ಕನ್ನಡ ಭಾಷಾ ಸಂಶೋಧನೆ ಸೇರಿದಂತೆ ಇತರೆ ಚಟುವಟಿಕೆಗಳು ಅಷ್ಟಕಷ್ಟೆ ಎಂದು ಹೇಳಬಹುದು.

ತಮಿಳು ಭಾಷೆಗೆ ಮೊದಲು ಶಾಸ್ತ್ರೀಯ ಸ್ಥಾನಮಾನ ನೀಡಿದ ಕೇಂದ್ರ ಸರ್ಕಾರ ತರುವಾಯ ಕನ್ನಡಕ್ಕೆ ಶಾಸ್ತ್ರೀಯ ಭಾಷೆಯ ಸ್ಥಾನಮಾನ ನೀಡಿತು. ನಂತರ ಒಡಿಶಾ, ತೆಲುಗು, ಮಲೆಯಾಳಂ, ಬೆಂಗಾಲಿ, ಪಾಲಿ, ಪ್ರಾಕೃತ ಹಾಗೂ ಮರಾಠಿ ಸೇರಿ 11 ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ನೀಡಿದೆ.

ಸಿದ್ದರಾಮಯ್ಯ ಅವರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ 5 ಎಕರೆ ಜಾಗ ನೀಡಬೇಕು. ತರುವಾಯ ಕೇಂದ್ರದಲ್ಲಿ ಸಚಿವರಾಗಿರುವ ಹೆಚ್.ಡಿ.ಕುಮಾರಸ್ವಾಮಿ, ಪ್ರಹ್ಲಾದ್ ಜೋಷಿ, ಸೋಮಣ್ಣ ಅವರು ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಿ ಶಾಶ್ವತ ಕಚೇರಿ ನಿರ್ಮಾಣಕ್ಕೆ ಅನುದಾನ ದೊರಕಿಸಬೇಕು.

ತಮಿಳುನಾಡಿನಲ್ಲಿ ಹಿಂದಿನಿಂದಲೂ ಪ್ರಾದೇಶಿಕ ಪಕ್ಷ ಅಧಿಕಾರ ನಡೆಸುತ್ತಿದೆ. ಆದರೂ ಲಾಭಿ ಮಾಡುವ ಅಲ್ಲಿನ ಸರ್ಕಾರ ಅನೇಕ ಸವಲತ್ತುಗಳನ್ನು ದಕ್ಕಿಸಿಕೊಳ್ಳುತ್ತಿದೆ. ಆದರೆ ಕಾಂಗ್ರೆಸ್ ಮತ್ತು ಬಿಜೆಪಿ ಎರಡು ಪಕ್ಷಗಳು ಕೇಂದ್ರದಲ್ಲಿ ಅಧಿಕಾರದಲ್ಲಿದ್ದರೂ, ಇಲ್ಲಿನ ನಾಯಕರು ಕರ್ನಾಟಕಕ್ಕೆ ಸಿಗಬೇಕಾದ ಸವಲತ್ತು ದೊರಕಿಸಿಕೊಡುವ ಬದ್ಧತೆ ತೋರುತ್ತಿಲ್ಲ. ಇದಕ್ಕೆ ಕನ್ನಡ ಶಾಸ್ತ್ರೀಯ ಸ್ಥಾನಮಾನದ ಈಗಿನ ದಯಾನೀಯ ಪರಿಸ್ಥಿತಿ ತೋರಿಸುತ್ತದೆ.

ರಾಜ್ಯ ಸರ್ಕಾರ ಜಾಗ ಕೊಡುತ್ತಿಲ್ಲ; ಕೇಂದ್ರ ಕಟ್ಟಡಕ್ಕೆ ಹಣ ನೀಡುತ್ತಿಲ್ಲ

ಕನ್ನಡಕ್ಕೆ ಶಾಸ್ತ್ರೀಯ ಭಾಷೆಯ ಸ್ಥಾನಮಾನ ನೀಡಿದ ನಂತರ ಮೈಸೂರಿನ ಹುಣಸೂರು ರಸ್ತೆಯ ಭಾರತೀಯ ಭಾಷಾ ಸಂಸ್ಥಾನದಲ್ಲಿ ಕೇಂದ್ರ ಕಚೇರಿ ತೆರೆಯಲಾಯಿತು. ಉಪನ್ಯಾಸ, ಕಾರ್ಯಾಗಾರ ಸೇರಿದಂತೆ ಹಲವು ಶಿಬಿರಗಳು ಇಂದಿಗೂ ಅಲ್ಲೆ ನಡೆಯುತ್ತಿವೆ.

ಈ ಮಧ್ಯೆ ಶಾಸ್ತ್ರೀಯ ಭಾಷೆಯ ಕಚೇರಿಯನ್ನು ರಾಜಧಾನಿ ಬೆಂಗಳೂರಿಗೆ ಸ್ಥಳಾಂತರ ಮಾಡುವ ಪ್ರಕ್ರಿಯೆಗಳು ಆರಂಭವಾಯಿತು. ಆದರೆ ಮೈಸೂರಿಗರ ತೀವ್ರ ವಿರೋಧದ ನಂತರ ಮೈಸೂರಿನಲ್ಲೇ ಕೇಂದ್ರ ಕಚೇರಿ ಅಭಾದಿತವಾಯಿತು. ಆದರೆ ಕನ್ನಡದ ಶಾಸ್ತ್ರೀಯ ಭಾಷೆಯ ಕಚೇರಿಗೆ ಸ್ವಂತ ಕಟ್ಟಡವಿಲ್ಲ. ಇದಕ್ಕಾಗಿ 5 ಎಕರೆ ಭೂಮಿಯ ಅವಶ್ಯಕತೆ ಇದೆ. ರಾಜ್ಯ ಸರ್ಕಾರ ಭೂಮಿ ನೀಡಿದರೆ ಕೇಂದ್ರ ಸರ್ಕಾರ ಕಟ್ಟಡ ನಿರ್ಮಾಣಕ್ಕೆ ಹಣ ನೀಡುತ್ತದೆ. ನಾವು ಜಾಗ ನೀಡುತ್ತೇವೆ, ನೀವು ಕಟ್ಟಡ ನಿರ್ಮಾಣಕ್ಕೆ ಅನುದಾನ ನೀಡಿ ಎಂದು ರಾಜ್ಯ ಸರ್ಕಾರ ಈ ತನಕ ಶಿಪಾರಸು ಮಾಡಿಲ್ಲ. ಇದರಿಂದ ಶಾಶ್ವತ ಕಟ್ಟಡ ನಿರ್ಮಾಣ ನೆನೆಗುದಿಗೆ ಬಿದ್ದಿದೆ. ಮೈಸೂರಿನ ಮಾನಸ ಗಂಗೋತ್ರಿಯ ಜಯಲಕ್ಷ್ಮಿ ವಿಲಾಸ್ ಮ್ಯಾನ್ಷನ್ ಅಥವಾ ಬಸವ ಪೀಠದ ಎದುರಿನ 5 ಎಕರೆ ಜಾಗ ಪಡೆಯುವ ಬಗ್ಗೆ ಪ್ರಯತ್ನಗಳು ನಡೆಯಿತು. ಆದರೆ ತಮ್ಮ ಜಾಗ ನೀಡಲು ವಿಶ್ವವಿದ್ಯಾನಿಲಯ ನಿರಾಕರಿಸಿತು. ಇದರಿಂದ ಕನ್ನಡ ಶಾಸ್ತ್ರೀಯ ಭಾಷೆಯ ಕೇಂದ್ರ ಕಚೇರಿ ನಿರ್ಮಾಣ ಕೈಗೂಡಲಿಲ್ಲ.

ಜಾಗಕ್ಕೆ ಪತ್ರ ಬರೆದಿದ್ದೇವೆ



ಕನ್ನಡಕ್ಕೆ ಶಾಸ್ತ್ರೀಯ ಭಾಷೆಯ ಸ್ಥಾನಮಾನದ ಕೇಂದ್ರ ಕಚೇರಿ ನಿರ್ಮಿಸಲು ನಾವು ಜಾಗ ನೀಡಿದ್ದು ಇದರ ಹೆಸರಿಗೆ ನೋಂದಣಿ ಕೂಡ ಮಾಡಿದ್ದೇವೆ. ಈಗ ಕಟ್ಟಡ ನಿರ್ಮಾಣಕ್ಕೆ ಅನುದಾನ ನೀಡಿ ಎಂದು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ತಿಳಿಸಬೇಕು.

ಈ ಸಂಬಂಧ ಹಲವು ಬಾರಿ ರಾಜ್ಯ ಸರ್ಕಾರಕ್ಕೆ ನಾವು ಪ್ರಸ್ತಾವನೆ ಸಲ್ಲಿಸಿದ್ದೇವೆ. ಆದರೆ ಇದರಿಂದ ಯಾವುದೇ ಪ್ರಯೋಜನವಾಗಿಲ್ಲ. ಜಾಗ ನೀಡಿರುವ ಬಗ್ಗೆ ಈ ತನಕ ರಾಜ್ಯ ಸರ್ಕಾರ ಶಿಪಾರಸು ಮಾಡಿಲ್ಲ. ಕೇಂದ್ರ ಸರ್ಕಾರ ಅನುದಾನ ನೀಡುತ್ತಿಲ್ಲ. ಇದರಿಂದ ಶಾಸ್ತ್ರೀಯ ಸ್ಥಾನಮಾನದ ಕೇಂದ್ರ ಕಚೇರಿಯ ಕನಸು ಕನಸಾಗಿಯೇ ಉಳಿದಿದೆ.


- ಪ್ರೊ.ಎನ್.ಎಂ.ತಳವಾರ್,
ನಿರ್ದೇಶಕರು, ಕನ್ನಡ ಭಾಷೆಯ ಸ್ಥಾನಮಾನ ಕೇಂದ್ರ



ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ

ಮಕ್ಕಳ ಚಿತ್ರಕಥೆ — ಹೀಗೊಂದು ನೀತಿ ಕಥೆ

■ ಹೆಚ್.ಜಿ.ಎನ್.ಪ್ರಸಾದ್
ಮೊ. 98453 76199



ನೀತಿ :- ಎಲ್ಲದಕ್ಕೂ ಒಂದು ಮಿತಿ ಇದೆ. ಅದು ಮೀರಿದರೆ ಅಪಾಯ, ಅನಾಹುತ ಅನಿವಾರ್ಯ, ಅದನ್ನು ಅರಿತು ಬಾಳಿದರೆ ಬದುಕು ಸುರಕ್ಷಿತ ಮಾತ್ರವಲ್ಲ ಸುಖದಾಯಕ.

ವಾರಭವಿಷ್ಯ

26.10.2025 ರಿಂದ 01.11.2025

ಈ ವಾರದಲ್ಲಿ ಗ್ರಹಗಳ ರಾಶಿ ಸಂಚಾರ:- ರವಿ-ತುಲಾ, ಚಂದ್ರ-ವೃಶ್ಚಿಕ, ಧನುಸ್ಸು, ಮಕರ, ಕುಂಭ, ಕುಜ-ತುಲಾ, ವೃಶ್ಚಿಕ, ಬುಧ-ವೃಶ್ಚಿಕ, ಗುರು-ಕಟಕ, ಶುಕ್ರ-ಕನ್ಯಾ, ಶನಿ-ಮೀನ, ರಾಹು-ಕುಂಭ ಮತ್ತು ಕೇತು-ಸಿಂಹ.

ವಿ.ಕೇಶವಮೂರ್ತಿ
ಜ್ಯೋತಿಷ್ಯ ವಿದ್ವಾಂಸರು, 'ಭಾವಸಾರ್ ರತ್ನ'
'ಚೈತನ್ಯಶ್ರೀ ಪ್ರಶಸ್ತಿ ಪುರಸ್ಕೃತರು'
'ಕಲ್ಪದ್ರುಮ ಜ್ಯೋತಿಷ್ಯ ಅಧ್ಯಯನ ಕೇಂದ್ರ'
ವಿಳಾಸ: 533, 6ನೇ ಕ್ರಾಸ್, ಬೋಗಾದಿ ಉತ್ತರ, ಮೈಸೂರು ನಿರ್ಮಿತಿ ಕೇಂದ್ರ ಹತ್ತಿರ, ಮೈಸೂರು.
ಮೊ: 9740973224, 9739548720



ಮೇಷ (ಚು,ಚೆ,ಲ,ಲಿ,ಲು,ಲೆ,ಲೂ,ಅ)

ವಾರದಾರಂಭಕ್ಕೆ ನೀಚ ಸ್ಥಾನದಲ್ಲಿ ಚಂದ್ರ ಸಂಚಾರ ಇರುವುದರಿಂದ ಶರೀರದಲ್ಲಿ ಅನಾರೋಗ್ಯ, ಶತ್ರು, ವಿಷಾದಿ ಭಯ, ಉದರರೋಗ ಚಿಹ್ನೆಗಳು, ವಾರ ಸರಿದಂತೆ ಇಷ್ಟಕಾರ್ಯ ಸಿದ್ಧಿ, ಧನ-ಧಾನ್ಯ ಲಾಭ, ಆಜ್ಞಾಸಿದ್ಧಿ. ಖಯಾಲಿ ಪ್ರವಾಸಗಳನ್ನು ತಪ್ಪಿಸಿ ನೀರಿನ ಹತ್ತಿರ ಹುಡುಗಾಟ ಸಲ್ಲದು. ಮಾತೃಶ್ರೀಯವರ ಆರೋಗ್ಯದ ಬಗ್ಗೆ ಗಮನ ನೀಡಿ. ಕರೆಂಟ್ ಕೆಲಸಗಳ ಬಗ್ಗೆ ಎಚ್ಚರ.

ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದರ್ಶನ. ಶುಭ ಸಂಖ್ಯೆ-8

ವೃಷಭ (ಇ,ಉ,ಎ,ಒ,ವ,ವಿ,ವು,ವೆ,ವೂ)

ಈ ವಾರದಲ್ಲಿ ಕಳೆದುಕೊಂಡದ್ದನ್ನು ಮರಳಿ ಪಡೆಯುವ ಅವಕಾಶವಿದೆ. ನಂಬಿಕಸ್ಥರ ಸಹಾಯ ದೊರೆಯುವುದು. ಕುಟುಂಬ ಸಮಸ್ಯೆಗಳನ್ನು ಶ್ರೀಮತಿಯವರೊಂದಿಗೆ ಕುಳಿತು ಚರ್ಚಿಸಿ, ಗುರುಕೃಪೆಯಿಂದ ಪರಿಹಾರ ದೊರೆಯಲಿದೆ. ಶುಭ ಕಾರ್ಯ ಪ್ರಯತ್ನದಲ್ಲಿ ಸಫಲತೆಯನ್ನು ಹೊಂದುವಿರಿ. ನಿಪುಣತೆಯಿಂದ ಕಾರ್ಯ ಜಯ. ಲೆಕ್ಕ ಪರಿಶೋಧಕರಿಗೆ ಉತ್ತಮ ವರಮಾನ ದೊರೆಯಲಿದೆ.

ಶ್ರೀ ರಾಮರಕ್ಷಾ ಸ್ತೋತ್ರ ಪಠಿಸಿ. ಶುಭ ಸಂಖ್ಯೆ-2

ಮಿಥುನ (ಕ,ಕಿ,ಕು,ಘ,ಙ,ಛ,ಕೆ,ಕೊ,ಹ)

ವಾರದ ಆದಿಗೆ ಚರ-ಸ್ಥಿರ ಆಸ್ತಿಗಳ ವ್ಯವಹಾರವು ಭಾಗ್ಯದ ಬಾಗಿಲು ತೆರೆಯುವುದು. ಸಮಾಜದ ಪ್ರಮುಖ ವ್ಯಕ್ತಿಗಳೊಂದಿಗೆ ನಿಮ್ಮ ಸಂಪರ್ಕವು ವಿಸ್ತಾರಗೊಳ್ಳಲಿದೆ. ಯೋಚಿಸಿದ್ದನ್ನೆಲ್ಲಾ ಮಾತನಾಡಬೇಡಿ. ಯೋಚಿಸಿ ಮಾತನಾಡಿ. ಸರ್ಕಾರಿ ನೌಕರರು ಅಡ್ಡದಾರಿ ಹಿಡಿದು ಸಂಕಷ್ಟಕ್ಕೆ ಗುರಿಯಾಗುವರು. ಹಾಗೂ ಹಿರಿಯ ಅಧಿಕಾರಿಗಳ ಕೆಂಗಣ್ಣಿಗೆ ಗುರಿಯಾಗುವರು.

ಶ್ರೀ ಶ್ರೀನಿವಾಸ ಉಪಾಸನೆ. ಶುಭ ಸಂಖ್ಯೆ-9

ಕಟಕ (ಹೊ,ಹು,ಹೆ,ಡ,ಡಿ,ಡು)

ಸರ್ಕಾರಿ ನೌಕರರಿಗೆ ಪದೋನ್ನತಿಯ ವಿಷಯದಲ್ಲಿ ನ್ಯಾಯಾಲಯದಲ್ಲಿ ಹಿನ್ನಡೆ ಉಂಟಾಗುವುದು. ವ್ಯಾಪಾರ ವ್ಯವಹಾರಗಳು ಚೆನ್ನಾಗಿ ನಡೆದರೂ ನಿರೀಕ್ಷಿತ ಲಾಭ ದೊರೆಯದು. ವಾರದ ಉತ್ತರಾರ್ಧಕ್ಕೆ ಅಂದುಕೊಂಡ ಕಾರ್ಯಗಳು ಅಂದು ಕೊಂಡ ಸಮಯಕ್ಕೆ ಆಗುವುದು. ಕಾರ್ಯ ಕುಶಲತೆಯಿಂದ ಕಾರ್ಯ ಸಾಧನೆ. ಸುಖ ಭೋಜನ, ಉತ್ತಮ ಸ್ತ್ರೀ ಸಂಗ, ಗೆಳೆಯರ ಸಂಪರ್ಕದಿಂದ ಹರುಷ.

ಶ್ರೀ ಸಪ್ತ ಮಾತೃಕಾದೇವಿ ದರ್ಶನ. ಶುಭ ಸಂಖ್ಯೆ-4

ಸಿಂಹ (ಮ,ಮಿ,ಮು,ಮೊ,ಮೆ,ಟ,ಟಿ,ಟು,ಟೆ)

ಎಲ್ಲವೂ ಚೆನ್ನಾಗಿ ನಡೆಯುತ್ತಿದೆ ಎನ್ನುವಾಗಲೇ ಜೀವನದ ಸಾಧಕ-ಬಾಧಕಗಳ ಬಗ್ಗೆ ಅರಿವು ಉಂಟಾಗದಿರಲು ಗ್ರಹಗತಿಗಳೇ ಕಾರಣ. ಗುರುಕೃಪೆಯಿಂದ ಹಣಕಾಸಿನ ಕೊರತೆ ಏನೂ ಉಂಟಾಗದು. ಆದರೆ ಅಷ್ಟಮ ಶನಿದೇವನ ಕಾರಣ ಸ್ವಯಂಕೃತಾಪರಾಧಗಳಿಂದ ಚಿಂತೆಗೆ ಈಡಾಗುವಿರಿ. ಉದ್ಯಮಪತಿಗಳಿಗೆ ನೌಕರ ವರ್ಗದವರ ಅಸಹಕಾರದಿಂದ ನಷ್ಟ ಉಂಟಾಗುವುದು.

ಶ್ರೀ ಸೂರ್ಯ ನಮಸ್ಕಾರ. ಶುಭ ಸಂಖ್ಯೆ-5

ಕನ್ಯಾ (ಟೊ,ಪ,ಪಿ,ಪು,ಘ,ಣ,ಠ,ಪೆ,ಪೊ)

ನಿಮ್ಮ ಲಾಭದ ಪ್ರಯೋಜನವನ್ನು ಅನ್ಯರು ಪಡೆದುಕೊಳ್ಳುತ್ತಾರೆ. ಇಂತಹ ವ್ಯಕ್ತಿಗಳಿಂದ ದೂರವಿರಬೇಕು. ಕುಟುಂಬ ಸಂಬಂಧಗಳು ನೀವಂದುಕೊಂಡಷ್ಟು ಸಂತೋಷದಾಯಕವಾಗಿ ಇರದು. ನಿಮ್ಮ ಕಚೇರಿ ಕೆಲಸದಲ್ಲಿ ನಿಮ್ಮ ಕಾರ್ಯಗಳತ್ತ ಗಮನಹರಿಸುವಲ್ಲಿ ವಿಫಲರಾಗುವಿರಿ. ವಾರದ ಕಡೆಗೆ ಚಂದ್ರಗ್ರಹದ ಕೃಪೆಯಿಂದ ಹರುಷದ ತಂಗಾಳಿ ಬೀಸಿ, ಹಣಕಾಸಿನ ಒತ್ತಡವೂ ಕಡಿಮೆ ಆಗುವುದು.

ಶ್ರೀ ಅಶ್ವತ್ಥವೃಕ್ಷ ಪ್ರದಕ್ಷಿಣೆ. ಶುಭ ಸಂಖ್ಯೆ-7

ತುಲಾ (ರ,ರಿ,ರು,ರೆ,ರೊ,ತ,ತಿ,ತು,ತೆ)

ವಾರದ ಆದಿಗೆ ಮನೆಯಲ್ಲಿ ಮಂಗಳ ಕಾರ್ಯವನ್ನು ಆಯೋಜಿಸುವ ಸಲುವಾಗಿ ಹೆಚ್ಚಿನ ಹಣವೂ ಸಹ ಖರ್ಚು ಆಗುತ್ತದೆ. ನಿಮ್ಮ ಶ್ರೀಮತಿಯವರೊಂದಿಗೆ ಮುಕ್ತವಾಗಿ ಮಾತನಾಡುವುದರಿಂದ ಸಂಘರ್ಷದ ವಾತಾವರಣ ತಿಳಿಯಾಗುವುದು. ನಮ್ಮ ಕೆಲಸದ ಸ್ಥಳದಲ್ಲಿ ಕೆಲವು ಸಕಾರಾತ್ಮಕ ಬದಲಾವಣೆಯನ್ನು ಕಾಣುವಿರಿ. ಪ್ರಮೋಷನ್‌ಗೆ ಡ್ಯೂ ಇರುವವರು ಸಿಹಿ ಹಂಚಲು ಸಿದ್ಧತೆ ಮಾಡಿಕೊಳ್ಳಿ.

ಶ್ರೀ ಗೋವು ಪೂಜೆ ಮಾಡಿ. ಶುಭ ಸಂಖ್ಯೆ-4

ವೃಶ್ಚಿಕ (ತೊ,ನ,ನಿ,ನು,ನೆ,ನೊ,ಯು,ಯಿ,ಯ)

ವಾರದಾರಂಭಕ್ಕೆ ಮನೋವಾಂಛಿತ ಬಯಕೆಗಳನ್ನು ಪೂರೈಸಲು ಚಂದ್ರಗ್ರಹದ ಕೃಪೆ ಇದೆ. ಹೊಸ ಹೆಂಗಳೆಯರ ಪರಿಚಯದಿಂದ ಮುದಿತವಾದ ಮನಸ್ಸು, ನೂತನ ವಸ್ತ್ರ, ಭೋಜನ, ಶಯನಾದಿ ಸುಖಗಳನ್ನು ಅನುಭವಿಸುವಿರಿ. ಸ್ವಂತ ವ್ಯಾಪಾರ ಆರಂಭಕ್ಕೆ ಪ್ರಯತ್ನಗಳು ಫಲಿಸಲಿದೆ. ವಿದ್ಯುತ್ ಯಂತ್ರಗಳ ಜೊತೆ ಕೆಲಸ ಮಾಡುವಾಗ ಜಾಗೃತರಾಗಿರಿ. ಸಣ್ಣ ಪುಟ್ಟ ಅಪಘಾತವಾದೀತು.

ಶ್ರೀ ಗಣಪತಿ ಪ್ರಾರ್ಥನೆ. ಶುಭ ಸಂಖ್ಯೆ-5

ಧನುಸ್ಸು (ಯೆ,ಯೊ,ಬ,ಬಿ,ಬು,ಧ,ಭ,ಢ,ಬೆ)

ಈ ವಾರ ಗ್ರಹಗಳ ಕೂಟ ಅನುಕೂಲಕರವಾಗಿದೆ. ನೀವು ಬಯಸಿದ್ದು ಅಬಾಧಿತವಾಗಿ ದೊರೆಯುವಲ್ಲಿ ಶ್ರೀ ಗುರುವಿನ ಅನುಗ್ರಹವಿದೆ. ನೂತನ ವ್ಯಾಪಾರ, ಉದ್ಯಮ ಆರಂಭಿಸಲು ಪ್ರಯತ್ನಪಡುವಿರಿ. ವಾಕ್ಚಾತುರ್ಯ ಬಲದಿಂದ ಎಲ್ಲರನ್ನು ಪ್ರಭಾವಿತರನ್ನಾಗಿ ಮಾಡುವಿರಿ. ಯೋಗ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಅಪಾರವಾದ ಯಶಸ್ಸು ನಿಮ್ಮ ಪಾಲಿಗಿದೆ. ಉನ್ನತ ಸಾಧನೆಗೆ ವಿದೇಶಕ್ಕೆ ತೆರಳುವ ಯೋಗವಿದೆ.

ಶ್ರೀ ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿ. ಶುಭ ಸಂಖ್ಯೆ-1

ಮಕರ (ಬೊ,ಜ,ಜೆ,ಶಿ,ಶು,ಶೆ,ಶೊ,ಗ,ಗಿ)

ವಾರದ ಆರಂಭದಲ್ಲಿ ನಿಮ್ಮ ಆರ್ಥಿಕ ವಿಷಯಗಳು ಉತ್ತಮವಾಗಿರುತ್ತವೆ. ನೀವು ಬಹಳ ಸಮಯದಿಂದ ಮನೆಯನ್ನು ಖರೀದಿಸಲು ಪ್ರಯತ್ನಿಸುತ್ತಿದ್ದರೆ ಈ ವಿಷಯವನ್ನು ಕುಟುಂಬ ಸದಸ್ಯರಲ್ಲಿ ಚರ್ಚಿಸಬಹುದು. ಪುಸ್ತಕ ವ್ಯಾಪಾರಿಗಳಿಗೆ ಹಾಗೂ ಮುದ್ರಣ ಸಂಸ್ಥೆಗಳಿಗೆ ಉತ್ತಮ ಲಾಭವಾಗಲಿದೆ. ರಾಹು-ಕೇತು ಸಂಚಾರ ನಕಾರಾತ್ಮಕವಾಗಿದ್ದು ತಪ್ಪು ನಿರ್ಣಯಗಳಿಂದ ಸಂಬಂಧಗಳಲ್ಲಿ ಬಿರುಕು, ಭಿನ್ನಾಭಿಪ್ರಾಯಗಳು ಉಂಟಾಗುವುದು.

ಶ್ರೀ ಶಿವಾಷ್ಟೋತ್ತರ ಪಠಿಸಿ. ಶುಭ ಸಂಖ್ಯೆ-9

ಕುಂಭ (ಗು,ಗೆ,ಗೊ,ಸ,ಸಿ,ಸು,ಸೆ,ಸೊ,ದ)

ವಾರದಾರಂಭಕ್ಕೆ ಶುಭ ಸಮಾಚಾರ ಬಂದು ಪುಳಕಿತರಾಗುವಿರಿ. ಕೈಗೊಂಡ ಕೆಲಸಗಳಲ್ಲಿ ಯಶಸ್ಸು. ವ್ಯಾಪಾರ, ವ್ಯವಹಾರಗಳು ನಿಮ್ಮ ನಿರೀಕ್ಷೆ ಮೀರಿ ನಡೆದು ಹೆಚ್ಚಿನ ಧನಲಾಭವಾಗುವುದು. ವಿದ್ವಾಂಸ, ಜನರ ಸಂಪರ್ಕ, ಆಧ್ಯಾತ್ಮ ವಿಚಾರ ಮಂಥನ ನಡೆಯುವುದು. ದ್ವಿತೀಯ ಶನಿದೇವನ ಕಾರಣ ಮನೆಯಲ್ಲಿ ಅಸಮಾಧಾನದ ಮಾತಿನಿಂದ ಬೇಸರ. ವಾಹನ ಸಂಚಾರದಲ್ಲಿ ಎಚ್ಚರ ಅಗತ್ಯ.

ಶ್ರೀ ಶನಿ ಚಾಲೀಸ ಪಠಿಸಿ. ಶುಭ ಸಂಖ್ಯೆ-8

ಮೀನ (ದಿ,ದು,ಖ,ಝ,ಥ,ತೆ,ದೊ,ಚ,ಚಿ)

ನಿಮ್ಮ ರಾಶ್ಯಾಧಿಪತಿ ಶ್ರೀ ಗುರುಪಂಚಮಕ್ಕೆ ಸರಿದಿರುವುದರಿಂದ ಮಧ್ಯಂತರವೆಂಬಂತೆ ಕೊಂಚ ರಿಲೀಫ್ ಸಿಕ್ಕಿದೆ. ನಿಮ್ಮ ಪ್ರಗತಿಗೆ ಸ್ವಪ್ರಯತ್ನದೊಡನೆ ದೈವ ಕೃಪೆಯೂ ದೊರೆತು ಕಾರ್ಯಸಾಧನೆಯಾಗಿ, ಕೀರ್ತಿ, ಪ್ರತಿಷ್ಠೆ, ಅಧಿಕಾರಗಳನ್ನು ತಂದು ಕೊಡುವುದು. ಉದ್ಯೋಗ ಸಂಬಂಧಿ ಪ್ರವಾಸ/ಯಾತ್ರೆಗಳು ಸಂಭವಿಸಬಹುದು. ತತ್ವಜ್ಞಾನದತ್ತ ಒಲವು ತೋರಿ ಆಸ್ತಿಕರೆನಿಸುವಿರಿ.

ಶ್ರೀ ದತ್ತ ದರ್ಶನ. ಶುಭ ಸಂಖ್ಯೆ-6


ಮೈಸೂರು ಮಿತ್ರ
ಭಾನುವಾರ 26 ಅಕ್ಟೋಬರ್ 2025

ಹೆಳವರಹುಂಡಿಯಲ್ಲಿ ಕನಕ ಸಮುದಾಯ ಭವನ ಉದ್ಘಾಟನೆ

ವರುಣ ಕ್ಷೇತ್ರಕ್ಕೆ 110 ಕೋಟಿ. ರೂ. ಅನುದಾನದಲ್ಲಿ ಅಭಿವೃದ್ಧಿ ಕಾರ್ಯ: ಎಂಎಲ್‌ಸಿ ಡಾ.ಯತೀಂದ್ರ

ತಿ.ನರಸೀಪುರ: ವರುಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಪಟ್ಟಣದ ವಿವಿಧ ಬಡಾವಣೆಗಳಿಗೆ ಇದುವರೆವಿಗೂ 110 ಕೋಟಿ ರೂ.ಗಳ ಅನುದಾನದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿದ್ದೇವೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಪಟ್ಟಣದ ಹೆಳವರಹುಂಡಿಯಲ್ಲಿ 1.60 ಕೋಟಿ ರೂಗಳ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಶ್ರೀ ಕನಕ ಸಮುದಾಯ ಭವನವನ್ನು ಉದ್ಘಾಟಿಸಿ ಮಾತನಾಡುತ್ತಿದ್ದ ಅವರು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅದಿಕಾರದಲ್ಲಿರಲಿ ಅಥವಾ ವಿಪಕ್ಷವಾಗಿದ್ದಾಗಲೂ ನಿರಂತರವಾಗಿ ಅಭಿವೃದ್ಧಿಗೆ ಅನುದಾನ ತರುವ ಮೂಲಕ ಸಿಎಂ ಸಿದ್ದರಾಮಯ್ಯ ಶಾಸಕರಾಗಿ ಪ್ರತಿನಿಧಿಸುವ ವರುಣ ವಿಧಾನಸಭಾ ಕ್ಷೇತ್ರವನ್ನು ರಾಜ್ಯದಲ್ಲಿಯೇ ಮಾದರಿ ಕ್ಷೇತ್ರವಾಗಿ ಅಭಿವೃದ್ಧಿಪಡಿಸಿದ್ದೇವೆ. ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿದೆ ಎಂದರು.



ಹೆಳವರಹುಂಡಿಯಲ್ಲಿ ಶ್ರೀ ಕನಕ ಸಮುದಾಯ ಭವನವನ್ನು ವಿಧಾನಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಉದ್ಘಾಟಿಸಿದರು.

ಸಕ್ರಿಯ ರಾಜಕಾರಣಕ್ಕೆ ನಾನು ಬರುತ್ತಿದ್ದಂತೆ ವರುಣದಲ್ಲಿ ಶಾಸಕರಾಗಿದ್ದ ವೇಳೆ, ಪಟ್ಟಣದ ಈ ಭಾಗ ಅಭಿವೃದ್ಧಿಯನ್ನು ಕಂಡಿರಲಿಲ್ಲ. ರಸ್ತೆ ಮತ್ತು ಚರಂಡಿ ವ್ಯವಸ್ಥೆ ಸರಿಯಾಗಿರಲಿಲ್ಲ. ಸಮಸ್ಯೆಯನ್ನು ಅರಿತು ನಿರಂತರವಾಗಿ ಅಭಿವೃದ್ಧಿಗೆ ಯೋಜನೆ ರೂಪಿಸಿ ನೂರಾರು ಕೋಟಿ ರೂಪಾಯಿಗಳ ಅನುದಾನ ವಿನಿಯೋಗಿಸಿ, ಕಚ್ಚಾ ರಸ್ತೆಗಳನ್ನು ಸಿಮೆಂಟ್ ರಸ್ತೆಗಳನ್ನಾಗಿ ಅಭಿವೃದ್ಧಿಪಡಿಸಿದ್ದೇವೆ. ವಿಸ್ತರಗೊಂಡ ಪಟ್ಟಣ ಪ್ರದೇಶಕ್ಕೆ ಸಮರ್ಪಕವಾಗಿ ಮೂಲಭೂತ ಸೌಕರ್ಯವನ್ನು ಕಲ್ಪಿಸಿದ್ದೇವೆ ಎಂದರು.

ಶ್ರೀ ಕನಕ ಸಮುದಾಯ ಭವನವನ್ನು ಉದ್ಘಾಟಿಸಲು ಆಗಮಿಸಿದ ಡಾ.ಯತೀಂದ್ರ ಸಿದ್ದರಾಮಯ್ಯ ಅವರನ್ನು ಪುಷ್ಪವೃಷ್ಟಿಗೈದು ಅದ್ದೂರಿ ಸ್ವಾಗತ ಕೋರಿ, ಬರಮಾಡಿಕೊಳ್ಳಲಾಯಿತು. ಮುಖ್ಯಮಂತ್ರಿಗಳ ಪುತ್ರರು ಆಗಿರುವ ಯತೀಂದ್ರ ಅವರಿಗೆ ಅರ್ಜಿಗಳನ್ನು ಕೊಡಲು ಬಾರಿ ನೂಕುನುಗ್ಗಲು ಉಂಟಾಯಿತು. ಇದೇ ವೇಳೆ ಸ್ಥಳೀಯ ನಿವಾಸಿಯಾದ ಕ್ರೇಜಿ ಸುರೇಶ್ ಹೆಳವರಹುಂಡಿ ವೃತ್ತದಲ್ಲಿ ದಿ.ರಾಕೇಶ್‌ಸಿದ್ರಾಮಯ್ಯನವರ ಹೆಸರಿನಲ್ಲಿ ಆಧುನಿಕ ಶೈಲಿಯ ಪ್ರಯಾಣಿಕರ ತಂಗುದಾಣವನ್ನು ನಿರ್ಮಾಣ ಮಾಡುವಂತೆ ಮನವಿ ಮಾಡಿದರು. ಭವನ ನಿರ್ಮಾಣಕ್ಕೆ ಸಹಕರಿಸಿದ ಹಲವರನ್ನು ಸನ್ಮಾನಿಸಲಾಯಿತು.

ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಆಯುಕ್ತ ಸಿದ್ದಪ್ಪ, ಪುರಸಭೆ ಅಧ್ಯಕ್ಷೆ ವಸಂತ ಶ್ರೀಕಂಠ, ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ಪ್ರಕಾಶ್, ಸದಸ್ಯ ಆರ್.ನಾಗರಾಜು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ನಟರಾಜು, ಮಾಜಿ ಉಪಾಧ್ಯಕ್ಷ ಹೆಚ್.ಬಿ. ಚಿಕ್ಕನಂಜಯ್ಯ, ಮಾಜಿ ಅಧ್ಯಕ್ಷ ಮೂರ್ತಿ, ಹಾಲಿ ನಿರ್ದೇಶಕ ಎಂ.ಕೆ.ಸಹದೇವ, ಮೃಗಾಲಯ ಪ್ರಾಧಿಕಾರ ಅಧ್ಯಕ್ಷ ರಂಗಸ್ವಾಮಿ, ತಾಲೂಕು ಕುರುಬರ ಸಂಘದ ಅಧ್ಯಕ್ಷ ಎಂ.ಎಸ್.ಮಹದೇವ ಸ್ವಾಮಿ, ನಿರ್ದೇಶಕ ಎಚ್.ಸಿ.ಅರುಣ್‌ಕುಮಾರ, ತಾ.ಪಂ ಮಾಜಿ ಸದಸ್ಯ ಎಂ.ರಮೇಶ್, ವರುಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಮೇಶ್ ಮುದ್ದೇಗೌಡ, ಕುಪ್ಯಾ ಪ್ರಭಾಕರ್, ಜಿಪಂ ಮಾಜಿ ಸದಸ್ಯ ಕೆಮಹದೇವ, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಎಂ.ಮಹದೇವಣ್ಣ, ಗ್ರಾಪಂ ಮಾಜಿ ಅಧ್ಯಕ್ಷ ಸಿ.ನಾಗರಾಜು, ಮುಖಂಡರಾದ ಪಿ.ಸ್ವಾಮಿನಾಥ್‌ಗೌಡ, ರೇವಣ್ಣ, ನಾಗರಾಜು, ಬಸಪ್ಪ, ಬಸವಣ್ಣ, ಗೌಡ್ರು ಸಿದ್ದರಾಜು, ನಾಗಪ್ಪ, ಗೋವಿಂದ, ಸಂತೃಪ್ತಿ ಕುಮಾರ್, ನಾಗೇಂದ್ರ, ಪುಟ್ಟಸುಬ್ಬಯ್ಯ ಹಾಗೂ ಇತರರು ಇದ್ದರು.

ಶ್ರೀಗುಂಜಾ ನರಸಿಂಹಸ್ವಾಮಿ ದೇವಾಲಯದಲ್ಲಿ ಗೋಪೂಜೆ



ತಿ.ನರಸೀಪುರದ ಶ್ರೀಗುಂಜಾ ನರಸಿಂಹಸ್ವಾಮಿ ದೇವಾಲಯದಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಗೋಪೂಜೆ ಹಮ್ಮಿಕೊಳ್ಳಲಾಗಿತ್ತು. ಅರ್ಚಕ ಶ್ರೀಧರ್ ಭಟ್, ಪಾರುಪತ್ತೇದಾರ ತಿರುಮಕೂಡಲು ಪ್ರದೀಪ್, ಪರಿಚಾರಿಕ ವೆಂಕಟೇಶ್ ಶ್ರೀಪಾದ, ಸಿಬ್ಬಂದಿ ರಘು ಹಾಜರಿದ್ದರು.

ಹೊಸಕೋಟೆ ಕೊಪ್ಪಲು ಡೇರಿಗೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ಚುಂಚನಕಟ್ಟೆ: ಸಾಲಿಗ್ರಾಮ ತಾಲೂಕಿನ ಹೊಸಕೋಟೆ ಕೊಪ್ಪಲು ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕಾಂಗ್ರೇಶ್ ಬೆಂಬಲಿತರಾದ ಎಚ್.ಸಿ.ಕರುಣ, ಉಪಾಧ್ಯಕ್ಷ ಅಶೋಕ್ ಅವಿರೋಧವಾಗಿ ಆಯ್ಕೆಯಾದರು.

ಸಂಘದ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಎಚ್.ಸಿ.ಕರುಣ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಅಶೋಕ್ ಅವರನ್ನು ಹೊರತು ಪಡಿಸಿ, ಬೇರೆ ಯಾರು ನಾಮ ಪತ್ರ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆಯಾದರು.

ಹಿಂದಿನ ಅಧ್ಯಕ್ಷ ಎಚ್.ಎಸ್.ಲೋಕೇಶ್ ಮತ್ತು ಉಪಾಧ್ಯಕ್ಷ ಎಚ್.ಬಿ.ಜಾಕಿ ಪ್ರಕಾಶ್ ಅವರ ರಾಜಿನಾಮೇಯಿಂದ ತೆರವಾಗಿದ್ದ ಸ್ಥಾನಕ್ಕೆ ಈ ಚುನಾವಣೆ ನಡೆಯಿತು. ಚುನಾವಣಾಧಿಕಾರಿಯಾಗಿ ಕೆ.ಅರ್.ನಗರ ಸಹಕಾರ ಇಲಾಖೆಯ ಸಿಡಿಓ ಎಸ್.ರವಿ ಕಾರ್ಯ ನಿರ್ವಹಿಸಿದರು. ನಂತರ ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ತಾ.ಪಂ.ಮಾಜಿ ಸದಸ್ಯ ಚಿಕ್ಕೇಗೌಡ, ಚಿಬುಕಹಳ್ಳಿ ಸಹಕಾರ ಸಂಘದ ಮಾಜಿ ಅಧ್ಯಕ್ಷ ಎಚ್.ಎಸ್.ವೆಂಕಟೇಶ್, ಗ್ರಾ.ಪಂ. ಸದಸ್ಯ ದೇವೆಂದ್ರ, ಪುಟ್ಟರಾಜು, ಮಹೇಶ್, ಸಿದ್ದರಾಮೇಗೌಡ, ಎಚ್.ಎಂ. ಗಣೇಶ್, ಎಚ್.ಎಸ್.ಮಹದೇವ ಮಾದೇಗೌಡ, ಸ್ವಾಮೀಗೌಡ, ಯೋಗೇಶ್, ಕೇಬಲ್ ಲೋಕಿ, ಗಣೇಶ ಮತ್ತಿತರರು ಅಭಿನಂದಿಸಿ, ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು.

ಚುನಾವಣಾ ಸಭೆಯಲ್ಲಿ ಸಂಘದ ನಿರ್ದೇಶಕರಾದ ವನಜಾಕ್ಷಿ, ಭಾಗ್ಯ, ಎಚ್.ಎಸ್.ಮಂಜು, ಜಾಕಿ ಪ್ರಕಾಶ್, ಸ್ವಾಮೀಗೌಡ, ಎಚ್.ಎಸ್.ಲೋಕೇಶ್, ಶಿವಣ್ಣ ಸಂಘದ ಕಾರ್ಯದರ್ಶಿ ಎಚ್.ಎಸ್.ಯೋಗೇಶ್ ಇದ್ದರು.

ಮೈಮುಲ್ ಅಧ್ಯಕ್ಷರಿಗೆ ಅಭಿನಂದನೆ



ಮೈಮುಲ್ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಈರೇಗೌಡ ಅವರನ್ನು ಜಯಪುರ ಭಾಗದ ಜೆಡಿಎಸ್ ಮುಖಂಡರು ಅಭಿನಂದಿಸಿದರು. ಮುಖಂಡರಾದ ಜವರನಾಯಕ, ಅಬ್ದುಲ್ ಮುತಾಲೀಫ್, ಮಹದೇವೇಗೌಡ, ವಕೀಲರಾದ ಮಹೇಶ್ ಉಪಸ್ಥಿತರಿದ್ದರು.

ಅ.31ರಂದು ಮಕ್ಕಳ ವೈದ್ಯಕೀಯ ತಪಾಸಣಾ ಶಿಬಿರ

ನಂಜನಗೂಡು ಅ.25– ರ ಶುಕ್ರವಾರ ನಗರದ ನಾಗಮ್ಮ ಶಾಲೆಯ ಆವರಣದಲ್ಲಿ ಬೆಳಗ್ಗೆ 9:30ಕ್ಕೆ ಸಮಗ್ರ ಶಿಕ್ಷಣ ಯೋಜನೆ ಹಾಗೂ ಅಲಿಂಕೊ ಸಂಸ್ಥೆಯ ಸಹಯೋಗದೊಂದಿಗೆ ವಿಶೇಷ ಅಗತ್ಯವುಳ್ಳ ಮಕ್ಕಳ ವೈದ್ಯಕೀಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ, ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಮಹೇಶ್ ಹೇಳಿದರು.

ವಿಶೇಷ ಅಗತ್ಯವುಳ್ಳ ಲೋಕೋಮೋಟರ್ ನ್ಯೂನತೆ, ಸೆರೆಬ್ರಲ್ ಪಾಲ್ಸಿ, ಪೂರ್ಣ ದೃಷ್ಟಿ ದೋಷ, ಬೌದ್ಧಿಕ ಅಸಮರ್ಥತೆ, ಶ್ರವಣದೋಷ, ಬಹು ಅಂಗಾಂಗ ದೋಷ ಹಾಗೂ ಶ್ರವಣ ಅಂದತ್ವ ಸೇರಿದಂತೆ ಹಲವಾರು ಸಮಸ್ಯೆಗಳಿಂದ ಬಳಲುತ್ತಿರುವ ವಿಶೇಷ ಅಗತ್ಯವುಳ್ಳ ಮಕ್ಕಳಿಗೆ ವೈದ್ಯಕೀಯ ತಪಾಸಣಾ ಶಿಬಿರದಲ್ಲಿ ತಪಾಸಣೆ ನಡೆಸಿ ಅಗತ್ಯ ಸಾಧನ ಸಲಕರಣೆಗಳನ್ನು ವಿತರಿಸಲು, ಹಾಗೂ ಸರ್ಕಾರದಿಂದ ದೊರಕುವ ಸವಲತ್ತುಗಳನ್ನು ಒದಗಿಸಿಕೊಡಲು, ಕರ್ನಾಟಕ ಸಮಗ್ರ ಶಿಕ್ಷಣ ಹಾಗೂ ಅಲಿಂಕೋ ಸಂಸ್ಥೆಯ ಸಹಯೋಗದ ವೈದ್ಯಕೀಯ ತಪಾಸಣಾ ಶಿಬಿರ ಏರ್ಪಡಿಸಲಾಗಿದ್ದು, ವಿಶೇಷ ಅಗತ್ಯಯುಳ್ಳ ಮಕ್ಕಳ ಪೋಷಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಕ್ಯಾತನಹಳ್ಳಿಯಲ್ಲಿ ವೈಭವದ ಹಾಲರವಿ, ಕೊಂಡೋತ್ಸವ

ಹೆಚ್.ಡಿ.ಕೋಟೆ: ತಾಲೂಕಿನ ಕ್ಯಾತನಹಳ್ಳಿ ಗ್ರಾಮದಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಹಾಲರವಿ ಮತ್ತು ಕೊಂಡೋತ್ಸವ ಹಾಗೂ ಜಾತ್ರಾ ಮಹೋತ್ಸವವು ವಿಜೃಂಭಣೆಯಿಂದ ನಡೆಯಿತು.

ಹಬ್ಬದ ಅಂಗವಾಗಿ ಗ್ರಾಮದ ಮಲೆ ಮಹದೇಶ್ವರ, ಬೀರೇಶ್ವರ, ಸಿದ್ದಪ್ಪಾಜಿ, ಲಕ್ಷ್ಮಿಕಾಂತ್ ಗಂಗಾಧರ, ಮಾರಮ್ಮ ದೇವಾಲಯಗಳಿಗೆ ವಿಶೇಷ ಅಲಂಕಾರ, ವಿದ್ಯುತ್ ಅಲಂಕಾರಗಳನ್ನು ಮಾಡಲಾಗಿತ್ತು. ಬಳಿಕ ವಿಶೇಷ ಪೂಜಾ ಕೈಂಕರ್ಯಗಳು ಜರುಗಿದವು.

ಜಾತ್ರಾ ಮಹೋತ್ಸವದಲ್ಲಿ ನೆರೆಹೊರೆಯ ಗ್ರಾಮಸ್ಥರು ಆಗಮಿಸಿ ದೇವರ ದರ್ಶನ ಪಡೆದರು. ಭಕ್ತರು ಅನೇಕ ಹರಕೆ ಗಳನ್ನು ತೀರಿಸಿದರು. ಶಾಸಕ ಅನಿಲ್ ಚಿಕ್ಕ ಮಾದು ಹಾಲರವಿ ಉತ್ಸವಕ್ಕೆ ಚಾಲನೆ ನೀಡಿದರು.

ನಂತರ ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿ ಮಾತನಾಡಿ, ಹಂತ ಹಂತವಾಗಿ ಗ್ರಾಮದ ರಸ್ತೆ ಮತ್ತು ಒಳಚರಂಡಿ ಕಾಮಗಾರಿಗಳಿಗೆ ಯೋಜನೆ ರೂಪಿಸಿ ಗ್ರಾಮವನ್ನು ಅಭಿವೃದ್ಧಿ ಪಡಿಸಲಾಗುವುದು ಎಂದು ತಿಳಿಸಿದರು.

ಕ್ಯಾತನಹಳ್ಳಿ ಮುಖ್ಯ ರಸ್ತೆಯಿಂದ ಸಿಂಗರಮಾರನಹಳ್ಳಿ ರಸ್ತೆಯುವರೆಗೆ ಹಾಗೂ ರಾಮ ಮಂದಿರದಿಂದ ಲಕ್ಷ್ಮಿಕಾಂತ ದೇವಸ್ಥಾನದವರೆಗೆ ಒಳಚರಂಡಿ ಮತ್ತು ರಸ್ತೆ ಅಭಿವೃದ್ಧಿಗೆ ಯೋಜನೆ ರೂಪುಗೊಂಡಿದ್ದು ಶೀಘ್ರದಲ್ಲೆ ಚಾಲನೆ ನೀಡಲಾಗುವುದು ಎಂದರು.



ಕ್ಯಾತನಹಳ್ಳಿ ಗ್ರಾಮದಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಹಾಲರವಿ ಮತ್ತು ಕೊಂಡೋತ್ಸವ ಹಾಗೂ ಜಾತ್ರಾ ಮಹೋತ್ಸವವು ವಿಜೃಂಭಣೆಯಿಂದ ನಡೆಯಿತು.

ಸಿಂಡಿಕೇಟ್ ಸದಸ್ಯ ಕ್ಯಾತನಹಳ್ಳಿ ನಾಗರಾಜು, ದೇವಾಲಯ ಆಡಳಿತ ಮಂಡಳಿ ಟ್ರಸ್ಟ್‌ನ ಅಧ್ಯಕ್ಷ ಎಸ್.ಬೀರೇಗೌಡ, ಎನ್. ವೆಂಕಟರಾಜು, ಕಾಳಸ್ವಾಮಪ್ಪ, ಜಿ. ಗೋವಿಂದರಾಜು, ಕೆ.ಪಿ. ಚಲುವರಾಜು, ಎಸ್.ಶಿವರಾಜು, ಬೈಪಾಸ್ ಮಂಜುನಾಥ್, ಸಣ್ಣಸ್ವಾಮಿ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸವಿತಾ ಬಸಪ್ಪ, ಉಪಾಧ್ಯಕ್ಷ ಪ್ರಸನ್ನಕುಮಾರ್, ಶಿವಶಂಕರೇಗೌಡ, ಕೆ.ಸಿ. ಪುಟ್ಟೇಗೌಡ, ಎಚ್. ಮಂಜುನಾಥ್, ಕೃಷ್ಣೇಗೌಡ, ಕಮಲಾಕ್ಷ, ಕೆ.ಬಿ.ಮಹದೇವಪ್ಪ, ಮಡಿವಾಳ ಬೀರೇಶ, ಚಲುವರಾಜು, ಮಹದೇವಶೆಟ್ಟಿ, ಪಟೇಲ್ ಗಿರೀಶ್, ಅಪ್ಪಾಜಿಗೌಡ, ಕುಮಾರ, ಅಯ್ಯ, ಗೋವಿಂದ, ರಾಚಪ್ಪ, ಗಿರೀಶ್, ಕೃಷ್ಣ, ಕೆ.ಟಿ. ಮಹದೇವ, ರಮೇಶ್, ಮಂಜು, ರವಿಚಂದ್ರ, ಯೋಗೀಶ್, ದೊರೆಸ್ವಾಮಿ, ಮಧು, ಸೋಮು, ರವಿಕುಮಾರ್ ಇದ್ದರು.

ವಿದ್ಯುತ್ ವ್ಯತ್ಯಯ

ನಂಜನಗೂಡು: ನಂಜನಗೂಡು ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ ಭಾನುವಾರ ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ನಂಜನಗೂಡಿನ ಕೈಗಾರಿಕಾ ಪ್ರದೇಶ, ಚಾಮಲಾಪುರದ ಹುಂಡಿ, ಕೊರೆಹುಂಡಿ, ಬಗೇರಿಯಾ ಲೇಔಟ್, ದೇಬೂರು, ಮತ್ತು ಟೀಚರ್ಸ್ ಲೇಔಟ್‌ನಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಕ್ರೀಡಾಪಟುಗಳ ಸಾಧನೆ: ರಾಜ್ಯ ಮಟ್ಟಕ್ಕೆ ಅಯ್ಕೆ



ಚೇತನ್.ಕೆ.



ಉಮೇರ

ಹುಣಸೂರು: ಮೈಸೂರು ವಿಶ್ವ ವಿದ್ಯಾನಿಲಯ ದೈಹಿಕ ಶಿಕ್ಷಣ ವಿಭಾಗದ ಒಳಾಂಗಣ ಕ್ರೀಡಾಂಗಣ ಸ್ಪೋರ್ಟ್ಸ್ ಪೆವಿಲಿಯನ್‌ನಲ್ಲಿ ಇತ್ತಿಚೆಗೆ ನಡೆದ ಬಾಲಕರ ವಿಭಾಗದ 17 ವರ್ಷದೊಳಗಿನ 48 ಕೆ.ಜಿ. ತೂಕದ ಕುಸ್ತಿ ಸ್ಪರ್ಧೆಯಲ್ಲಿ ತಾಲೂಕಿನ ಬಿಳಿಕೆರೆ ಸಮೀಪದ ಸಬ್ಬನಹಳ್ಳಿ ಸಂತ ಗ್ರಿಗೋರಿಯಸ್ ಕಾನ್ವೆಂಟ್‌ನ 10ನೇ ತರಗತಿಯ ವಿದ್ಯಾರ್ಥಿ ಚೇತನ್.ಕೆ.ನಾಯಕ್ ಶಾಲೆಗೆ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಮೈಸೂರು ವಿಶ್ವವಿದ್ಯಾನಿಲಯ ಯುವರಾಜ ಕಾಲೇಜು ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ಬಾಲಕಿಯರ ವಿಭಾಗದ 17 ವರ್ಷದ ವಯೋಮಿತಿ ಒಳಗಿನ 52.ಕೆ.ಜಿ. ತೂಕದ ಕರಾಟೆ ಸ್ಪರ್ಧೆಯಲ್ಲಿ ಚಿಕ್ಕ ಹುಣಸೂರು ಆದರ್ಶ ವಿದ್ಯಲಯದ 10ನೇ ತರಗತಿ ವಿದ್ಯಾರ್ಥಿನಿ ಉಮೇರ ಮಹಮ್ಮದಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ರಸ್ತೆ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರಿಗೆ ಅಭಿನಂದನೆ



ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರಾಗಿ ನೇಮಕಗೊಂಡಿರುವ ಐಶ್ವರ್ಯ ಮಂಚನಹಳ್ಳಿ ಮಹದೇವ ಅವರನ್ನು ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಎ.ಟಿ.ಸೋಮಶೇಖರ್ ಅಭಿನಂದಿಸಿದರು. ಎಪಿಎಂಸಿ ಮಾಜಿ ಅಧ್ಯಕ್ಷ ಕುಪ್ಪಹಳ್ಳಿ ಸೋಮಶೇಖರ್, ತಾಲೂಕು ಹಾಲು ಉತ್ಪಾದಕರ ಸಹಕಾರ ಸಂಘಗಳ ನೌಕರರ ಸಂಘದ ಅಧ್ಯಕ್ಷ ಗಂಧನಹಳ್ಳಿ ಜಿ.ಕೆ. ಮಹದೇವ್, ಉಪಾಧ್ಯಕ್ಷ ಬೆಟ್ಟಹಳ್ಳಿ ದಿನೇಶ್, ಡೇರಿ ಪ್ರಕಾಶ್, ಎ.ಟಿ.ಸತೀಶ್ ಹಾಜರಿದ್ದರು.

ಪುತ್ರನ ಹರಕೆ ಮುಡಿ ತೆಗೆಸಿದ ವಶಿಷ್ಟ ಸಿಂಹ



ಚಿತ್ರನಟ ವಶಿಷ್ಟ ಸಿಂಹ ಮತ್ತು ಚಿತ್ರನಟಿ ಹರಿಪ್ರಿಯಾ ದಂಪತಿಗಳು ನಂಜನಗೂಡಿನ ಶ್ರೀಕಂಠೇಶ್ವರ ದೇವಾಲಯಕ್ಕೆ ಭೇಟಿ ನೀಡಿ ತಮ್ಮ ಪುತ್ರ ವಿಪ್ರಹಸಿಂಹ ರವರ ಮೊದಲ ಹರಕೆ ಮುಡಿ ತೆಗೆಸಿದರು. ನಂತರ ಶ್ರೀಕಂಠೇಶ್ವರ ದೇವಾಲಯಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿ ತೂಕದ ತುಲಾಭಾರ ಸೇವೆಯನ್ನು ನೆರವೇರಿಸಿದರು. ಇದೇ ಸಂದರ್ಭದಲ್ಲಿ ಅಭಿಮಾನಿಗಳು ಸೆಲ್ಫಿಗಾಗಿ ಮುಗಿಬಿದ್ದರು.

ಬಿಜೆಪಿ ಬಿಎಲ್‌ಎ–2 ಪರಿಶೀಲನಾ ಸಭೆ



ಮೈಸೂರು ತಾಲೂಕು ಜಯಪುರ ಗ್ರಾಮದ ಬಿಜೆಪಿ ಮಹಾಶಕ್ತಿ ಕೇಂದ್ರದಲ್ಲಿ ಚಾಮುಂಡೇಶ್ವರಿ ಕ್ಷೇತ್ರ ಬಿಜೆಪಿ ಪ್ರಧಾನ ಕಾರ್ಯದರ್ಶಿ ಹೇಮಂತ್ ಅಪ್ಪಾಜಿ ಗೌಡ ರವರ ನೇತೃತ್ವದಲ್ಲಿ ಬಿಎಲ್‌ಎ–2 ಪರಿಶೀಲನಾ ಸಭೆ ಶುಕ್ರವಾರ ನಡೆಯಿತು. ಜಯಪುರ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಬರಡನಪುರ ಗಿರೀಶ್, ಚಾಮುಂಡೇಶ್ವರಿ ಕ್ಷೇತ್ರ ಬಿಜೆಪಿ ಘಟಕದ ಮಾಜಿ ಅಧ್ಯಕ್ಷ ಗೆಜ್ಜಗಹಳ್ಳಿ ಮಹೇಶ್ ಭಾಗವಹಿಸಿದ್ದರು.

ಜೇನುಗಾರಿಕೆ ತರಬೇತಿ

ಮೈಸೂರು,ಅ.25– 2025–26ನೇ ಸಾಲಿಗೆ ಭಾಗಮಂಡಲ ಹಾಗೂ ಬೀಳಗಿ ಜೇನುಗಾರಿಕೆ ತರಬೇತಿ ಕೇಂದ್ರದಲ್ಲಿ ರೈತರ ಮಕ್ಕಳಿಗೆ 3 ತಿಂಗಳ ಜೇನುಗಾರಿಕೆ ತರಬೇತಿ ಕಾರ್ಯಕ್ರಮವನ್ನು ನ.4 ರಿಂದ ಫೆ3, 2026 ರವರೆಗೆ ಆಯೋಜಿಸಲಾಗಿರುತ್ತದೆ. ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ), ಮೈಸೂರು: 0821–2430450, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ), ಹೆಚ್.ಡಿ. ಕೋಟೆ: 08228–255262 ಸಂಪರ್ಕಿಸಲು ಕೋರಲಾಗಿದೆ.

ಎಲ್ಲರ ಸಹಕಾರದಿಂದ ಸಂಘದ ಅಭಿವೃದ್ಧಿ ಸಾಧ್ಯ



ಶ್ರೀಗುರುಮಲ್ಲೇಶ್ವರ ರೈತ ಉತ್ಪಾದಕರ ಕಂಪನಿಯ ವಾರ್ಷಿಕ ಮಹಾಸಭೆ ನಡೆಯಿತು.

ಮಲ್ಕುಂಡಿ: ಗ್ರಾಮೀಣ ಭಾಗದಲ್ಲಿ ರೈತರ ಸಹಬಾಳ್ವೆಗೆ ರೈತ ಉತ್ಪಾದಕರ ಕಂಪನಿ ಸಹಕಾರಿಯಾಗಿದೆ ಎಂದು ಶ್ರೀ ಗುರು ಮಲ್ಲೇಶ್ವರ ರೈತ ಉತ್ಪಾದಕರ ಕಂಪನಿಯ ಅಧ್ಯಕ್ಷ ಸುಕೇತರಾಜ್ ಹೇಳಿದರು.

ನಂಜನಗೂಡು ತಾಲೂಕಿನ ಹೊಸಪುರ ಗ್ರಾಮದ ಶ್ರೀಗುರುಮಲ್ಲೇಶ್ವರ ರೈತ ಉತ್ಪಾದಕರ ಕಂಪನಿಯ 2024–25 ನೇ ಸಾಲಿನ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ರೈತರು ಅರ್ಥಿಕವಾಗಿ ಅಭಿವೃದ್ಧಿ ಹೊಂದಲು ಹೆಚ್ಚಿನ ಷೇರು ಹೊಂದಬೇಕು. 635 ಷೇರುದಾರರು ಹೊಂದಿರುವ ಈ ಕಂಪನಿ ಉತ್ತಮವಾಗಿ ಬೆಳೆಯಲು ಎಲ್ಲರ ಸಹಕಾರ ಮುಖ್ಯವಾಗಿದೆ ಎಂದರು.

ಸಮಾಜದ ಎಲ್ಲಾ ಜನರಿಗೆ ಈ ಕಂಪನಿಯು ಸಹಕಾರಿಯಾಗಿದೆ. ಪತ್ತಿನ ಸೌಹಾರ್ದ ಕಂಪನಿಗಳನ್ನು ಮಾಡಿ ಬಡವರಿಗೆ ಕಡಿಮೆ ಬಡ್ಡಿಯನ್ನು ಸಾಲ ಸೌಲಭ್ಯಗಳನ್ನು ನೀಡುವುದರ ಮೂಲಕ ಗ್ರಾಮೀಣ ಭಾಗದ ರೈತರಿಗೆ ನೇರವಾಗಬೇಕು. ರೈತರಿಗೆ ಗೊಬ್ಬರ ಬೀತ್ತನೆ ಬೀಜಗಳನ್ನು ಕಡಿಮೆ ದರದಲ್ಲಿ ನೀಡುವ ಮೂಲಕ ರೈತರಿಗೆ ನೇರವಾಗಬೇಕು. ಕಂಪನಿಯಲ್ಲಿ ಯಾವುದೇ ಪ್ರತಿಫಲಪೇಕ್ಷೆ ಇಲ್ಲದೇ ಎಲ್ಲರೂ ದುಡಿದಾಗ ಮಾತ್ರ ಕಂಪನಿಗೆ ಉತ್ತಮ ಹೆಸರು ಬರಲು ಸಾಧ್ಯ ಎಂದು ತಿಳಿಸಿದರು.

ಈ ವೇಳೆ ಔಟ್ ರಿಚ್ ಸಂಸ್ಥೆಯ ಸಮನ್ವಯ ಅಧಿಕಾರಿ ವಿಲಿಯಂ ಡಿಸೋಜ, ತೋಟಗಾರಿಕೆ ಸಹಾಯಕ ಅಧಿಕಾರಿ ಚಂದ್ರು ಸಂಘದ ಉಪವಾಸ ಪ್ರಭುಸ್ವಾಮಿ, ನಿರ್ದೇಶಕರುಗಳಾದ ಸಿದ್ದರಾಜು, ಶಿವನಂಜಪ್ಪ, ಉಲ್ಲಾಸ್, ಶಿವಮೂರ್ತಿ, ಲಿಂಗ ರಾಜಪ್ಪ, ಬಸವಣ್ಣ, ಲೀಲಾಮೂರ್ತಿ, ಪ್ರಕಾಶ್, ಸೋಮಣ್ಣ, ಸಿದ್ದೇಗೌಡ, ಪುಟ್ಟಮಾದಪ್ಪ, ಮೂರ್ತಿ, ಮಹೇಶ್, ಸಿಇಓ ರವಿ ಪ್ರಸಾದ್, ಸಹಾಯಕ ರವಿ ಹಾಜರಿದ್ದರು.

ಸರಗೂರು ಬಳಿ ಕೊಟ್ಟಿಗೆಗೆ ಬೆಂಕಿಯಿಟ್ಟ ಕಿಡಿಗೇಡಿಗಳು

ಹಸು, ಕರುಗಳು ಕೃಷಿ ಪರಿಕರಗಳು ಭಸ್ಮ

ಸರಗೂರು: ಕಿಡಿಗೇಡಿಗಳು ಹಚ್ಚಿದ ಬೆಂಕಿಯಿಂದ ದನದ ಕೊಟ್ಟಿಗೆ, ದನಗಳು ಹಾಗೂ ಬೆಲೆ ಬಾಳುವ ವಸ್ತುಗಳು ಸುಟ್ಟು ಭಸ್ಮವಾಗಿದ್ದು, ಸುಮಾರು 15 ಲಕ್ಷ ರೂ.ಗೂ ಅಧಿಕ ನಷ್ಟವಾಗಿದೆ ಎಂದು ಅಂದಾಜಿಸಲಾಗಿದೆ.

ತಾಲೂಕಿನ ಅಡ್ಡಹಳ್ಳಿ ಗ್ರಾಮದ ದೇವೇಶ್ ಬಿನ್ ದೇವೇಗೌಡ ಎಂಬುವರ ದನದ ಕೊಟ್ಟಿಗೆ ಬೆಂಕಿಗೆ ಸುಟ್ಟು ಕರಕಲಾಗಿದ್ದು, ಬೆಲೆ ಬಾಳುವ ಇಲಾತಿ ಹಸುಗಳು ಒಂದು ಕರು ಸ್ಥಳದಲ್ಲೇ ಸಾವನ್ನಪ್ಪಿದ್ದರೆ, ಇನ್ನೊಂದು ಹಸು, ಕರು ಗಂಭೀರವಾಗಿ ಗಾಯಗೊಂಡಿವೆ. ಪಶುವೈದ್ಯರು ಚಿಕಿತ್ಸೆ ನೀಡುತ್ತಿದ್ದಾರೆ. ಆದರೆ, ಬದುಕುವ ಅವಕಾಶ ತುಂಬಾ ಕಡಿಮೆ ಎಂದು ವೈದ್ಯರು ತಿಳಿಸಿದ್ದಾರೆ.

ದೇವೇಶ್ ನೂತನವಾಗಿ ಮನೆಯನ್ನು ನಿರ್ಮಿಸಿಕೊಂಡಿದ್ದು, ಶುಕ್ರವಾರ ಗೃಹ ಪ್ರವೇಶವಿತ್ತು. ಹೀಗಾಗಿ ದೇವೇಶ್ ಕುಟುಂಬಸ್ಥರು ಹೊಸ ಮನೆಯ ಬಳಿ ಇದ್ದರು. ಹೊಸ ಮನೆ ಕಟ್ಟಿಕೊಂಡಿದ್ದಾರೆ ಎಂದು ಹೊಟ್ಟೆ ಉರಿಗಾಗಿ ಯಾರೊ ಕಿಡಿಗೇಡಿಗಳು ಗುರುವಾರ ರಾತ್ರಿ ದನದ ಕೊಟ್ಟಿಗೆಗೆ ಬೆಂಕಿ ಹಚ್ಚಿದ್ದಾರೆ. ಇದರಿಂದಾಗಿ ಹಸು, ಕರು ಸಾವನ್ನಪ್ಪಿದೆ. ಹಸು, ಇದಲ್ಲದೆ ಬೆಲೆ ಬಾಳುವ ಕೃಷಿ ಪರಿಕರಗಳು, ಜೆಟ್‌ಪೈಪ್‌ಗಳು, ಪೇಂಟಿಂಗ್ ಡಬ್ಬಿಗಳು, ತೆಂಗಿನ ಕಾಯಿಗಳು, 5 ಜೋಳದ ಮೂಟೆಗಳು, 8 ಚೀಯಾ(ಗೇಲ್) ಮೂಟೆಗಳು ಸೇರಿದಂತೆ ಇನ್ನಿತರ ವಸ್ತುಗಳು ಸುಟ್ಟು ಭಸ್ಮವಾಗಿವೆ ಎಂದು ರೈತ ದೇವೇಶ್ ತಿಳಿಸಿದ್ದಾರೆ.

ಕೋಟೆ ಪಟ್ಟಣದ ಅಗ್ನಿಶಾಮಕ ದಳದ ಸಿಬ್ಬಂದಿಗಳು ಸ್ಥಳಕ್ಕೆ ಭೇಟಿ ನೀಡಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಸ್ಥಳಕ್ಕೆ ಗ್ರಾಮ ಲೆಕ್ಕಾಧಿಕಾರಿ ಚೈತ್ರಾ ಭೇಟಿ ನೀಡಿ ಸ್ಥಳ ಪರಿಶೀಲಿಸಿದ್ದಾರೆ. ಬೆಂಕಿಯಿಂದಾಗಿ ಅಪಾರ ನಷ್ಟವಾಗಿದ್ದು, ತಾಲೂಕು ಆಡಳಿತ ಸೂಕ್ತ ಪರಿಹಾರ ನೀಡಬೇಕೆಂದು ದೇವೇಶ್ ಮನವಿ ಮಾಡಿದ್ದಾರೆ.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಎ.ಎಸ್.ನಂದಕುಮಾರ್, ಮಾತನಾಡಿ ಗ್ರಾಮದಲ್ಲಿ ಕಿಡಿಗೇಡಿಗಳು ಹಚ್ಚಿದ ಬೆಂಕಿಯಿಂದ ಕೊಟ್ಟಿಗೆ, ದನಗಳು ಹಾಗೂ ಬೆಲೆ ಬಾಳುವ ವಸ್ತುಗಳು ಸುಟ್ಟು ಭಸ್ಮವಾಗಿದ್ದು, ಸುಮಾರು 15 ಲಕ್ಷ ರೂ. ಗೂ ಅಧಿಕ ನಷ್ಟವಾಗಿದೆ. ಇದರ ಹಿಂದೆ ಕಾಣದ ಕೈಗಳ ಕೈವಾಡವಿದ್ದು ತನಿಖೆ ನಡೆಸಿ ರಕ್ಷಣೆ ನೀಡುವಂತೆ ಕೋರಿದ್ದಾರೆ.



ದನದಕೊಟ್ಟಿಗೆ ಬೆಂಕಿಗೆ ಭಸ್ಮವಾಗಿರುವುದು.

ಇಂದು ಸರಗೂರಲ್ಲಿ ಶತೋತ್ತರ ದಶಮಾನೋತ್ಸವ

ಸರಗೂರು, ಅ.25– ಅ.26ರಂದು ಡಾ.ಶಿವರಾತ್ರಿ ರಾಜೇಂದ್ರ ಸ್ವಾಮೀಜಿಗಳ ಶತೋತ್ತರ ದಶಮಾನೋತ್ಸವ ನಡೆಯಲಿದ್ದು, ಪ್ರಚಾರ ರಥಕ್ಕೆ ಹಂಚೀಪುರ ಮಠದ ತೋಂಟದಾರ್ಯ ಕಿರಿಯ ಸ್ವಾಮೀಜಿ ಚಾಲನೆ ನೀಡಿದರು. ಪ್ರಚಾರ ರಥ ತಾಲೂಕಿನಾದ್ಯಂತ ಸಂಚರಿಸಿ ಭಕ್ತರನ್ನು ಆಕರ್ಷಿಸಿತು. ನಂತರ ಮಾತನಾಡಿದ ಅವರು, ಅ.26ರಂದು ಡಾ.ಶಿವರಾತ್ರಿ ರಾಜೇಂದ್ರ ಸ್ವಾಮೀಜಿಗಳ ಶತೋತ್ತರ ದಶಮಾನೋತ್ಸವ ಹಾಗೂ ಮೈಸೂರು–ಚಾಮ ರಾಜನಗರ ಜಿಲ್ಲಾ ವೀರಶೈವ ಲಿಂಗಾಯತ ಮಠಾಧಿಪತಿಗಳ ಗೋಷ್ಠಿ ದೀಕ್ಷಾ ಸಂಸ್ಕಾರ ಮತ್ತು ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕೋರಲಾಗಿದೆ.



ಬನ್ನೂರಿಗೆ ತಮಿಳುನಾಡು ತಂಡ

ಬನ್ನೂರು ಯಾಚೇನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ತಮಿಳುನಾಡು ಸರ್ಕಾರದ ಧರ್ಮಪುರಿ ಸಹಕಾರಿ ಒಕ್ಕೂಟದ ಅಧಿಕಾರಿಗಳನ್ನು ಒಳಗೊಂಡ 60 ಪ್ರತಿನಿಧಿಗಳ ಗುಂಪು ಭೇಟಿ ನೀಡಿ ಮಾಹಿತಿ ಪಡೆದುಕೊಂಡರು.

ನಂಜನಗೂಡಿನಲ್ಲಿ 65 ಲಕ್ಷ ವೆಚ್ಚದ ಕಾಮಗಾರಿಗಳಿಗೆ ಚಾಲನೆ

ನಂಜನಗೂಡು: ನಗರದ ವಿವಿಧ ವಾರ್ಡ್‌ಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ ಹಾಗೂ ಶ್ರೀರಾಂಪುರ ಬಡಾವಣೆಯಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ ಸೇರಿದಂತೆ 65 ಲಕ್ಷ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ ತಿಳಿಸಿದರು.

ನಗರದ ನಯನಜ ಕ್ಷತ್ರಿಯ ಬಡಾವಣೆಯಲ್ಲಿ ಶುಕ್ರವಾರ ಜೀರ್ಣೋದ್ದಾರಗೊಂಡಿರುವ ರಾಮಮಂದಿರ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

15ನೇ ಹಣಕಾಸು ಆಯೋಗದ ಅನುದಾನ ಹಾಗೂ ನಗರಸಭೆ ನಿಧಿಯ ಅನುದಾನ ಬಳಸಿ ವಾರ್ಡ್ ನಂಬರ್ 3 ನರಸಣ್ಣ ಅಗ್ರಹಾರ, ವಾರ್ಡ್ ನಂಬರ್ 13, ಮತ್ತು 17 ನೆಯ ವಾರ್ಡ್‌ಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ, ಶ್ರೀರಾಂಪುರ ಬಡಾವಣೆಯಲ್ಲಿ ಬಹುದಿನದ ಬೇಡಿಕೆಯಾಗಿದ್ದ ಅಂಗನವಾಡಿ ಕಟ್ಟಡ ನಿರ್ಮಾಣಕ್ಕೂ ಚಾಲನೆ ದೊರೆತಿದೆ, ಈ ನಮ್ಮ ಕ್ಷೇತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೆಚ್ಚಿನ ಅನುದಾನವನ್ನು ನೀಡಿ ಅಭಿವೃದ್ಧಿಗೆ ಸಹಕಾರ ನೀಡಿದ್ದಾರೆ, ಇದರಿಂದ ಗ್ರಾಮೀಣ ಭಾಗದಲ್ಲಿ ನಿರಂತರವಾಗಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಗಳಿಂದ ಹೆಚ್ಚಿನ ಅನುದಾನ ಪಡೆದು ನಗರಸಭೆಯ ಓಲ್ಡ್ ಟೌನ್ ಬಡಾವಣೆಗಳಿಗೆ ಬೇಡಿಕೆಯಂತೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗುವುದು ಎಂದಲ್ಲದೆ ಕ್ಷೇತ್ರದ ಅಭಿವೃದ್ಧಿಗೆ ನಾನು ಸದಾಕಾಲ ಬದ್ಧನಾಗಿದ್ದೇನೆ ಎಂದರು.



ನಂಜನಗೂಡಿನ ನಯನಜ ಕ್ಷತ್ರಿಯ ಬಡಾವಣೆಯಲ್ಲಿ ಶುಕ್ರವಾರ ಶಾಸಕ ದರ್ಶನ್ ಧ್ರುವನಾರಾಯಣ ಜೀರ್ಣೋದ್ದಾರಗೊಂಡಿರುವ ರಾಮಮಂದಿರ ಕಟ್ಟಡವನ್ನು ಉದ್ಘಾಟಿಸಿದರು.

ನಗರಸಭೆ ಸದಸ್ಯೆ ಗಾಯಿತ್ರಿ ಮೋಹನ್ ಮಾತನಾಡಿ, ಹಿಂದುಳಿದ ಜನ ವಾಸಿಸುವ ನಮ್ಮ ವಾರ್ಡ್‌ಗೆ ಶುದ್ದ ಕುಡಿಯುವ ನೀರಿನ ಘಟಕ ಹಾಗೂ ರಾಮ ಮಂದಿರ ಜೀರ್ಣೋದ್ಧಾರ ಕಾರ್ಯ ನಡೆಸಲಾಗಿದೆ, ಶಾಸಕ ದರ್ಶನ್ ಧ್ರುವನಾರಾಯಣ ಹಾಗೂ ನಗರಸಭೆ ಅಧ್ಯಕ್ಷ ಶ್ರೀಕಂಠಸ್ವಾಮಿ ಅವರ ಸಹಕಾರದಿಂದ ಹೆಚ್ಚಿನ ಅಭಿವೃದ್ಧಿ ಕಾಮಗಾರಿಗಳು ನಡೆದಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ನಗರಸಭೆ ಅಧ್ಯಕ್ಷ ಶ್ರೀಕಂಠಸ್ವಾಮಿ, ಉಪಾಧ್ಯಕ್ಷರಿಯಾನ ಬಾನು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ. ಶಂಕರ್, ನಗರಸಭೆ ಸದಸ್ಯರಾದ ಶ್ವೇತಲಕ್ಷ್ಮಿ, ಗಂಗಾಧರ್, ಎಸ್.ಪಿ.ಮಹೇಶ್, ಮಹದೇವ ಪ್ರಸಾದ್, ಸಿದ್ದಿಕ್ ಅಹಮ್ಮದ್, ಯೋಗೀಶ್, ಕಾಂಗ್ರೆಸ್ ಮುಖಂಡ ರಾದ ಎನ್.ಎಂ.ಮಂಜುನಾಥ್, ಪಿ.ಶ್ರೀನಿವಾಸ್, ಸತೀಶ್ ಗೌಡ, ನಗರಸಭಾ ಆಯುಕ್ತ ವಿಜಯ್, ಎಇಇ ಮಹೇಶ್, ಸಮಂತ್, ಪರಿಸರ ಅಭಿಯಂತರರಾದ ಮೈತ್ರಾವತಿ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

ಕೇಂದ್ರದ ಒತ್ತಡಕ್ಕೆ ಮಣಿದು ಕಾರ್ಮಿಕರಿಗೆ ಮಾರಕವಾದ ಕಾನೂನುಗಳನ್ನು ರಾಜ್ಯ ಸರ್ಕಾರಗಳು ಜಾರಿಗೊಳಿಸುತ್ತಿವೆ

ಸಿಐಟಿಯು ರಾಜ್ಯ ಪ್ರಧಾನ ಕಾರ್ಯದರ್ಶಿ ಮೀನಾಕ್ಷಿ ಸುಂದರಂ ಆರೋಪ

ಮೈಸೂರು,ಅ.25(ಜಿಎ)–ದೇಶದ ಭವಿಷ್ಯವನ್ನು ರಕ್ಷಣೆ ಮಾಡಿಕೊಳ್ಳಲು ಕಾರ್ಮಿಕರು, ರೈತರ ಚಳವಳಿಗಳು ಅತ್ಯಾವಶ್ಯಕ ಎಂದು ಸಿಟಿಐಯು ಕರ್ನಾಟಕ ರಾಜ್ಯ ಪ್ರಧಾನ ಕಾರ್ಯದರ್ಶಿ ಮೀನಾಕ್ಷಿ ಸುಂದರಂ ಅಭಿಪ್ರಾಯಪಟ್ಟರು.

ಮೈಸೂರಿನ ಸುಬ್ಬರಾಯನ ಕೆರೆ ಮೈದಾನ (ಸ್ವಾತಂತ್ರ್ಯ ಹೋರಾಟಗಾರರ ಉದ್ಯಾನ)ದಲ್ಲಿ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ (ಸಿಐಟಿಯು) ಜಿಲ್ಲಾ ಸಮಿತಿ ಏರ್ಪಡಿಸಿದ್ದ 11ನೇ ವರ್ಷದ ಜಿಲ್ಲಾ ಸಮ್ಮೇಳನದ ಕಾರ್ಮಿಕರ ಬಹಿರಂಗ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಕಾರ್ಮಿಕರಿಗೆ ಮಾರಕವಾದ ಕಾನೂನುಗಳನ್ನು ಕೇಂದ್ರದ ಒತ್ತಾಯಕ್ಕೆ ಮಣಿದು ರಾಜ್ಯ ಸರ್ಕಾರಗಳು ಜಾರಿಗೆ ತಂದಿವೆ. ಯಾವುದೇ ಸರ್ಕಾರ ಕಾರ್ಮಿಕ ವಿರೋಧಿ ನೀತಿ ಜಾರಿಗೊಳಿಸಿದರೆ, ಸರ್ಕಾರವನ್ನು ಎಚ್ಚರಿಸುವ ಕೆಲಸ ಮಾಡಿದ್ದೇವೆ. ನಮ್ಮ ಹೋರಾಟಕ್ಕೆ ಮಣಿದು ಅಂಗನವಾಡಿ ಹಾಗೂ ಬಿಸಿಯೂಟದ ಕಾರ್ಮಿಕರಿಗೆ ಕನಿಷ್ಠ ವೇತನ ನೀಡುವ ಅಧಿಸೂಚನೆಯನ್ನು ರಾಜ್ಯ ಸರ್ಕಾರ ಹೊರಡಿಸಿದೆ ಎಂದರು.

ಕರ್ನಾಟಕ ರಾಜ್ಯದಲ್ಲಿ ರೈತರ ಕೃಷಿ ಭೂಮಿಯನ್ನು ಸರ್ಕಾರ ಸ್ವಾಧೀನಪಡಿಸಿಕೊಂಡು ಅಗ್ಗದ ದರದಲ್ಲಿ ಕೈಗಾರಿಕೆಗಳಿಗೆ ಮಾರುವ ನಡೆ ವಿರುದ್ಧ ಹೋರಾಟವಾಗಿದೆ. ಬೆಂಗಳೂರಿನ ಚನ್ನರಾಯಪಟ್ಟಣ ಕೃಷಿ ಭೂಮಿ ಹೋರಾಟಗಳಲ್ಲಿ ಸಂಘಟನೆ ಜತೆ ಸೇರಿ, ವಿಜಯ ಸಾಧಿಸಿದೆ. ಹಾಗಾಗಿ ಇವತ್ತು ದೇಶದೊಳಗೆ, ದೇಶದ ಭವಿಷ್ಯವನ್ನು ರಕ್ಷಣೆ ಮಾಡಿಕೊಳ್ಳಬೇಕಾದರೆ ಚಳವಳಿಗಳು ಅವಶ್ಯಕವಾಗಿವೆ ಎಂದು ತಿಳಿಸಿದರು.



ಮೈಸೂರಿನ ಸುಬ್ಬರಾಯನ ಕೆರೆ ಮೈದಾನ (ಸ್ವಾತಂತ್ರ್ಯ ಹೋರಾಟಗಾರರ ಉದ್ಯಾನ)ದಲ್ಲಿ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್(ಸಿಐಟಿಯು) 11ನೇ ವರ್ಷದ ಜಿಲ್ಲಾ ಸಮ್ಮೇಳನದ ಕಾರ್ಮಿಕರ ಬಹಿರಂಗ ಸಭೆ ನಡೆಸಲಾಯಿತು.

2021ರಲ್ಲಿ ಕೇಂದ್ರ ಸರ್ಕಾರವು ವೇತನ ಸಂಹಿತೆ ಕಾನೂನು ಹಾಗೂ 2022ರಲ್ಲಿ ಕೈಗಾರಿಕಗಳ ವಿವಾದಗಳ ಸಂಹಿತೆ, ಸುರಕ್ಷತಾ ಸಂಹಿತೆ, ಸಾಮಾಜಿಕ ರಕ್ಷಣೆ ಸಂಹಿತೆಗಳನ್ನು ಪಾರ್ಲಿಮೆಂಟ್‌ನಲ್ಲಿ ಜಾರಿಗೊಳಿಸಿದೆ. 2025 ಕಳೆಯುವ ಹೊತ್ತಿನಲ್ಲೂ ಇಂತಹ ಕಾರ್ಮಿಕ ವಿರೋಧಿ ಕಾನೂನುಗಳನ್ನು ದೇಶದಲ್ಲಿ ಅನುಷ್ಠಾನಕ್ಕೆ ತರಲು ಸರ್ಕಾರಗಳಿಗೆ ಸಾಧ್ಯವಾಗಿಲ್ಲ ಎಂದರೆ, ಅದಕ್ಕೆ ಸಂಘಟನೆಗಳ ಹೋರಾಟದ ಫಲ ಮತ್ತು ನಮ್ಮ ಹಕ್ಕುಗಳನ್ನು ಬಿಟ್ಟುಕೊಡದ ತೀರ್ಮಾನಗಳು ಕಾರಣ ಎಂದು ತಿಳಿಸಿದರು.

ಇವತ್ತು ಬಂಡವಾಳದಾರರು ಮಾಡುವಂತಹ ಎಲ್ಲಾ ಅಕ್ರಮಗಳನ್ನು, ಸಕ್ರಮವನ್ನಾಗಿ ಮಾಡುವ ಕೆಲಸವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮಾಡುತ್ತಿವೆ. 2025ರ ಬಜೆಟ್ ಅಧಿವೇಶನದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಬಂಡವಾಳದಾರರ ಪರವಾಗಿ ಕಾನೂನು ಜಾರಿಗೊಳಿಸಲು ಮುಂದಾಗಿದ್ದಾರೆ. ಬಂಡವಾಳದಾರರ ತಪ್ಪುಗಳಿಗೆ ವಿನಾಯಿತಿ ನೀಡುವ ಕೆಲಸ ಮಾಡಲು ಹೊರಟಿದ್ದಾರೆ. ಈಗಿರುವ ಕಾನೂನುಗಳ ಜಾರಿಗಾಗಿ ಹೋರಾಟ ನಡೆದರೆ, ಅವುಗಳಿಗೆ ಕಿಮ್ಮತ್ತಿಲ್ಲದಂತಾಗಿದೆ ಎಂದು ಆಕ್ರೋಶ ಹೊರಹಾಕಿದರು.

ವಿರೋಧ ಪಕ್ಷಗಳು, ಪಂಡಿತರು ಗ್ಯಾರಂಟಿ ಯೋಜನೆಗಳನ್ನು ಟೀಕಿಸುತಿದ್ದಾರೆ. ಆದರೆ ಇವರೆಲ್ಲ ಖಾಸಗಿ ಬಂಡವಾಳ ಕಂಪನಿಗಳಿಗೆ, ಸರ್ಕಾರಗಳು ನೀಡುತ್ತಿರುವ ಪ್ರೋತ್ಸಾಹ ಹಣವನ್ನು ವಿರೋಧಿಸುತಿಲ್ಲ ಎಂದು ಕಿಡಿಕಾರಿದರು.


ಉದ್ಯೋಗದ ಸ್ಥಳಗಳಲ್ಲಿ ಮಹಿಳೆಯರಿಗೆ ಮುಟ್ಟಿನ ರಜೆ ಹಾಗೂ ವೇತನಕ್ಕಾಗಿ ಹಲವು ವರ್ಷಗಳಿಂದ ಹೋರಾಟಗಳು ನಡೆಸಲಾಗಿದ್ದು, ಇತ್ತೀಚೆಗೆ ಸರ್ಕಾರ ನೀತಿಯನ್ನು ಮಂತ್ರಿ ಮಂಡಲದಲ್ಲಿ ಅನುಮೋದನೆಗೆ ತರಲಾಗಿದೆ. ಆದರೆ ಅದನ್ನು ಕಡ್ಡಾಯವಾಗಿ ಕಾನೂನು ಜಾರಿಗೊಳಿಸಲೇಬೇಕು. ಇದರಿಂದ ಮಹಿಳೆಯರಿಗೆ ಉದ್ಯೋಗ ನೀಡಲು ಹಿಂದೇಟಾಕುವ ಸಮಸ್ಯೆಗಳು ಎದುರಾಗಲಿವೆ. ಮಹಿಳೆಯರ ನೈಸರ್ಗಿಕವಾದ ದೈಹಿಕ ಮತ್ತು ಸಾಮಾಜಿಕ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಮಹಿಳೆಯರನ್ನು ಸಬಲೀಕರಣ ಮಾಡುವ, ಸುರಕ್ಷತೆ ನೀಡುವ ಕೆಲಸವಾಗಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಎಚ್.ಎಸ್ ಸುನಂದಾ, ಕರ್ನಾಟಕ ಪ್ರಾಂತ್ಯ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ ಜಗದೀಶ್ ಸೂರ್ಯ, ವಿಕ್ರಾಂತ್ ಟೈರ್ಸ್ ಕಾರ್ಮಿಕ ಸಂಘಟನೆ ಪ್ರಧಾನ ಕಾರ್ಯದರ್ಶಿ ಚನ್ನಕೇಶವ, ಸಿಐಟಿಯು ಜಿಲ್ಲಾ ಸಮಿತಿ ಅಧ್ಯಕ್ಷ ಜಿ.ಜಯರಾಮ್, ಖಜಾಂಚಿ ಅಣ್ಣಪ್ಪ ಮತ್ತಿತರರು ಪಾಲ್ಗೊಂಡಿದ್ದರು.

> ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್(ಸಿಐಟಿಯು) ರಾಜ್ಯ ಸಮ್ಮೇಳನ ಹಾಸನದಲ್ಲಿ ನ.13 ರಿಂದ 15 ರವರೆಗೂ ನಡೆಯಲಿದೆ. ಅಖಿಲ ಭಾರತ ಸಮ್ಮೇಳನ ಡಿ.31 ರಿಂದ 2026 ಜ.6ರವರೆಗೆ ಆಂಧ್ರಪ್ರದೇಶದ ವಿಶಾಖಪಟ್ಟಣಂನಲ್ಲಿ ನಡೆಯಲಿದೆ.

ಹಾಸನಾಂಬೆ ಹುಂಡಿಯಲ್ಲಿ 25 ಕೋಟಿ ಸಂಗ್ರಹ

75 ಗ್ರಾಂ ಚಿನ್ನ, ಒಂದೂವರೆ ಕೆ.ಜಿ. ಬೆಳ್ಳಿ, ವಿದೇಶಿ ಕರೆನ್ಸಿ ಪತ್ತೆ



ಹಾಸನ, ಅ.25– ಹಾಸನಾಂಬೆ ಹಾಗೂ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಕೊನೆಗೊಂಡಿದ್ದು, ಶುಕ್ರವಾರ ನಡೆದ ಹುಂಡಿ ಎಣಿಕೆ ಮತ್ತು ಟಿಕೆಟ್ ಆದಾಯ ಸೇರಿ 25.59 ಕೋಟಿ ಸಂಗ್ರಹವಾಗಿದೆ. ಇದು ದೇಗುಲದ ಇತಿಹಾಸದಲ್ಲೇ ಅತ್ಯಧಿಕ ಕಾಣಿಕೆಯಾಗಿದೆ.

ಸುಮಾರು 300 ಸಿಬ್ಬಂದಿ ಎಣಿಕೆ ಕಾರ್ಯದಲ್ಲಿ ತೊಡಗಿಕೊಂಡಿದ್ದರು. ಕಂದಾಯ ಇಲಾಖೆ ಅಧಿಕಾರಿಗಳು, ಬ್ಯಾಂಕ್ ಸಿಬ್ಬಂದಿ ಹಾಗೂ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಈ ಬಗ್ಗೆ ಮಾಹಿತಿ ನೀಡಿರುವ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ, ಒಟ್ಟು ಕಾಣಿಕೆ ಮೊತ್ತ 3.69 ಕೋಟಿ ಎಂದು ಲೆಕ್ಕಿಸಲಾಯಿತು. ಈ ವರ್ಷದ ಟಿಕೆಟ್ ಆದಾಯ 21.92 ಕೋಟಿ ಆಗಿದೆ. ಅ.10ರಿಂದ 22 ರವರೆಗೆ ಒಟ್ಟಾರೆ ಕಾಣಿಕೆ ಮತ್ತು ಟಿಕೆಟ್ ಆದಾಯ ಸೇರಿ 25.59 ಕೋಟಿ ಆಗಿದೆ.

ಇದರಲ್ಲಿ ಸುಮಾರು 8 ರಿಂದ 10 ಕೋಟಿ ರೂಪಾಯಿಗಳನ್ನು ಸಾರ್ವಜನಿಕ ವ್ಯವಸ್ಥೆ, ಪ್ರಸಾದ ವಿತರಣೆ, ಲಡ್ಡು ತಯಾರಿ, ವಿದ್ಯುತ್ ಅಲಂಕಾರ, ಹೂ ಅಲಂಕಾರ ಹಾಗೂ ಇತರೆ ಹಬ್ಬದ ಖರ್ಚುಗಳಿಗೆ ಬಳಸಲಾಗುತ್ತದೆ. ಉಳಿದ ಮೊತ್ತವನ್ನು ದೇವಸ್ಥಾನದ ಖಾತೆಯಲ್ಲಿ ಠೇವಣಿಯಾಗಿಡಲಾಗುತ್ತದೆ ಎಂದರು.

ಚಿನ್ನ, ಬೆಳ್ಳಿ ಮತ್ತು ವಿದೇಶಿ ಕರೆನ್ಸಿ: ದೇವರ ಹುಂಡಿಯಲ್ಲಿ ಹಣದ ಜೊತೆಗೆ 75 ಗ್ರಾಂ ಚಿನ್ನ, ಒಂದೂವರೆ ಕೆಜಿ 58 ಗ್ರಾಂ ಬೆಳ್ಳಿ ಮತ್ತು ತಾಮ್ರದ ವಸ್ತುಗಳು ಪತ್ತೆಯಾಗಿವೆ. ಜೊತೆಗೆ ಅಮೆರಿಕದ ಐದು ಡಾಲರ್, ಇಂಡೋನೇಷ್ಯಾ ಮತ್ತು ಮಾಲ್ಡೀವ್ಸ್ ರಾಷ್ಟ್ರಗಳ ಕರೆನ್ಸಿ ನೋಟುಗಳೂ ಪತ್ತೆಯಾದವು.

ಭಕ್ತರ ಮನವಿ ಪತ್ರಗಳ ರಾಶಿ: ಹುಂಡಿ ಎಣಿಕೆ ವೇಳೆ ಈ ಬಾರಿ ಭಕ್ತರ ಭಾವನಾತ್ಮಕ ಮನವಿ ಪತ್ರಗಳೇ ಹೆಚ್ಚು ಪತ್ತೆಯಾಗಿವೆ. 'ತಾಯಿ, ನನ್ನ ಕಷ್ಟ ದೂರ ಮಾಡು', 'ಕುಟುಂಬಕ್ಕೆ ಸುಖ, ಶಾಂತಿ ಕೊಡು', 'ಇಷ್ಟಾರ್ಥ ಸಿದ್ಧಿಸಲಿ' ಎಂಬ ಬೇಡಿಕೆಗಳು ಹುಂಡಿಯಲ್ಲಿ ಗಣನೀಯ ಪ್ರಮಾಣದಲ್ಲಿ ಕಂಡುಬಂದಿವೆ ಈ ಬೇಡಿಕೆ ಪತ್ರಗಳನ್ನು ಹಣದಿಂದ ಪ್ರತ್ಯೇಕಿಸಿ ಗೌಪ್ಯವಾಗಿ ಸಂಗ್ರಹಿಸಿಡಲಾಗಿದೆ.

ಹುಂಡಿ ಎಣಿಕೆ ಕಾರ್ಯವನ್ನು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರ ನೇತೃತ್ವದಲ್ಲಿ ಹಾಗೂ ದೇವಸ್ಥಾನ ಆಡಳಿತಾಧಿಕಾರಿ ಮಾರುತಿ ಅವರ ಮೇಲ್ವಿಚಾರಣೆಯಲ್ಲಿ ಸುಸೂತ್ರವಾಗಿ ನಡೆಸಲಾಯಿತು. ಈ ಬಾರಿ ಹಾಸನಾಂಬೆ ಜಾತ್ರಾ ಮಹೋತ್ಸವದಲ್ಲಿ ಕಂಡುಬಂದ ಭಕ್ತರ ಸಂಖ್ಯೆಯೂ, ಅವರ ಅರ್ಪಣೆಗಳ ಪ್ರಮಾಣವೂ ಹಿಂದಿನ ವರ್ಷಗಳಿಗಿಂತ ಸಾಕಷ್ಟು ಹೆಚ್ಚಾಗಿತ್ತು.

ಜಾತಿ ಸಮೀಕ್ಷೆಯಿಂದ ಸಮಾಜ ಒಡೆಯುವುದಿಲ್ಲ; ಬದಲಾಗಿ ಒಗ್ಗೂಡಿಸುತ್ತಿದ್ದೇವೆ

ಮೈಸೂರಿನಲ್ಲಿ ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಮರ್ಥನೆ



ಮೈಸೂರಿನ ಮಾನಸ ಗಂಗೋತ್ರಿಯ ಸೆನೆಟ್ ಭವನದಲ್ಲಿ ಶನಿವಾರ ಕರ್ನಾಟಕ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಕುರಿತ ವಿಚಾರಗೋಷ್ಠಿಯನ್ನು ವಿಧಾನ ಪರಿಷತ್ ಸದಸ್ಯ ಯತೀಂದ್ರ ಉದ್ಘಾಟಿಸಿದರು.

ಮೈಸೂರು, ಅ.25(ಬಿಎಲ್‌ಯು)– ಜಾತಿ ಸಮೀಕ್ಷೆ ಸಮಾಜವನ್ನು ಒಡೆಯುವುದಿಲ್ಲ, ಬದಲಾಗಿ ಒಗ್ಗೂಡಿಸುತ್ತದೆ ಅವಕಾಶಗಳಿಂದ ವಂಚಿತರಾದವರಿಗೆ ಸೌಲಭ್ಯಗಳನ್ನು ನೀಡಲು ಸಹಕಾರವಾಗುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸರ್ಕಾರದ ಕ್ರಮವನ್ನು ಸಮರ್ಥಿಸಿಕೊಂಡಿದ್ದಾರೆ.

ಮೈಸೂರಿನ ಮಾನಸ ಗಂಗೋತ್ರಿಯ ಸೆನೆಟ್ ಭವನದಲ್ಲಿ ಇಂದು ಕರ್ನಾಟಕ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ 2025–ಚಾರಿತ್ರಿಕ ಹಿನ್ನೆಲೆ, ಅನುಷ್ಠಾನದ ಸವಾಲುಗಳು ಮತ್ತು ನಮ್ಮ ಪಾತ್ರ ಕುರಿತ ವಿಚಾರಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತಿ ಸಮೀಕ್ಷೆ ನಡೆಸುವ ಬಗ್ಗೆ ಈಗ ಮಾತ್ರ ವಿರೋಧ ಮಾಡುತ್ತಿಲ್ಲ, ಈ ಹಿಂದೆಯೂ ತೀವ್ರ ವಿರೋಧವಿತ್ತು ಎಂದರು.

ಜಾತಿ ಸಮೀಕ್ಷೆ ಮಾಡಿ ಸಮಾಜವನ್ನು ಒಡೆಯುವ ಹುನ್ನಾರ ನಡೆಸಿದ್ದಾರೆ ಎಂದು ಅಪಪ್ರಚಾರ ಮಾಡುತ್ತಿದ್ದಾರೆ. ಆದರೆ ನಮ್ಮ ಸರ್ಕಾರ ನಡೆಸುತ್ತಿರುವ ಜಾತಿ ಸಮೀಕ್ಷೆಯ ವಾಸ್ತವತೆಯ ತಿರುಳನ್ನು ಜನರು ಅರ್ಥ ಮಾಡಿಕೊಳ್ಳಬೇಕು ಎಂದು ಯತೀಂದ್ರ ಸಲಹೆ ನೀಡಿದರು.

ಭಾರತೀಯ ಸಾಮಾಜಿಕ ವ್ಯವಸ್ಥೆಗೆ ಜಾತಿ ವ್ಯವಸ್ಥೆ ದೊಡ್ಡ ಪಿಡುಗಾಗಿ ಅಂಟಿಕೊಂಡಿದೆ. ಧರ್ಮದಲ್ಲಿ ಹುಟ್ಟಿದರೆ ಬೇರೆ ಧರ್ಮಕ್ಕೆ ಸೇರಬಹುದು, ಆದರೆ ಯಾವ ಜಾತಿಯಲ್ಲಿ ಹುಟ್ಟುತ್ತೇವೊ ಅದೇ ಜಾತಿಯಲ್ಲಿ ಸಾಯಬೇಕು. ದಲಿತನಾಗಿ ಹುಟ್ಟಿದವನು ದಲಿತನಾಗಿಯೇ ಸಾಯಬೇಕು ಎಂದು ಬೇಸರ ವ್ಯಕ್ತಪಡಿಸಿದರು.

ಇಂತಹ ಜಾತಿ ವ್ಯವಸ್ಥೆಯ ಪಿಡುಗಿನಿಂದ ಭಾರತ ಮುಂದುವರೆಯಲು ಸಾಧ್ಯವಾಗುತ್ತಿಲ್ಲ. ಅನೇಕ ಸಮಾಜ ಸುಧಾರಕರು ಜಾತಿ ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರಯತ್ನ ಮಾಡಿದ್ದಾರೆ. ಆದರೆ ಈ ಪ್ರಯತ್ನದಲ್ಲಿ ಸ್ವಲ್ಪ ಮಟ್ಟಿಗೆ ಯಶಸ್ವಿಯಾಗಿದ್ದಾರೆ. ಸ್ವಾತಂತ್ರ್ಯ ಬಂದು ಇಷ್ಟು ವರ್ಷವಾದರೂ, ಇನ್ನು ಜಾತಿ ಮುಕ್ತ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರದ ಉನ್ನತ ಸ್ಥಾನ ಕೆಲವೇ ಕೆಲವರ ಬಿಗಿ ಮುಷ್ಟಿಯಲ್ಲಿದೆ. ಹಿಂದುಳಿದ ವರ್ಗದವರಿಗೆ ಶಿಕ್ಷಣ ದೊರೆಯದ ಕಾರಣ ಈ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಹಿನ್ನೆಲೆಯಲ್ಲಿ ಹಿಂದುಳಿದ ಸಮುದಾಯಕ್ಕೆ ಮೀಸಲಾತಿ ನೀಡಿ, ಸಮ ಸಮಾಜ ನಿರ್ಮಾಣ ಮಾಡಲು ಜಾತಿ ಸಮೀಕ್ಷೆ ನಡೆಸಲಾಗುತ್ತಿದೆ ಎಂದು ಯತೀಂದ್ರ ಮನದಟ್ಟು ಮಾಡಿದರು.

ಮೇಲ್ಜಾತಿಯವರನ್ನು ತುಳಿಯಲು ಜಾತಿ ಸಮೀಕ್ಷೆ ನಡೆಸಲಾಗುತ್ತಿದೆ ಎಂದು ಕೇಂದ್ರ ಸಚಿವ ಸೋಮಣ್ಣ ಹೇಳಿದ್ದಾರೆ, ನಾವು ಸಮೀಕ್ಷೆಗೆ ಮಾಹಿತಿ ನೀಡುವುದಿಲ್ಲ ಎಂದು ಇನ್ಫೋಸಿಸ್ ಸಂಸ್ಥೆಯ ನಾರಾಯಣ ಮೂರ್ತಿ ದಂಪತಿ ತಿಳಿಸಿದ್ದಾರೆ ಸಂಸದ ತೇಜಸ್ವಿ ಸೂರ್ಯ ಕೂಡ ವಿರೋಧ ಮಾಡಿದ್ದಾರೆ. ಆದ ಕಾರಣ ಇಂತಹವರ ಹೇಳಿಕೆ ಖಂಡಿಸಿ ಜಾತಿ ಸಮೀಕ್ಷೆ ಯಶಸ್ವಿಗೊಳಿಸಬೇಕು ಎಂದು ಯತೀಂದ್ರ ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್. ಶಿವರಾಮು, ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ, ಪ್ರಗತಿಪರ ಚಿಂತಕರಾದ ಸವಿತಾ ಪಮಲ್ಲೇಶ್, ವಾಸು, ರವಿ ಬೋಸ್‌ರಾಜ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶಿಕ್ಷಣ ಕ್ಷೇತ್ರಕ್ಕೆ ಮೈಸೂರು ರಾಜವಂಶಸ್ಥರ ಕೊಡುಗೆ ಅಪಾರ

● ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಗುಣಗಾನ ● ಅರಸು ಎಜುಕೇಷನ್ ಟ್ರಸ್ಟ್‌ನಲ್ಲಿ ಆಡಿಟೋರಿಯಂ ಉದ್ಘಾಟನೆ

ಮೈಸೂರು,ಅ.25(ಎಂಟಿವೈ)– ಮೈಸೂರು ರಾಜವಂಶಸ್ಥರು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅಪಾರವಾಗಿದ್ದು, ಜನ ಮಾನಸದಲ್ಲಿ ರಾಜವಂಶಸ್ಥರು ನೀಡಿರುವ ಸೇವೆ ಅಚ್ಚಳಿಯದೇ ಉಳಿದಿದೆ ಎಂದು ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ನಜರ್‌ಬಾದ್‌ನಲ್ಲಿರುವ ವಾಣಿ ವಿಲಾಸ ಶಿಕ್ಷಣ ಸಂಸ್ಥೆಯಲ್ಲಿ ಶ್ರೀ ಜಯಚಾಮರಾಜ ಅರಸು ಎಜುಕೇಷನ್ ಟ್ರಸ್ಟ್ ವತಿಯಿಂದ ನೂತನವಾಗಿ ನಿರ್ಮಿಸಿರುವ ಆಡಿಟೋರಿಯಂ ಉದ್ಘಾಟಿಸಿ ಮಾತನಾಡಿದ ಅವರು, ಮೈಸೂರು ಸಂಸ್ಥಾನ ತನ್ನ ಆಳ್ವಿಕೆ ಅವಧಿಯಲ್ಲಿ ಹಲವಾರು ಜನಪರ ಯೋಜನೆಗಳನ್ನು ಜಾರಿಗೊಳಿಸಿ, ಜನರ ಮನಸ್ಸಿನಲ್ಲಿ ಅಚ್ಚಳಿಯದೇ ಉಳಿದಿವೆ. ಈ ಹಿಂದೆ ರಾಜರ ಕಾಲದಲ್ಲಿ ಜಾರಿಗೊಳಿಸಿದ್ದ ಯೋಜನೆಯಂತೆ ಇಂದಿನ ರಾಜವಂಶಸ್ಥರು ಸೇವಾಕಾರ್ಯವನ್ನು ಇಂದಿಗೂ ಮುಂದುವರಿಸಿಕೊಂಡು ಹೋಗುತ್ತಿದ್ದಾರೆ. ಶಿಕ್ಷಣಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಈ ಸಭಾಂಗಣ ನಿರ್ಮಿಸಿರುವುದು ಶ್ಲಾಘನೀಯ ಎಂದರು.

ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್ ಮಾತನಾಡಿ, ಮಹಿಳೆಯರ ಶಿಕ್ಷಣಕ್ಕೆ ಒತ್ತು ನೀಡುವ ಉದ್ದೇಶದಿಂದ ವಾಣಿ ವಿಲಾಸ ಶಾಲೆಯಲ್ಲಿ ಕಾಲೇಜು ಆರಂಭಿಸಲಾಗಿದೆ. 2008ರಲ್ಲಿ ಈ ಕಾಲೇಜು ಕಟ್ಟಡ ನಿರ್ಮಿಸುವ ಜವಾಬ್ದಾರಿ ನನಗೆ ವಹಿಸಲಾಯಿತು. ನನ್ನ ಪತಿ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಅವರ ಅಭಿಲಾಷೆಯೂ ಇದೇ ಆಗಿತ್ತು. ಇದೀಗ ಸಂಸ್ಥೆ ಒಳ್ಳೆಯ ದಿಕ್ಕಿನತ್ತ ಸಾಗಿದೆ. ಈ ಶಾಲೆ ಮತ್ತು ಕಾಲೇಜಿನಲ್ಲಿ ಅಧ್ಯಯನಕ್ಕೆ ಬರುವ ಬಡ ವಿದ್ಯಾರ್ಥಿಗಳು ರಾಜವಂಶಸ್ಥರ ಸಾಧನೆಗಳನ್ನು ಪ್ರೇರಣೆಯಾಗಿಟ್ಟುಕೊಂಡು ಮತ್ತಷ್ಟು ಕೀರ್ತಿ ತರುವಂತೆ ಶೈಕ್ಷಣಿಕ ಸಾಧನೆ ಮಾಡಬೇಕೆಂದು ಮಾರ್ಗದರ್ಶನ ನೀಡಲಾಗುತ್ತಿದೆ ಎಂದು ತಿಳಿಸಿದರು.



ಮೈಸೂರಿನ ನಜರ್‌ಬಾದ್‌ನಲ್ಲಿರುವ ವಾಣಿ ವಿಲಾಸ ಶಿಕ್ಷಣ ಸಂಸ್ಥೆಯಲ್ಲಿ ನೂತನವಾಗಿ ನಿರ್ಮಿಸಿರುವ ಆಡಿಟೋರಿಯಂ ಅನ್ನು ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಉದ್ಘಾಟಿಸಿದರು. ಚಿತ್ರದಲ್ಲಿ ಶ್ರೀ ಜಯಚಾಮರಾಜ ಅರಸು ಎಜುಕೇಷನ್ ಟ್ರಸ್ಟ್ ಕಾರ್ಯದರ್ಶಿ ಮಹೇಶ್ ಎನ್.ಅರಸ್, ಹಿರಿಯ ಪತ್ರಕರ್ತೆ ಗೌರಿ ಸತ್ಯ, ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್, ಟ್ರಸ್ಟ್ ಉಪಾಧ್ಯಕ್ಷೆ ಡಾ.ಭಾರತಿ ಶ್ರೀಧರ್ ರಾಜೇ ಅರಸ್ ಅವರನ್ನು ಕಾಣಬಹುದು.

ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್ ಅವರ ಪ್ರಯತ್ನದಿಂದ ಈ ಶಿಕ್ಷಣ ಸಂಸ್ಥೆಗೆ ಒಂದು ರೂಪ ದೊರಕಿದೆ. ಅದರ ಮುಂದುವರಿದ ಭಾಗವಾಗಿ ಈಗ ಸಭಾಂಗಣವೂ ನಿರ್ಮಾಣವಾಗಿದೆ. ಶೈಕ್ಷಣಿಕ ಚಟುವಟಿಕೆಗಳಿಗೆ ಸಭಾಂಗಣದ ಅಗತ್ಯವಿತ್ತು ಅದು ಈಗ ದೊರೆತಿದೆ. ನಮ್ಮ ರಾಜ ಪರಂಪರೆಯನ್ನು ಉಳಿಸಿದ್ದು ಮಹಾರಾಣಿಯರು. ಪರಂಪರೆಯಲ್ಲಿ ಮಹಿಳೆಯರು ಮೈಸೂರು ಸಂಸ್ಥಾನಕ್ಕೆ ತಮ್ಮದೇ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು.

ಮುಂದಿನ ದಿನಗಳಲ್ಲಿ ಈ ಸಂಸ್ಥೆಯನ್ನು ಇನ್ನಷ್ಟು ಅಭಿವೃದ್ಧಿಗೊಳಿಸಲಾಗುವುದು. ಮಹಾರಾಣಿ ಲಿಂಗಾಜಮ್ಮಣ್ಣಿ ಅವರು ಲಿಂಗಾಂಬುದಿ ಕೆರೆ ನಿರ್ಮಾಣಕ್ಕೆ ಕೊಡುಗೆ ನೀಡಿದರು. ದೇವಾಜಮ್ಮಣ್ಣಿ ಅವರು ವರುಣ ಕೆರೆ ನಿರ್ಮಿಸಿದ್ದಾರೆ. ಇದರ ನಿಜವಾದ ಹೆಸರು ದೇವಾಂಬುದಿ ಕೆರೆ ಆಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತರಾದ ಗೌರಿ ಸತ್ಯ, ಶ್ರೀ ಜಯಚಾಮರಾಜ ಅರಸು ಎಜುಕೇಷನ್ ಟ್ರಸ್ಟ್ ಉಪಾಧ್ಯಕ್ಷೆ ಡಾ.ಭಾರತಿ ಶ್ರೀಧರ್ ರಾಜೇ ಅರಸ್, ಕಾರ್ಯದರ್ಶಿ ಮಹೇಶ್ ಎನ್.ಅರಸ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	**(ದೂ: 2521923)**
ಡ್ಯೂಡ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	**(ದೂ: 2422871)**
ಕಾಂತಾರ ಚಾಪ್ಟರ್–1 (ಕ)	4 ಪ್ರದರ್ಶನಗಳು
ಬಾಲಾಜಿ	**(ದೂ: 2497199)**
ತಮ್ಮ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	**(ಮೊ:9900820093)**
ಕಾಂತಾರ ಚಾಪ್ಟರ್–1 (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಾಂತಾರ ಚಾಪ್ಟರ್–1 (ಕ)	4 ಪ್ರದರ್ಶನಗಳು
ರಾಜಕಮಲ್	
ಬೈಸನ್ (ತ)	4 ಪ್ರದರ್ಶನಗಳು
ಸಂಗಂ	
ಗ್ರೀನ್ (ಕ) + ಗಿಲ್‌ಮಾಲ್ (ಕ)	2+2 ಪ್ರದರ್ಶನಗಳು
ಲಿಡೋ	
ತಮ್ಮ (ಹಿಂ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಬಿಳಿಚುಕ್ಕಿ ಹಳ್ಳಿಹಕ್ಕಿ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	**ಕಾಂತಾರ ಚಾಪ್ಟರ್ 1(ಕ):** ಮ.1.00ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, **ಡ್ಯೂಡ್ (ತ):** ಬೆ.10.10ಕ್ಕೆ, ಸಂ.4.20ಕ್ಕೆ
ಸ್ಕ್ರೀನ್ 2	**ಬೈಸನ್ (ತ):** ಬೆ.10.00ಕ್ಕೆ, ಸಂಜೆ 4.15ಕ್ಕೆ, **ಡೀಸೆಲ್ (ತ):** ಮ.1.20ಕ್ಕೆ, **ತೆಲುಸು ಕದ (ತೆ):** ರಾ.7.35ಕ್ಕೆ. **ದಿ ಪೆಟ್ ಡಿಟೆಕ್ಟಿವ್ (ಇ):** ರಾ.10.20ಕ್ಕೆ
ಸ್ಕ್ರೀನ್ 3	**ಡ್ಯೂಡ್ (ತ):** ರಾ.7.20ಕ್ಕೆ, ರಾ. 10.15ಕ್ಕೆ, **ಕಾಂತಾರ ಚಾಪ್ಟರ್ 1(ಕ):** ಸಂ. 4.00ಕ್ಕೆ, **ಪ್ರೇಮಿಗಳ ಗಮನಕ್ಕೆ (ಕ):** ಬೆ.10.25ಕ್ಕೆ, **ಟೈಮ್ ಪಾಸ್ (ಕ):** ಮ.1.15ಕ್ಕೆ
ಸ್ಕ್ರೀನ್ 4	**ಕಾಂತಾರ ಚಾಪ್ಟರ್ 1(ಕ):** ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7.05ಕ್ಕೆ, ರಾ.10.30ಕ್ಕೆ.

ನೆಕ್ಸಸ್ ಮಾಲ್

ಕಾಂತಾರ ಚಾಪ್ಟರ್ 1(ಕ) : ಬೆ: 8.05ಕ್ಕೆ, 9.05ಕ್ಕೆ, 10.25ಕ್ಕೆ, 11.15ಕ್ಕೆ, ಮ: 12.15ಕ್ಕೆ, 2.40ಕ್ಕೆ, 3.40ಕ್ಕೆ, ಸಂಜೆ 6.05ಕ್ಕೆ, 6.55ಕ್ಕೆ, ರಾತ್ರಿ: 7.05ಕ್ಕೆ, 9.30ಕ್ಕೆ, 9.45ಕ್ಕೆ, 10ಕ್ಕೆ, 10.30ಕ್ಕೆ.

ಕಾಂತಾರ ಚಾಪ್ಟರ್ 1(ಹಿ): ಬೆ: 9.10ಕ್ಕೆ, ಮ.3.10ಕ್ಕೆ.

ಡ್ಯೂಡ್ (ತ): ಬೆ: 10ಕ್ಕೆ, ಸಂ: 4ಕ್ಕೆ, ರಾ: 10.20ಕ್ಕೆ

ಟೈಮ್ ಪಾಸ್ (ಕ): ಬೆ: 11.15ಕ್ಕೆ

ತೆಲುಸು ಕಾದಾ (ತೆ): ಮ: 12.20ಕ್ಕೆ, ರಾತ್ರಿ 7.20ಕ್ಕೆ

ಬೈಸನ್ ಕಾಳಮಂದಾನ್ (ತ): ಬೆ: ಮ: 12.40ಕ್ಕೆ, ಸಂಜೆ 6.35ಕ್ಕೆ

ಡೀಸೆಲ್ (ತ): ಮ: 1.40ಕ್ಕೆ

ಮಹಾಯೋಧ ರಾಮ (ಹಿ): ಮ: 1.50ಕ್ಕೆ

ಕೆ–ರ್‍ಯಾಂಪ್ (ತೆ): ಸಂ: 4.15ಕ್ಕೆ, ರಾ: 10.10ಕ್ಕೆ

ಮಿತ್ರ ಮಂಡಳಿ (ತೆ): ಸಂ: 4.40ಕ್ಕೆ

ಗುಡ್ ಫಾರ್ಚ್ಯೂನ್ (ಇ): ಸಂ: 7.30ಕ್ಕೆ

ಗರುಡ ಮಾಲ್

ಕಾಂತಾರ ಚಾಪ್ಟರ್ 1(ಕ) : ಬೆ: 8.20ಕ್ಕೆ, 9.05ಕ್ಕೆ, 9.40ಕ್ಕೆ, 11.30ಕ್ಕೆ, ಮ: 12.15ಕ್ಕೆ, 2.55ಕ್ಕೆ, 3.40ಕ್ಕೆ, ಸಂ: 6.20ಕ್ಕೆ, 7.05ಕ್ಕೆ, ರಾ: 9.45ಕ್ಕೆ, 10.30ಕ್ಕೆ

ಪ್ರೇಮಿಗಳ ಗಮನಕ್ಕೆ (ಕ): ಬೆ: 11.05ಕ್ಕೆ

ಡ್ಯೂಡ್ (ತ): ಮ: 12.50ಕ್ಕೆ, ರಾ: 7.10ಕ್ಕೆ

ಟೈಮ್ ಪಾಸ್ (ಕ): ಮ: 1.50ಕ್ಕೆ

ಬೈಸನ್ ಕಾಳಮಂದಾನ್ (ತ): ಮ: 3.40ಕ್ಕೆ, ರಾ.10.05ಕ್ಕೆ

ತೆಲುಸು ಕಾದಾ (ತೆ): ಮ: 4.30ಕ್ಕೆ

ಕೆ–ರ್‍ಯಾಂಪ್ (ತೆ): ರಾ: 7.20ಕ್ಕೆ

ಮಿತ್ರ ಮಂಡಳಿ (ತೆ): ರಾ: 10.15ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ಮಾನ್ಸೂನ್ ರೇಸ್

15ನೇ ದಿನ, ಭಾನುವಾರ, 26–10–2025

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 1.00 ಗಂಟೆಗೆ

I. ರಾಯಲ್ ಕಲ್ಕತ ಟರ್ಫ್ ಕ್ಲಬ್ ಟ್ರೋಫಿ ಡಿ II–1100 ಮೀ. ರೇಟೆಡ್ 25ರಿಂದ 45.
1 ಶೇರ್ ಬ್ಲಿಸ್ 2. NRI ಮಿಲೇನಿಯಂ

II. ಡೆಲ್ಲಿ ರೇಸ್ ಕ್ಲಬ್ ಟ್ರೋಫಿ –1200 ಮೀ. ರೇಟೆಡ್ 00 ರಿಂದ 25.
1. NRI ಗೋಲ್ಡ್ 2. ಎಮ್ ರಾಲ್ಡೋ ಮ. 1.30ಕ್ಕೆ

III. ರಾಯಲ್ ಕಲ್ಕತ ಟರ್ಫ್ ಕ್ಲಬ್ ಟ್ರೋಫಿ ಡಿ I–1100 ಮೀ. ರೇಟೆಡ್ 20 ರಿಂದ 45.
1 ಇಮ್ಮಾರ್ಟಲ್ ಬ್ಯೂಟಿ 2. ಸಿಕ್ರೇಟ್ ಶ್ಯಾಡೊ ಮ. 2.00ಕ್ಕೆ

IV. ಮದ್ರಾಸ್ ರೇಸ್ ಕ್ಲಬ್ ಟ್ರೋಫಿ ಡಿ I–1400 ಮೀ. ರೇಟೆಡ್ 20 ರಿಂದ 45.
1 ಬೆಲ್ಲಾ ವಿಟಾ 2 ನಾಟಿ ಅಫೇರ್ ಮ. 2.30ಕ್ಕೆ

V. ರಾಯಲ್ ವೆಸ್ಟರ್ನ್ ಇಂಡಿಯಾ ಟರ್ಫ್ ಕ್ಲಬ್ ಟ್ರೋಫಿ –1200 ಮೀ. ರೇಟೆಡ್ 40 ರಿಂದ 65.
1. ಗೋಲ್ಡನ್ ಟೈಮ್ 2. ಮ್ಯಾಜಿಕ್ ಸರ್ಕಲ್ ಮ. 3.00ಕ್ಕೆ

VI. ಬೆಂಗಳೂರ್ ಟರ್ಫ್ ಕ್ಲಬ್ ಟ್ರೋಫಿ –1200 ಮೀ. ರೇಟೆಡ್ 80 ಮತ್ತು ಮೇಲ್ವರ್ಗ.
1. ಆಲ್ ಡಿ ಗೇಟ್ 2. ನಾಟಿ ಬ್ಲುಷ್ ಮ. 3.30ಕ್ಕೆ

VII. ಮೈಸೂರ್ ಡರ್ಬಿ 2000 ಮೀ. 3 ವರ್ಷ (ಟರ್ಮ್ಸ್)
1 ರೆಡ್ ಬಿಷಪ್ 2 S ಮಿರಾಕಲ್ ಸ್ಟಾರ್ ಸಂ. 4.00ಕ್ಕೆ

VIII. ಹೈದ್ರಾಬಾದ್ ರೇಸ್ ಕ್ಲಬ್ –1400 ಮೀ. ರೇಟೆಡ್ 40 ರಿಂದ 65
1 ನಾಟಿ ಸ್ಕಾಟಿ 2 ಪೊರ್‌ಟೀಸ್ ಸಂ. 4.30ಕ್ಕೆ

IX. ಮದ್ರಾಸ್ ರೇಸ್ ಕ್ಲಬ್ ಟ್ರೋಫಿ ಡಿ II–1400 ಮೀ. ರೇಟೆಡ್ 20 ರಿಂದ 45
1 ಟೆಫಿಲ್ಲಾ 2 ವೈಲ್ಡ್ ಚೈಲ್ಡ್ ಸಂ. 5.00ಕ್ಕೆ

ದಿನದ ಅತ್ಯುತ್ತಮ	ರೆಡ್ ಬಿಷಪ್
ಡಬ್ಬಲ್	ಬೆಲ್ಲಾ ವಿಟಾ, ಟೆಫಿಲ್ಲಾ
ಜಾಕ್‌ಪಾಟ್	5, 6, 7, 8 ಮತ್ತು 9
ಮಿನಿ ಜಾಕ್‌ಪಾಟ್	6, 7, 8 ಮತ್ತು 9
I ಟ್ರಿಬಲ್	1, 2 ಮತ್ತು 3
II ಟ್ರಿಬಲ್	4, 5 ಮತ್ತು 6
III ಟ್ರಿಬಲ್	7, 8 ಮತ್ತು 9
ಎಕ್ಸ್‌ಆಕ್ಟ್	1 ರಿಂದ 9

ಟಿಪ್‌ಸ್ಟರ್ ಪಿಜೆಸಿ

ಪಡಿತರ ಚೀಟಿ ಪರಿಷ್ಕರಣೆ ವೇಳೆ ಏನೇ ಗೊಂದಲಗಳಿದ್ದರೂ ಪರಿಹಾರ

● ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಅಭಯ ● ದಸರಾ ವಸ್ತು ಪ್ರದರ್ಶನದಲ್ಲಿ ಆಹಾರ ಇಲಾಖೆ ಮಳಿಗೆ ಉದ್ಘಾಟನೆ



ದಸರಾ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿ ಆಹಾರ ಇಲಾಖೆ ಮಳಿಗೆಯನ್ನು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ ಮಹದೇವಪ್ಪ ಸಮ್ಮುಖದಲ್ಲಿ ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ಉದ್ಘಾಟಿಸಿದರು.

ಮೈಸೂರು, ಅ.25(ಎಸ್‌ಪಿಎನ್)– ಪಡಿತರ ಚೀಟಿಗಳ ಪರಿಷ್ಕರಣೆ ನಡೆಯುತ್ತಿದೆ. ಅರ್ಹರು ಒಂದು ವೇಳೆ ಬಿಪಿಎಲ್‌ನಿಂದ ಎಪಿಎಲ್‌ಗೆ ವರ್ಗಾವಣೆಯಾಗಿದ್ದರೆ ಅಂತಹವರು ಸಂಬಂಧಿಸಿದ ತಹಸೀಲ್ದಾರ್ ಅವರನ್ನು ಭೇಟಿ ಮಾಡಿ ದಾಖಲಾತಿ ಸಲ್ಲಿಸುವಂತೆ ಫಲಾನುಭವಿಗಳಿಗೆ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ಅಭಯ ನೀಡಿದರು.

ಮೈಸೂರು ದಸರಾ ವಸ್ತು ಪ್ರದರ್ಶನ ಆವರಣದಲ್ಲಿ ದಸರಾ ಪ್ರಯುಕ್ತ ಸ್ಥಾಪಿಸಲಾಗಿರುವ ಆಹಾರ ಇಲಾಖೆ ಮಳಿಗೆಯ ವಸ್ತು ಪ್ರದರ್ಶನವನ್ನು ಸಮಾಜ ಕಲ್ಯಾಣ ಇಲಾಖೆ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ ಮಹದೇವಪ್ಪ ಸಮ್ಮುಖದಲ್ಲಿ ಆಹಾರ ಇಲಾಖೆ ಸಚಿವ ಕೆ.ಹೆಚ್. ಮುನಿಯಪ್ಪ ಉದ್ಘಾಟಿಸಿ ಮಾತನಾಡಿದರು.

ಬಿಪಿಎಲ್ ಪಡಿತರ ಕಾರ್ಡ್‌ಗಳು ಇಲಾಖಾ ಹಂತದಲ್ಲಿ ಪರಿಷ್ಕರಣೆಯಾಗುತ್ತಿದ್ದು, ಅರ್ಹರು ಒಂದು ವೇಳೆ ಬಿಪಿಎಲ್‌ನಿಂದ ಎಪಿಎಲ್‌ಗೆ ವರ್ಗಾವಣೆಯಾಗಿದ್ದರೆ ಸಂಬಂಧಿಸಿದ ತಹಶೀಲ್ದಾರರ ಬಳಿ ಭೇಟಿ ನೀಡಿ, ದಾಖಲಾತಿ ಸಲ್ಲಿಸಬೇಕು. ಆ ಅರ್ಜಿಗಳನ್ನು ಅವರು ಪುನರ್ ಪರಿಶೀಲಿಸಿ ಬಿಪಿಎಲ್ ಕಾರ್ಡ್ ವಿತರಿಸಲಿದ್ದಾರೆ ಎಂದು ಭರವಸೆ ನೀಡಿದರು.

ಅನ್ನಭಾಗ್ಯ ಯೋಜನೆಯಡಿ ಅರ್ಹ ಪ್ರತಿ ಫಲಾನುಭವಿಗೆ 10 ಕೆ.ಜಿ. ಅಕ್ಕಿ ವಿತರಣೆ ಮಾಡುತ್ತಿದ್ದು, ಮುಂದಿನ ತಿಂಗಳಿಂದ ಆಹಾರ ಧಾನ್ಯಗಳನ್ನೊಳಗೊಂಡ 'ಇಂದಿರಾ ಕಿಟ್' ವಿತರಿಸಲಾಗುತ್ತಿದೆ. ಈಗಾಗಲೇ ರಾಜ್ಯದಲ್ಲಿ 4 ಕೋಟಿ 50 ಲಕ್ಷ ಫಲಾನುಭವಿಗಳಿದ್ದಾರೆ. ಎಲ್ಲರಿಗೂ ಈ ಯೋಜನೆ ಅನುಷ್ಠಾನವಾಗಲಿದೆ ಎಂದರು.

> ರಾಜ್ಯ ಸಚಿವ ಸಂಪುಟ ವಿಸ್ತರಣೆ ವಿಷಯ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಹೈಕಮಾಂಡ್‌ಗೆ ಬಿಟ್ಟ ವಿಚಾರ. ಹಲವು ಹಿರಿಯ ಶಾಸಕರು ಸಚಿವರಾಗಲು ಬಯಸುತ್ತಿರುವುದು ಸಹಜ. ಅಂತಹ ಶಾಸಕರ ಎಲ್ಲಾ ಅನಿಸಿಕೆಗಳನ್ನು ಆಲಿಸಿ ಹೈಕಮಾಂಡ್ ತೀರ್ಮಾನ ತೆಗೆದುಕೊಳ್ಳುತ್ತದೆ.
>
> - ಕೆ.ಎಚ್.ಮುನಿಯಪ್ಪ, ಆಹಾರ ಸಚಿವ

ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿಗಳಲ್ಲೊಂದಾದ ಅನ್ನಭಾಗ್ಯ ಯೋಜನೆಯ ಕುರಿತು ವಸ್ತು ಪ್ರದರ್ಶನದಲ್ಲಿ ಹಳ್ಳಿಯ ಜೀವನಶೈಲಿಯ ಕುರಿತು ಪ್ರದರ್ಶನ ಮಾಡಲಾಗಿದೆ. ಅನ್ನಭಾಗ್ಯ ಯೋಜನೆಯಲ್ಲಿ ಅಕ್ಕಿ, ಜೋಳ, ರಾಗಿಯ ಕುರಿತು ಹಾಗೂ ಕಾನೂನು ಮಾಪನಶಾಸ್ತ್ರದ ಇಲಾಖೆಯ ತೂಕದ ಸಾಮಗ್ರಿಗಳ ಕುರಿತು ಮಾಹಿತಿಯುಳ್ಳ ಫಲಕಗಳನ್ನು ಪ್ರದರ್ಶಿಸಲಾಗಿದ್ದು, ಕಾಂಗ್ರೆಸ್ ಪಕ್ಷದ ಧ್ಯೇಯವಾದ ಹಸಿವು ಮುಕ್ತ ಕರ್ನಾಟಕ ಸಂಕಲ್ಪದೊಂದಿಗೆ ಸಮೃದ್ಧ ಹಳ್ಳಿಯ ಚಿತ್ರಣ ಪ್ರದರ್ಶಿಸಲಾಗಿದೆ ಎಂದು ಮಾಹಿತಿ ನೀಡಿದರು.

ಬಡವರಿಗೆ ಅನ್ನವೇ ಚಿನ್ನ: ಪ್ರತಿಯೊಬ್ಬರಿಗೂ ಆಹಾರ ಬಹಳ ಮುಖ್ಯವಾಗಿದ್ದು, ಆಹಾರವನ್ನು ವ್ಯರ್ಥ ಮಾಡದೇ ಸಮರ್ಪಕವಾಗಿ ಬಳಸಿಕೊಳ್ಳಬೇಕು. ಅನ್ನ ಬಡವರಿಗೆ ಚಿನ್ನ, ಈ ಚಿನ್ನವನ್ನು ಬೀದಿಗೆ ಬಿಸಾಡಬೇಡಿ ಎಂದು ಫಲಾನುಭವಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಕಿವಿಮಾತು ಹೇಳಿದರು.

ನಮ್ಮ ಸರ್ಕಾರವು ಪ್ರತಿಯೊಬ್ಬರಿಗೂ ಬದುಕುವ ಹಕ್ಕು ನೀಡುವ ಸಲುವಾಗಿ ಆಹಾರ ಭದ್ರತಾ ಕಾಯ್ದೆ ಜಾರಿಗೆ ತಂದು ಪ್ರತಿ ಕುಟುಂಬಗಳಿಗೂ ಆಹಾರಧಾನ್ಯ ನೀಡುತ್ತಿದ್ದೇವೆ. ಅದರಂತೆ ಇಂದು ಆಹಾರ ಇಲಾಖೆ ಮಳಿಗೆಯಲ್ಲಿ ಅನೇಕ ಉಪಯುಕ್ತ ಮಾಹಿತಿಗಳು ಇವೆ. ಎಲ್ಲರೂ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.

ರೇಷನ್ ವಿತರಣಾ ಕೇಂದ್ರದಲ್ಲಿ ಬಿಪಿಎಲ್ ಕಾರ್ಡ್‌ದಾರರಿಂದ 20 ರೂಪಾಯಿ ವಸೂಲಿ ಮಾಡುತ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕಿ ಎಂಬ ಪ್ರಶ್ನೆಗೆ ಉತ್ತರಿಸಿದ ಸಚಿವರು, ಅಂತಹ ನಿರ್ದಿಷ್ಟ ಪ್ರಕರಣಗಳಿದ್ದರೆ ಹೇಳಿ ಕ್ರಮ ಕೈಗೊಳ್ಳುತ್ತೇನೆ ಎಂದು ಮಾಧ್ಯಮದವರನ್ನೇ ಮರು ಪ್ರಶ್ನಿಸಿದರು.

ಈ ವೇಳೆ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿ ಡಾ.ಹೆಚ್.ನಟರಾಜ್ ಹಾಗೂ ಜಿಲ್ಲಾ ಜಂಟಿ ಉಪ ನಿರ್ದೇಶಕ ಮಂಟೇಸ್ವಾಮಿ, ತೂಕ ಮತ್ತು ಮಾಪನ ಇಲಾಖೆ ಅಧಿಕಾರಿ ಮಹದೇವ ಸ್ವಾಮಿ ಹಾಗೂ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

ಮುಖ್ಯಮಂತ್ರಿಗಳೇ ಸ್ಪಷ್ಟನೆ ನೀಡಿದ್ದಾರೆ

ಮುಂದಿನ ನಾಯಕತ್ವ ಕುರಿತು ಸಚಿವ ಸತೀಶ್ ಜಾರಕಿಹೊಳಿ ಹಾಗೂ ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಸಚಿವ ಮಹದೇವಪ್ಪ, ಈಗಾಗಲೇ ಮುಖ್ಯಮಂತ್ರಿಗಳೇ ಈ ಕುರಿತು ಸ್ಪಷ್ಟನೆ ನೀಡಿದ್ದಾರೆ. ನಾನು ಪ್ರತ್ಯೇಕವಾಗಿ ಸ್ಪಷ್ಟನೆ ನೀಡುವ ಅವಶ್ಯಕತೆಯಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಹೇಳಿದರು.

ಸಹಕಾರ ಸಂಘದ ಆಡಳಿತ ಮಂಡಳಿಗೆ ಆಯ್ಕೆ



ಇಲವಾಲ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿ ಚುನಾವಣೆಯಲ್ಲಿ ಸಾಲಗಾರರ ಕ್ಷೇತ್ರದಿಂದ ಈರಪ್ಪನಕೊಪ್ಪಲು ಗ್ರಾಮದ ನಟೇಶ್, ಬಿ.ಮಹದೇವಸ್ವಾಮಿ, ಮಂಜುಳಾ, ಚಿಕ್ಕೇಗೌಡನಕೊಪ್ಪಲು ಗ್ರಾಮದ ಶಿವೇಗೌಡ, ಇಲವಾಲದ ಸುಧಾಕರ್, ನುಜುಂಡಸ್ವಾಮಿ, ಎಸ್.ರೂಪಾ, ಮಹಮದ್ ರಫೀಕ್, ರಮೇಶ್, ಶ್ರೀನಿವಾಸ್, ಚಿದಂಬರ, ಸಾಲಗಾರರಲ್ಲದವರ ಕ್ರೇತದಿಂದ ಇಲವಾಲದ ವೈ ಆರ್ ರವಿ ಆಯ್ಕೆಯಾಗಿದ್ದಾರೆ.

ಬ್ಯಾಂಕ್‌ನಲ್ಲಿ ಕೆಲಸ ಕೊಡಿಸುವುದಾಗಿ ವಂಚನೆ; ಆರೋಪಿಗೆ ಒಂದು ವರ್ಷ ಜೈಲು ಶಿಕ್ಷೆ

ಮೈಸೂರು, ಅ.25(ಎಸ್‌ಪಿಎನ್)– ಬ್ಯಾಂಕ್‌ನಲ್ಲಿ ಕೆಲಸ ಕೊಡಿಸುವುದಾಗಿ ಹಣ ಪಡೆದು ವಂಚನೆ ಮಾಡಿದ ಆರೋಪಿಗೆ ಒಂದನೇ ಅಧಿಕ ಸಿಜೆಎಂ ನ್ಯಾಯಾಲಯ ಒಂದು ವರ್ಷ ಕಠಿಣ ಸೆರೆವಾಸ, 10 ಸಾವಿರ ದಂಡ ವಿಧಿಸಿ ತೀರ್ಪು ಪ್ರಕಟಿಸಿ, ದೂರುದಾರರಿಗೆ ಪರಿಹಾರವಾಗಿ 2.50 ಲಕ್ಷ ರೂ.ಗಳನ್ನು ನೀಡುವಂತೆ ಆದೇಶಿಸಿದೆ.

ಮೈಸೂರಿನ ಲೋಕನಾಯಕ ನಗರದ ಹೆಬ್ಬಾಳ ಮುಖ್ಯರಸ್ತೆಯ ನಿವಾಸಿ ಎಚ್.ಎಸ್.ಸ್ನೇಹ(32) ವಂಚಿಸಿದ ಅಪರಾಧಿ. ಈಕೆ ಸಮೃದ್ಧಿ ಕೇರ್ ಆಫೀಸ್‌ನ ಸಿಇಓ ಎಂದು ಮೈಸೂರಿನ ಎನ್.ಆರ್. ಮೊಹಲ್ಲಾ ಗಣೇಶ್ ನಗರದ ನಿವಾಸಿ ಎಲ್.ಕುಮಾರಿ ಅವರ ಪುತ್ರಿ ಎಲ್.ಸುನೀತಾ ಎಂಬುವರಿಗೆ ಪರಿಚಯಿಸಿಕೊಂಡು ಆಕ್ಸಿಸ್ ಬ್ಯಾಂಕ್‌ನ ವೆರಿಫಿಕೇಷನ್ ಸೆಕ್ಟರ್‌ನಲ್ಲಿ ಕೆಲಸ ಕೊಡಿಸುವುದಾಗಿ ನಂಬಿಸಿ, ದೂರುದಾರರಾದ ಕುಮಾರಿ ಅವರಿಂದ 2.50 ಲಕ್ಷ ರೂ.ಗಳನ್ನು ಹಣ ಪಡೆದು, ಕಂಪನಿಯ ಲೆಟರ್ ಹೆಡ್‌ನಲ್ಲಿ ಹಣ ಪಡೆದ ಬಗ್ಗೆ ಬರೆದುಕೊಂಡಿದ್ದರು.

ಬಳಿಕ ಕುಮಾರಿ ಅವರ ಪುತ್ರಿ ಸುನೀತಾ ಅವರಿಗೆ ಕೆಲಸ ಕೊಡಿಸದೆ ಅವರಿಂದ ಪಡೆದಿದ್ದ ಹಣವನ್ನೂ ವಾಪಸ್ಸು ಕೊಡದೇ ಮೋಸ ಮಾಡಿದ್ದರು. ದೂರುದಾರರ ಒತ್ತಡಕ್ಕೆ ಆರೋಪಿಯು ತನ್ನ ಖಾತೆಯಲ್ಲಿ ಹಣವಿಲ್ಲದಿದ್ದರೂ 15,500 ರೂ.ಗಳಿಗೆ ಚೆಕ್ ನೀಡಿ, ನಂತರ ತಾನು ಬರೆದು ಕೊಟ್ಟಿದ್ದ ಲೆಟರ್ ಹೆಡ್ ಮತ್ತು ಇತರೆ ದಾಖಲೆಗಳನ್ನು ವಾಪಸ್ಸು ನೀಡುವಂತೆ ಒತ್ತಾಯಿಸಿ, ಇಲ್ಲವಾದರೆ ಕೊಲೆ ಮಾಡುವುದಾಗಿ ದೂರುದಾರರಾದ ಸುನೀತಾ ಮತ್ತು ಆಕೆಯ ತಾಯಿ ಕುಮಾರಿ ಅವರಿಗೆ ಬೆದರಿಕೆ ಹಾಕಿದ್ದರು. ಈ ಸಂಬಂಧ ಮೇಟಗಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಸದರಿ ಪ್ರಕರಣವನ್ನು ಮೇಟಗಳ್ಳಿ ಠಾಣೆಯ ಎಎಸ್‌ಐ ಮೆಹತಾಬಾರಿ ತನಿಖೆ ನಡೆಸಿ ದೋಷಾರೋಪಣಾ ಪಟ್ಟಿಯನ್ನು ಒಂದನೇ ಅಧಿಕ ಸಿಜೆಎಂ ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಬಳಿಕ ಈ ಪ್ರಕರಣದ ವಾದ–ಪ್ರತಿವಾದ ಆಲಿಸಿದ ನ್ಯಾಯಾಧೀಶರಾದ ಎ.ಜಿ.ಶಿಲ್ಪ ಆರೋಪಿಯ ವಿರುದ್ಧ ಸಲ್ಲಿಸಿದ್ದ ಆರೋಪ ಸಾಬೀತಾದ ಹಿನ್ನಲೆಯಲ್ಲಿ ಶಿಕ್ಷೆ ಪ್ರಕಟಿಸಿದ್ದಾರೆ.

> ಬಿಎನ್‌ಎಸ್ ಕಲಂ 406 ಮತ್ತು 420 ಅಪರಾಧಕ್ಕಾಗಿ ಒಂದು ವರ್ಷ ಕಠಿಣ ಸೆರೆವಾಸ ಮತ್ತು 20 ಸಾವಿರ ದಂಡ ವಿಧಿಸಿದೆ. ಆರೋಪಿಯು ದೂರುದಾರರಿಗೆ 2.5 ಲಕ್ಷ ಪರಿಹಾರ ಹಣ ಪಾವತಿಸುವಂತೆ ತೀರ್ಪು ನೀಡಿದೆ. ಈ ಪ್ರಕರಣದಲ್ಲಿ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕ ಕೆ.ಪ್ರಕಾಶ್ ವಾದ ಮಂಡಿಸಿದ್ದರು.

ಬೃಹತ್ ಗಾತ್ರದ ಹೆಬ್ಬಾವು ಸಂರಕ್ಷಣೆ



ಮೈದನಹಳ್ಳಿ ಗ್ರಾಮದ ಪ್ರಸನ್ನ ಎಂಬುವವರ ಹುಲ್ಲಿನ ಮೆದೆಯಲ್ಲಿ ಅ.21ರಂದು ಸರಿ ರಾತ್ರಿ 9 ಅಡಿ ಉದ್ದದ 15 ಕೆಜಿ ತೂಕದ ಬೃಹತ್ ಗಾತ್ರದ ಹೆಬ್ಬಾವು ಅಡಗಿದ್ದು, ಗ್ರಾಮಸ್ಥರು ನೀಡಿದ ಮಾಹಿತಿ ಮೇರೆಗೆ ಅಲ್ಲಿಗೆ ತೆರಳಿದ ಉರಗ ತಜ್ಞ ಸ್ನೇಕ್ ಶ್ಯಾಂ ಅವರು ಹುಲ್ಲಿನ ಮೆದೆ ತೆರವುಗೊಳಿಸಿ ಭಾರೀ ಗಾತ್ರದ ಹೆಬ್ಬಾವನ್ನು ಸಂರಕ್ಷಿಸಿದ್ದಾರೆ.















